ಸಂಪುಟ: 22, ಸಂಚಿಕೆ: 131, ಪುಟಗಳು: 8, ಬುಧವಾರ, 19 ಫೆಬ್ರವರಿ 2025 RNI NO. KARKAN/2002/08054
epaper: www.sanjemugilu.com


ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3


ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines


ಸುಭಾಷಿತ

ಕಲಿಯಲು ತಿರಸ್ಕರಿಸುವುದು, ಜೀವಿಸಲು ತಿರಸ್ಕರಿಸುವುದಕ್ಕೆ ಸಮನಾದದು.
। ರಾಮಕೃಷ್ಣ ಪರಮ ಹಂಸ

ಪಂಚಾಂಗ

(ಬುಧವಾರ 19, ಫೆಬ್ರವರಿ-2025)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ಉತ್ತರಾಯಣ, ● ಶಿಶಿರ ಋತು,
- ಮಾಘ ಮಾಸ, ಕೃಷ್ಣ ಪಕ್ಷ,
- ಷಷ್ಠಿ, ಸ್ವಾತಿ ನಕ್ಷತ್ರ
- ರಾಹುಕಾಲ : 12:37 ರಿಂದ 2:05
- ಗುಳಿಕಕಾಲ : 11:09 ರಿಂದ 12:37
- ಯಮಗಂಡಕಾಲ : 8:13 ರಿಂದ 9:41

## ಸಂಕ್ಷಿಪ್ತ ಸುದ್ದಿ

### ಅಪ್ರಾಪ್ತ ಮಗಳಿಗೆ ಆಕ್ಟಿವ್ ಹೊಂಡಾ ಕೊಟ್ಟು 25 ಸಾವಿರ ರೂ. ದಂಡ ಕಟ್ಟಿದ ತಾಯಿ



**ದಾವಣಗೆರೆ:** ಅಪ್ರಾಪ್ತ ವಯಸ್ಸಿನ ಮಕ್ಕಳಿಗೆ ವಾಹನ ಚಲಾಯಿಸಲು ಅವಕಾಶ ಕೊಡುವ ಪೋಷಕರ ವಿರುದ್ಧ ಟ್ರಾಫಿಕ್ ಪೊಲೀಸರು ಕಠಿಣ ಕ್ರಮ ಕೈಗೊಳ್ಳುತ್ತಿದ್ದಾರೆ. ಅಪ್ರಾಪ್ತರು ವಾಹನ ಚಲಾಯಿಸಿ ಅಪಘಾತಗಳಾಗುವ ಸಾಧ್ಯತೆಯನ್ನು ತಡೆಯುವುದಕ್ಕಾಗಿ ಸಾರಿಗೆ ಇಲಾಖೆಯೂ ಕಠಿಣ ನಿಯಮಗಳನ್ನು ರೂಪಿಸಿದೆ. ಆದಾಗ್ಯೂ, ಅಂಥ ಪ್ರಕರಣಗಳು ವರದಿಯಾಗುತ್ತಿರುತ್ತವೆ. ಇದೀಗ ದಾವಣಗೆರೆಯಲ್ಲಿ, ಮಗಳಿಗೆ ಆಕ್ಟಿವ್ ಹೋಂಡಾ ಚಾಲನೆಗೆ ಅವಕಾಶ ಮಾಡಿಕೊಟ್ಟ ತಾಯಿಗೆ ಸಂಚಾರ ಪೊಲೀಸರು 25 ಸಾವಿರ ರೂ. ದಂಡ ವಿಧಿಸಿದ್ದಾರೆ.

ದಾವಣಗೆರೆ ನಗರದ ಗಡಿಯಾರ ಕಂಬದ ಬಳಿ ಅಪ್ರಾಪ್ತ ಬಾಲಕಿಯೊಬ್ಬಳು ಆಕ್ಟಿವ್ ಹೊಂಡಾ ಚಲಾಯಿಸುತ್ತಿದ್ದಳು. ಅದನ್ನು ತಡೆದ ಟ್ರಾಫಿಕ್ ಪೊಲೀಸರು ದಾಖಲೆ ಪರಿಶೀಲನೆ ಮಾಡಿದ್ದಾರೆ. ಪುಟ 2

### ಹೆಚ್ಚು ಜಾಹೀರಾತು ತೋರಿಸಿದ್ದಕ್ಕೆ ದಂಡ ಕಟ್ಟಿದ ಪಿವಿಆರ್




**ಬೆಂಗಳೂರು:** ಪಿವಿಆರ್, ಐನಾಕ್ಸ್ ಇನ್ನಿತರೆ ಮಲ್ಟಿಪ್ಲೆಕ್ಸ್ ಗಳು ಸಿನಿಮಾಗಳ ಜೊತೆಗೆ ಭರಪೂರವಾಗಿ ಜಾಹೀರಾತುಗಳನ್ನು ಪ್ರೇಕ್ಷಕರಿಗೆ ತೋರಿಸುತ್ತವೆ. ಸಿನಿಮಾಗಳಿಂದ ಮಾತ್ರವಲ್ಲದೆ ಜಾಹೀರಾತು ಪ್ರದರ್ಶನದಿಂದ ಅಷ್ಟೆ ಮೊತ್ತದ ಲಾಭವನ್ನು ಈ ಮಲ್ಟಿಪ್ಲೆಕ್ಸ್ ಗಳು ಪಡೆಯುತ್ತವೆ. ಮಲ್ಟಿಪ್ಲೆಕ್ಸ್‌ಗಳಲ್ಲಿ ಅಗತ್ಯಕ್ಕಿಂತಲೂ ಹೆಚ್ಚಿನ ಜಾಹೀರಾತು ಪ್ರದರ್ಶಿಸುವ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಆಗಾಗ್ಗೆ ಚರ್ಚೆಗಳು ನಡೆಯುತ್ತಲೇ ಇರುತ್ತವೆ ಆದರೆ ಈ ಕಿರಿಕಿರಿಯಂತೂ ನಿಂತಿಲ್ಲ. ಇದೀಗ ಬೆಂಗಳೂರಿನ ವ್ಯಕ್ತಿಯೊಬ್ಬ ಪಿವಿಆರ್ ನ ವಿರುದ್ಧ ದಾವೆ ಹೂಡಿ ದಂಡ ಕಟ್ಟುವಂತೆ ಮಾಡಿದ್ದಾರೆ. 2024 ರಲ್ಲಿ ಬಿಡುಗಡೆ ಆದ 'ಸ್ಯಾಮ್ ಬಹದ್ದೂರ್' ಸಿನಿಮಾ ನೋಡಲು ಪುಟ 2

ಮುದುಕಾಗುತ್ತಿರುವ ಚೀನಾ?

# ಮದುವೆಯಿಂದ ದೂರ ಉಳಿಯುತ್ತಿರುವ ಯುವಜನತೆ!

**ನವದೆಹಲಿ:** ಭಾರತದ ನಂತರ ವಿಶ್ವದ ಎರಡನೇ ಅತಿ ಹೆಚ್ಚು ಜನಸಂಖ್ಯೆ ಹೊಂದಿರುವ ದೇಶವಾದ ಚೀನಾದಲ್ಲಿ ಮದುವೆಯ ಸಂಖ್ಯೆಯಲ್ಲಿ ತೀವ್ರ ಕುಸಿತ ಕಂಡುಬರುತ್ತಿದೆ. ಇದು ಜನನ ದರ ಕುಸಿತಕ್ಕೆ ಕಾರಣವಾಗುತ್ತಿದೆ.

2024 ರಲ್ಲಿ ಚೀನೀ ಸಂಸ್ಕೃತಿಯಲ್ಲಿ ಹೆರಿಗೆಗೆ ಶುಭ ವರ್ಷ ಎಂದು 2023ರಲ್ಲಿ ಅನೇಕ ಮದುವೆಗಳು ನಡೆದಿದ್ದವು. ಇದು 2024ರಲ್ಲಿ ಜನನಗಳ ಹೆಚ್ಚಳಕ್ಕೆ ಕಾರಣವಾಗಿತ್ತು. ಇನ್ನೂ 2024 ರಲ್ಲಿ ಚೀನೀ ಕ್ಯಾಲೆಂಡರ್‌ನಲ್ಲಿ ಮದುವೆಗೆ ಅಶುಭ ವರ್ಷ ವಿಧವೆ ವರ್ಷ ಎಂಬ ಪ್ರತೀತಿಯಿಂದ ಜನರು ಮದುವೆಯಾಗುವುದನ್ನು ಕೈಬಿಟ್ಟಿದ್ದರು ಎಂಬ ವದಂತಿ ಇದೆ. 2024 ರಲ್ಲಿ ಚೀನಾದಲ್ಲಿ ವಿವಾಹಗಳ ಸಂಖ್ಯೆ 60.1 ಲಕ್ಷಕ್ಕೆ ಇಳಿಕೆಯಾಗಿದೆ. ಇದು 2023ಕ್ಕೆ ಹೋಲಿಸಿದರೆ 20.5% ರಷ್ಟು ಕುಸಿತವಾಗಿದೆ ಎಂದು ವರದಿಯಾಗಿದೆ.

**ಚೀನಾದಲ್ಲಿ ಮದುವೆಯ ಸಂಖ್ಯೆಯಲ್ಲಿ ಕುಸಿತಕ್ಕೆ ಕಾರಣವೇನು?:** ಚೀನಾದಲ್ಲಿ ವಿವಾಹ ದರಗಳ ಕುಸಿತದ ಹಿಂದೆ ಬಹುತೇಕ ಸಾಮಾಜಿಕ ಕಾರಣಗಳಿವೆ. ಯುವ ವಯಸ್ಕರ ಸಂಖ್ಯೆಯಲ್ಲಿ ಇಳಿಕೆ, ಇತ್ತೀಚಿನ ಪದವೀಧರರ ಆರ್ಥಿಕ ದೃಷ್ಟಿಕೋನ, ವಿವಾಹದ ಬಗ್ಗೆ ಗಂಡು ಹೆಣ್ಣುಗಳಲ್ಲಿ ಇರುವ ವಿವಿಧ ಕಲ್ಪನೆಗಳು ಮದುವೆಯ ಕುಸಿತಕ್ಕೆ ಕಾರಣವಾಗಿವೆ.

ಚೀನಾದ 2010ರ ಜನಗಣತಿಯ ಪ್ರಕಾರ, ಮಹಿಳೆಯೊಬ್ಬರ ಸರಾಸರಿ ಮದುವೆಯ



ವಯಸ್ಸು 24 ವರ್ಷ, 2000ದಲ್ಲಿ 23, 2022ರಲ್ಲಿ 27 ಆಗಿದೆ. ಗಣತಿಯ ಪ್ರಕಾರ 2022 ರಲ್ಲಿ ಚೀನಾದ ಯುವತಿಯರು ಸಾಂಪ್ರದಾಯಿಕ ವಿವಾಹದಿಂದ ದೂರ ಸರಿಯುತ್ತಿರುವ ಪ್ರವೃತ್ತಿ ಸ್ಪಷ್ಟವಾಗಿ ಗೋಚರಿಸುತ್ತದೆ. ಈ ಮೂಲಕ ಚೀನಾದಲ್ಲಿ ಮದುವೆಯಾಗುವವರ ಸಂಖ್ಯೆ ಸತತ 9 ವರ್ಷಗಳಿಂದ ಕುಸಿದಿದೆ ಎಂಬುದು ಅಂಕಿ ಅಂಶಗಳಲ್ಲಿ ಬಯಲಾಗಿದೆ.

**ವಿವಾಹಗಳ ಕುಸಿತದಿಂದ ಜನನ ದರಗಳ ಮೇಲೆ ಪರಿಣಾಮ:** ವಿವಾಹಗಳ ಸಂಖ್ಯೆಯಲ್ಲಿನ ತೀವ್ರ ಕುಸಿತವು ಚೀನಾದ ಜನನ ಪ್ರಮಾಣದಲ್ಲಿ ತೀವ್ರ ಕುಸಿತಕ್ಕೆ ಕಾರಣವಾಗಿದೆ. ಪೂರ್ವ ಏಷ್ಯಾದ ಉಳಿದ ಭಾಗಗಳಂತೆ ಚೀನಾದಲ್ಲಿ ವಿವಾಹೇತರ ಜನನಗಳ ವಿರುದ್ಧ ಸಾಮಾಜಿಕ ನಿಷೇಧದಂತ ಆಚರಣೆಗಳು ಜಾರಿಯಲ್ಲಿವೆ. ಇದರಿಂದ ವಿವಾಹ ಪೂರ್ವ ಜನನಗಳಿಗೆ ಅವಕಾಶ ಇಲ್ಲದಿರುವುದು ಜನನ ದರಗಳ ಕುಸಿತಕ್ಕೆ ಕಾರಣವಾಗಿವೆ.

**ಸರ್ಕಾರದಿಂದ ಮದುವೆಗೆ ಪ್ರೋತ್ಸಾಹ!:** ಮದುವೆ, ಪ್ರೀತಿ, ಫಲವತ್ತತೆ ಮತ್ತು ಕುಟುಂಬದ ಬಗ್ಗೆ ಸಕಾರಾತ್ಮಕ ದೃಷ್ಟಿಕೋನಗಳನ್ನು ಹೊಂದುವಂತೆ ಪ್ರೀತಿಯ ಶಿಕ್ಷಣ ಒದಗಿಸುವಂತೆ ಅಧಿಕಾರಿಗಳು ಕಳೆದ ವರ್ಷ ಚೀನಾದ ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳಿಗೆ ಸೂಚಿಸಿದ್ದರು.

ವಿಚ್ಛೇದನಗಳನ್ನು ತಡೆಗಟ್ಟಲು ನಾಗರಿಕ ವ್ಯವಹಾರಗಳ ಸಚಿವಾಲಯವು ವಿವಾಹ ನೋಂದಣಿ ಕರಡು ತಿದ್ದುಪಡಿಯನ್ನು ಮಾಡಿತ್ತು. ಇದು ಸಂತೋಷ ಮತ್ತು ಸಾಮರಸ್ಯದ ಕುಟುಂಬಗಳನ್ನು ನಿರ್ಮಿಸಲು ಒಂದು ಪ್ರಮುಖ ನಿರ್ಧಾರ ಎಂದು ಸಚಿವಾಲಯ ಹೇಳಿತ್ತು. ಪುಟ 2

# ಕರ್ನಾಟಕದಲ್ಲಿ ಅಲರ್ಟ್

## ಆಂಧ್ರ, ತೆಲಂಗಾಣ, ಮಹಾರಾಷ್ಟ್ರದಲ್ಲಿ ಹಕ್ಕಿಜ್ವರ

**ಬೆಂಗಳೂರು:** ಪಕ್ಕದ ರಾಜ್ಯಗಳಾದ ಆಂಧ್ರ ಪ್ರದೇಶ, ತೆಲಂಗಾಣ, ಮಹಾರಾಷ್ಟ್ರದಲ್ಲಿ ಹಕ್ಕಿಜ್ವರ ಪ್ರಕರಣಗಳ ಸಂಖ್ಯೆ ಹೆಚ್ಚಾಗಿದೆ. ಅದರಲ್ಲೂ ಮಹಾರಾಷ್ಟ್ರದ 7 ಜಿಲ್ಲೆಗಳಲ್ಲಿ ಹುಲಿ, ಚಿರತೆ, ಕಾಗೆಗಳಲ್ಲೂ ಹಕ್ಕಿ ಜ್ವರ ಕಾಣಿಸಿಕೊಂಡಿದೆ. ಹಕ್ಕಿಜ್ವರದಿಂದ ಕಾಗೆಗಳು ಮೃತಪಟ್ಟ ಬಗ್ಗೆ ವರದಿಯಾಗಿದೆ. ಆಂಧ್ರ, ತೆಲಂಗಾಣದ ಎಚ್ 5ಎನ್1 ವೈರಸ್‌ನಿಂದ ಉಂಟಾಗುವ ಸೋಂಕಿನಿಂದ ಕೋಳಿಗಳು ಮತಪಡುತ್ತಿವೆ. ಪರಿಣಾಮವಾಗಿ ಕರ್ನಾಟಕದ ಗಡಿ ಭಾಗಗಳಲ್ಲಿ ಆತಂಕ ಮನೆ ಮಾಡಿದೆ.

ತೆಲಂಗಾಣ, ಆಂಧ್ರ ಪ್ರದೇಶಗಳಲ್ಲಿ ಕೋಳಿಗಳ ಮಾರಣಹೋಮವೇ ನಡೆಯುತ್ತಿದೆ. ಸಂಯುಕ್ತ ನೆಲ್ಲೂರು ಜಿಲ್ಲೆಯ ಗುಡೂರು, ಸುಳ್ಳೂರುಪೇಟ, ನಾಯ್ಡುಪೇಟ ಮತ್ತು ವೆಂಕಟಗಿರಿ ಪ್ರದೇಶಗಳಲ್ಲಿ ಚಿಕನ್ ಶಾಪ್‌ಗಳಲ್ಲಿ ನೂರಾರು ಕೋಳಿಗಳು ಸಾಯುತ್ತಿವೆ. ಜನ ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ. ಕೋಳಿ ಖರೀದಿಗೆ ಜನ ಹಿಂದೇಟು ಹಾಕ್ತಿದ್ದು, ಚಿಕನ್ ಶಾಪ್ ಮಾಲೀಕರು ಅಂಗಡಿಗಳನ್ನು ಬಂದ್ ಮಾಡುತ್ತಿದ್ದಾರೆ.

ಹೀಗೆ ಸತ್ತ ಕೋಳಿಗಳನ್ನ ಮಣ್ಣು ಮಾಡುತ್ತಿಲ್ಲ. ಬದಲಾಗಿ ಮೀನುಗಳಿಗೆ ಆಹಾರವಾಗಿ ಹಾಕಲಾಗುತ್ತಿದೆ. ಇದೇ ಮೀನುಗಳನ್ನು ತಿನ್ನುವ ಜನರ ಆರೋಗ್ಯ ಸ್ಥಿತಿ ಹದಗೆಡುತ್ತಿದೆ. ನಗರಸಭೆ, ಪುರಸಭೆ ಅಧಿಕಾರಿಗಳು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಅಲ್ಲಿನ ಜನ ಆಕ್ರೋಶ ವ್ಯಕ್ತಪಡಿಸಿದ್ದಾರೆ.



### ಕೋಳಿ, ಮೊಟ್ಟೆ ಆಮದು ಸ್ಥಗಿತ

ಬೇರೆ ರಾಜ್ಯಗಳಿಂದ ಸೋಂಕು ಹರಡುವ ಭೀತಿ ಹಿನ್ನೆಲೆಯಲ್ಲಿ ಬೀದರ್, ಬೆಳಗಾವಿ, ಬಳ್ಳಾರಿ ಸೇರಿದಂತೆ ಗಡಿ ಜಿಲ್ಲೆಗಳಲ್ಲಿ ಮುನ್ನೆಚ್ಚರಿಕೆ ವಹಿಸಲಾಗಿದೆ. ಬೇರೆ ರಾಜ್ಯಗಳಿಂದ ಬರುವ ಕೋಳಿ ಹಾಗೂ ಮೊಟ್ಟೆಗಳಿಗೆ ನಿರ್ಬಂಧ ವಿಧಿಸಲಾಗಿದೆ. ಆದರೆ, ರಾಜ್ಯದಲ್ಲಿ ಹಕ್ಕಿಜ್ವರ ಇಲ್ಲದಿದ್ರೂ, ಬಿಸಿಲಿನ ತಾಪದ ಪರಿಣಾಮ ಕೋಳಿ ಮಾಂಸ ವ್ಯಾಪಾರ ಕಡಿಮೆಯಾಗಿದೆ.

### ಬೀದರ್ ಗಡಿಯಲ್ಲಿಯೂ ಹೈಅಲರ್ಟ್

ಮಹಾರಾಷ್ಟ್ರದ ಲಾತೂರ್‌ನಲ್ಲಿ ಹಕ್ಕಿ ಜ್ವರ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಬೀದರ್ ಜಿಲ್ಲೆಯ ಗಡಿಭಾಗದ ತಾಲೂಕುಗಳಲ್ಲಿ ಪಶುಸಂಗೋಪನಾ ಇಲಾಖೆ ಹೈಅಲರ್ಟ್ ಘೋಷಿಸಿದೆ. ಮಹಾರಾಷ್ಟ್ರದಿಂದ ತರುವ ಕೋಳಿ ಮಾಂಸ, ಮೊಟ್ಟೆ ಸಾಗಣೆ, ಮಾರಾಟಕ್ಕೆ ನಿಷೇಧ ವಿಧಿಸಿದೆ. ಭಾಲ್ಕಿ, ಕಮಲನಗರ, ಬಸವಕಲ್ಯಾಣ, ಔರಾದ್ ತಾಲೂಕಿನ ಗಡಿಯಲ್ಲಿ ಚೆಕ್ ಪೋಸ್ಟ್ ಸ್ಥಾಪಿಸಿ ತಪಾಸಣೆ ಮಾಡಲಾಗ್ತಿದೆ.

### ಹಕ್ಕಿಜ್ವರದ ಲಕ್ಷಣಗಳೇನು?

ಜ್ವರ, ಕೆಮ್ಮು, ಗಂಟಲು ನೋವು, ಸ್ನಾಯು ನೋವು, ವಾಂತಿಬೇಧಿ, ನೆಗಡಿ, ಉಸಿರಾಟದ ತೊಂದರೆ ಇವುಗಳು ಹಕ್ಕಿಜ್ವರದ ಲಕ್ಷಣಗಳಾಗಿವೆ. ಈ ಲಕ್ಷಣಗಳು ಕಂಡುಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸುವುದು ಉತ್ತಮ. 2020 ರಲ್ಲಿ ರಾಜ್ಯದಲ್ಲಿ ರಂಗನತಿಟ್ಟುವಿನಲ್ಲಿ ಹಕ್ಕಿಜ್ವರ ಕಾಣಿಸಿಕೊಂಡಿತ್ತು.

ಸದ್ಯ ರಾಜ್ಯದಲ್ಲಿ ಹಕ್ಕಿಜ್ವರ ಕಾಣಿಸಿಕೊಂಡಿಲ್ಲ. ಆದರೆ, ರಾಜ್ಯಾದ್ಯಂತ ಅಧಿಕಾರಿಗಳು ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುತ್ತಿದ್ದಾರೆ.

# ಕೇಂದ್ರದಿಂದ 7 ಸಾವಿರ ಇ ಬಸ್




**ಬೆಂಗಳೂರು:** ಕೇಂದ್ರ ಸರ್ಕಾರವು ಹೊಸದಾಗಿ ಪ್ರಾರಂಭಿಸಿರುವ ಪ್ರಧಾನ ಮಂತ್ರಿ ಇ-ಡ್ರೈವ್ ಯೋಜನೆಯಡಿಯಲ್ಲಿ ಬೆಂಗಳೂರಿಗೆ 7,000 ಎಲೆಕ್ಟ್ರಿಕ್ ಬಸ್‌ಗಳನ್ನು ಅನುಮೋದಿಸಿದೆ. ಇದರಿಂದಾಗಿ, ಬೆಂಗಳೂರು ಶೀಘ್ರದಲ್ಲೇ ಸಾರ್ವಜನಿಕ ಸಾರಿಗೆ ಬಸ್ ಗಳ ಸಂಖ್ಯೆಯಲ್ಲಿ ದೆಹಲಿಯನ್ನು ಮೀರಿಸುವ ಸಾಧ್ಯತೆಯಿದೆ.

» **ದೆಹಲಿಯನ್ನೂ ಮೀರಿಸಿ ನಂ.1 ಆಗಲಿದೆ ಬೆಂಗಳೂರು**

ಪ್ರಧಾನ ಮಂತ್ರಿ ಇ-ಡ್ರೈವ್ ಯೋಜನೆಯಡಿಯಲ್ಲಿ, ಬೆಂಗಳೂರಿಗೆ 7,000 ಇ-ಬಸ್‌ಗಳು ಸಿಗಲಿದ್ದು, ಹೈದರಾಬಾದ್ ಗೆ 2,800 ಇ-ಬಸ್‌ಗಳು ಸಿಗಲಿವೆ ಎಂದು ವರದಿಯಾಗಿದೆ.

ಪ್ರಸ್ತುತ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಸುಮಾರು 1,300 ಎಸಿ ಅಲ್ಲದ ಇ-ವಾಹನಗಳು ಸೇರಿದಂತೆ 6,500 ಬಸ್‌ಗಳನ್ನು ಹೊಂದಿದೆ. ಶೀಘ್ರದಲ್ಲೇ 320 ಎಸಿ ಇ-ಬಸ್‌ಗಳನ್ನು ಗುತ್ತಿಗೆಗೆ ಪಡೆಯಲಿದೆ.

**ಸಾರ್ವಜನಿಕ ಸಾರಿಗೆ ಬಸ್ ಸಂಖ್ಯೆಯಲ್ಲಿ ದೆಹಲಿ ನಂಬರ್ 1:** ಸದ್ಯ, 8,000 ಕ್ಕೂ ಹೆಚ್ಚು ಬಸ್‌ಗಳನ್ನು ಹೊಂದಿರುವ ದೆಹಲಿಯು ದೇಶದ ಎಲ್ಲಾ ನಗರಗಳ ಪೈಕಿ ಅತಿ ಹೆಚ್ಚು ಸಾರ್ವಜನಿಕರ ಸಾರಿಗೆ ಬಸ್‌ಗಳನ್ನು ಹೊಂದಿದೆ. ಆದರೆ, ಬೆಂಗಳೂರಿಗೆ ಕೇಂದ್ರದಿಂದ ಬರಲಿರುವ ಬಸ್‌ಗಳು ಹಾಗೂ ಬಿಎಂಟಿಸಿ ಖರೀದಿಸಲಿರುವ ಬಸ್‌ಗಳ ಲೆಕ್ಕಾಚಾರ ಹಾಕಿದಾಗ, ಮುಂದಿನ 2-3 ವರ್ಷಗಳಲ್ಲಿ ದೆಹಲಿಯನ್ನು ಮೀರಿಸಲಿದೆ. ಪುಟ 2

ಲೋಕಲ್ ಎಲೆಕ್ಷನ್ ವಿನ್ನಿಂಗ್ ರೇಟ್!

# ಕ್ಲೈಮ್ ಪಾಲಿಟಿಕ್ಸ್!

**ಬೆಂಗಳೂರು:** ಮೇ ಬಳಿಕ ಕರ್ನಾಟಕದಲ್ಲಿ ಲೋಕಲ್ ಫೈಟ್ ಜೋರಾಗಲಿದೆ. ಆ ಚುನಾವಣೆಗೂ ಹೈಕಮಾಂಡ್‌ನಿಂದ ಜೋಡೆತ್ತುಗಳ ಸೂತ್ರ ರೆಡಿಯಾದರೆ, ಸಿದ್ದು ಟೀಂನಿಂದ ಮಾಸ್ ಪ್ಲಸ್ ಅಹಿಂದ ಕ್ಲೈಮ್ ತಂತ್ರ ಇದೆ ಎನ್ನಲಾಗ್ತಿದೆ.

ಲೋಕಲ್ ಬಾಡಿ ಚುನಾವಣೆ ಇಟ್ಟುಕೊಂಡು ಯಾವ ಬದಲಾವಣೆ ಬೇಡ ಅಂದ್ರೆ, ಪವರ್ ಶೇರ್, ಕೆಪಿಸಿಸಿ ಪಟ್ಟ ಎರಡು ಸದ್ಯಕ್ಕೆ ಸೇಫ್. ಆದರೆ ಮುಂದೆ ಎಲ್ಲ ಬದಲಾವಣೆಗಳಿಗೂ ಜಿ.ಪಂ, ತಾ.ಪಂ ರಿಸಲ್ಟ್ ಮಾನದಂಡ ಆಗುತ್ತಾ



ಎಂಬ ಕುತೂಹಲವಂತೂ ಇದೆ.

ಮೇ ಒಳಗೆ ಜಿ.ಪಂ, ತಾ.ಪಂ ಚುನಾವಣೆ ನಡೆಸುವ ಸಂಬಂಧ ರಾಜ್ಯ ಸರ್ಕಾರ ಸುಳಿವು ನೀಡಿದೆ. ಲೋಕಲ್ ಎಲೆಕ್ಷನ್ ಪುಟ 2

# ಕೇಜ್ರಿವಾಲ್ ಪಂಜಾಬ್‌ನ ಮುಂದಿನ ಸಿಎಂ?

**ನವದೆಹಲಿ:** ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಆಮ್ ಆದ್ಮಿ ಪಕ್ಷದ ಸೋಲಿನ ನಂತರ, ಭಗವಂತ್ ಮಾನ್ ಅವರನ್ನು ಪದಚ್ಯುತಗೊಳಿಸುವ ಮೂಲಕ ಅರವಿಂದ್ ಕೇಜ್ರಿವಾಲ್ ಅವರೇ ಪಂಜಾಬ್ ಮುಖ್ಯಮಂತ್ರಿಯಾಗಬಹುದು ಎಂಬ ಊಹಾಪೋಹವಿತ್ತು. ಆದರೆ ಈಗ ಭಗವಂತ್ ಮಾನ್ ಈ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ.

» **ಅದು ಹೇಗೆ ಸಾಧ್ಯ ಎಂದವರಿಗೆ ಭಗವಂತ್ ಮಾನ್ ಪ್ರಶ್ನೆ**



ಅದು ಹೇಗೆ ಸಾಧ್ಯ , ವಿರೋಧ ಪಕ್ಷಗಳು ತಮ್ಮ ಮನಸ್ಸಿಗೆ ಬಂದದ್ದನ್ನು ಹೇಳುತ್ತಿವೆ. ವಿರೋಧ ಪಕ್ಷಗಳು ಈಗಾಗಲೇ ಬಹಳಷ್ಟು ಹೇಳಿವೆ. ಅರವಿಂದ್ ಕೇಜ್ರಿವಾಲ್ ನಮ್ಮ ಪಕ್ಷದ ರಾಷ್ಟ್ರೀಯ ಸಂಚಾಲಕರು. ಪುಟ 2

# ಅತ್ತೆಯನ್ನು ಕೊಲ್ಲಲು ವೈದ್ಯರ ಬಳಿ ಮಾತ್ರೆ ಕೇಳಿದ ಸೊಸೆ

**ಬೆಂಗಳೂರು:** ಅತ್ತೆಯನ್ನು ತಾಯಿ ಸ್ಥಾನದಲ್ಲಿ ನೋಡುತ್ತಾರೆ. ಆದರೆ ನಗರದಲ್ಲಿ ಅತ್ತೆಯನ್ನು ಕೊಲ್ಲಲು ಸೊಸೆ ವೈದ್ಯರ ಬಳಿಯೇ ಮಾತ್ರೆ ಕೇಳಿದ ಘಟನೆಯೊಂದು ನಡೆದಿದೆ. ಡಾಕ್ಟರ್ ಒಬ್ಬರಿಗೆ ನನ್ನ ಅತ್ತೆಯನ್ನು ಸಾಯಿಸಲು ಮಾತ್ರೆ ಬರೆದುಕೊಡಿ ಎಂದು ಕೇಳಿದ್ದು, ಡಾಕ್ಟರ್ ಒಂದು ಕ್ಷಣ ಶಾಕ್ ಆಗಿದ್ದಾರೆ.

ಹೌದು, ಅತ್ತೆ ಜೊತೆಗಿನ ಜಗಳಕ್ಕೆ ರೋಸಿ ಹೋದ ಸೊಸೆಯೊಬ್ಬರು, ಅವರನ್ನು ಕೊಲ್ಲುವ ಪ್ಲ್ಯಾನ್ ಮಾಡಿದ್ದಾರೆ. ಬಳಿಕ ಡಾಕ್ಟರ್ ಸುನೀಲ್ ಕುಮಾರ್ ಎನ್ನುವವರಿಗೆ ವಾಟ್ಸಾಪ್ ನಲ್ಲಿ ಸಂಪರ್ಕಿಸಿದ್ದಾರೆ. ನಮ್ಮ ಅತ್ತೆ ತುಂಬಾ



ಹಿಂಸೆ ಕೊಡುತ್ತಿದ್ದಾರೆ. ಅವರಿಗೆ ವಯಸ್ಸಾಗಿದೆ. ಅವರನ್ನು ಹೇಗೆ ಸಾಯಿಸೋದು? ಒಂದೆರೆಡು ಮಾತ್ರೆ ತೆಗೆದುಕೊಂಡರೆ ಸಾಯುತ್ತಾರಲ್ಲ, ಅದನ್ನು ಹೇಳಿ ಎಂದು ಮೆಸೇಜ್ ಮೂಲಕ ಕೇಳಿದ್ದಾರೆ. ಪುಟ 2

ಇಂದು ಬಿಜೆಪಿ ಶಾಸಕಾಂಗ ಪಕ್ಷದ ಸಭೆ

# ದೆಹಲಿ ಸಿಎಂ ಯಾರು ಎಂಬ ಕುತೂಹಲಕ್ಕೆ ಬೀಳಲಿದೆ ತೆರೆ

**ನವದೆಹಲಿ:** ದೆಹಲಿ ಮುಖ್ಯಮಂತ್ರಿ ಯಾರಾಗುತ್ತಾರೆ ಎಂಬುದು ಇನ್ನೂ ನಿಗೂಢವಾಗಿಯೇ ಉಳಿದಿದೆ. ಇಂದು ದೆಹಲಿಯಲ್ಲಿ ಬಿಜೆಪಿ ಶಾಸಕಾಂಗ ಪಕ್ಷದ ಸಭೆ ನಡೆಯಲಿದ್ದು, ಇಂದೇ ಮುಖ್ಯಮಂತ್ರಿ ಹೆಸರನ್ನು ಬಿಜೆಪಿ ಘೋಷಿಸಲಿದೆ. ಫೆಬ್ರವರಿ 8 ರಂದು ದೆಹಲಿ ಜನರು ತಮ್ಮ ಜನಾದೇಶವನ್ನು ನೀಡಿದ್ದಾರೆ. ದೆಹಲಿಯ ಜನರು ಪ್ರಧಾನಿ ಮೋದಿ ನೀಡಿದ ಭರವಸೆಯನ್ನು ನಂಬಿದ್ದಾರೆ ಮತ್ತು ಬಿಜೆಪಿ ದೊಡ್ಡ ಇತಿಹಾಸವನ್ನೇ ನಿರ್ಮಿಸಿದೆ. 27 ವರ್ಷಗಳ ಬಳಿಕ ದೆಹಲಿಯಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಿದೆ.

ದೆಹಲಿಯಲ್ಲಿ ನಡೆಯುವ ಬಿಜೆಪಿ ಶಾಸಕಾಂಗ ಪಕ್ಷದ ಸಭೆಯಲ್ಲಿ ಮುಖ್ಯಮಂತ್ರಿಯನ್ನು ಆಯ್ಕೆ




ಮಾಡಲಾಗುವುದು ಮತ್ತು ಗುರುವಾರ ರಾಮಲೀಲಾ ಮೈದಾನದಲ್ಲಿ ಮುಖ್ಯಮಂತ್ರಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ದೆಹಲಿಯ ಬಿಜೆಪಿ ಸರ್ಕಾರ ಮೊದಲು ಯಮುನಾ ನೀರನ್ನು ಸ್ವಚ್ಛಗೊಳಿಸಿ ನಂತರ ನದಿ ಮುಂಭಾಗ ಮತ್ತು ಹಸಿರು ಕಾರಿಡಾರ್ ನಿರ್ಮಿಸಲಿದೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

ಜಲ ಮೆಟ್ರೋ ಸಾಧ್ಯತೆಯನ್ನು ಪ್ರಧಾನಿ ಮೋದಿ ನಿರಾಕರಿಸಲಿಲ್ಲ, ಅಂದರೆ ದೆಹಲಿಯ ಅಭಿವೃದ್ಧಿಯ ನೀಲನಕ್ಷೆಯ ಬಗ್ಗೆ ಪ್ರಧಾನಿ ಮೋದಿಯವರ ಮನಸ್ಸಿನಲ್ಲಿ ಯಾವುದೇ ಗೊಂದಲವಿಲ್ಲ. ಈಗ ಉಳಿದಿರುವ ಒಂದೇ ಪ್ರಶ್ನೆ ಎಂದರೆ ರಾಜಧಾನಿಯಲ್ಲಿ ಬಿಜೆಪಿಯ ಈ ಭರವಸೆಗಳನ್ನು ಯಾರು ನಿಜವಾಗಿಸುತ್ತಾರೆ ಎಂಬುದು.

ಅಷ್ಟಕ್ಕೂ, ದೆಹಲಿಯಲ್ಲಿ ಅಹಮದಾಬಾದ್‌ನಂತಹ ನದಿ ದಂಡೆಯನ್ನು ನಿರ್ಮಿಸುವ ಜವಾಬ್ದಾರಿಯನ್ನು ಪ್ರಧಾನಿ ಮೋದಿ ಯಾರ ಹೆಗಲ ಮೇಲೆ ಹಾಕುತ್ತಾರೆ? ಎಂಬುದು. ಮುಖ್ಯಮಂತ್ರಿ ಆಯ್ಕೆ ಮಾಡಲು ಪುಟ 2

ಮತ್ತಷ್ಟು ದುಬಾರಿಯಾಗುತ್ತೆ ನಂದಿನಿ ಹಾಲು!

# ಬೆಲೆ ಏರಿಕೆ ಶಾಕ್

**ಬೆಂಗಳೂರು:** 2024 ಕಳೆದು 2025 ಬಂದಾಯ್ತು. ಜನವರಿ ಕಳೆದು ಫೆಬ್ರವರಿ ತಿಂಗಳು ಮುಗೀತಾನು ಬಂತು. ಆದ್ರೆ ಹೊಸ ವರ್ಷ ಆರಂಭವಾಗಿದ್ದೇ ತಡ, ರಾಜ್ಯದ ಜನರಿಗೆ ಶಾಕ್ ಮೇಲೆ ಶಾಕ್ ನೀಡುತ್ತಿದೆ. ಇತ್ತೀಚೆಗಷ್ಟೇ ಬಸ್, ಮೆಟ್ರೋ ದರ ಏರಿಕೆಯಿಂದಾಗಿ ಜನ ಈಗಾಗಲೇ ಕಂಗಾಲಾಗಿ ಹೋಗಿದ್ದಾರೆ. ಅದರಲ್ಲೂ ಮೆಟ್ರೋ ದರ ಏರಿಕೆ ಮಾತ್ರ, ಗಾಯದ ಮೇಲೆ ಬರೆ ಎಳೆದಂತಾಗಿದೆ. ಈ ಬಗ್ಗೆ ಎಲ್ಲೆಡೆ ಆಕ್ರೋಶವೂ ವ್ಯಕ್ತವಾಗುತ್ತಿದೆ. ಇದೀಗ ಬಸ್, ಮೆಟ್ರೋ ಪ್ರಯಾಣ ದರ ಏರಿಕೆ ಮಾಡಿದ ಬೆನ್ನಲ್ಲೇ ಮತ್ತೊಂದು ಬೆಲೆ ಏರಿಕೆಯ ಬಗ್ಗೆ ಚರ್ಚೆ ನಡೆಯುತ್ತಿದೆ.

ಹೌದು, ಬಸ್, ಮೆಟ್ರೋ ಪ್ರಯಾಣ ದರ ಏರಿಕೆ ಮಾಡಿದ್ದಾಯ್ತು, ಇದೀಗ ನಂಂದಿನಿ ಹಾಲಿನ ದರ ಏರಿಕೆಗೆ ಸರ್ಕಾರ ತಯಾರಿ ನಡೆಸಿದೆ ಎಂದು ವರದಿಯಾಗಿದೆ.

**ಏರಿಕೆಯಾಗುತ್ತಾ ಹಾಲಿನ ದರ!:** ಇದೀಗ ನಂದಿನಿ ಹಾಲಿನ ದರ ಏರಿಕೆಗೆ ಸರ್ಕಾರ ತಯಾರಿ ನಡೆಸಿದೆ ಎನ್ನಲಾಗಿದ್ದು, ಶೀಘ್ರದಲ್ಲೇ ನಂದಿನಿ ಹಾಲಿನ ದರ ಪರಿಷ್ಕರಣೆಯಾಗಲಿದೆ ಎಂದು ವರದಿಯಾಗಿದೆ. ಇನ್ನು




ಕೆಲ ದಿನಗಳ ಹಿಂದಷ್ಟೇ ರೈತರಿಗೆ ನೀಡುವ ಹಾಲಿನ ದರ ಏರಿಸುವಂತೆ ಕೆಎಂಎಫ್ ಮುಂದೆ ರೈತರು ಪ್ರತಿಭಟನೆ ಮಾಡಿದ್ದರು. ಜತೆಗೆ ಹಾಲು ಒಕ್ಕೂಟಗಳಿಂದ ನಂದಿನಿ ಹಾಲಿನ ದರ ಏರಿಸುವಂತೆ ಕೆಎಂಎಫ್ ಗೆ ಒತ್ತಡ ಹೇರಲಾಗಿತ್ತು. ಈ ಎಲ್ಲವುಗಳನ್ನು ಪರಿಗಣಿಸಿ ಇದೀಗ ಕೆಎಂಎಫ್ ಆಡಳಿತ ಮಂಡಳಿ ಸರ್ಕಾರಕ್ಕೆ ಮನವಿ ಮಾಡಿದೆ.

**ಪ್ರತೀ ಲೀಟರ್‌ಗೆ 5 ರೂಪಾಯಿ ಹೆಚ್ಚಳ!:** ಇನ್ನು ಕೆಎಂಎಫ್ ಪ್ರತಿ ಲೀಟರ್ ಗೆ 5 ರೂಪಾಯಿ ಹೆಚ್ಚಳ ಮಾಡುವಂತೆ ಸರ್ಕಾರಕ್ಕೆ ಮನವಿ ಮಾಡಿದೆ ಎನ್ನಲಾಗಿದ್ದು, ಪುಟ 2

### ರಸ್ತೆಯಲ್ಲಿ ಕಸ ಎಸೆದ್ರೆ ನಿಮ್ಮ ಮನೆಗೆ ಬಂದು ದಂಡ ಹಾಕ್ತಾರೆ ಬಿಬಿಎಂಪಿ

# ಸಿಬ್ಬಂದಿ!

**ಬೆಂಗಳೂರು:** ನಗರದ ರಸ್ತೆಗಳಲ್ಲಿ ಕಸ ಎಸೆದರೆ ಇನ್ನು ಮುಂದೆ ನಿಮ್ಮ ಮನೆಗೆ ಬಂದು ಬಿಬಿಎಂಪಿ ಸಿಬ್ಬಂದಿ ದಂಡ ವಿಧಿಸುತ್ತಾರೆ.

ಹೊಸಕೆರೆಹಳ್ಳಿಯಲ್ಲಿ ಸರವಣ ಎಂಬವರು ರಸ್ತೆ ಬದಿ ಕಸ ಎಸೆದು ಹೋಗಿದ್ದರು. ಕಸ ಎಸೆದು ಹೋಗುತ್ತಿರುವ ದೃಶ್ಯ ಸಮಿಪದ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿತ್ತು. ಈ ದೃಶ್ಯದ ಆಧಾರದ ಮೇಲೆ ಬಿಬಿಎಂಪಿ ಹೆಲ್ತ್ ಸೂಪರ್‌ವೈಸರ್ ಲೋಕೇಶ್ ಅವರು ಸರವಣ ಮನೆಗೆ ತೆರಳಿ 100 ರೂ. ದಂಡ ವಿಧಿಸಿದ್ದಾರೆ.



## ಆನ್‌ಲೈನ್ ಬೆಟ್ಟಿಂಗ್‌ಗೆ ಒಂದೇ ಕುಟುಂಬದ ಮೂವರು ಬಲಿ



**ಮೈಸೂರು:** ಐಪಿಎಲ್ ಹಾಗೂ ಆನ್‌ಲೈನ್ ಬೆಟ್ಟಿಂಗ್‌ಗೆ ಒಂದೇ ಕುಟುಂಬದ ಮೂವರು ಮೃತಪಟ್ಟಿರುವ ಘಟನೆ ಮೈಸೂರು ತಾಲೂಕಿನ ಹಂಚ್ಯಾ ಗ್ರಾಮದ ಬಳಿ ನಡೆದಿದೆ. ಜೋಶಿ ಆಂಥೋನಿ, ಜೋಬಿ ಆಂಥೋನಿ, ಶರ್ಮಿಳಾ ಅಲಿಯಾಸ್ ಸ್ವಾತಿ ಮೃತ ದುರ್ದೈವಿಗಳು. ಜೋಬಿ ಆಂಥೋನಿ ಹಾಗೂ ಜೋಷಿ ಆಂಥೋನಿ ಸಹೋದರರು.

ಜೋಶಿ ಆಂಥೋನಿ ತನ್ನ ತಮ್ಮನಾದ ಜೋಬಿ ಆಂಥೋನಿ ಮತ್ತು ನಾದಿನಿ ಶರ್ಮಿಳಾ ಅಲಿಯಾಸಿ ಸ್ವಾತಿ ಮೇಲೆ ಮೋಸದ ಆರೋಪ ಹೊರಿಸಿ ಸೋಮವಾರ ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸಾಯುವ ಮುನ್ನ ಜೋಶಿ ಆಂಥೋನಿ ವಿಡಿಯೋ ಮಾಡಿದ್ದು, ''ಸಹೋದರ ಜೋಬಿ, ಆತನ ಪತ್ನಿ ಶರ್ಮಿಳಾ ಮೋಸದಿಂದ ನನ್ನ ಸಹೋದರಿ ಮೂಲಕ ಊರು ತುಂಬ ಸಾಲ ಪಡೆದು ಮೋಸ ಮಾಡಿದ್ದಾರೆ. ನನ್ನ ಸಹೋದರಿಗೆ ಗಂಡ ಇಲ್ಲ, ಅವರು ಮೋಸ ಮಾಡಿದ್ದಾರೆ. ನನ್ನ ಸಾವಿಗೆ ತಮ್ಮ ಜೋಬಿ ಆಂಥೋನಿ ಮತ್ತು ಆತನ ಪತ್ನಿ ಶರ್ಮಿಳಾ ಕಾರಣ. ಅವರಿಗೆ ಶಿಕ್ಷೆ ಕೊಡಿಸಿ'' ಎಂದು ವಿಡಿಯೋದಲ್ಲಿ ಹೇಳಿ ನೇಣಿಗೆ ಶರಣದಾಗಿದ್ದಾರೆ.

ಜೋಶಿ ಆಂಥೋನಿ ಸಾವಿನ ವಿಚಾರ ತಿಳಿದು ತಮ್ಮ ಜೋಬಿ ಆಂಥೋನಿ ಹಾಗೂ ಈತನ ಪತ್ನಿ ಶರ್ಮಿಳಾ ಅಲಿಯಾಸಿ ಸ್ವಾತಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಜೋಬಿ ಹಾಗೂ ಶರ್ಮಿಳಾ ಐಪಿಎಲ್ ಹಾಗೂ ಆನ್ ಲೈನ್ ಗೇಮ್‌ನಲ್ಲಿ ಲಕ್ಷಾಂತರ ಸಾಲ ಮಾಡಿಕೊಂಡಿದ್ದರು. ಸಾಲಗಾರರು ಪ್ರತಿ ನಿತ್ಯ ಮನೆಯ ಬಳಿ ಬಂದು ದುಡ್ಡು ಕೇಳುತ್ತಿದ್ದರು. ಇದರಿಂದ ಮನನೊಂದ ಜೋಷಿ ಆಂಥೋನಿ ಸೋಮವಾರ ಮೈಸೂರು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ನಿನ್ನೆ ಜೋಬಿ ಹಾಗೂ ಶರ್ಮಿಳಾ ವಿಜಯನಗರದ ಕ್ರೀಡಾ ಮೈದಾನದ ಬಳಿ ನೇಣಿಗೆ ಶರಣಾಗಿದ್ದಾರೆ.

## ಬ್ಯಾಂಕ್ ಲಾಕರ್‌ನಲ್ಲಿಟ್ಟ ದುಡ್ಡಿಗೆ ಗೆದ್ದಲು



**ಬೆಂಗಳೂರು:** ಬ್ಯಾಂಕ್ ಲಾಕರ್‌ನಲ್ಲಿ ಇಟ್ಟಿದ್ದ 8 ಲಕ್ಷ ರೂಪಾಯಿ ಗೆದ್ದಲಿಗೆ ಬಲಿಯಾಗಿದ್ದಕ್ಕೆ ಗ್ರಾಹಕರೊಬ್ಬರು ಈಗ ಬೆಂಗಳೂರಿನ ಪ್ರಧಾನ ಕಚೇರಿಗೆ ದೂರು ನೀಡಿದ್ದಾರೆ. ಸಫಲ್ ಮಂಗಳೂರಿನ ಕೋಟೆಕಾರ್‌ನಲ್ಲಿರುವ ಕೆನರಾ ಬ್ಯಾಂಕಿನಲ್ಲಿ 8 ಲಕ್ಷ ರೂ. ಇಟ್ಟಿದ್ದರು. 6 ತಿಂಗಳ ಬಳಿಕ ಔಷಧಿಗಾಗಿ ದುಡ್ಡು ತೆಗೆಯಲು ಲಾಕರ್ ತೆರೆದಿದ್ದಾರೆ.

» **8 ಲಕ್ಷ ಡಮಾರ್!**



ಬ್ಯಾಂಕ್ ನವರೇ ಖುದ್ದಾಗಿ ಲಾಕರ್ ಓಪನ್ ಮಾಡಿದ್ದಾರೆ. ಲಾಕರ್ ಮಳೆನೀರಿನಲ್ಲಿ ನೆಂದ ಸ್ಥಿತಿಯಲ್ಲಿದ್ದರೆ ದುಡ್ಡು ಸಂಪೂರ್ಣವಾಗಿ ಕಪ್ಪಾಗಿ ಹುಡಿ ಹುಡಿಯಾಗಿ ಗೆದ್ದಲು ಹಿಡಿದು ಚೂರಾಗಿ ಬಿದ್ದಿದೆ. ಎಂಟು ಲಕ್ಷ ರೂ. ದುಡ್ಡು ಇದೇ ರೀತಿ ಆಗಿದೆ. ಆರ್‌ಬಿಐ ನಿಯಮದ ಪ್ರಕಾರ ಪ್ರಕಾರ ದುಡ್ಡನ್ನು ಲಾಕರ್‌ನಲ್ಲಿ ಇಡುವಂತಿಲ್ಲ ಹೀಗಾಗಿ ಇದಕ್ಕೂ ನಮಗೂ ಸಂಬಂಧ ಇಲ್ಲ ಎಂದು ಬ್ಯಾಂಕ್‌ನವರು ಹೇಳಿದ್ದಾರೆ. ಹೀಗಾಗಿ ಸಫಲ್ ಕುಟುಂಬಸ್ಥರು ಬೆಂಗಳೂರಿಗೆ ಆಗಮಿಸಿ ಪ್ರಧಾನ ಕಚೇರಿಗೆ ದೂರು ನೀಡಿ, ಹಳೆಯ ಕಟ್ಟಡ ನಿರ್ವಹಣೆ ಕೊರತೆಯಿಂದ ಸಮಸ್ಯೆಯಾಗಿದೆ. ಹೀಗಾಗಿ ಸರಿಪಡಿಸಬೇಕು ಎಂದು ಮನವಿ ಮಾಡಿದ್ದಾರೆ. ಲಾಕರ್‌ನಲ್ಲಿ ಹಣ ಇಡಬಾರದು ನಿಜ. ಆದರೆ ಬ್ಯಾಂಕ್‌ನಲ್ಲಿ ಹಣ ಇಟ್ಟರೆ ಸೇಫ್ ಎಂಬ ನಂಬಿಕೆಯಿದೆ. ಆದರೆ ನಿರ್ವಹಣೆ ಕೊರತೆಯಿಂದ ಈ ರೀತಿ ಸಮಸ್ಯೆಯಾದರೆ ಹೊಣೆ ಯಾರು ಎನ್ನುವುದೇ ಪ್ರಶ್ನೆ.

# ಬಿಜೆಪಿ ಕೇಂದ್ರ ಶಿಸ್ತು ಸಮಿತಿ ನೋಟಿಸ್‌ಗೆ ಉತ್ತರ ನೀಡಿದ ಬಸನಗೌಡ ಪಾಟೀಲ್ ಯತ್ನಾಳ್



**ನವದೆಹಲಿ:** ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಹಾಗೂ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಬಣಗಳ ನಡುವಣ ಸಂಘರ್ಷ ತೀವ್ರಗೊಂಡ ಬೆನ್ನಲ್ಲೇ ಪಕ್ಷಕ್ಕೆ ಮುಜುಗರ ತರುವಂಥ ಹೇಳಿಕೆಗಳನ್ನು ನೀಡುತ್ತಿರುವುದಕ್ಕಾಗಿ ಯತ್ನಾಳ್‌ಗೆ ಬಿಜೆಪಿ ಕೇಂದ್ರ ಶಿಸ್ತು ಸಮಿತಿ ನೋಟಿಸ್ ನೀಡಿತ್ತು. 72 ಗಂಟೆ ಒಳಗೆ ಉತ್ತರಿಸುವಂತೆ ಖಡ್ ಸೂಚನೆ ನೀಡಿತ್ತು. ಈ ನೋಟಿಸ್‌ಗೆ ಯತ್ನಾಳ್ ಉತ್ತರವನ್ನೇ ನೀಡಿಲ್ಲ, ಅವರ ವಿರುದ್ಧ ಹೈಕಮಾಂಡ್ ಕ್ರಮ ಕೈಗೊಳ್ಳುತ್ತದೆಯೇ ಎಂಬುದು ಈವರೆಗಿನ ಪ್ರಶ್ನೆಯಾಗಿತ್ತು. ಆದರೆ, ನೋಟಿಸ್ ಪಡೆದ ಮರುದಿನವೇ ಶಿಸ್ತು ಸಮಿತಿಗೆ ಯತ್ನಾಳ್ ಉತ್ತರ ನೀಡಿದ್ದರು ಎಂಬ ವಿಚಾರ ಈಗ ತಿಳಿದುಬಂದಿದೆ.

ಕೇಂದ್ರ ಶಿಸ್ತು ಸಮಿತಿ ನೋಟಿಸ್‌ಗೆ ಯತ್ನಾಳ್ 9 ಪುಟಗಳ ಉತ್ತರ ನೀಡಿದ್ದಾರೆ. ಇ-ಮೇಲ್ ಮೂಲಕ ಉತ್ತರ ನೀಡಿದ್ದಾರೆ. ಇದರೊಂದಿಗೆ, ನೋಟಿಸ್ ದೊರೆತ 72 ಗಂಟೆಗಳ ಒಳಗಾಗಿಯೇ ಅವರು ಉತ್ತರ ನೀಡಿದಂತಾಗಿದೆ.

ಶಿಸ್ತು ಸಮಿತಿಯ ನೋಟಿಸ್‌ಗೆ ಉತ್ತರ ನೀಡುವುದಕ್ಕೆ ಏನೂ ಇಲ್ಲ ಎಂದು ಯತ್ನಾಳ್ ಕೆಲವು ದಿನಗಳ ಹಿಂದೆ ಹೇಳಿದ್ದರು.

**ಯತ್ನಾಳ್ ನೀಡಿದ ಉತ್ತರವೇನು?:** ಬಿಜೆಪಿ ಕೇಂದ್ರ ಶಿಸ್ತು ಸಮಿತಿಗೆ ಯತ್ನಾಳ್ ನೀಡಿರುವ ಉತ್ತರವೇನು ಎಂಬುದರ ವಿವರ ಸದ್ಯ ಬಹಿರಂಗವಾಗಿಲ್ಲ. ಆದಾಗ್ಯೂ, ವಿಜಯೇಂದ್ರ ವಿರುದ್ಧ ದೂರುಗಳ ಸರಮಾಲೆಯನ್ನೇ ಮಾಡಿದ್ದಾರೆ ಎಂದು ಮೂಲಗಳು ತಿಳಿಸಿವೆ. 'ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಬಣ ರಾಜಕೀಯ ಮಾಡುತ್ತಿದೆ. ನಾನು ಯಾವುದೇ ಬಣ ರಾಜಕೀಯ ಮಾಡಿಲ್ಲ. ಪಕ್ಷದ ಶಿಸ್ತನ್ನು ನಾನು ಉಲ್ಲಂಘಿಸಿಲ್ಲ' ಎಂದು ಉತ್ತರದಲ್ಲಿ ತಿಳಿಸಿದ್ದಾರೆ.

ಪಕ್ಷದ ಚೌಕಟ್ಟಿನಲ್ಲಿ ವಕ್ಫ್ ವಿರುದ್ಧ ಹೋರಾಟ ಮಾಡಿದ್ದೇವೆ. ತಂಡವಾಗಿ ಹೋರಾಟ ಮಾಡಿ ನಾವು ಯಶಸ್ವಿಯಾಗಿದ್ದೇವೆ. ವಕ್ಫ್ ಕುರಿತ ಹೋರಾಟವನ್ನು ಉನ್ನತ ನಾಯಕರು ಸಮರ್ಥಿಸಿದ್ದಾರೆ. ಬಿ.ವೈ. ವಿಜಯೇಂದ್ರ ಏಕಪಕ್ಷೀಯ ನಿರ್ಧಾರ ಕೈಗೊಳ್ಳುತ್ತಿದ್ದಾರೆ. ಕಾರ್ಯಕರ್ತರು, ನಾಯಕರ ಭಾವನೆಯನ್ನು ವ್ಯಕ್ತಪಡಿಸಿದ್ದೇನೆ ಎಂದು ಯತ್ನಾಳ್ ಉತ್ತರಿಸಿದ್ದಾರೆ.

**ಮೌನಕ್ಕೆ ಶರಣಾದ ಯತ್ನಾಳ್ ಬಣದ ನಾಯಕರು:** ಶಿಸ್ತು ಸಮಿತಿ ನೋಟಿಸ್ ಬಳಿಕ ಯತ್ನಾಳ್ ಬಣ ಮೌನಕ್ಕೆ ಶರಣಾಗಿತ್ತು. ಕಳೆದ ಕೆಲವು ದಿನಗಳಿಂದ ಬಹಿರಂಗ ಹೇಳಿಕೆಗಳಿಗೆ ಬ್ರೇಕ್ ಬಿದ್ದಿತ್ತು. ಯತ್ನಾಳ್ ಬಣದ ನಾಯಕ ರಮೇಶ್ ಜಾರಕಿಹೊಳಿ ಕೂಡ ಮಾಧ್ಯಮಗಳಿಂದ ಅಂತರ ಕಾಯ್ದುಕೊಂಡಿದ್ದಾರೆ. ಯತ್ನಾಳ್ ವಿಚಾರದಲ್ಲಿ ಹೈಕಮಾಂಡ್ ಯಾವ ನಿರ್ಧಾರ ತೆಗೆದುಕೊಳ್ಳುತ್ತದೆ ಎಂಬುದನ್ನು ಕಾದುನೋಡುವ ತಂತ್ರವನ್ನು ಬಣ ಅನುಸರಿಸುತ್ತಿದೆ ಎನ್ನಲಾಗಿದೆ.

ದೆಹಲಿ ಭೇಟಿಯಿಂದ ವಾಪಸಾದ ಬಳಿಕ ಬೆಂಗಳೂರಿಗೆ ತೆರಳಿದ್ದ ರಮೇಶ್ ಜಾರಕಿಹೊಳಿ ಸದ್ಯ ಗೋಕಾಕ್ ಕ್ಷೇತ್ರದಲ್ಲಿ ಸುತ್ತಾಟ ಮುಂದುವರಿಸಿದ್ದಾರೆ. ಬೆಳಗಾವಿ ಜಿಲ್ಲೆಯ ಗೋಕಾಕ್‌ನಲ್ಲಿ ಸರ್ಕಾರಿ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ.

ಯತ್ನಾಳ್‌ಗೆ ನೋಟಿಸ್: ಇದೇ ಮೊದಲಲ್ಲ

ಅಂದಹಾಗೆ, ಬಸನಗೌಡ ಪಾಟೀಲ್ ಯತ್ನಾಳ್‌ಗೆ ಬಿಜೆಪಿ ಕೇಂದ್ರ ಶಿಸ್ತು ಸಮಿತಿ ಈ ಹಿಂದೆ ಕೂಡ ನೋಟಿಸ್ ನೀಡಿತ್ತು. ವಿಜಯೇಂದ್ರ ಅವರನ್ನು ಪಕ್ಷದ ರಾಜ್ಯಾಧ್ಯಕ್ಷರನ್ನಾಗಿ ಮಾಡಿರುವುದಕ್ಕೆ ಯತ್ನಾಳ್ ಸಿಡಿದೆದ್ದಿದ್ದು, ಬಹಿರಂಗವಾಗಿಯೇ ಮಾಜಿ ಸಿಎಂ ಯಡಿಯೂರಪ್ಪ ಹಾಗೂ ವಿಜಯೇಂದ್ರ ವಿರುದ್ಧ ಟೀಕೆಗಳನ್ನು ಮಾಡುತ್ತಲೇ ಬಂದಿದ್ದಾರೆ. ಹೀಗಾಗಿ ಕಳೆದ ಡಿಸೆಂಬರ್‌ನಲ್ಲಿ ಅವರಿಗೆ ನೋಟಿಸ್ ನೀಡಲಾಗಿತ್ತು.

ನೋಟಿಸ್‌ಗೆ ಖುದ್ದು ಶಿಸ್ತು ಸಮಿತಿ ಮುಂದೆ ಹಾಜರಾಗಿ ವಿವರಣೆ ನೀಡಿದ್ದ ಯತ್ನಾಳ್, ಆ ನಂತರದಲ್ಲಿ ವಿಜಯೇಂದ್ರ ವಿರುದ್ಧ ವಾಗ್ದಾಳಿ ತೀವ್ರಗೊಳಿಸಿದ್ದರು. ಅಲ್ಲದೆ, ಯತ್ನಾಳ್ ಬಣದ ಇತರ ನಾಯಕರೂ ಬಹಿರಂಗವಾಗಿ ಹೇಳಿಕೆಗಳನ್ನು ನೀಡುತ್ತಾ ಬಂದಿದ್ದರು. ಬಣ ಜಗಳ ತೀವ್ರಗೊಂಡ ಬೆನ್ನಲ್ಲೇ ಶಿಸ್ತು ಸಮಿತಿ ಮತ್ತೆ ಶೋಕಾಸ್ ನೀಡಿತ್ತು.

# ರಾಜ್ಯದಲ್ಲಿನ ಅನಧಿಕೃತ ಬಡಾವಣೆಗಳಿಗೆ ಕಡಿವಾಣ

**ಬೆಂಗಳೂರು:** ಅನಧಿಕೃತ ಬಡಾವಣೆಗಳು ನಗರ, ಪಟ್ಟಣ, ಪಾಲಿಕೆ ವ್ಯಾಪ್ತಿ ಮತ್ತು ಹಳ್ಳಿಗಳಲ್ಲೂ ಇವೆ. ಇವೆಲ್ಲಕ್ಕೂ ಅಂತ್ಯ ಹಾಡಬೇಕು. ಅನಧಿಕೃತ ಬಡಾವಣೆಗಳಿಂದ ಕಂದಾಯ ಬರುತ್ತಿಲ್ಲ, ಪರಿಣಾಮ ಜನರಿಗೆ ನಾಗರಿಕ ಸವಲತ್ತುಗಳೂ ಸಿಗುತ್ತಿಲ್ಲ. ಸ್ಥಳೀಯ ಸಂಸ್ಥೆಗಳಿಗೆ ಬರುವ ಆದಾಯವೂ ಬಂದ್ ಆಗಿದೆ. ಇವೆಲ್ಲ ಅನಾನುಕೂಲಗಳಿಗೂ ಅಂತ್ಯ ಹಾಡಬೇಕಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.



» **ಸಿಎಂ ಸಿದ್ದರಾಮಯ್ಯ ಖಡಕ್ ಸೂಚನೆ**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜ್ಯದ ಮಹಾನಗರಪಾಲಿಕೆ, ನಗರ ಸ್ಥಳೀಯ ಸಂಸ್ಥೆಗಳಲ್ಲಿ ಇ-ಖಾತಾ ನೀಡುವ ಕುರಿತು ಜಿಲ್ಲಾಧಿಕಾರಿಗಳು, ಯೋಜನಾ ನಿರ್ದೇಶಕರು, ಮಹಾನಗರ ಪಾಲಿಕೆ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಆಯುಕ್ತರು, ಪೌರಾಯುಕ್ತರು, ಮುಖ್ಯಾಧಿಕಾರಿಗಳೊಂದಿಗೆ ಮಂಗಳವಾರ (ಫೆ.18) ವಿಡಿಯೊ ಸಂವಾದ ನಡೆಸಿದರು.

ಕಾಯ್ದೆ ಮೂಲಕ ಅನಧಿಕೃತ ಬಡಾವಣೆಗಳಿಗೆ ಅಂತ್ಯ ಹಾಡಬೇಕು. ಅಧಿಕಾರಿಗಳು ಸ್ಪಷ್ಟವಾಗಿ ಅರ್ಥ ಮಾಡಿಕೊಂಡು ಕೆಲಸ ಮಾಡಿ. ಕಂದಾಯ ಕಟ್ಟದಿರುವುದರಿಂದ ಇಷ್ಟೆಲ್ಲಾ ಸಮಸ್ಯೆಗಳಾಗಿವೆ. ಇದೊಂದು ಸಲ ಮಾತ್ರ ಬಿ ಖಾತಾ ಕೊಟ್ಟು, ನಂತರ ಅಂತ್ಯ ಹಾಡಬೇಕು. ನಿಮಗೆ (ಅಧಿಕಾರಿಗಳು) ಮೂರು ತಿಂಗಳು ಮಾತ್ರ ಸಮಯ ನೀಡುತ್ತೇನೆ, ಅಷ್ಟರೊಳಗೆ ಅಭಿಯಾನ ನಡೆಸಿ ಪೂರ್ಣಗೊಳಿಸಿ. ಯಾವುದೇ ರಾಜಿ ಇಲ್ಲ. ಅಧಿಕಾರಿಗಳು ರಾಜಿ ಮಾಡಿಕೊಂಡರೆ ಸಹಿಸಲ್ಲ ಎಂದರು.

ಅನಧಿಕೃತ ಬಡಾವಣೆಗಳು ಮತ್ತೆ ತಲೆ ಎತ್ತಿದರೇ ಜಿಲ್ಲಾಧಿಕಾರಿ, ಮುಖ್ಯ ಅಧಿಕಾರಿ, ನಗರ ಯೋಜನಾ ಅಧಿಕಾರಿಗಳು ಜವಾಬ್ದಾರಾಗುತ್ತಾರೆ. ಆಗ, ನಿಮ್ಮ ಮೇಲೆ ಮುಲಾಜಿಲ್ಲದೆ ಕ್ರಮ ತೆಗೆದುಕೊಳ್ಳುತ್ತೇವೆ. ಮಧ್ಯವರ್ತಿಗಳಿಗೆ, ಬ್ರೋಕರ್‌ಗಳಿಗೆ ತಕ್ಷಣ ಗೇಟ್ ಪಾಸ್ ನೀಡಿ. ಇದನ್ನು ನೀವೆಲ್ಲರೂ ಸ್ಪಷ್ಟವಾಗಿ, ಖಚಿತವಾಗಿ ಅರ್ಥ ಮಾಡಿಕೊಳ್ಳಿ. ರಾಜ್ಯದಲ್ಲಿ ಇನ್ನೆಲ್ಲೂ ಅನಧಿಕೃತ ಬಡಾವಣೆಗಳು, ರೆವಿನ್ಯೂ ಬಡಾವಣೆಗಳು ತಲೆ ಎತ್ತಬಾರದು ಎಂದು ಎಚ್ಚರಿಕೆ ನೀಡಿದರು.

ಅನಧಿಕೃತ, ರೆವಿನ್ಯೂ ಬಡಾವಣೆಗಳಲ್ಲಿ ನಿವೇಶನ, ಮನೆ ಕಟ್ಟಿರುವವರಿಗೆ ತೊಂದರೆ ಆಗಬಾರದು. ಒಟ್ಟಾರೆಯಾಗಿ ಬಡವರು, ಮಧ್ಯಮ ವರ್ಗದವರಿಗೆ ಅನುಕೂಲ ಮಾಡಿಕೊಡಲು ಒಂದು ಬಾರಿ ಪರಿಹಾರ ಕೊಟ್ಟಿದ್ದೀವೆ. ಮೂರು ತಿಂಗಳಲ್ಲಿ ಎಲ್ಲರಿಗೂ ಖಾತಾ ನೀಡಿ ಅಂತ್ಯ ಹಾಡಿ. ನಾನು ಮತ್ತು ಸಂಬಂಧಪಟ್ಟ ಎಲ್ಲಾ ಸಚಿವರು ಸ್ಪಷ್ಟಪಡಿಸಿದ್ದೀವೆ. ಹೊಸ ಗೊಂದಲಗಳಿಗೆ ಅವಕಾಶ ಮಾಡಿಕೊಡಬೇಡಿ ಬಿ ಖಾತಾ ಇವತ್ತಿನಿಂದಲೇ ಕೊಡಲು ಶುರು ಮಾಡಿ ಎಂದು ಸೂಚನೆ ನೀಡಿದರು.

ಮುಖ್ಯಮಂತ್ರಿಗಳ ವಿಡಿಯೋ ಸಂವಾದದಲ್ಲಿ ಕಂದಾಯ ಸಚಿವ ಕೃಷ್ಣಬೈರೇಗೌಡ, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ಪೌರಾಡಳಿತ ಸಚಿವ ರಹೀಂ ಖಾನ್, ಅರಣ್ಯ ಸಚಿವ ಈಶ್ವರ್ ಖಂಡ್ರೆ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸೇರಿದಂತೆ ಹಲವರು ಭಾಗಿಯಾಗಿದ್ದರು.

## ರಾಜ್ಯದ ತಂಬಾಕು ಬೆಳೆಗಾರರ ನೆರವಿಗೆ ಧಾವಿಸಿದ ಕೇಂದ್ರ

**ಬೆಂಗಳೂರು:** ರಾಜ್ಯದ ತಂಬಾಕು ಬೆಳೆಗಾರರ ಸಂಕಷ್ಟಕ್ಕೆ ಸ್ಪಂದಿಸಬೇಕು ಎಂದು ಯುವ ಜನತಾದಳ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಅವರ ನೇತೃತ್ವದ ನಿಯೋಗ ಮಾಡಿದ್ದ ಮನವಿಗೆ ಕೇಂದ್ರ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಿದೆ.

ಈ ಬಗ್ಗೆ ನಿಖಿಲ್ ಕುಮಾರಸ್ವಾಮಿಯವರು ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿದ್ದಾರೆ. ಹುಣಸೂರು, ಪಿರಿಯಾಪಟ್ಟಣ, ಹೆಚ್.ಡಿ.ಕೋಟೆ ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಬೆಳೆಯಲಾಗಿರುವ ಪರವಾನಗಿ ರಹಿತ ತಂಬಾಕು ಬೆಳೆಗಾರರಿಗೂ ಮಾರಾಟಕ್ಕೆ ಅವಕಾಶ ನೀಡಿಕೆ ಹಾಗೂ ಆ ಬೆಳೆಗಾರರಿಗೆ ವಿಧಿಸಲಾಗುತ್ತಿದ್ದ ದಂಡ ಮನ್ನಾ ಮಾಡುವ ನಿರ್ಧಾರ ಕೈಗೊಂಡಿರುವ ಕೇಂದ್ರದ ವಾಣಿಜ್ಯ ಮತ್ತು ಕೈಗಾರಿಕೆ ಖಾತೆ ಸಚಿವರಾದ ಪಿಯೂಷ್ ಗೋಯಲ್ ಅವರಿಗೆ ಧನ್ಯವಾದ ಹೇಳಿದ್ದಾರೆ.

» **ಧನ್ಯವಾದ ಅರ್ಪಿಸಿದ ನಿಖಿಲ್**



ಕೇಂದ್ರದ ಆದೇಶದ ಬಗ್ಗೆ ಹರ್ಷ ವ್ಯಕ್ತಪಡಿಸಿರುವ ಅವರು, ಕಳೆದ 2024 ಡಿ.2ರಂದು ನವದೆಹಲಿಯಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ಕೇಂದ್ರದ ವಾಣಿಜ್ಯ ಮತ್ತು ಕೈಗಾರಿಕೆ ಸಚಿವ ಪಿಯೂಷ್ ಗೋಯಲ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗಿತ್ತು. ಡಿ.21ರಂದು ವಾಣಿಜ್ಯ ಇಲಾಖೆಯ ಉನ್ನತ ಅಧಿಕಾರಿಗಳ ಜೊತೆ ಮಹತ್ವದ ಸಭೆಯನ್ನು ನಡೆಸಲಾಗಿತ್ತು ಎಂದು ತಿಳಿಸಿದ್ದಾರೆ.

ಅಂದು ಸಚಿವರನ್ನು ಭೇಟಿ ಮಾಡಿದ ನಿಯೋಗದಲ್ಲಿ ಮೈಸೂರು-ಕೊಡಗು ಲೋಕಸಭೆ ಕ್ಷೇತ್ರದ ಸಂಸದ ಯದುವೀರ್, ಮಾಜಿ ಸಚಿವ ಸಾ.ರಾ.ಮಹೇಶ್, ಹುಣಸೂರು ಶಾಸಕ ಜಿ.ಟಿ.ಹರೀಶ್ ಗೌಡ ಹಾಗೂ ತಂಬಾಕು ಬೆಳೆಗಾರರು ಜೊತೆಯಲಿದ್ದರು ಎಂದು ತಿಳಿಸಿದ್ದಾರೆ.

ರಾಜ್ಯದ ತಂಬಾಕು ಬೆಳೆಗಾರ ರೈತರು ಕಳೆದ ವರ್ಷ ಮೇ, ಜುಲೈ ತಿಂಗಳಲ್ಲಿ ವಿಪರೀತ ಮಳೆಯಿಂದಾಗಿ ಸಂಕಷ್ಟಕ್ಕೆ ಸಿಲುಕಿದ್ದರು. ರಾಜ್ಯದಲ್ಲಿ ಬೆಳೆಯಲಾಗುವ ಎಫ್‌ಸಿವಿ ತಂಬಾಕು ಬೆಳೆಯ ಇಳುವರಿ ಗಣನೀಯವಾಗಿ ಕಡಿಮೆಯಾಗಿತ್ತು ಹಾಗೂ ತಂಬಾಕು ಎಲೆಗಳ ಗುಣಮಟ್ಟಕ್ಕೆ ದೊಡ್ಡ ಮಟ್ಟದಲ್ಲಿ ಹಾನಿಯಾಗಿತ್ತು. ಇದರಿಂದಾಗಿ ಬೆಳೆಗಾರರು ಭಾರೀ ನಷ್ಟಕ್ಕೆ ತುತ್ತಾಗಿದ್ದರು. ಕೇಂದ್ರ ಸರಕಾರ ಇದೀಗ ನೆರವಿಗೆ ಧಾವಿಸಿರುವ ಪರಿಣಾಮ ಸಾವಿರಾರು ಬೆಳೆಗಾರರಿಗೆ ಅನುಕೂಲವಾಗಲಿದೆ ಎಂದಿದ್ದಾರೆ.

# ಖರ್ಗೆ ಕುಟುಂಬಕ್ಕೆ ಕಂಟಕ!

## ವಿವಾದದ ಸುಳಿಯಲ್ಲಿ ಸಿದ್ಧಾರ್ಥ ಟ್ರಸ್ಟ್

**ಕಲಬುರಗಿ:** ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕುಟುಂಬಕ್ಕೆ ಕಂಟಕ ಎದುರಾಗಿದೆ. ಮಲ್ಲಿಕಾರ್ಜುನ್ ಖರ್ಗೆ ಮತ್ತೆ ಸಚಿವ ಪ್ರಿಯಾಂಕ್ ಖರ್ಗೆ ಟ್ರಸ್ಟಿಯಾಗಿರುವ ಸಿದ್ಧಾರ್ಥ ಟ್ರಸ್ಟ್ ಮತ್ತೆ ವಿವಾದಕ್ಕೆ ಸಿಲುಕಿದೆ. ಉದ್ಯಾನವನಕ್ಕೆಂದು ಮೀಸಲಿಟ್ಟ ಜಾಗವನ್ನು ಈ ಟ್ರಸ್ಟ್ ವಾಣಿಜ್ಯ ಉದ್ದೇಶಕ್ಕೆ ಬಳಸಿಕೊಳ್ಳಲು ಮುಂದಾಗಿದೆ ಎಂಬ ಆರೋಪ ಕೇಳಿಬಂದಿದೆ.



ಕಲಬುರಗಿ ತಾಲೂಕಿನ ಕುಸನೂರು ಗ್ರಾಮದ ಸರ್ವೆ ನಂಬರ್ 82/3 ರಲ್ಲಿ ಉದ್ಯಾನವನಕ್ಕೆಂದು ಮೀಸಲಿಟ್ಟ 2 ಎಕರೆ 07 ಗುಂಟೆ ಜಮೀನನ್ನು ಸಿದ್ಧಾರ್ಥ ಟ್ರಸ್ಟ್ ಖರೀದಿಸಿತ್ತು. ಈಗ ಈ ಜಾಗವನ್ನು ವಾಣಿಜ್ಯ ಉದ್ದೇಶಕ್ಕೆ ಬಳಸಿಕೊಳ್ಳಲು ಟ್ರಸ್ಟ್ ಕಾರ್ಯದರ್ಶಿ ಹಾಗೂ ಕಲಬುರಗಿ ಸಂಸದ ರಾಧಾಕೃಷ್ಣ ದೊಡ್ಡಮನಿ ಅವರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಮನವಿ ಸಲ್ಲಿಸಿದ್ದಾರೆ.

ಈ ಮನವಿಯನ್ನು ಆಧರಿಸಿ ನಗರಾಭಿವೃದ್ಧಿ ಪ್ರಾಧಿಕಾರವು ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಿ ಸಾರ್ವಜನಿಕ ಪ್ರಕಟಣೆ ಹೊರಡಿಸಿದೆ. ಆದರೆ, ಉದ್ಯಾನವನದ ಜಾಗವನ್ನು ವಾಣಿಜ್ಯ ಉದ್ದೇಶಕ್ಕೆ ಬಳಸಲು ಅವಕಾಶ ನೀಡಬಾರದು ಎಂದು ಆಂದೋಲಾ ಸಿದ್ದಲಿಂಗ ಸ್ವಾಮೀಜಿ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಟ್ರಸ್ಟ್‌ನ ಈ ನಡೆ ದುರುದ್ದೇಶಪೂರಿತ ಎಂದು ಆರೋಪಿಸಿರುವ ಅವರು, ಉದ್ಯಾನವನದ ಜಾಗವನ್ನು ವಾಣಿಜ್ಯ ಉದ್ದೇಶಕ್ಕೆ ಬಳಸಿಕೊಳ್ಳುವಲ್ಲಿ ಯಾವುದೇ ಸಾರ್ವಜನಿಕ ಹಿತಾಸಕ್ತಿ ಇಲ್ಲ, ಬದಲಾಗಿ ಟ್ರಸ್ಟ್‌ನ ಸ್ವಹಿತಾಸಕ್ತಿ ಮಾತ್ರ ಅಡಗಿದೆ ಎಂದು ಆರೋಪಿಸಿದ್ದಾರೆ. ಸಚಿವ ಪ್ರಿಯಾಂಕ್ ಖರ್ಗೆ ಅಥವಾ ಸಂಸದ ರಾಧಾಕೃಷ್ಣ ದೊಡ್ಡಮನಿ ಅವರ ಒತ್ತಡಕ್ಕೆ ಮಣಿದು ಈ ಜಾಗವನ್ನು ವಾಣಿಜ್ಯ ಉದ್ದೇಶಕ್ಕೆ ಪರಿವರ್ತಿಸಬಾರದು ಎಂದು ಅವರು ನಗರಾಭಿವೃದ್ಧಿ ಪ್ರಾಧಿಕಾರವನ್ನು ಒತ್ತಾಯಿಸಿದ್ದಾರೆ.

ಈ ಹಿಂದೆಯೂ 'ಸಿದ್ಧಾರ್ಥ ವಿಹಾರ ಟ್ರಸ್ಟ್' ವಿವಾದಕ್ಕೀಡಾಗಿತ್ತು. ಬೆಂಗಳೂರಿನ ಏರೋಸ್ಪೇಸ್ ಪಾರ್ಕ್‌ನಲ್ಲಿ ಐದು ಎಕರೆ ನಾಗರಿಕ ಬಳಕೆ (ಸಿ.ಎ) ನಿವೇಶನ ಹಂಚಿಕೆ ವಿಚಾರಕ್ಕೆ ವಿವಾದ ಸೃಷ್ಟಿಯಾಗಿತ್ತು.

ಬೆಂಗಳೂರಿನ ಏರೋಸ್ಪೇಸ್ ಪಾರ್ಕ್‌ನಲ್ಲಿ ಸಿ.ಎ ನಿವೇಶನ ಹಂಚಿಕೆ ಪ್ರಕ್ರಿಯೆ ಈ ಹಿಂದೆ ನಡೆದಿತ್ತು. ಸಿ.ಎ ನಿವೇಶನಕ್ಕಾಗಿ ಕೆಐಎಡಿಬಿಗೆ ಒಟ್ಟು 193 ಸಂಸ್ಥೆಗಳು ಅರ್ಜಿ ಸಲ್ಲಿಸಿದ್ದವು. ಅದರಲ್ಲಿ 43 ಸಂಸ್ಥೆಗಳು ಆಯ್ಕೆಯಾಗಿದ್ದವು. ಆ ಪೈಕಿ ಅಂತಿಮವಾಗಿ ಸಿದ್ಧಾರ್ಥ ವಿಹಾರ ಟ್ರಸ್ಟ್‌ಗೆ ಸಿ.ಎ ನಿವೇಶನ ಹಂಚಿಕೆಯಾಗಿತ್ತು. ಆದರೆ ಹಂಚಿಕೆ ಪ್ರಕ್ರಿಯೆ ಬಗ್ಗೆ ಅಪಸ್ವರಗಳು ಕೇಳಿಬಂದ ಹಿನ್ನೆಲೆಯಲ್ಲಿ ವಿವಾದ ಸೃಷ್ಟಿಯಾಗಿತ್ತು.

ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು, ಈ ಟ್ರಸ್ಟ್‌ಗೆ ರಾಜ್ಯ ಸರಕಾರ ನಿಯಮಗಳನ್ನು ಉಲ್ಲಂಘಿಸಿ ತರಾತುರಿಯಲ್ಲಿ ಸಿ.ಎ ನಿವೇಶನ ಮಂಜೂರು ಮಾಡಿದೆ ಎಂದು ಆರೋಪಿಸಿದ್ದರು. ಈ ಬಗ್ಗೆ ತನಿಖೆಯಾಗಬೇಕು ಎಂದು ಕೋರಿ ರಾಜ್ಯಪಾಲರಿಗೆ ದೂರು ಸಹ ನೀಡಿದ್ದರು.

ಆ ಹಿನ್ನೆಲೆಯಲ್ಲಿ ಸಿದ್ಧಾರ್ಥ ವಿಹಾರ ಟ್ರಸ್ಟ್‌ಗೆ ಕೆಐಎಡಿಬಿ ನಿಯಮ ಉಲ್ಲಂಘಿಸಿ ಸಿ.ಎ ನಿವೇಶನ ಹಂಚಿಕೆ ಮಾಡಿರುವ ಆರೋಪ ಸಂಬಂಧ ಸ್ಪಷ್ಟನೆ ನೀಡುವಂತೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಪತ್ರ ಬರೆದಿದ್ದು ಚರ್ಚೆಗೆ ಗ್ರಾಸವಾಗಿತ್ತು.

ವಿವಾದ ಬುಗಿಲೇಳುತ್ತಿದ್ದಂತೆ ಸಿ.ಎ. ನಿವೇಶನವನ್ನು ಹಿಂದಿರುಗಿಸುವ ನಿರ್ಧಾರವನ್ನು ಟ್ರಸ್ಟ್ ತೆಗೆದುಕೊಂಡಿತು. ಅದರಿಂದ ಆ ವಿವಾದ ಅಲ್ಲಿಗೆ ತಣ್ಣಗಾಗಿತ್ತು. ಇದೀಗ ಮತ್ತೊಮ್ಮ ಖರ್ಗೆ ಕುಟುಂಬದ ಟ್ರಸ್ಟ್ ವಿವಾದದ ಸುಳಿಯಲ್ಲಿ ಸಿಲುಕಿದೆ.

## ಕನ್ನಡ ಪದಗಳು ಅಳಿಸಿ ಹೋಗುವ ಕಾಲದಲ್ಲಿ ಭಾಷೆ ಉಳಿಸುವ ಕೆಲಸ ಅಸಾಧಾರಣ



**ಬೆಂಗಳೂರು:** ಪ್ರತಿಭೆಗಳಿಂದ ಯಾರು ವಂಚಿತರಾಗುತ್ತಿದ್ದಾರೊ ಅಂತಹವರಿಗೆ ವೇದಿಕೆ ಕಲ್ಪಿಸುವ ಕೆಲಸವನ್ನು ಅಕ್ಷರ ಸಂಗೀತ ಸಂಸ್ಥೆ ಮಾಡುತ್ತಿದ್ದು, ನೀವು ಮಕ್ಕಳಿಗೆ ಒಂದು ರೀತಿಯಲ್ಲಿ ಆಸರೆಯಾಗಿದ್ದೀರಿ ಎಂದು ನಿರ್ಮಾಪಕ ಹಾಗು ಡಾ.ರಾಜ್ ಅಭಿಮಾನಿ ಸಂಘದ ಅಧ್ಯಕ್ಷರಾದ ಸಾರಾ ಗೋವಿಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಸಂಗೀತ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಸಾರಾ ಗೋವಿಂದ್ ಮಾತನಾಡಿ, ತಂದೆಯವರ ಹಸಿರಾಗಿಸುವ, ಉಳಿಸುವ ಕೆಲಸವನ್ನು ಅವರು ಮಾಡುತ್ತಾರೆ, ಪ್ರತಿಭೆಗಳಲ್ಲಿ ಯಾರು ವಂಚಿತರಾಗುತ್ತಿದ್ದಾರೋ ಅವರಿಗೆ ವೇದಿಕೆ ಕಲ್ಪಿಸುವ ಕೆಲಸವನ್ನು ಮಾಡುತ್ತಿದ್ದಾರೆ. ಸಂಗೀತದಲ್ಲಿ ಪುಟ್ಟ ಪುಟ್ಟ ಮಕ್ಕಳು ಮನೋರಂಜನೆ ನೀಡುತ್ತಿರುವುದು ಹೆಮ್ಮೆಯ ಸಂಗತಿ, ನೀವು ಮಕ್ಕಳಿಗೆ ಒಂದು ಆಸರೆ ಆಗಿದ್ದಾರೆ. ನಾವೆಲ್ಲರೂ ಅವರ ಜೊತೆಗೆ ಕೈಜೋಡಿಸಬೇಕು ಆಗಿದ್ದಾಗ ಮಾತ್ರ ಒಳ್ಳೆಯ ಪ್ರತಿಭೆಗಳನ್ನು ಗುರುತಿಸಲು ಸಾಧ್ಯ. ಜಿಲ್ಲೆ. ತಾಲುಕು ಮಟ್ಟದಿನ ಎಲ್ಲರನ್ನು ಕರೆಸಿ, 8ನೇ ವರ್ಷದ ಸಂಭ್ರಮ ಮಾಡುತ್ತಿರುವುದು ಕಷ್ಟದ ಕೆಲಸ ಎಂದರು.

ಇದೊಂದು ಅಚ್ಚ ಕನ್ನಡದ ಕಾರ್ಯಕ್ರಮ, ಕನ್ನಡ ಪದಗಳು ಅಳಿಸಿಹೋಗುವ ಕಾಲದಲ್ಲಿ ನಿಮ್ಮಂತವರು ಕನ್ನಡ ಉಳಿಸುವ ಕೆಲಸ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಕನ್ನಡಿಗರಿಗೆ ಉದ್ಯೋಗ ಕೊಡುವ ಕೆಲಸ ಮಾಡಬೇಕು, ಕನ್ನಡದ ಕಾರ್ಯಕ್ರಮಗಳನ್ನು ಹಲವು ಸಂಘಟನೆಗಳು ಮಾಡುತ್ತಾ ಬಂದಿವೆ.

ಕನ್ನಡ ಉಳಿಸುವತ್ತಿರುವುದು ಹೋರಾಟಗಾರರಿಂದ ವರತು ರಾಜಕೀಯ ನಾಯಕರು, ಅಧಿಕಾರಿಗಳಿಂದ ಎಂದು ಅಂದಿನ ದಿನಗಳನ್ನು ನೆನಪಿಸಿಕೊಂಡರು. ಕನ್ನಡ ಉಳಿವಿಗೆ ಅನೇಕ ಕನ್ನಡಪರ ಸಂಘಟನೆಗಳು ಉಳಿಸಲು ಹಗಲಿರುಳು ಶ್ರಮಿಸುತ್ತಿದ್ದಾರೆ. ಕನ್ನಡ ಭಾಷೆ ಕೇವಲ ಕೆಲ ದಿನಗಳಿಗೆ ಸೀಮಿತವಾಗಬಾರದು ಇಡೀ ವರ್ಷ ಬೇರೂರ ಬೇಕು ಎಂದರು.

ರಾಜ್ ಕುಮಾರ್ ಅಪಹರಣ ಮಾಡಿದ ಅಂದು ಪಾರ್ವತಮ್ಮ ರಾಜ್ ಕುಮಾರ್ ಅವರು ಮಧ್ಯರಾತ್ರಿ ನನ್ನನ್ನು ಕರೆಸಿಕೊಂಡು ಅಪಹರಣದ ಬಗ್ಗೆ ತಿಳಿಸಿ, ಏನಾದರೂ ಮಾಡಿ ರಾಜ್ ಕುಮಾರ್ ಬಿಡಿಸಿಕೊಂಡು ಬರುವಂತೆ ಹೇಳಿದ್ರು. ಅದು ಒಂದು ಕಹಿಯಾದ ಘಟನೆ ಬಗ್ಗೆ ಮೆಲಕು ಹಾಕಿದರು. ನಾಡು ನುಡಿಗಾಗಿ ಹೋರಾಡಿದಾಗ ಸಾಕಷ್ಟು ಕಹಿ ಸಿಹಿ ಘಟನೆಗಳು ಇದ್ದಾವೆ, ಅದನ್ನು ಹೇಳಲು ಹೊರಟರೆ ದಿನಗಳು ಸಾಲದು, ಕನ್ನಡದ ಬಗ್ಗೆ ಎಲ್ಲರಿಗೂ ಹೋರಾಟ ಮಾಡಬೇಕು, ಹಿಂದಿ ಹೇರಿಕೆ, ಪಕ್ಕದ ರಾಜ್ಯ ತಮಿಳರ ಹಾವಳಿ ಹೆಚ್ಚಾಗಿರುವ ಕಾಲದಲ್ಲಿ ಅಲ್ಲಿನವರಿಗೆ ಖಡಕ್ ಸೂಚನೆಕೊಟ್ಟು ಇದೀಗ ಶಾಂತಿಯಿಂದ ವರ್ತನೆ ಮಾಡುತ್ತಿರುವುದನ್ನು ಮಾಡಿರುವುದು ಕನ್ನಡಪರ ಹೋರಾಟಗಾರರಿಂದ ಮಾತ್ರ ಯಾವುದೇ ರಾಜಕೀಯ ಪಕ್ಷಗಳಿಂದ ಆಗಿಲ್ಲ ಎಂಬುದು ಎಂದರು.

## ಮೊದಲನೇ ಪುಟದಿಂದ...

### ಯುವಜನತೆ!

ಈ ಪರಿಷ್ಕರಣೆಯು ವಿಚ್ಛೇದನಕ್ಕೆ 30 ದಿನಗಳ ಕೂಲಿಂಗ್ -ಆಫ್ ಅವಧಿಯನ್ನು ಸಹ ಒಳಗೊಂಡಿದೆ. ಆ ಸಮಯದಲ್ಲಿ ತಮ್ಮ ಅರ್ಜಿಯನ್ನು ದಂಪತಿ ಹಿಂಪಡೆಯಬಹುದು. ಇದು ನೋಂದಾವಣೆ ಕಚೇರಿಗಳಲ್ಲಿ ಮಾಡಿದ ವಿಚ್ಛೇದನ ಅರ್ಜಿಗಳಿಗೆ ಮಾತ್ರ ಅನ್ವಯಿಸುತ್ತದೆ. ಹಠಾತ್ ವಿಚ್ಛೇದನಗಳನ್ನು ಕಡಿಮೆ ಮಾಡುವ ಗುರಿಯನ್ನು ಈ ಪರಿಷ್ಕರಣೆ ಹೊಂದಿತ್ತು.

2016 ರಲ್ಲಿ ಚೀನಾ ಒಂದು ಮಗು ನೀತಿಯನ್ನು ರದ್ದುಗೊಳಿಸಿತ್ತು. ಈಗ, ಸರ್ಕಾರವು ಮಹಿಳೆಯರು ಮೂರು ಮಕ್ಕಳನ್ನು ಬೆಳೆಸಲು ಪ್ರೋತ್ಸಾಹಿಸುತ್ತಿದೆ. ಸ್ಥಳೀಯ ಸರ್ಕಾರಗಳು ಸಹ ಜನಸಂಖ್ಯೆಯ ವಿಸ್ತರಣೆಯನ್ನು ಸುಗಮಗೊಳಿಸಲು ಕ್ರಮಗಳನ್ನು ತೆಗೆದುಕೊಳ್ಳುತ್ತಿವೆ ಮತ್ತು ನೀತಿಗಳನ್ನು ರೂಪಿಸುತ್ತಿವೆ. ಎರಡನೇ ಮತ್ತು ಮೂರನೇ ಮಕ್ಕಳಿಗೆ ಉಚಿತ ಐವಿಎಫ್ ಸೌಲಭ್ಯಗಳು ಮತ್ತು ಸಬ್ಸಿಡಿಗಳನ್ನು ಒದಗಿಸಲಾಗುತ್ತಿದೆ.

ಇತ್ತೀಚಿಗೆ ಮದುವೆಯನ್ನು ಪ್ರೋತ್ಸಾಹಿಸಲು ದಂಪತಿಗೆ ಪ್ರೋತ್ಸಾಹಧನವನ್ನು ಸಹ ಚೀನಾ ಸರ್ಕಾರ ನೀಡುತ್ತಿದೆ ಎಂದು ವರದಿಯಾಗಿದೆ.

**ಮುದುಕಾಗುತ್ತಿರುವ ಚೀನಾ!:** ಚೀನಾವು 1.4 ಶತಕೋಟಿ ಜನಸಂಖ್ಯೆಯೊಂದಿಗೆ ವಿಶ್ವದ ಎರಡನೇ ಅತಿದೊಡ್ಡ ಜನಸಂಖ್ಯೆಯನ್ನು ಹೊಂದಿದೆ. ಈ ಜನಸಂಖ್ಯೆಗೆ ವೇಗವಾಗಿ ವಯಸ್ಸಾಗುತ್ತಿದೆ. ಚೀನಾದ 1980-2015ರ ಒಂದು ಮಗು ನೀತಿ ಮತ್ತು ತ್ವರಿತ ನಗರೀಕರಣದಿಂದಾಗಿ ಜನನ ಪ್ರಮಾಣ ದಶಕಗಳಿಂದ ಕುಸಿತ ಕಂಡಿತ್ತು. ಮುಂಬರುವ ದಶಕದಲ್ಲಿ ಸುಮಾರು 300 ಮಿಲಿಯನ್ ಚೀನಿಯರು ಅಂದರೆ ಬಹುತೇಕ ಇಡೀ ಯುಎಸ್ ಜನಸಂಖ್ಯೆಗೆ ಸಮಾನಾದ ಜನಸಂಖ್ಯೆಯ ಜನರು ನಿವೃತ್ತಿ ಹೊಂದುವ ನಿರೀಕ್ಷೆಯಿದೆ!

ದೀರ್ಘಾವಧಿಯ ಜೀವಿತಾವಧಿ ಮತ್ತು ಕ್ಷೀಣಿಸುತ್ತಿರುವ ಫಲವತ್ತತೆ ದರಗಳಿಂದಾಗಿ ಚೀನಾದಲ್ಲಿ 60 ವರ್ಷಕ್ಕಿಂತ ಮೇಲ್ಪಟ್ಟ ಜನರ ಜನಸಂಖ್ಯೆಯು 2040 ರ ವೇಳೆಗೆ 28% ತಲುಪುವ ನಿರೀಕ್ಷೆಯಿದೆ ಎಂದು ವಿಶ್ವ ಆರೋಗ್ಯ ಸಂಸ್ಥೆ ತಿಳಿಸಿದೆ.

### 7 ಸಾವಿರ ಇ ಬಸ್

ಬೆಂಗಳೂರಿನ ಸಾರ್ವಜನಿಕ ಸಾರಿಗೆ ಅವಶ್ಯಕತೆಗಳನ್ನು ಗಮನಿಸಿದರೆ, ಬಿಎಂಟಿಸಿಗೆ 10,000 ರಿಂದ 12,000 ಬಸ್‌ಗಳು ಬೇಕಾಗುತ್ತವೆ ಎಂದು ನೀತಿ ನಿರೂಪಕರು ಮತ್ತು ಸಾರಿಗೆ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಪ್ರಧಾನ ಮಂತ್ರಿ ಇ-ಡ್ರೈವ್ ಯೋಜನೆಯಡಿ ಮೂರು ವರ್ಷಗಳ ಅವಧಿಯಲ್ಲಿ ಬಸ್‌ಗಳನ್ನು ಖರೀದಿಸಲಾಗುವುದು ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ತಿಳಿಸಿರುವುದಾಗಿ ಮಾಧ್ಯಮವೊಂದು ವರದಿ ಮಾಡಿದೆ. ಆದಾಗ್ಯೂ, ಈ ಅವಧಿಯಲ್ಲಿ, ಹಲವು ಹಳೆಯ ಬಸ್‌ಗಳನ್ನು ಗುಜರಿಗೆ ಹಾಕಬೇಕಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಬಿಎಂಟಿಸಿ ನಿಯಮಗಳ ಪ್ರಕಾರ, 11 ಲಕ್ಷ ಕಿಲೋಮೀಟರ್ ಸಂಚರಿಸಿದ ಅಥವಾ 15 ವರ್ಷ ಪೂರೈಸಿದ ಬಸ್ ಅನ್ನು ಸ್ಕ್ರಾಪ್ ಮಾಡಬೇಕು. ಬಿಎಂಟಿಸಿಯ ಸರಿಸುಮಾರು ಶೇ 10 ರಷ್ಟು ಬಸ್ಸುಗಳು ವಾರ್ಷಿಕವಾಗಿ ಸೇವೆಯಿಂದ ಬಿಡುಗಡೆ ಹೊಂದುತ್ತವೆ ಎಂದು ವರದಿ ಉಲ್ಲೇಖಿಸಿದೆ.

ಮುಂದಿನ ಮೂರು ವರ್ಷಗಳಲ್ಲಿ, ಬಿಎಂಟಿಸಿಯ 2,000 ಬಸ್‌ಗಳು ಗುಜರಿಗೆ ಹೋದರೂ ಸಹ ಕೇಂದ್ರದಿಂದ ದೊರೆಯುವ 7000 ಬಸ್‌ಗಳು ಸೇರಿದರೆ ಒಟ್ಟು ಬಸ್‌ಗಳ ಸಂಖ್ಯೆ 10,000 ದಾಟುತ್ತದೆ.

ಬೃಹತ್ ಕೈಗಾರಿಕಾ ಸಚಿವಾಲಯವು 2024 ರ ಸೆಪ್ಟೆಂಬರ್ 29 ರಂದು ಹೊರಡಿಸಿದ ಅಧಿಸೂಚನೆ ಪ್ರಕಾರ, ಪಿಎಂ ಇ-ಡ್ರೈವ್ ಯೋಜನೆಯಡಿ 40 ಲಕ್ಷ ಅಥವಾ ಅದಕ್ಕಿಂತ ಹೆಚ್ಚಿನ ಜನಸಂಖ್ಯೆಯನ್ನು ಹೊಂದಿರುವ ಒಂಬತ್ತು ದೊಡ್ಡ ನಗರಗಳಲ್ಲಿ 14,028 ಇ-ಬಸ್‌ಗಳ ಖರೀದಿಗೆ 4,391 ಕೋಟಿ ರೂ. ಸಬ್ಸಿಡಿಗಳನ್ನು ಒದಗಿಸಬೇಕಿದೆ. 2025-26ರ ಕೇಂದ್ರ ಬಜೆಟ್ ನಲ್ಲಿ ಈ ಯೋಜನೆಗೆ 4,000 ಕೋಟಿ ರೂ.ಗಳನ್ನು ಹಂಚಿಕೆ ಮಾಡಲಾಗಿತ್ತು.

### ಮುಂದಿನ ಸಿಎಂ?

ಅವರು ಒಂದು ರಾಷ್ಟ್ರೀಯ ಪಕ್ಷದ ನಾಯಕ. ದೇಶಾದ್ಯಂತ ಪಕ್ಷವನ್ನು ಒಟ್ಟಾಗಿ ನಡೆಸಬೇಕು. ಕೆಲವೊಮ್ಮೆ ಅವರು ಗುಜರಾತ್, ಕೆಲವೊಮ್ಮೆ ಛತ್ತೀಸ್‌ಗಢ ಮತ್ತು ಕೆಲವೊಮ್ಮೆ ಮಧ್ಯಪ್ರದೇಶವನ್ನು ನೋಡುತ್ತಿದ್ದಾರೆ. ಅಂತಹದ್ದೇನೂ ಇಲ್ಲ. ಸುಳ್ಳು ಹೇಳಲಾಗುತ್ತಿದೆ.

ಕೇಜ್ರಿವಾಲ್ ಅವರ ಕಣ್ಣುಗಳು ಈಗ ಪಂಜಾಬ್ ಮೇಲೆ ಬಿದ್ದಿವೆ ಎಂದು ಬಿಜೆಪಿ ಹೇಳಿಕೊಂಡಿತ್ತು. ಶಾಸಕರ ಮೂಲಕ ಒತ್ತಡ ಹೇರುವ ಮೂಲಕ ಕೇಜ್ರಿವಾಲ್ ಪಂಜಾಬ್ ಮುಖ್ಯಮಂತ್ರಿಯಾಗಲು ಬಯಸುತ್ತಾರೆ ಎಂದು ಪಕ್ಷ ಹೇಳಿಕೊಂಡಿತ್ತು.

ದೆಹಲಿ ಚುನಾವಣೆಯಲ್ಲಿ ಸೋತ ನಂತರ ಅರವಿಂದ್ ಕೇಜ್ರಿವಾಲ್ ದೆಹಲಿಯಲ್ಲಿ ಪಂಜಾಬ್ ಶಾಸಕರ ಸಭೆ ಕರೆದಿದ್ದರು ಎಂದು ಬಿಜೆಪಿ ನಾಯಕ ಮಂಜಿಂದರ್ ಸಿಂಗ್ ಸಿರ್ಸಾ ಹೇಳಿದ್ದರು. ಕೇಜ್ರಿವಾಲ್ ಈಗ ಭಗವಂತ್ ಮಾನ್ ಅವರನ್ನು ಅಸಮರ್ಥ ಎಂದು ಕರೆದು ಅವರನ್ನು ತೆಗೆದುಹಾಕಲು ಬಯಸುತ್ತಿದ್ದಾರೆ.

ಆಮ್ ಆದ್ಮಿ ಪಕ್ಷವು ಭಗವಂತ್ ಮಾನ್ ಅವರನ್ನು ಪಂಜಾಬ್ ಮುಖ್ಯಮಂತ್ರಿ ಸ್ಥಾನದಿಂದ ತೆಗೆದುಹಾಕಲು ಬಯಸುತ್ತಿದೆ ಎಂದು ಬಿಜೆಪಿ ಮತ್ತು ಕಾಂಗ್ರೆಸ್‌ನ ಅನೇಕ ನಾಯಕರು ಹೇಳಿಕೊಳ್ಳುತ್ತಾರೆ. ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ಅವರನ್ನು ಪದಚ್ಯುತಗೊಳಿಸಲು ಆಮ್ ಆದ್ಮಿ ಪಕ್ಷವು ವೇದಿಕೆ ಸಿದ್ಧಪಡಿಸುತ್ತಿದೆ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ, ಕಾಂಗ್ರೆಸ್ ನಾಯಕ ಪ್ರತಾಪ್ ಸಿಂಗ್ ಬಜ್ವಾ ಹೇಳಿದ್ದಾರೆ.

ದೆಹಲಿಯಲ್ಲಿ ಇತ್ತೀಚೆಗೆ ಹೀನಾಯ ಸೋಲಿನ ನಂತರ, ಪಂಜಾಬ್‌ನಲ್ಲಿ ಆಮ್ ಆದ್ಮಿ ಪಕ್ಷವು ರಕ್ಷಣಾತ್ಮಕ ಸ್ಥಿತಿಯಲ್ಲಿದೆ ಎಂದು ತೋರುತ್ತದೆ ಎಂದು ಅವರು ಹೇಳಿದ್ದರು.

### ಮಾತ್ರೆ ಕೇಳಿದ ಸೊಸೆ

ಇದನ್ನು ಕೇಳಿ ಶಾಕ್ ಆದ ಡಾಕ್ಟರ್ ಸಂಜಯ ನಗರ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಮಹಿಳೆ ಮಾತ್ರೆ ಕೇಳುವಾಗ ಈ ತರ ಮಾತ್ರೆ ಕೇಳುವುದು ತಪ್ಪು ಎಂದು ವೈದ್ಯರು ಬುದ್ಧಿಮಾತು ಹೇಳಿದ್ದಾರೆ. ವೈದ್ಯರು ಬುದ್ಧಿ ಹೇಳುತ್ತಿದ್ದಂತೆ, ವಾಟ್ಸಾಪ್ ಚಾಟ್ ಡಿಲೀಟ್ ಮಾಡಿದ ಮಹಿಳೆ ಡಾಕ್ಟರ್ ನಂಬರ್‌ನ ಬ್ಲಾಕ್ ಮಾಡಿದ್ದಾರೆ. ಇದಕ್ಕಿಂತ ಮುಂಚೆಯೇ ಸ್ಕ್ರೀನ್‌ಶಾಟ್ ಪಡೆದಿದ್ದ ವೈದ್ಯ ಸುನೀಲ್ ಕುಮಾರ್ ಸಂಜಯ್ ನಗರ ಪೊಲೀಸರಿಗೆ ಮಾಹಿತಿ ನೀಡಿ, ತನಿಖೆ ಮಾಡಿ ಎಂದು ಮನವಿ ಮಾಡಿದ್ದಾರೆ.

ಸದ್ಯ ಅತ್ತೆಯನ್ನು ಸಾಯಿಸಲು ಮಾತ್ರೆ ಕೇಳಿದ ಮಹಿಳೆಯ ಫೋನ್ ಸ್ವಿಚ್‌ಆಫ್ ಆಗಿದ್ದು, ಪೊಲೀಸರು ಮಹಿಳೆಯನ್ನು ಪತ್ತೆ ಹಚ್ಚಿದ ಬಳಿಕ ಅಸಲಿ ಸತ್ಯ ಬಯಲಾಗಲಿದೆ.

### ಕುತೂಹಲಕ್ಕೆ ಬೀಳಲಿದೆ ತೆರೆ

ಪಕ್ಷ ಏಕೆ ಇಷ್ಟೊಂದು ಸಮಯ ತೆಗೆದುಕೊಳ್ಳುತ್ತಿದೆ ಎಂದು ಎಎಪಿ ನಿರಂತರವಾಗಿ ಬಿಜೆಪಿಯನ್ನು ಗುರಿಯಾಗಿಸಿಕೊಂಡಿದೆ.

ಬಿಜೆಪಿ ಸಿಎಂ ಹೆಸರನ್ನು ಬಹಿರಂಗಪಡಿಸುತ್ತಿಲ್ಲವಾದರೂ, ಅವರ ಪ್ರಮಾಣವಚನ ಸಮಾರಂಭಕ್ಕೆ ಸಿದ್ಧತೆಗಳು ಭರದಿಂದ ನಡೆಯುತ್ತಿವೆ. ಫೆಬ್ರವರಿ 20 ರಂದು ಬೆಳಗ್ಗೆ 11.30 ಕ್ಕೆ ರಾಮಲೀಲಾ ಮೈದಾನದಲ್ಲಿ ಪ್ರಮಾಣ ವಚನ ಸ್ವೀಕರಿಸಲಿರುವ ಬುಧವಾರ ನಡೆಯಲಿರುವ ಶಾಸಕಾಂಗ ಪಕ್ಷದ ಸಭೆಯಲ್ಲಿ ಸಿಎಂ ಹೆಸರನ್ನು ಘೋಷಿಸುವ ನಿರೀಕ್ಷೆಯಿದೆ.

ಒಡಿಶಾದಲ್ಲಿ, ಮುಖ್ಯಮಂತ್ರಿಯನ್ನು ಹೆಸರಿಸಲು ಬಿಜೆಪಿ 7 ದಿನಗಳನ್ನು ತೆಗೆದುಕೊಂಡಿತು. ಒಂಬತ್ತನೇ ದಿನದಂದು ಭಜನ್ ಲಾಲ್ ಶರ್ಮಾ ಅವರಿಗೆ ರಾಜಸ್ಥಾನದಲ್ಲಿ ಮುಖ್ಯಮಂತ್ರಿ ಹುದ್ದೆ ನೀಡಲು ಅನುಮೋದನೆ ನೀಡಲಾಯಿತು. ಅದೇ ರೀತಿ, ಮಧ್ಯಪ್ರದೇಶದಲ್ಲಿ ಮೋಹನ್ ಯಾದವ್ ಅವರ ಹೆಸರನ್ನು ಅಂತಿಮಗೊಳಿಸಲು 8 ದಿನಗಳು ಬೇಕಾಯಿತು.

ಛತ್ತೀಸ್‌ಗಢದ ಮುಖ್ಯಮಂತ್ರಿಯನ್ನು ಆಯ್ಕೆ ಮಾಡಲು ಬಿಜೆಪಿಗೆ 7 ದಿನಗಳು ಬೇಕಾಯಿತು ಆದರೆ ದೆಹಲಿಯಲ್ಲಿ ಈ ಎಲ್ಲಾ ದಾಖಲೆಗಳು ಮುರಿದುಹೋಗಿವೆ ಮತ್ತು 11 ನೇ ದಿನದಂದು ಮುಖ್ಯಮಂತ್ರಿಯ ಹೆಸರು ತಿಳಿಯಲಿದೆ. ಬಿಜೆಪಿ ಪಾಳಯದಿಂದ 5 ಹೆಸರುಗಳು ಹೊರಬರುತ್ತಿವೆ, ಅದರಲ್ಲಿ ಪ್ರವೇಶ್ ವರ್ಮಾ, ರೇಖಾ ಗುಪ್ತಾ-ವಿಜೇಂದ್ರ ಗುಪ್ತಾ, ಸತೀಶ್ ಉಪಾಧ್ಯಾಯ ಮತ್ತು ಆಶಿಶ್ ಸೂದ್ ಸೇರಿದ್ದಾರೆ.

### ಕ್ಲೈಮ್ ಪಾಲಿಟಿಕ್ಸ್!

ಮುಗಿಯುವ ತನಕ ಬಣ ಬಡಿದಾಡ ಸೈಲೆಂಟ್ ಆಗುವ ಸಾಧ್ಯತೆಯೂ ಇದೆ. ಈ ನಡುವೆ ಸ್ಥಳೀಯ ಸಂಸ್ಥೆಗಳ ಚುನಾವಣೆ ಮುಗಿಯುವ ತನಕ ಯಾವ ಬದಲಾವಣೆಗಳು ಇಲ್ಲ ಎಂದು ಹೈಕಮಾಂಡ್ ಸಂದೇಶ ಕಳುಹಿಸುವ ಸಾಧ್ಯತೆ. ಸಿಎಂ, ಡಿಸಿಎಂ ನೇತೃತ್ವದಲ್ಲಿ ಚುನಾವಣೆ ನಡೆಯಲಿ, ಆ ಬಳಿಕ ಬದಲಾವಣೆಗಳ ಬಗ್ಗೆ ಮಾತಾಡೋಣ ಎನ್ನಬಹುದು.

ಆದರೆ ಲೋಕಲ್ ಬಾಡಿ ಚುನಾವಣೆಯಲ್ಲಿ ಸಿದ್ದರಾಮಯ್ಯ ಮಾಸ್ ಲೀಡರ್, ಅವರದ್ದೇ ನಾಯಕತ್ವ ಎಂಬುದನ್ನು ಬಿಂಬಿಸಲು ಪ್ಲ್ಯಾನ್ ಸಿದ್ಧವಾಗಿದೆ ಅಂತೆ. ಈ ಸಲ ಸಿದ್ದರಾಮಯ್ಯ ಅವರ ಕಾರಣದಿಂದಲೇ ಲೋಕಲ್ ಎಲೆಕ್ಷನ್ ಗೆಲುವು ಎಂಬುದೇ ಸಿದ್ದು ಟೀಂ ತಂತ್ರ ಇದೆ ಎಂಬ ಚರ್ಚೆ ಜೋರಾಗಿದೆ. ಮುಂದೆ ಪವರ್ ಶೇರ್ ಪ್ರಸ್ತಾಪ ಬಂದರೆ ಲೋಕಲ್ ಎಲೆಕ್ಷನ್ ಅಸ್ತ್ರ ಪ್ರಯೋಗಿಸಿ ಸೇಫ್ ಗೇಮ್‌ಗೆ ಪ್ಲ್ಯಾನ್ ಅಂತೆ. ಇದಕ್ಕೆ ಹೈಕಮಾಂಡ್ ಹೇಗೆ ರಿಯಾಕ್ಟ್ ಮಾಡುತ್ತದೆ ಕಾದುನೋಡಬೇಕಿದೆ.

### ತಾಯಿ

ಇದೇ ವೇಳೆ, ಅದನ್ನು ಚಲಾಯಿಸುತ್ತಿರುವುದು ಅಪ್ರಾಪ್ತ ಬಾಲಕಿ ಎಂಬುದು ದೃಢವಾಗೊದೆ. ನಂತರ ಪೊಲೀಸರು ಆಕೆಯ ತಾಯಿಗೆ 25 ಸಾವಿರ ರೂ. ದಂಡ ವಿಧಿಸಿದ್ದಾರೆ. ದಾವಣಗೆರೆ ದಕ್ಷಿಣ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

**ಸಂಚಾರ ನಿಯಮಗಳಲ್ಲಿ ಏನಿದೆ?:** ಕರ್ನಾಟಕದಲ್ಲಿ, ಸಣ್ಣ ಮಕ್ಕಳಿಗೆ ವಾಹನ ಚಲಾಯಿಸಲು ಅವಕಾಶ ನೀಡುವುದು ಅಪರಾಧವಾಗಿದೆ. ಅಂಥ ಪೋಷಕರು ಅಥವಾ ಪಾಲಕರಿಗೆ ಕಠಿಣ ದಂಡವನ್ನು ವಿಧಿಸಲು ಅವಕಾಶವಿದೆ. 'ಮೋಟಾರು ವಾಹನಗಳ ಕಾಯ್ದೆ, 1988' ರ ಅಡಿಯಲ್ಲಿ, ಅಪ್ರಾಪ್ತ ವಯಸ್ಕರು ವಾಹನ ಚಲಾಯಿಸಿದರೆ, ವಾಹನದ ಮಾಲೀಕರಿಗೆ (ಸಾಮಾನ್ಯವಾಗಿ ಪೋಷಕರು) ಮೂರು ತಿಂಗಳವರೆಗೆ ಜೈಲು ಶಿಕ್ಷೆ ಅಥವಾ 25,000 ರೂ. ಮೇಲ್ಪಟ್ಟು ದಂಡ, ಅಥವಾ ಎರಡೂ ಶಿಕ್ಷೆಯನ್ನು ವಿಧಿಸಬಹುದಾಗಿದೆ. ವಾಹನದ ನೋಂದಣಿಯನ್ನು 12 ತಿಂಗಳ ಅವಧಿಗೆ ಅಮಾನತಿನಲ್ಲಿ ಇಡುವುದಕ್ಕೂ ಅವಕಾಶವಿದೆ.

### ಬೆಲೆ ಏರಿಕೆ ಶಾಕ್

ಸದ್ಯ ಸಿಎಂ ಅಂಗಳದಲ್ಲಿ ನಂದಿನಿ ಹಾಲಿನ ದರದ ಮನವಿ ತಲುಪಿದೆ. ಮುಖ್ಯಮಂತ್ರಿಗಳ ಅನುಮತಿಗಾಗಿ ಕೆಎಂಎಫ್ ಆಡಳಿತ ಮಂಡಳಿ ಕಾದು ಕುಳಿತಿದ್ದು, ಸಿಎಂ ಅನುಮತಿ ನೀಡಿದ ಬೆನ್ನಲ್ಲೇ ಕೆಎಂಎಫ್ ಹಾಲಿನ ದರ ಏರಿಕೆ ಮಾಡುತ್ತೆ ಎನ್ನಲಾಗಿದೆ. ಕಳೆದ ವರ್ಷ ಜೂನ್ ನಲ್ಲಿ ಹಾಲಿನ ದರ ಏರಿಕೆ ಮಾಡಿದ್ದ ಕೆಎಂಎಫ್, ಇದೀಗ ಮತ್ತೆ ದರ ಹೆಚ್ಚಳ ಮಾಡಲು ಮುಂದಾಗಿದ್ದು ಆರ್ಥಿಕ ಸಂಕಷ್ಟದಿಂದ ಈ ನಿರ್ಧಾರಕ್ಕೆ ಮುಂದಾಗಿದೆ ಎನ್ನಲಾಗುತ್ತಿದೆ.

### ಪಿವಿಆರ್

ಬೆಂಗಳೂರಿನ ಅಭಿಷೇಕ್ ಎಂಆರ್ ಎಂಬುವರು ಬುಕ್ ಮೈ ಶೋನಲ್ಲಿ ಟಿಕೆಟ್ ಬುಕ್ ಮಾಡಿಕೊಂಡು ಪಿವಿಆರ್-ಐನಾಕ್ಸ್ (ಈಗ ಎರಡು ಒಂದೇ) ಮಲ್ಟಿಪ್ಲೆಕ್ಸ್ ಗೆ ಹೋಗಿದ್ದರು. ಆದರೆ ಮಲ್ಟಿಪ್ಲೆಕ್ಸ್ ನವರು ಸತತವಾಗಿ ಜಾಹೀರಾತುಗಳನ್ನು ಹಾಕಿ ಬರೋಬ್ಬರಿ 25 ನಿಮಿಷ ತಡವಾಗಿ ಸಿನಿಮಾ ಪ್ರಾರಂಭ ಮಾಡಿದ್ದಾರೆ. ಇದರಿಂದ, ಅಭಿಷೇಕ್ ಗೆ ನಿಗದಿತ ಸಮಯಕ್ಕೆ ಕಚೇರಿಗೆ ವಾಪಸ್ ತೆರಳಲು ಸಾಧ್ಯವಾಗಿಲ್ಲ.

ಟಿಕೆಟ್ ಮೇಲೆ ನಮೂದಾಗಿದ್ದ ಸಿನಿಮಾದ ಶೋ ಸಮಯಕ್ಕೂ ನಿಜವಾಗಿ ಸಿನಿಮಾ ಅನ್ನು ಪ್ರಾರಂಭ ಮಾಡಿದ ಸಮಯಕ್ಕೂ ಭಾರಿ ಅಂತರ ಇದ್ದ ಕಾರಣ ಹಾಗೂ ಅನವಶ್ಯಕವಾಗಿ ಅತಿಯಾಗಿ ಜಾಹೀರಾತು ತೋರಿ ತನ್ನ ಸಮಯ ವ್ಯರ್ಥ ಮಾಡಿದ್ದಕ್ಕಾಗಿ ಅಭಿಷೇಕ್ ಅವರು ಗ್ರಾಹಕರ ವೇದಿಕೆಯಲ್ಲಿ ಕೇಸು ದಾಖಲಿಸಿದ್ದರು, ಪ್ರಕರಣದ ವಿಚಾರಣೆ ನಡೆಸಿದ ಗ್ರಾಹಕರ ವೇದಿಕೆ ಇದೀಗ ಪಿವಿಆರ್-ಐನಾಕ್ಸ್, ದೂರುದಾರ ಅಭಿಷೇಕ್ ಗೆ 28 ಸಾವಿರ ರೂಪಾಯಿ ದಂಡ ಪಾವತಿಸುವಂತೆ ಆದೇಶಿಸಿದೆ. ಅಲ್ಲದೆ, ಇನ್ನು ಮುಂದೆ ನಿಖರವಾಗಿ ಸಿನಿಮಾ ಶೋ ಪ್ರಾರಂಭ ಆಗುವ ಸಮಯವನ್ನೇ ಟಿಕೆಟ್ ನಲ್ಲಿ ನಮೂದಿಸಬೇಕು, ಜಾಹೀರಾತು ಪ್ರದರ್ಶಿಸುವ ಸಮಯವನ್ನು ನಮೂದಿಸುವಂತೆ ಇಲ್ಲ ಎಂದು ಗ್ರಾಹಕರ ವೇದಿಕೆ ಪಿವಿಆರ್ -ಐನಾಕ್ಸ್‌ಗೆ ಸೂಚಿಸಿದೆ.

ಸಂಜೆ ಮುಗಿಲು
ಬುಧವಾರ
19.2.2025





# ಧರ್ಮರಾಯ ಸ್ವಾಮಿ ದೇವಸ್ಥಾನದ ಜೀರ್ಣೋದ್ದಾರ

ಆನೇಕಲ್ : ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ವತಿಯಿಂದ ಡಾ.ವೀರೇಂದ್ರ ಹೆಗ್ಗಡೆ ರವರ ಮಾರ್ಗದರ್ಶನದಲ್ಲಿ ಹಲವಾರು ಸಾಮಾಜಿಕ ಚಟುವಟಿಕೆಗಳನ್ನು ಮಾಡಲಾಗುತ್ತಿದ್ದು ಅದರಂತೆ ಆನೇಕಲ್ ತಾಲ್ಲೂಕಿನಲ್ಲಿ ಸಂಸ್ಥೆವತಿಯಿಂದ ವಿವಿಧ ಚಟುವಟಿಕೆಗಳಿಗೆ ಸುಮಾರು 12ಕೋಟಿಗೂ ಹೆಚ್ಚು ಮೊತ್ತವನ್ನು ನೀಡಲಾಗಿದೆ ಎಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಿರ್ದೇಶಕರು ಉಮಾರ್ ಅಬ್ಬಾ ತಿಳಿಸಿದರು.

ಮಂಗಳವಾರ ಸರ್ಜಾಪುರ ಸಮೀಪದ ತಿಗಳ ಚೌಡದೇನಹಳ್ಳಿ ಗ್ರಾಮದ ಶ್ರೀ ಧರ್ಮರಾಯ ಸ್ವಾಮಿ ದೇವಸ್ಥಾನದ ಜೀರ್ಣೋದ್ದಾರ ಕಾರ್ಯಕ್ಕೆ ಸುಮಾರು 1,50,000 ರೂಪಾಯಿ ಮೊತ್ತದ ಡಿ.ಡಿಯನ್ನು ವಿತರಿಸಿ ಮಾತನಾಡಿದರು

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ವತಿಯಿಂದ ರಾಜ್ಯದ ಉದ್ದಗಲಕ್ಕೂ ಸಮುದಾಯ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಂಡಿದ್ದು ಹಾಲಿನ ಡೈರಿ ಕಟ್ಟಡ ರಚನೆಗೆ ಅನುದಾನ, ದೇವಸ್ಥಾನ ಜೀರ್ಣೋದ್ಧಾರಕ್ಕೆ ಅನುದಾನ, ಸಮುದಾಯ ಭವನ ನಿರ್ಮಾಣಕ್ಕಾಗಿ ಅನುದಾನ, ಶಾಲಾ ಕಟ್ಟಡ ರಚನೆಗೆ ಅನುದಾನ, ಜ್ಞಾನದೀಪ ಶಿಕ್ಷಕರ ಒದಗಣೆ, ಸುಜ್ಞಾನನಿಧಿ ಶಿಷ್ಯ ವೇತನ ವಿತರಣೆ, ಮಾಸಶಣ, ಕೆರೆಗಳ ಅಭಿವೃದ್ಧಿ ಸೇರಿದಂತೆ ವಿವಿಧ ಕಾರ್ಯಕ್ರಮದಡಿಯಲ್ಲಿ ಸಮಾಜಮುಖಿ ಸೇವೆಯನ್ನು ಸಲ್ಲಿಸುತ್ತಿದ್ದಾರೆ ಎಂದರು.

ಶ್ರೀ ಧರ್ಮರಾಯ ಸ್ವಾಮಿ ದೇವಾಲಯದ ಸಮಿತಿ ಟ್ರಸ್ಟ್ ನ ಅಧ್ಯಕ್ಷ ಎಂ.ಸುಬ್ರಮಣಿ ಮಾತನಾಡಿ, ಧರ್ಮಸ್ಥಳ ಯೋಜನೆಯ ಮೂಖೇನ ಪುರಾತನ ದೇವಸ್ಥಾನಗಳ ಜೀರ್ಣೋದರ ಕಾರ್ಯಗಳಿಗೆ ಬಲವನ್ನು ತುಂಬಿದಂತಾಗಿದೆ. ಹಾಗೂ ಗ್ರಾಮೀಣ ಭಾಗದ ಮಹಿಳೆಯರನ್ನು ಸಬಲೀಖರಣಗೊಳಿಸಲು ಸಂಘದ ವತಿಯಿಂದ ಆರ್ಥಿಕ ನೆರವನ್ನು ನೀಡಿ ರಾಜ್ಯಾದ ಆನೇಕ ಭಾಗಗಳಲ್ಲಿ ವಿವಿಧ ಚಟುವಟಿಕೆಗಳಿಗೆ ಅನುದಾನ ಒದಗಿಸುವ ಮೂಲಕ ಗ್ರಾಮಗಳ ಕಲ್ಯಾಣಕ್ಕಾಗಿ ಸಂಘವು ಮತ್ತು ಡಾ.ವೀರೇಂದ್ರ ಹೆಗ್ಗಡೆ ರವರು ಶ್ರಮಿಸುತ್ತಿರುವುದು ಸಂತಸವನ್ನುಂಟು ಮಾಡಿದೆ ಎಂದರು.

ಕಾರ್ಯಕ್ರಮದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕಿನ ಯೋಜನಾಧಿಕಾರಿಗಳಾದ ನಾಗೇಶ್, ದೊಮ್ಮಸಂದ್ರ ವಲಯದ ಮೇಲ್ವಿಚಾರಕರಾದ ಶಿವಶಂಕರ್, ಒಕ್ಕೂಟದ ಕಾರ್ಯದರ್ಶಿ ಇಟ್ಟಂಗೂರು ಪಾರ್ವತಿ, ಶ್ರೀ ಧರ್ಮರಾಯ ಸ್ವಾಮಿ ದೇವಾಲಯದ ಸಮಿತಿ ಟ್ರಸ್ಟ್ ನ ಅಧ್ಯಕ್ಷ ಸುಬ್ರಮಣಿ ಎಂ, ಖಜಾಂಚಿ ಮುರಗೇಶ್, ಯಮರೆ ಗ್ರಾಮ ಪಂಚಾಯಿತಿ ಸದಸ್ಯರಾದ ನಾಗರಾಜು, ರಾಜೇಶ್ವರಿ, ದೇವಸ್ಥಾನ ಸ್ಥಳ ದಾನಿಗಳಾದ ಚಿನ್ನಸ್ವಾಮಿ ರೆಡ್ಡಿ, ಮುಖಂಡರಾದ ಶ್ರೀನಿವಾಸ್ ರೆಡ್ಡಿ ,ಗಿರೀಶ್, ಸುನೀಲ್ ,ಗೋಪಾಲ್, ನಾಗರಾಜು, ರಾಧಮ್ಮ ಹಾಗೂ ಮತ್ತಿತ್ತರರು ಹಾಜರಿದ್ದರು.

# ಬೇಸಿಗೆಯ ಅಗ್ನಿ ಅವಘಢಗಳಿಗೆ ಸನ್ನದ್ದರಾಗಿ: ಕೊತ್ತೂರು ಮಂಜುನಾಥ್ ಸೂಚನೆ

**ಕೋಲಾರ:** ಬೇಸಿಗೆಯಲ್ಲಿ ಅಗ್ನಿ ಅವಘಡಗಳು ಹೆಚ್ಚಾಗಿ ಸಂಭವಿಸುತ್ತವೆ. ಅಗ್ನಿ ಶಾಮಕ ದಳದ ಸಿಬ್ಬಂದಿ ನಂದಿಸುವ ಕೆಲಸ ಮತ್ತು ಅಪಾಯದಲ್ಲಿರುವ ಜನಜಾನುವಾರುಗಳ ರಕ್ಷಣೆಗೆ ಸದಾ ಸನ್ನದ್ಧರಾಗಿರಬೇಕು ಎಂದು ಶಾಸಕ ಕೊತ್ತೂರು ಮಂಜುನಾಥ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಹೊರವಲಯದ ಅಗ್ನಿಶಾಮಕ ಠಾಣೆಗೆ ಭೇಟಿ ನೀಡಿ, ಪರಿಶೀಲಿಸಿ ಮಾತನಾಡಿದ ಅವರು, ತಾಲ್ಲೂಕಿನಲ್ಲಿ ಯಾವುದೇ ವಿದ್ಯುತ್ ಮತ್ತು ಬೆಂಕಿ ಅವಘಡ ಸಂಭವಿಸಿದರೆ ತಾಲ್ಲೂಕಿನ ಅಗ್ನಿಶಾಮಕ ದಳ ಸೀಮಿತ ಸಿಬ್ಬಂದಿಯನ್ನಿಟ್ಟುಕೊಂಡು ತುರ್ತಾಗಿ ಧಾವಿಸಿ, ಬೆಂಕಿ ನಂದಿಸುವ ಕಾರ್ಯ ನಡೆಸಬೇಕು ಪ್ರತಿ ವರ್ಷ ಅಂತರಗಂಗೆ ಬೆಟ್ಟದಲ್ಲಿ ಆಗಾಗ ಬೆಂಕಿಬಿದ್ದು ಪರಿಸರ ನಾಶದ ಜೊತೆಗೆ ಜೀವ ಸಂಕುಲಗಳಿಗೂ ಹಾನಿಯಾಗುತ್ತಿದೆ. ಜೊತೆಗೆ ಬಣವೆಗಳಿಗೆ ಬೆಂಕಿ, ಭತ್ತದ ಹುಲ್ಲಿಗೆ ಬೆಂಕಿ ಈ ರೀತಿ ಘಟನೆಯಾದ ತಕ್ಷಣ ಅಗ್ನಿಶಾಮಕ ಸಿಬ್ಬಂದಿಯು ಧಾವಿಸಿ ಬೆಂಕಿ ನಿಂದಿಸಿ ರಕ್ಷಣೆ ಮಾಡುವ ಕೆಲಸ ಮಾಡಬೇಕು ಎಂದರು.

ಅಗ್ನಿ ನಂದಿಸುವ ವಾಹನಗಳನ್ನು ಸದಾ ಸುಸಜ್ಜಿತ ಸ್ಥಿತಿಯಲ್ಲಿ ಇಟ್ಟುಕೊಳ್ಳಿ ಯಾವುದೇ ತೊಂದರೆಯಾದರೂ ತಕ್ಷಣ ಸರಿಪಡಿಸಿ ಬೇಕಾಗಿರುವ ಪರಿಕರಣಗಳು, ಠಾಣೆಯ ಸುತ್ತ ತಡೆಗೋಡೆ ನಿರ್ಮಿಸುವುದು, ಬಣ್ಣ ಬಳಿಸುವುದು, ಠಾಣೆಯ ಮುಂದೆ ಸಿಮೆಂಟ್ ರಸ್ತೆಯ ವ್ಯವಸ್ಥೆ ಹಾಗೂ ಸಿಬ್ಬಂದಿ ದೃಢ ಹಾಗೂ ಆರೋಗ್ಯವಾಗಿರಲು ಜಿಮ್ ಸಾಮಗ್ರಿಗಳನ್ನು ಕೊಡಿಸಲಾಗುವುದು ಎಂದು ಭರವಸೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಎಂ.ಎಲ್ ಅನಿಲ್ ಕುಮಾರ್ ಮಾತನಾಡಿ, ಬೇಸಿಗೆಯಲ್ಲಿ ಬೆಂಕಿ ಅವಘಡಗಳು ಸಂಭವಿಸಿದರೆ ಬೆಂಕಿ ನಿಂದಿಸುವ ಬಗೆಯ ಕುರಿತು ಜನರಲ್ಲಿ ಅರಿವು, ಜಾಗೃತಿ ಮೂಡಿಸುವ ಕರಪತ್ರಗಳನ್ನು ಹಂಚಿ. ಅವಘಡಕ್ಕೆ ಕಾರಣವಾಗುವ ಅಂಶಗಳು ಮತ್ತು ತಡೆಯುವ ವಿಧಾನವನ್ನು ಕುರಿತು ಮಾಹಿತಿ ನೀಡಿ. ತುರ್ತು ಕರೆಗಳನ್ನು ಸ್ವೀಕರಿಸಿ ತಕ್ಷಣ ಕಾರ್ಯ ಪ್ರವೃತರಾಗಿ ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರೆಂಟಿ ಯೋಜನೆಗಳ ಅಧ್ಯಕ್ಷ ವೈ.ಶಿವಕುಮಾರ್, ಪಿಎಲ್ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಚಂಜಿಮಲೆ ರಮೇಶ್, ಸಿಂಡಿಕೇಟ್ ಸದಸ್ಯ ಸೀಸಂದ್ರ ಗೋಪಾಲಗೌಡ, ನಗರಸಭೆ ಸದಸ್ಯ ಅಫ್ಸರ್, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಆರ್. ಹನುಮಂತರಾಯ, ಪ್ರಮುಖ ಸಿಬ್ಬಂದಿಗಳಾದ ಶ್ರೀನಾಥ್, ಲೋಕೇಶ್, ಅಶ್ವಥ್ ಹಾಗೂ ಇತರೆ ಸಿಬ್ಬಂದಿಗಳು ಹಾಜರಿದ್ದರು.



## ಜಿಲ್ಲಾಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸಲಹೆ

# ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ

**ಮಂಡ್ಯ:** ಇಲಾಖೆಯ ಅಧಿಕಾರಿಗಳು ತಮಗೆಆರ್ಥಿಕ ವರ್ಷದಲ್ಲಿ ನೀಡಿರುವ ಗುರಿಗಳ ಸಾಧನೆ ಮಾಡುವುದರಜೊತೆಗೆ ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸಿ ಕಾರ್ಯನಿರ್ವಹಿಸಿ ಎಂದು ಕೃಷಿ ಹಾಗೂ ಜಿಲ್ಲಾಉಸ್ತುವಾರಿ ಸಚಿವ ಎನ್‌ಚಲುವರಾಯಸ್ವಾಮಿ ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಅಧ್ಯಕ್ಷತೆ ವಹಿಸಿ ಮಾತನಾಡಿದರು. ಸರ್ಕಾರ ನಿಗದಿಪಡಿಸಿರುವ ಅನುದಾನವನ್ನು ಪೂರ್ಣವಾಗಿ ವೆಚ್ಚವಾಗಬೇಕು.ಅನುದಾನ ವ್ಯರ್ಥವಾದಲ್ಲಿ ಸಂಬಂಧಿಸಿದ ಅಧಿಕಾರಿಗಳನ್ನು ನೇರಜವಾಬ್ದಾರಿ ಮಾಡಲಾಗುವುದು ಎಂದರು.

ನೀರಾವರಿ ಇಲಾಖೆಯಿಂದ ನೀರಾವರಿ ಕೆಲಸಗಳ ಅಭಿವೃದ್ಧಿಗೆ 40 ರಿಂದ 50 ಕೋಟಿ ನೀಡಲುಯೋಜನೆ ರೂಪಿಸಲಾಗುತ್ತಿದೆ.ಅನುದಾನ ನೀಡಿದ ಸಂದರ್ಭದಲ್ಲಿ ಅನುದಾನದಲ್ಲಿ ಹಳೆಯ ನೀರಾವರಿ ಯೋಜನೆಗಳ ನಿರ್ವಹಣೆಗೆ ಹಣ ಮೀಸಲಿಡಿಎಂದರು.

ವೈಜ್ಞಾನಿಕವಾಗಿ ಕೆರೆ ಹೂಳು ತೆಗೆಯಿರಿ ಬೇಸಿಗೆ ಕಾಲದಲ್ಲಿಕೆರೆಯಿಂದ ಹೂಳು ತೆಗೆಯಲುಅವಕಾಶವಿದ್ದು, ರೈತರು ಹೂಳು ತೆಗೆಯುವುದು ಸರ್ವೆ ಸಾಮಾನ್ಯ. ರೈತರು ಹೂಳು ತೆಗೆಯುವ ಸಂದರ್ಭದಲ್ಲಿ ಅಧಿಕಾರಿಗಳು ಅಥವಾ ಸಿಬ್ಬಂದಿಗಳು ಖುದ್ದು ಹಾಜರಿದ್ದು, ವೈಜ್ಞಾನಿಕವಾಗಿ ಹೂಳು ತೆಗೆಯುವಂತೆ ನೋಡಿಕೊಳ್ಳಬೇಕು. ಘರ್ಷಣೆಯಿದ್ದಲ್ಲಿ ಪೊಲೀಸ್ಇಲಾಖೆಯ ಸಹಾಯ ಪಡೆದುಕೊಳ್ಳಿ ಎಂದರು.

ಇದಕ್ಕೆ ಪ್ರತಿಕ್ರಿಯಸಿದ ಜಿಲ್ಲಾಧಿಕಾರಿಡಾ: ಕುಮಾರಅವರುಗ್ರಾಮವಾರು ಹೂಳು ತೆಗೆಯಲುಅವಶ್ಯಕತೆಇರುವಕೆರೆಗ ಹಾಗೂ ಎಷ್ಟು ಅಡಿ ತೆಗೆಯಬೇಕುಇದರ ಬಗ್ಗೆ ಪ್ರಕಟಣೆ ಹೊರಡಿಸಿ ನಂತರ ಹೂಳು ತೆಗೆಯಲುಚಿಂತಿಸಲಾಗುತ್ತಿದೆಎಂದರು.

ಕೃಷಿ ಸಚಿವರು ನಂತರ ಮಾತನಾಡಿ ಬೇಸಿಗೆ ಕಾಲದಲ್ಲಿಕುಡಿಯುವ ನೀರಿನಕೊರತೆಉಂಟಾಗದಂತೆಈಗಿನಿಂದಲೇಎಚ್ಚರಿಕೆ ವಹಿಸಬೇಕು.ಜಲ್‌ಜೀವನ್ ಮಿಷನ್‌ಯೋಜನೆಯಡಿ ಬೋರ್ ವೆಲ್, ನೆಲ್ಲಿ ಸಂಪರ್ಕ ಮುಂತಾದ ಕೆಲಸಗಳು ಪೂರ್ಣಗೊಳಿಸಿ ಎಂದರು.

ಕಳೆದ ಎರಡು ಸಾಲಿನಲ್ಲಿಕುಡಿಯುವ ನೀರಿನತೊಂದರೆಇದ್ದ ಸಂದರ್ಭದಲ್ಲಿ ಖಾಸಗಿ ಬೋರ್ ವೆಲ್‌ಅಥವಾಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಿದ ವ್ಯಕ್ತಿಗಳ ಬಿಲ್ ಪಾವತಿಯಾಗಿಲ್ಲಎಂದು ದೂರುಗಳಿದ್ದು, ಉಪವಿಭಾಗಾಧಿಕಾರಿಗಳು, ತಹಶೀಲ್ದಾರ್ ಹಾಗೂ ಕಾರ್ಯನಿರ್ವಾಹಕ ಅಧಿಕಾರಿಗಳು ಸ್ಥಳ ಮಹಜರ್



ಮಾಡಿ ವರದಿ ಪಡೆದು ಬಿಲ್ ಪಾವತಿಸಲುಕ್ರಮ ವಹಿಸಿ ಎಂದರು.

ವಿವಿಧರೀತಿಯ ಸಾಮಾಜಿಕ ಪಿಂಚಣಿ ಪಡೆಯುತ್ತಿರುವವರು ಪಿಂಚಣಿ ಪಡೆಯಲು ಅರ್ಹರಲ್ಲ ಎಂದು ದೂರು ಬಂದಲ್ಲಿ. ಕಂದಾಯ ಇಲಾಖೆಯವರು ಪರಿಶೀಲನೆ ನಡೆಸದೆ ಸ್ಥಗಿತ ಮಾಡುವಕ್ರಮ ಸರಿಯಲ್ಲ. ಪರಿಶೀಲಿಸಿ ಕ್ರಮ ಕೈಗೊಳ್ಳಿ ಎಂದರು.

ಪೋಡಿದುರಸ್ತಿ ಕೆಲಸಗಳು ಪಾರದರ್ಶಕವಾಗಿ ನಡೆಯಬೇಕು.ಕ್ರಮಬದ್ದವಾಗಿ ಕೆಲಸಗಳು ನಡೆದರೆ ಪೋಡಿಆಂದೋಲನ ಕೆಲಸಗಳು ಸ್ವಯಂ ಪ್ರೇರಿತವಾಗಿಕಂದಾಯ ಇಲಾಖೆ ತೆಗೆದುಕೊಂಡಿರುವ ಕೆಲಸ ಸಾರ್ಥಕವಾಗುತ್ತದೆಎಂದರು.

ಗ್ರಾಮಪಂಚಾಯಿತಿವ್ಯಾಪ್ತಿಯಲ್ಲಿನಡೆಯುವಗ್ರಾಮ ಸಭೆಗಳಲ್ಲಿ ಕೃಷಿ ಹಾಗೂ ತೋಟಗಾರಿಕೆಇಲಾಖೆಯಿಂದ ಸಿಗುವ ಸೌಲಭ್ಯಗಳ ಬಗ್ಗೆ ಕರಪತ್ರ ಹೊರಡಿಸಿ ರೈತರಿಗೆಜಾಗೃತಿ ಮೂಡಿಸಬೇಕುಎಂದರು

ರೈತರುಆದಷ್ಟು ಸಾವಯವ ಕೃಷಿಗೆ ಹೆಚ್ಚು ಆದ್ಯತೆ ನೀಡಬೇಕು, ರಾಸಾಯನಿಕ ಗೊಬ್ಬರಗಳನ್ನು ಭೂಮಿಗೆ ಹೆಚ್ಚಿಗೆ ಬಳಕೆ ಮಾಡುವುದರಿಂದ ಮಣ್ಣುತನ್ನ ಫಲವತ್ತತೆಯನ್ನು ಕಳೆದುಕೊಳ್ಳುತ್ತದೆ. ಜೊತೆಗೆಜಮೀನಿಗೆ ನಿತ್ಯ ನೀರು ಹಾಯಿಸಬಾರದು, ಇದರಿಂದಲೂ ಭೂಮಿತನ್ನ ಸತ್ವ ಕಳೆದುಕೊಳ್ಳುತ್ತದೆ. ಈ ಬಗ್ಗೆಯೂರೈತರಲ್ಲಿಜಾಗೃತಿ ಮೂಡಿಸಬೇಕುಎಂದರು.

ಬೆಂಗಳೂರು- ಮೈಸೂರು ಹೆದ್ದಾರಿಯಲ್ಲಿ ಸಾಕಷ್ಟು ಸಮಸ್ಯೆಗಳಿವೆ, ಕೆಲವೆಡೆಕಾಮಗಾರಿಯೇ ಪೂರ್ಣಗೊಂಡಿಲ್ಲ. ಹೀಗಾಗಿ ಸಾಕಷ್ಟು ಅಪಘಾತಗಳು ಮಡೆಯುತ್ತಿವೆ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಕೇಂದ್ರ ಸರ್ಕಾರಕ್ಕೆ ಪತ್ರ ಬರೆದುಆದಷ್ಟು ಬೇಗ ಸಮಸ್ಯೆ ಬಗೆ ಹರಿಸಬೇಕೆಂದರು.

ಬೇಸಿಗೆ ಬೆಳೆ ಬೆಳೆಯುವ ಕಡೆಗಳಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರದಕೊರತೆಆಗದಂತೆ ನೋಡಿಕೊಳ್ಳಿ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾಧಿಕಾರಿಡಾ: ಕುಮಾರಅವರು ಸಭೆಗೆಜಿಲ್ಲೆಯಲ್ಲಿ ಮಳೆ ವಿವರ, ಜಲಾಶಯದಲ್ಲಿ ಲಭ್ಯವಿರುವ ನೀರಿನ ವಿವರ,ಕೆರೆಯಲ್ಲಿ ಸಂಗ್ರಹವಾಗಿರುವ ನೀರು, 2024-25 ನೇ ಸಾಲಿನಲ್ಲಿ ಬೆಳೆ ನಷ್ಟ, ಮಿಟಿಗೇಷನ್ ಅನುದಾನದಡಿತೆಗೆದುಕೊಂಡಿರುವ ಕಾಮಗಾರಿಗಳು, ಸಾಮಾಜಿಕ ಭದ್ರತಾ ಯೋಜನೆಗಳ ಬಗ್ಗೆ ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಶಾಸಕರಾದ ಪಿ.ಎಂ.ನರೇಂದ್ರಸ್ವಾಮಿ, ಎ.ಬಿ.ರಮೇಶ್ ಬಾಬು ಬಂಡಿಸಿದ್ದೇಗೌಡ, ಪಿ.ರವಿಕುಮಾರ್, ವಿಧಾನಪರಿಷತ್ ಶಾಸಕರಾದ ಮಧು ಜಿ ಮಾದೇಗೌಡ, ದಿನೇಶ್ ಗೂಳಿಗೌಡ, ವಿವೇಕನಂದ, ಕೆ.ಡಿ.ಪಿ ಸದಸ್ಯ ಸಿ.ಎಂ. ದ್ಯಾವಪ್ಪ, ನಟರಾಜ, ಅಶಾಲತಾ, ಮಹಮ್ಮದ್‌ಉಜೈಫ್, ಶಶಿರಾಜ್, ಜಿಲ್ಲಾ ಪೊಲೀಸ್ ವರಿ?ಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕಅಧಿಕಾರಿ ನಂದಿನಿ ಸೇರಿದಂತೆಇನ್ನಿತರೆಗಣ್ಯರು ಉಪಸ್ಥಿತರಿದ್ದರು.

# ವಿದ್ಯಾರ್ಥಿಜೀವನದಲ್ಲಿ ಶಿಸ್ತು ಹಾಗೂ ಜ್ಞಾನಾರ್ಜನೆ ಮುಖ್ಯ

**ಮಂಡ್ಯ:** ವಿದ್ಯಾರ್ಥಿಜೀವನದಲ್ಲಿಗುರಿ ಮುಟ್ಟಿ ಸಾಧನೆ ಮಾಡಲು ಶಿಸ್ತು ಹಾಗೂ ಜ್ಞಾನಾರ್ಜನೆ ಮುಖ್ಯಎಂದು ಕೃಷಿ ಹಾಗೂ ಜಿಲ್ಲಾಉಸ್ತುವಾರಿ ಸಚುವ ಎನ್ ಚಲುವರಾಯಸ್ವಾಮಿಅವರು ತಿಳಿಸಿದರು.

ಅಲುಮ್ನಿ ಅಸೋಸಿಯೇಷನ್, ಕೃಷಿ ವಿಶ್ವವಿದ್ಯಾನಿಲಯ, ಜಿಕೆವಿಕೆ, ಬೆಂಗಳೂರು, ಕೃಷಿ ಶಿಕ್ಷಣ ಮತ್ತು ಕೃಷಿ ಕ್ಷೇತ್ರದ ಅವಕಾಶಗಳ ಕಾರ್ಯಾಗಾರದಲ್ಲಿ ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮ ಶಾಲಾ ಹಾಗೂ ಕಾಲೇಜು ಹಂತದಲ್ಲಿ ಹೆಚ್ಚಿನ ಶ್ರಮವಹಿಸಿದರೆ ಉನ್ನತ ಹುದ್ದೆಯನ್ನುಅಲಂಕರಿಸುವುದರಜೊತೆಗೆತಮ್ಮಕುಟುಂಬ ಹಾಗೂ ದೇಶದ ಪ್ರಗತಿಗೆ ಕೈ ಜೋಡಿಸಬಹುದುಎಂದರು.

ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿ ಹಂತ ವಿದ್ಯಾರ್ಥಿಗಳ ಜೀವನದಲ್ಲಿ ಬಹು ಮುಖ್ಯ ಇಂದಿನ ಸ್ಪರ್ಧಾತ್ಮಕಜಗತ್ತಿನಲ್ಲಿ ಶೇ 99 ಗಳಿಸಿದರು ಸಹ ಕಡಿಮೆ ಎಂಬ ಭಾವನೆಇದೆಆದರಿಂದ ಸಮಯ ವ್ಯರ್ಥ ಮಾಡದೆಜ್ಞಾನವನ್ನು ಹೆಚ್ಚಿಸಿಕೊಂಡು ಉನ್ನತ ಶ್ರೇಣಿಯಲ್ಲಿಉತ್ತೀರ್ಣರಾದರೆ ಮುಂದಿನ ಜೀವನ ಸುಖಕರವಾಗಿರುತ್ತದೆಎಂದು ಕಿವಿ ಮಾತು ಹೇಳಿದರು.

ಕೃಷಿ ಪದವಿ ಹಾಗೂ ಡಿಪ್ಲೊಮಾ ಸೇರಿದಂತೆಇನ್ನಿತರೆ ಪದವಿಗಳ ಪ್ರವೇಶಾತಿಗೆ ಸುಮಾರುಒಂದು ಲಕ್ಷಅರ್ಜಿ ಬಂದರೆ 5 ಸಾವಿರಜನರಿಗೆ ಮಾತ್ರ ಪ್ರವೇಶಾತಿ ನೀಡಲು



ಸಾಧ್ಯವಾಗುತ್ತಿತ್ತು.ಇದನ್ನು ಮನಗಂಡು ಹಿಂದಿನ ಸಾಲಿನಿಂದರಾಜ್ಯದಲ್ಲಿ ಪ್ರಥಮ ಬಾರಿಗೆ 2 ಖಾಸಗಿ ಕೃಷಿ ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲಾಗಿದೆಎಂದರು.

ಕೃಷಿ ಕೂಡ ಲಾಭದಾಯಕ ಹುದ್ದೆ.ಖಾಸಗಿ ಕಂಪನಿಗಳಲ್ಲಿ ಕಡಿಮೆ ಸಂಬಳ ಪಡೆಯುವುದರ ಬದಲುಕೃಷಿಯಲ್ಲಿಉತ್ತಮಆದಾಯ ಪಡೆದುಉತ್ತಮಆರ್ಥಿಕ ಪರಿಸ್ಥಿತಿಯಲ್ಲಿ ಜೀವನ ನಡೆಸುತ್ತಿರುವ ಆನೇಕ ನಿದರ್ಶನಗಳಿವೆ ಎಂದರು.

ಕೃಷಿಯಲ್ಲಿ ಹೊಸ ತಂತ್ರಜ್ಞಾನ, ತಳಿಗಳ ಬಳಕೆ ಮಾಡಿಕೊಂಡು 50 ವರ್ಷದ ಹಿಂದೆಇದ್ದಆಹಾರದಕೊರತೆಯನ್ನು ನೀಗಿಸಿ ಇಂದುರಫ್ತು ಮಾಡುವ ಸ್ಥಿತಿಗೆ ನಮ್ಮದೇಶ ಬೆಳೆದಿದೆ.ಕೃಷಿ ಕ್ಷೇತ್ರದಲ್ಲೂಇಂದು ಅನೇಕ ಅವಕಾಶಗಳಿವೆ ಎಂದರು.

ಕೃಷಿಪಾರಂಪರಿಕವಾಗಿಬಂದಂತಹದ್ದುಅದಕ್ಕೆಶಿಕ್ಷಣದಅವಶ್ಯಕತೆಯಿದೆಯಾ...? ಎಂಬ ಪ್ರಶ್ನೆಎಲ್ಲರಲ್ಲಿ ಮೂಡುವುದು ಸಹಜಆದರೆಕೃಷಿಯುಎಲ್ಲರೂ ತಿಳಿದಷ್ಟು ಸುಲಭದಉದ್ಯೋಗವೇನುಅಲ್ಲ, ಒಬ್ಬರೈತ ವ್ಯವಸಾಯ ಮಾಡಬೇಕೆಂದರೆ ಅನೇಕ ಏರು ಪೇರುಗಳನ್ನ ವಾತಾವರಣದಲ್ಲಿಕಾಣುತ್ತಾನೆ. ಇವುಗಳನ್ನು ನಿಭಾಯಿಸಲು ಕೃಷಿ ಇಲಾಖೆಯಿಂದ ಹೆಚ್ಚಿನ ಮಾಹಿತಿ ಪಡೆದುಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಮಂಡ್ಯ ವಿಧಾನಸಭಾಕ್ಷೇತ್ರದ ಶಾಸಕ ಪಿ.ರವಿಕುಮಾರ್, ಮುಡಾಅಧ್ಯಕ್ಷ ನಹೀಮ್,ಜಿಲ್ಲಾಧಿಕಾರಿಡಾ. ಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ವಿ.ಸಿ.ಫಾರಂ ಕೃಷಿ ವಿಶ್ವವಿದ್ಯಾಲಯದಡೀನ್‌ಡಾ: ಪಿ.ಎನ್ ಫತೀಮಾ, ವ್ಯವಸ್ಥಾಪನಾ ಮಂಡಳಿ ಅಧ್ಯಕ್ಷಡಾ: ಹೆಚ್.ಎಲ್ ಹರೀಶ್, ಸದಸ್ಯಕುಮಾರಸ್ವಾಮಿ ಉಪಸ್ಥಿತರಿದ್ದರು.

# ಉರ್ದು ಕ್ಲಸ್ಟರ್ನ ಎಫ್ ಎಲ್ ಎನ್ ಕಲಿಕಾ ಹಬ್ಬ

**ವಿಜಯಪುರ:** ಯಾವುದೇ ಕಾರಣಗಳಿಂದಲೂ ಸರ್ಕಾರಿ ಶಾಲಾ ಮಕ್ಕಳು ಶೈಕ್ಷಣಿಕವಾಗಿ ಹಿಂದುಳಿಯಬಾರದೆಂದು ಸಿ ಆರ್ ಪಿ ಕೃಷ್ಣ ರಾಮ್ ತಿಳಿಸಿದರು. ಅವರು ಇಲ್ಲಿನ ದೇವನಹಳ್ಳಿ ರಸ್ತೆಯ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಉರ್ದು ಶಾಲೆಗಳ ಕ್ಲಸ್ಟರ್ ಮಟ್ಟದ ಎಫ್ ಎಲ್ ಎನ್ ಕಲಿಕಾ ಹಬ್ಬ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು. ಕರೋನ ಸೇರಿದಂತೆ ಕೆಲ ಸಂದರ್ಭಗಳಲ್ಲಿ ನೇರ ಪಾಠ ಪ್ರವಚನಗಳು ನಡೆಯದಿದ್ದ ಕಾರಣ ಶಾಲಾ ಮಕ್ಕಳು ಶೈಕ್ಷಣಿಕವಾಗಿ ಹಿಂದುಳಿದಿದ್ದು ಅವರುಗಳನ್ನು ಮತ್ತೆ ಶೈಕ್ಷಣಿಕವಾಗಿ ಮುಂದುವರೆಯುವಂತೆ ಮಾಡಲು ಫೌಂಡೇಶನ್ ಲಿಟರಸಿ ಅಂಡ್ ನ್ಯೂಮರಸಿ (ಎಫ್ ಎಲ್ ಎನ್)ಬುನಾದಿಯಿಂದಲೇ ಅಕ್ಷರಜ್ಞಾನ ಮತ್ತು ಸಂಖ್ಯಾ ಜ್ಞಾನವನ್ನು ಬೆಳೆಸಬೇಕೆಂಬ ಸರ್ಕಾರದ ಆದೇಶದ ಮೇರೆಗೆ ತಾಲೂಕಿನಲ್ಲಿಡೆ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಪಟ್ಟಣದ ದೇವನಹಳ್ಳಿ ರಸ್ತೆಯ ಉರ್ದು ಶಾಲೆ, ಚಿಕ್ಕಬಳ್ಳಾಪುರ ರಸ್ತೆಯ ಉರ್ದು ಶಾಲೆ, ಮಹಬೂಬ್ ನಗರದ ಉರ್ದು ಶಾಲೆ, ಗುರಪ್ಪನ ಮಠದ ಉರ್ದು ಶಾಲೆಗಳೊಂದಿಗೆ ಹಗಲಗುರ್ಕಿ, ಕನ್ನಮಂಗಲ ಪಾಳ್ಯ, ದೇವನಹಳ್ಳಿ, ಬೂದಿಗೆರೆ ಗ್ರಾಮಗಳ ಉರ್ದು ಶಾಲೆಗಳ ಒಂದರಿಂದ ಐದನೇ ತರಗತಿಯ ವರೆಗಿನಒಟ್ಟಾರೆ ನೂರಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದು ಈ ಕಲಿಕಾ ಹಬ್ಬದಲ್ಲಿ ಪಾಠ ಪ್ರವಚನಗಳನ್ನು ಗಟ್ಟಿಯಾಗಿ ಓದುವುದು, ಉತ್ತಮ ಬರವಣಿಗೆ, ಕಥೆ ಹೇಳುವುದು, ಜ್ಞಾಪಕ ಶಕ್ತಿ ಪರೀಕ್ಷೆ, ಮೋಜಿನ ಗಣಿತ, ರಸಪ್ರಶ್ನೆ ಮೊದಲಾಗಿ ಏಳು ವಿಭಾಗಗಳಲ್ಲಿ ಸ್ಪರ್ಧೆಯನ್ನು ಏರ್ಪಡಿಸಲಾಗಿದ್ದು ಪ್ರಥಮ ಬಹುಮಾನ ವಾಗಿ 150 ರೂಗಳು, ದ್ವಿತೀಯ ಬಹುಮಾನವಾಗಿ ನೂರು, ತೃತೀಯ ಬಹುಮಾನವಾಗಿ 50 ರೂಗಳೊಂದಿಗೆ ಪ್ರಶಸ್ತಿ ಪತ್ರಗಳನ್ನು ವಿಜೇತ ವಿದ್ಯಾರ್ಥಿಗಳಿಗೆ ನೀಡಲಾಯಿತು. ಕಾರ್ಯಕ್ರಮವನ್ನು ಹಬ್ಬದಂತೆ ತಳಿರು ತೋರಣಗಳನ್ನು ಕಟ್ಟಿ, ಹಬ್ಬದ ಹೋಳಿಗೆ ಊಟ ಹಾಕಿಸುವುದರೊಂದಿಗೆ ಸಡಗರ ಸಂಭ್ರಮಗಳಲ್ಲಿ ನಡೆಸಲಾಯಿತು. ವಿಜಯಪುರ ಕ್ಲಸ್ಟರ್ನ ಸಿ ಆರ್ ಪಿ ದಿನೇಶ್ ಕುಮಾರ್, ಶಿಕ್ಷಕರುಗಳಾದ ಅಲ್ತಾಫ್ ಪಾಷಾ, ವೆಂಕಟೇಶ್, ಅಬ್ದುಲ್ ಸತ್ತಾರ್, ಶಂಶಿಯಾ ಬೇಗಂ, ಫರಹಾನ ಕೌಸರ್, ಜಯಶಂಕರ್, ಹನುಮಪ್ಪ, ರಶ್ಮಿ, ಸರಳ, ಫಿರ್ ದೋಸ್, ಲತಾ, ನಜ್ರೀನ್ ಕಾನಂ, ನಾಗರತ್ನ ರವರುಗಳು ಭಾಗವಹಿಸಿದ್ದರು.



# ವಿವಿಧ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ (ಏಖಔಗ) ಮುಕ್ತ ಗಂಗೋತ್ರಿ ಮೈಸೂರು ಪ್ರಾದೇಶಿಕ ಕೇಂದ್ರ, ಚಿಕ್ಕಬಳ್ಳಾಪುರದಲ್ಲಿ ಸ್ನಾತಕ / ಸ್ನಾತಕೋತ್ತರ ಕೋರ್ಸ್ಗಳಾದ ಬಿ.ಎ., ಬಿ.ಕಾಂ., ಬಿ.ಬಿ.ಎ., ಬಿ.ಸಿ.ಎ., ಬಿ.ಎಲ್.ಐ.ಎಸ್.ಸಿ., ಬಿ.ಎಸ್.ಸ್ಸಿ., ಎಂ.ಎ., ಎಂ.ಎ.ಸ್ಸಿ., ಎಂ.ಸಿ.ಜೆ., ಎಂ.ಕಾಂ., ಎಂ.ಎಲ್.ಐ.ಎಸ್.ಸಿ., ಬಿ.ಎಸ್. ಡಬ್ಲ್ಯೂ., ಎಂ.ಎಸ್.ಡಬ್ಲ್ಯೂ ಮತ್ತು ಪಿ.ಜಿ. ಡಿಪ್ಲೊಮಾ ಸರ್ಟಿಫಿಕೇಟ್ ಪ್ರೋಗ್ರಾಂಗಳಿಗೆ ಪ್ರವೇಶಾತಿ ಪ್ರಾರಂಭವಾಗಿದೆ. ಪ್ರಥಮ ವರ್ಷದ ಪ್ರವೇಶಾತಿ ಶುಲ್ಕದ ವಿವರ: ಬಿ.ಎ 8,400/-, ಬಿ.ಕಾಂ 8,900/-, ಬಿ.ಸಿ.ಎ/ಬಿ.ಎಸ್.ಸಿ 23,900/-, ಬಿ.ಬಿ.ಎ., ಬಿ.ಎಲ್.ಐ.ಎಸ್.ಸಿ 12,400/-, ಎಂ.ಎ 10,600/-, ಎಂ.ಕಾಂ 12400/-, ಬಿ.ಎಸ್.ಡಬ್ಲ್ಯೂ 12900/-, ಎಂ.ಎಸ್.ಸಿ 29700/-, ಎಂ.ಬಿ.ಎ 29,900/- ಎಂ.ಸಿ.ಎ 29,700/-, ಎಂ.ಸಿ.ಜೆ 16,200/-, ಎಂ.ಎಲ್ .ಐ.ಎಸ್.ಸಿ 18150/-, ಎಂ.ಎಸ್.ಡಬ್ಲ್ಯೂ 21,300/- ಆಗಿರುತ್ತದೆ. ಹೆಚ್ಚಿನ ವಿವರಗಳಿಗಾಗಿ ಕ.ರಾ.ಮು.ವಿ. ಚಿಕ್ಕಬಳ್ಳಾಪುರ ಪ್ರಾದೇಶಿಕ ಕೇಂದ್ರ, ಸರ್ಕಾರಿ ಪ್ರಥಮ ದರ್ಜೆ (ಒಗಓಅಖಕಂಐ) ಕಾಲೇಜು ಎಂ.ಜಿ ರಸ್ತೆ, ಚಿಕ್ಕಬಳ್ಳಾಪುರ ದೂರವಾಣಿ ಸಂಖ್ಯೆ :9164300299, 9535339498, 9448860885 ಗಳನ್ನು ಸಂಪರ್ಕಿಸಬಹುದು ಎಂದು ಪ್ರಾದೇಶಿಕ ನಿರ್ದೇಶಕರಾದ ಹೆಚ್. ಸುರೇಶ್ ತಿಳಿಸಿದ್ದಾರೆ.

# ವಿದ್ಯುತ್ ವ್ಯತ್ಯಯ

**ಕೋಲಾರ:** 220 ಕೆವಿ ವಿದ್ಯುತ್ ಸ್ವೀಕರಣಾ ಕೇಂದ್ರ ಕೋಲಾರದಿಂದ ಹೊರ ಹೋಗುವ ಎಫ್-13 ಮಹಾಲಕ್ಷ್ಮೀ ಲೇಔಟ್ ಮಾರ್ಗದ ಹೆಚ್ಚುವರಿ ಪರಿವರ್ತಕ ಅಳವಡಿಸುವ ಕಾಮಗಾರಿಯು ಪ್ರಗತಿಯಲ್ಲಿದ್ದು, ಈ ಕಾಮಗಾರಿ ಮಾಡುವ ಸಂದರ್ಭದಲ್ಲಿ ಎಫ್-13 ಮಹಾಲಕ್ಷ್ಮೀ ಲೇಔಟ್ ಫೀಡರ್‌ನ ಮಾರ್ಗಗಳಿಂದ ವಿದ್ಯುತ್ ಸರಬರಾಜಾಗುವ ಕೀಲುಕೋಟೆ ?ಾಹಿನ ?ಾನಗರ, ಖಾದ್ರಿಪುರ, ವಿಭೂತಿಪುರ, ಅನ್ಸಾರಿ ಮೊಹಲ್ಲಾ, ತಶೀಂಶಾ ನಗರ, ಅಂತರಗಂಗೆರಸ್ತೆ, ಸುಲ್ತಾನ ತಿಪ್ಪಸಂದ್ರ. ವಿಶಾಲ್ ಮಾರ್ಟ್ ಸುತ್ತಮುತ್ತಲ ಪ್ರದೇಶಗಳ ಗ್ರಾಹಕರಿಗೆ ಫೆಬ್ರವರಿ 19 ಬುಧವಾರ ರಂದು ಬೆಳಿಗ್ಗೆ 10:30 ಸಂಜೆ 05:00 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಈ ವಿದ್ಯುತ್ ಸಂದರ್ಭದಲ್ಲಿ ಗ್ರಾಹಕರು ಬೆವಿಕಂ ಜೊತೆ ಸಹಕರಿಸಬೇಕೆಂದು ಕೋಲಾರ ನಗರ ಬೆ.ವಿ.ಕಂ ಕಾರ್ಯ ಮತ್ತು ಪಾಲನಾ ಉಪ-ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೇವಾಲಯಗಳ ಜೀರ್ಣೋದ್ದಾರಗೊಳಿಸಿ

**ವಿಜಯಪುರ:** ನಮ್ಮ ಪುರಾತನವಾದ ದೇವಾಲಯಗಳನ್ನು ಜೀರ್ಣೋದ್ದಾರ ಗೊಳಿಸುವುದರೊಂದಿಗೆ ಭವಿಷ್ಯದ ನಮ್ಮ ಯುವ ಜನಾಂಗದಲ್ಲಿ ಸಂಸ್ಕೃತಿ, ಸಂಸ್ಕಾರಗಳು ಬೆಳೆಯುವಂತೆ ಮಾಡಲು ಸಾಧ್ಯವಾಗುತ್ತದೆ ಎಂದು ಪುರಸಭಾ ಮಾಜಿ ಅಧ್ಯಕ್ಷ ಎಮ್ ಸತೀಶ್ ಕುಮಾರ್ ತಿಳಿಸಿದರು.

ಅವರು ಮಂಗಳವಾರದಂದು ಪಟ್ಟಣದ ಗಾಂಧಿ ಚೌಕದ ಬಳಿ ಇರುವ 1960ರಲ್ಲಿ ಕೀರ್ತಿ ಶೇಷ ಕೆ ಸಿ ಬಸಪ್ಪ ರವರು ಪ್ರತಿಷ್ಠಾಪಿಸಿ, ವರನಟ ಡಾ. ರಾಜಕುಮಾರ್ ರವರು ಉದ್ಘಾಟಿಸಿದ ನವಗ್ರಹಗಳ ದೇವಾಲಯದ, 15ನೇ ವರ್ಷದ ಜೀರ್ಣೋದ್ಧಾರ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು.

ಮಹಾಂತಿನ ಮಠದ ಕಾರ್ಯದರ್ಶಿ ವಿ ವಿಶ್ವನಾಥ್ ಮಾತನಾಡಿ 1960ರಲ್ಲಿ ಪ್ರಾರಂಭಗೊಂಡ ದೇವಾಲಯವನ್ನು ಚಲನಚಿತ್ರ ನಿರ್ಮಾಪಕರಾದ ಕೆ.ಸಿ ಬಸಪ್ಪ ರವರು ನಿರ್ಮಿಸಿದ್ದು ಡಾ. ರಾ ರಾಜಕುಮಾರ್ ರವರಿಗೆ ಚಿತ್ರರಂಗದ ಅವರ ಇತಿಹಾಸದಲ್ಲಿ ಪ್ರಪ್ರಥಮ ಬಾರಿಗೆ ವಿಜಯಪುರದಲ್ಲೇ ಸನ್ಮಾನ ನಡೆಸಿದ್ದೆಂದು ರಾಜಕುಮಾರ ನೆನಪಿಸಿಕೊಳ್ಳುತ್ತಿದ್ದನ್ನ ತಿಳಿಸಿ, ನಂತರ 1985 ರಲ್ಲಿ 25ನೇ ವರ್ಷದ ವಾರ್ಷಿಕೋತ್ಸವ ಕಾರ್ಯಕ್ರಮಕ್ಕೂ ಡಾ. ರಾಜಕುಮಾರ ಆಗಮಿಸಿದ್ದುದನ್ನು ನೆನಪಿಸಿಕೊಂಡರು.

ದೇವಾಲಯದಲ್ಲಿ ಬೆಳಗಿನಿಂದಲೇ ನವಗ್ರಹ ಸ್ವಾಮಿ ರವರುಗಳಿಗೆ ಪಂಚಾಮೃತ ಅಭಿಷೇಕದಿಂದ ಪ್ರಾರಂಭಿಸಿ ವಿಶೇಷ ಹೂವಿನ ಅಲಂಕಾರ, ಮಹಾಮಂಗಳಾರತಿ, ಅನ್ನ ಸಂತರ್ಪಣೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.

ಈ ಸಂದರ್ಭದಲ್ಲಿ ಬೆಂಗಳೂರಿನ ಎ ಎಸ್ ವಿ ಎನ್ ವಿ ಸಂಘದ ಖಜಾಂಚಿ ಶಂಕರ್, ಪ್ರಗತಿ ಶಿಕ್ಷಣ ಸಂಸ್ಥೆಗಳ ಆಡಳಿತ ನಿರ್ದೇಶಕರಾದ ಕೃಪಾ ಶಂಕರ್, ಟ್ರಸ್ಟಿಗಳಾದ ಶಾಂತಲಾ ಶಂಕರ್, ಭಾವನ, ಸುಧಾ ಸತೀಶ್, ಕೆಸಿ ಬಸಪ್ಪ ರವರ ಕುಟುಂಬದ ನಟರಾಜ್, ಪರಮೇಶ್, ಮಹಾದೇವಿ, ಮಹಾಂತಿನ ಮಠದ ನಿರ್ದೇಶಕರುಗಳು, ಮಾಜಿ ನಿರ್ದೇಶಕರುಗಳು,ಮತ್ತಿರರುಗಳು ಭಾಗವಹಿಸಿದ್ದರು.



ಕರ್ನಾಟಕ ಸರ್ಕಾರ
ಜಿಲ್ಲಾ ಪಂಚಾಯತ್, ಚಾಮರಾಜನಗರ, (ಆಯುಷ್ ಇಲಾಖೆ)

## ಜಿಲ್ಲಾ ಆಯುಷ್ ಕಛೇರಿ

ಕೊ.ಸಂ: 304, 3ನೇ ಮಹಡಿ, ಜಿಲ್ಲಾಡಳಿತ ಭವನ, ಚಾಮರಾಜನಗರ-571313.
ಕಚೇರಿ ದೂರವಾಣಿ : ನಂ.08226-222563, ಇಮೇಲ್-dao.chamarajanagar19@gmail.com
ಸಂ/ಜಿಆಕಚಾ/ಔ.ಖರೀದಿ/2024-25
ದಿನಾಂಕ:17-02-2025

### ಟೆಂಡರ್ ಪ್ರಕಟಣೆ

2024-25ನೇ ಸಾಲಿಗೆ ಜಿಲ್ಲಾ ಆಯುಷ್ ಕಛೇರಿ, ಚಾಮರಾಜನಗರ ಆಡಳಿತ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಆಯುಷ್ ಆಸ್ಪತ್ರೆ/ಚಿಕಿತ್ಸಾಲಯಗಳಲ್ಲಿ ಅಗತ್ಯವಾಗಿ ಬೇಕಾದ ಆಯುರ್ವೇದ/ಯುನಾನಿ ಔಷಧಿಗಳನ್ನು ಖರೀದಿಸುವ ಸಂಬಂಧ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ನಿಯಮ 2000ರನ್ವಯ ಇ-ಪ್ರಕ್ಯೂರ್‌ಮೆಂಟ್ ಟೆಂಡರ್ ಕರೆಯಲಾಗಿದೆ. ಟೆಂಡರ್ ವಿವರಗಳನ್ನು ವೆಬ್ http.www.eproc.karnataka.gov.in ಇದರಲ್ಲಿ ನೋಡುವುದು.

ಆದ್ದರಿಂದ ಟೆಂಡರ್ ದಾಖಲಾತಿಗಳನ್ನು ಇ-ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡುವ ದಿನಾಂಕ 17-02-2025ರಿಂದ ಇ-ಪೋರ್ಟಲ್‌ನಲ್ಲಿ ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ 24-02-2025ರಂದು ಸಂಜೆ 5.00 ಗಂಟೆ ಆಗಿರುತ್ತದೆ. ಟೆಂಡರ್ ಅಂದಾಜು ಮೌಲ್ಯ ರೂ.17,85,000/-ಗಳು ಮತ್ತು ಇ.ಎಂ.ಡಿ. ರೂ.44,625/-ಗಳನ್ನು ನಿಗದಿಪಡಿಸಿದೆ. ಮತ್ತು ತಾಂತ್ರಿಕ ಬಿಡ್ ತೆರೆಯುವ ದಿನಾಂಕ: 27-02-2025ರಂದು ಪೂರ್ವಾಹ್ನ 11.00 ಗಂಟೆ ಆಗಿರುತ್ತದೆ. ಹೆಚ್ಚಿನ ವಿವರಗಳನ್ನು ಕಛೇರಿ ವೇಳೆಯಲ್ಲಿ ಜಿಲ್ಲಾ ಆಯುಷ್ ಅಧಿಕಾರಿಗಳ ಕಛೇರಿ, ನಂ. 304, 3ನೇ ಮಹಡಿ, ಜಿಲ್ಲಾಡಳಿತ ಭವನ, ಚಾಮರಾಜನಗರ ಇವರನ್ನು ಸಂಪರ್ಕಿಸಬಹುದಾಗಿದೆ.

ಜಿಲ್ಲಾ ಆಯುಷ್ ಅಧಿಕಾರಿ
ಚಾಮರಾಜನಗರ
ಚಾಮರಾಜನಗರ ಜಿಲ್ಲೆ-571313

ಸಂ: ವಾಸಾಸಂಇ: ಚಾನಗರ:629:2024-25

## ಕಟ್ಟಡ, ನಿವೇಶನ ಮಾಲೀಕರು ನಮೂನೆ-3, ನಮೂನೆ-3ಎ ಪಡೆದುಕೊಳ್ಳಲು ಸೂಚನೆ

**ಚಾಮರಾಜನಗರ:** ಗುಂಡ್ಲುಪೇಟೆ ಪುರಸಭಾ ವ್ಯಾಪ್ತಿಯಲ್ಲಿ ಕಟ್ಟಡಗಳು, ನಿವೇಶನಗಳನ್ನು ಹೊಂದಿರುವ ಆಸ್ತಿ ಮಾಲೀಕರು, ಅನುಭೋಗದಾರರು ಸರ್ಕಾರದ ಅಧಿಸೂಚನೆಯಂತೆ ಗಣಕೀಕೃತ ನಮೂನೆ-3 ಮತ್ತು ನಮೂನೆ-3ಎ ಯನ್ನು ಪಡೆದುಕೊಳ್ಳುವಂತೆ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ. ಸರ್ಕಾರದ ಅಂತಿಮ ಅಧಿಸೂಚನೆ ಅನ್ವಯ ಎಲ್ಲಾ ರೀತಿಯ ಕಟ್ಟಡ ನಿವೇಶನಗಳಿಗೆ ಆಸ್ತಿ ತೆರಿಗೆ ನಿರ್ಧರಣೆಗೊಳಿಸಿ ಆಸ್ತಿ ತೆರಿಗೆಯನ್ನು 2024-25ನೇ ಸಾಲಿನ ಅಂತ್ಯದವರೆಗೆ ಪೂರ್ಣ ಪ್ರಮಾಣದಲ್ಲಿ ಪಾವತಿಸಿಕೊಂಡು ಸಂಬಂಧಪಟ್ಟ ಆಸ್ತಿ ಮಾಲೀಕರಿಂದ ಅವಶ್ಯಕ ದಾಖಲಾತಿಗಳನ್ನು ಪಡೆದು, ಕರ್ನಾಟಕ ಪೌರಸಭೆಗಳ ಅಧಿನಿಯಮದ 1964ರ ಸೆಕ್ಷನ್ 106 (1ಬಿ)() ಅನ್ವಯ ರಿಜಿಸ್ಟರ್-ಎ ನಲ್ಲಿ (ನಮೂನೆ-3) ಅಧಿಕೃತ ಸ್ವತ್ತುಗಳು ಹಾಗೂ ರಿಜಿಸ್ಟರ್-ಬಿ ನಲ್ಲಿ (ನಮೂನೆ-3ಎ) ಅನಧಿಕೃತ ಸ್ವತ್ತುಗಳ ಮಾಹಿತಿಯುಳ್ಳ ವಹಿಯನ್ನು ನಿರ್ವಹಿಸಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ಪುರಸಭೆ ವ್ಯಾಪ್ತಿಯೊಳಗೆ ಬರುವ ಸರ್ಕಾರಿ ಜಾಗ, ಅರೆಸರ್ಕಾರಿ, ಸ್ಥಳೀಯ ಸಂಸ್ಥೆಗಳ ಒಡೆತನದಲ್ಲಿರುವ ಸ್ವತ್ತುಗಳನ್ನು ಹೊರತುಪಡಿಸಿ ಇನ್ನುಳಿದ ಕಟ್ಟಡಗಳ ನಿವೇಶನಗಳ ಮಾಲೀಕರು ತಮ್ಮ ಆಸ್ತಿಗಳಿಗೆ ಸಂಬಂಧಿಸಿದ ಪೂರಕ ನೋಂದಾಯಿತ ದಾಖಲೆ ಪತ್ರಗಳು, ಸ್ವತ್ತಿನ ಭಾವಚಿತ್ರ, ಮಾಲೀಕರ ಫೋಟೋ, ನಮೂನೆ-15 (ಇಸಿ), ಕೆ.ಇ.ಬಿ ಬಿಲ್, ಕುಡಿಯುವ ನೀರಿನ ಬಿಲ್, ಕಟ್ಟಡ ಪರವಾನಗಿ ಮತ್ತು ಅನುಮೋದಿತ ನಕ್ಷೆ, ಏಕ ನಿವೇಶನ ವಿನ್ಯಾಸ ಅನುಮೋದನೆ ಅಥವಾ ಅನುಮೋದಿತ ಬಡಾವಣೆಯ ನಕ್ಷೆ, ಅಲಿನೇಷನ್ ನಕಲು ಪ್ರತಿ ಆರ್.ಟಿಸಿ ಮ್ಯೂಟೇಶನ್ ನಕಲು ಪ್ರತಿ, ಮಾಲೀಕರ ಆಧಾರ್ ಕಾರ್ಡ್ ಪ್ರತಿ, ಪಾನ್ ಕಾರ್ಡ್ ಪ್ರತಿ ಅಥವಾ ಚುನಾವಣಾ ಗುರುತಿನ ಚೀಟಿ ಹಾಗೂ ಇತರೆ ಅವಶ್ಯಕ ದಾಖಲಾತಿಗಳನ್ನು ಪುರಸಭಾ ಕಚೇರಿಗೆ ಸಲ್ಲಿಸಿ ಸ್ವತ್ತಿಗೆ ಸಂಬಂಧಪಟ್ಟ ಆಸ್ತಿ ತೆರಿಗೆಯನ್ನು ಪಾವತಿಸಬೇಕು. ಆಸ್ತಿಯನ್ನು ಗಣಕೀಕರಿಸಿಕೊಂಡು ನಮೂನೆ-3, ನಮೂನೆ-3ಎ ಗಳನ್ನು ಪಡೆದುಕೊಂಡು ನೋಂದಾಯಿತ ಕಚೇರಿಯಲ್ಲಿ ಕ್ರಯ ಪತ್ರ, ದಾನ ಪತ್ರ, ವಿಭಾಗ ಪತ್ರ, ಹಕ್ಕು ಖುಲಾಸೆ ಹಾಗೂ ಇತರೆ ದಾಖಲೆ ಪತ್ರಗಳನ್ನು ನೊಂದಣಿ ಮಾಡಿಸಿಕೊಂಡು ಸದುಪಯೋಗ ಮಾಡಿಕೊಳ್ಳುವ ಅವಕಾಶ ಪಡೆಯಬಹುದಾಗಿರುತ್ತದೆ. ಸರ್ಕಾರದ ಅಧಿಸೂಚನೆಯಂತೆ ಗಣಕೀಕೃತ ನಮೂನೆ-3 ಮತ್ತು ನಮೂನೆ-3ಎ ರನ್ನು ಪಡೆದುಕೊಳ್ಳಬೇಕು. ತಪ್ಪಿದಲ್ಲಿ ಸಂಬಂಧಪಟ್ಟ ಆಸ್ತಿ ಮಾಲೀಕರಿಗೆ ನಿಯಮ 10ಎ ರಂತೆ ನಿಯಮಾನುಸಾರ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಪುರಸಭೆ ಮುಖ್ಯಾಧಿಕಾರಿಗಳು, ಕಂದಾಯಾಧಿಕಾರಿ, ಕಂದಾಯ ಶಾಖೆಯ ಸಿಬ್ಬಂದಿಯನ್ನು ಸಂಪರ್ಕಿಸಬಹುದು. ಮೊ. ಸಂ 8861323068, 7975302924, 9945295054 ಸಂಪರ್ಕಿಸುವಂತೆ ಗುಂಡ್ಲುಪೇಟೆ ಪುರಸಭೆ ಅಧ್ಯಕ್ಷರು ಹಾಗೂ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಲೂಕು ಮಟ್ಟದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಹಿತರಕ್ಷಣಾ ಸಮಿತಿ ಸಭೆ

**ಚಾಮರಾಜನಗರ:** ಚಾಮರಾಜನಗರ ತಾಲೂಕು ಮಟ್ಟದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಹಿತರಕ್ಷಣಾ ಸಮಿತಿ ಸಭೆಯು ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ಫೆಬ್ರವರಿ 20ರಂದು ಬೆಳಿಗ್ಗೆ 11 ಗಂಟೆಗೆ ಚಾಮರಾಜನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

## ಸಲಹೆ/ಸೂಚನೆ ಮತ್ತು ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

**ಚಿಕ್ಕಬಳ್ಳಾಪುರ:** ಸರ್ಕಾರದ ಅಧಿಸೂಚನೆ ಸಂಖ್ಯೆ ವನಇ 465 ಟಿಟಿಪಿ 92 ದಿನಾಂಕ:02.03.1993 ರಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 4(ಎ) ರನ್ವಯ ಚಿಂತಾಮಣಿ ಪಟ್ಟಣಕ್ಕೆ ಸ್ಥಳೀಯ ಯೋಜನಾ ಪ್ರದೇಶವೆಂದು ಘೋಷಿಸಲಾಗಿದ್ದು ಹಾಗೂ ಸದರಿ ಕಾಯ್ದೆ 1961 ಕಲಂ 2(7)ಬಿ ರಡಿ ಚಿಂತಾಮಣಿ ಸ್ಥಳೀಯ ಯೋಜನಾ ಪ್ರದೇಶವಾಗಿ ಕಾರ್ಯ ನಿರ್ವಹಿಸಲು ಆದೇಶಿಸಲಾಗಿರುತ್ತದೆ. ಸರ್ಕಾರದ ಅಧಿಸೂಚನೆ ಸಂಖ್ಯೆ ವನಇ 261 ಬೆಂರೂಪಾ 2024 ದಿನಾಂಕ:27.11.2024 ರಲ್ಲಿ ಚಿಂತಾಮಣಿ ಪಟ್ಟಣ ಒಳಗೊಂಡಂತೆ ಸ್ಥಳೀಯ ಯೋಜನಾ ಪ್ರದೇಶದ 10 ಗ್ರಾಮಗಳನ್ನು ಹಾಗೂ 99 ಪೂರ್ಣ ಕಂದಾಯ ಗ್ರಾಮಗಳು ಮತ್ತು 1 ಭಾಗಶ: ಗ್ರಾಮವನ್ನು ಸೇರಿಸಿಕೊಂಡು ಪರಿಷ್ಕೃತ ಸ್ಥಳೀಯ ಯೋಜನಾ ಪ್ರದೇಶವೆಂದು ಘೋಷಿಸಲಾಗಿರುತ್ತದೆ. ಆದ್ದರಿಂದ ಪರಿಷ್ಕೃತ ಸ್ಥಳೀಯ ಯೋಜನಾ ಪ್ರದೇಶದ ಅಭಿವೃದ್ಧಿಗಳನ್ನು ನಿಯಂತ್ರಿಸಲು ಹಾಗೂ ಯೋಜನಾ ಬದ್ಧ ಬೆಳವಣಿಗೆಗಾಗಿ ಪ್ರದೇಶಕ್ಕೆ ಮಹಾಯೋಜನೆಯನ್ನು ತಯಾರಿಸುವುದು ಅವಶ್ಯಕವಾಗಿರುತ್ತದೆ. ಈ ಹಿನ್ನಲೆಯಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 10 (1) ರಂತೆ ಚಿಂತಾಮಣಿ ಪರಿಷ್ಕೃತ ಸ್ಥಳೀಯ ಯೋಜನಾ ಪ್ರದೇಶಕ್ಕೆ ಮಹಾಯೋಜನೆ ತಯಾರಿಸುವ ಇಚ್ಛೆಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ದಿನಾಂಕ: 11.02.2025 ರ ಭಾಗ-3 ರಲ್ಲಿ ಪ್ರಕಟಿಸಿದ್ದು, ಪ್ರಕಟಣೆಗೊಂಡ, ದಿನಾಂಕದಿಂದ 60 ದಿನಗಳೊಳಗಾಗಿ ಸಾರ್ವಜನಿಕರು ಈ ಪರಿಷ್ಕೃತ ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ಪ್ರದೇಶಗಳಿಗೆ ಸಂಬಂಧಿಸಿದಂತೆ ಯಾವುದಾದರೂ ಸಲಹೆ/ಸೂಚನೆ ಮತ್ತು ಆಕ್ಷೇಪಣೆಗಳಿದ್ದಲ್ಲಿ ಖುದ್ದಾಗಿ ಅಥವಾ ಅಂಚೆ ಮೂಲಕ ಸದಸ್ಯ ಕಾರ್ಯದರ್ಶಿಗಳು, ಚಿಂತಾಮಣಿ ಯೋಜನಾ ಪ್ರಾಧಿಕಾರ, ಅಂಜನಿ ಬಡಾವಣೆ, ಪಂಪ್ ಹೌಸ್ ಹಿಂಭಾಗ, ಬೆಂಗಳೂರು ರಸ್ತೆ, ಚಿಂತಾಮಣಿ ರವರಿಗೆ ಸಲ್ಲಿಸತಕ್ಕದ್ದು. 60 ದಿನಗಳ ನಂತರ ಬಂದಂತಹ ಸಲಹೆ/ಸೂಚನೆ ಮತ್ತು ಆಕ್ಷೇಪಣೆಗಳನ್ನು ಸ್ವೀಕರಿಸಲಾಗುವುದಿಲ್ಲ ಎಂದು ಚಿಂತಾಮಣಿ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಜಿಲ್ಲಾಧಿಕಾರಿ ಡಾ.ಎಂ.ಆರ್ ರವಿ ಮಾಹಿತಿ**

# ಮೈಕ್ರೋ ಫೈನಾನ್ಸ್ ಹಾವಳಿಗೆ ರಾಜ್ಯ ಸರ್ಕಾರ ಆದೇಶ ಜಾರಿ

**ಕೋಲಾರ:** ಮೈಕ್ರೋ ಫೈನಾನ್ಸ್ ಹಾವಳಿಗೆ ಅನೇಕ ಕುಟುಂಬಗಳು ಸಂಕಷ್ಟದಲ್ಲಿ ಸಿಲುಕಿಕೊಂಡಿದ್ದಾರೆ ಅವರಿಗೆ ಮುಕ್ತಿ ನೀಡುವ ಸಲುವಾಗಿ ರಾಜ್ಯ ಸರ್ಕಾರ ಮಹತ್ವದ ಅಧ್ಯಾದೇಶ ಜಾರಿಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ ಅವರು ತಿಳಿಸಿದರು.



ಇಂದು ಜಿಲ್ಲಾಧಿಕಾರಿಗಳ ನ್ಯಾಯಾಂಗ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ, ಕಿರುಸಾಲ ಹಾಗೂ ಸಣ್ಣ ವ್ಯವಹಾರಗಳ ಅಧ್ಯಾದೇಶ ಜಾರಿ ಕುರಿತ ಸುದ್ದಿಘೋಷ್ಠಿಯಲ್ಲಿ ಅವರು ಮಾತನಾಡುತ್ತಿದ್ದರು. ಈ ಅಧ್ಯಾದೇಶವು ಜಾರಿಯಾದ 30 ದಿನಗಳ ಒಳಗೆ ಮೈಕ್ರೋ ಫೈನಾನ್ಸ್ ಹಾಗೂ ಲೇವಾದೇವಿ ಸಂಸ್ಥೆಗಳು ಕಡ್ಡಾಯ ನೊಂದಣಿ ಮಾಡಿಕೊಳ್ಳಬೇಕು. ನಮ್ಮ ಕೋಲಾರ ಜಿಲ್ಲೆಯಲ್ಲಿ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಆಸ್ತಿ ಜಪ್ತಿ ಮನೆಗಳ ಜಪ್ತಿ ಸೇರಿದಂತೆ ಮನೆಗಳ ಮೇಲೆ ನೋಟಿಸ್ ಅಂಟಿಸುವುದು. ಮುಂತಾದ ಇಂತಹ ಪ್ರಕರಣಗಳು ಕಂಡು ಬಂದಿಲ್ಲ ಒಂದು ವೇಳೆ ಕಂಡುಬಂದರೆ ಅವರ ವಿರುದ್ಧ ಅಧ್ಯಾದೇಶದಂತೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಸಾಲ ಎಂದರೆ ಯಾವುದೇ ವ್ಯಕ್ತಿಗೆ ನೀಡಲಾದ ಹಣ, ರೈತರನ್ನು ದುರುಪಯೋಗ ಮಾಡಿಕೊಂಡು ನಿಮಗೆ ಸಾಲದ ರೂಪದಲ್ಲಿ ಬೀಜಗಳನ್ನು ವಿತರಿಸುವುದು, ಗೊಬ್ಬರ ಇತರ ವಸ್ತುಗಳ ರೂಪದಲ್ಲಿ ಮುಂಗಡವು ಸಹ ಸಾಲವೇ ಆಗಿದೆ ಹಾಗೂ ಕೈ ಸಾಲವು ಸಹ ಸಾಲವೇ ಎಂದು ಅವರು ತಿಳಿಸಿದರು

ನಮ್ಮ ಜಿಲ್ಲೆಯಲ್ಲಿ ಒಟ್ಟು 17 ಮೈಕ್ರೋ ಫೈನಾನ್ಸ್ ಸಂಸ್ಥೆಗಳು ನೋಂದಣಿ ಮಾಡಿಕೊಂಡಿದ್ದು 98 ಶಾಖೆಗಳನ್ನು ಹೊಂದಿದೆ. ಅದರಲ್ಲಿ 242937 ಜನರು ಸಾಲ ಪಡೆದುಕೊಂಡಿದ್ದಾರೆ ಒಟ್ಟು 1703 ಕೋಟಿ ರೂಪಾಯಿಗಳಷ್ಟು ವಹಿವಾಟು ನಡೆಯುತ್ತಿದೆ ಅದರಲ್ಲಿ ಸಾಲವನ್ನು ಕಟ್ಟದೆ ಇರುವ 28294 ಖಾತೆಗಳಿವೆ ಹಾಗೂ ಖಾಸಗಿ ಲೇವಾದೇವಿದಾರರು ಮತ್ತು ಇತರೆ ಹಣಕಾಸಿನ ವ್ಯವಹಾರಗಳನ್ನು ಮಾಡುವವರು 2674 ಕೋಟಿ ರೂಪಾಯಿಗಳನ್ನು ವ್ಯವಹಾರ ಮಾಡುತ್ತಿರುವುದಾಗಿ ತಿಳಿಸಿದರು.

ಅಧ್ಯಾದೇಶ ಕಾಯ್ದೆಯ ಪ್ರಕಾರ ಮಾರ್ಚ್ 11ರ ಒಳಗೆ ನೊಂದಣಿಯನ್ನು ಮಾಡಿಕೊಳ್ಳಬೇಕಾಗಿದೆ. ಈ ಅಧ್ಯಾದೇಶದಂತೆ ಜಿಲ್ಲಾಧಿಕಾರಿಯನ್ನು ನೊಂದಣಾಧಿಕಾರಿಯಾಗಿ ಮಾಡಲಾಗಿದೆ. ನೋಂದಣಿ ಪರವಾನಿಗೆ ಒಂದು ವರ್ಷಕ್ಕೆ ಮಾತ್ರ ಸೀಮಿತವಾಗಿರುತ್ತದೆ ತದನಂತರ ರಿನಿವಲ್ ಮಾಡಿಕೊಳ್ಳಬೇಕು. ಅಧ್ಯಾದೇಶ ಉಲ್ಲಂಘನೆ ಮಾಡಿದ ಪ್ರಕರಣಗಳಿದ್ದಲ್ಲಿ, ಅಂತಹ ಸಂಸ್ಥೆಗಳ ಪರವಾನಿಗೆ ರದ್ದು ಮಾಡಿ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದು ಎಂದರು.

ಕಿರುಸಾಲ ನೀಡುವ ಸಂಸ್ಥೆಗಳು ನೊಂದಣಿ ಮಾಡಿಕೊಳ್ಳಲು ಕೆಲವು ಅಗತ್ಯ ದಾಖಲೆಗಳನ್ನು ನೀಡಬೇಕಾಗುತ್ತದೆ. ಯಾವುದೇ ಗ್ರಾಹಕರಿಗೆ ಸಾಲ ಕೊಡಬೇಕಾದಲ್ಲಿ, ಬಡ್ಡಿದರವನ್ನು ಸ್ಪಷ್ಟವಾಗಿ ತಿಳಿಸಬೇಕು. ಮರು ಪಾವತಿ ಮಾಡುವಾಗ ತಪ್ಪದೆ ರಶೀದಿ ನೀಡಬೇಕು. ವ್ಯವಹಾರ ಎಲ್ಲವೂ ಕನ್ನಡದಲ್ಲೇ ಕಡ್ಡಾಯವಾಗಿ ಮಾಡಬೇಕು. ನೊಂದಣಿಯಾದ ಸಾಲದ ಅಧಿಕೃತ ಕಚೇರಿ ಜಿಲ್ಲೆಯಲ್ಲಿ ತೆರದಿರಬೇಕು. ನೊಂದಣಿ ಯಾದ ಸಾಲಗಾರ ಕಂಪನಿ ಎಲ್ಲಾ ವಿವರಗಳನ್ನು ಒಳಗೊಂಡಂತೆ ವರ್ಷಕೊಮ್ಮೆ ಜಿಲ್ಲಾಧಿಕಾರಿ ಕಛೇರಿಗೆ ದಾಖಲೆ ಸಲ್ಲಿಸಬೇಕು. ಸಾಲ ವಸೂಲಾತಿಗಾಗಿ ಬಲವಂತದ ಯಾವುದೇ ರೀತಿಯ ಕ್ರಮಗಳನ್ನು ತೆಗೆದುಕೊಳ್ಳಬಾರದು. ಮನೆಗಳ ಬಳಿ ನೋಟಿಸ್, ಜಪ್ತಿ, ಹಾಗೂ ತೊಂದರೆ ಮಾಡಿದರೆ, ಪೊಲೀಸ್ ಇಲಾಖೆಯು ಸ್ವಯಂ ಪ್ರೇರಿತವಾಗಿ ದೂರು ದಾಖಲಿಸಿಕೊಳ್ಳುತ್ತದೆ. ಸದರಿ ಅಧ್ಯಾದೇಶದಲ್ಲಿ ನೇರವಾಗಿ ಎಫ್.ಐ.ಆರ್ ದಾಖಲಿಸುವ ಅಧಿಕಾರವನ್ನು ಪೊಲೀಸ್ ಇಲಾಖೆಗೆ ನೀಡಲಾಗಿದೆ. ಅಧ್ಯಾದೇಶದ ಉಲ್ಲಂಘನೆ ಮಾಡಿದರೆ, 10 ವರ್ಷಗಳ ವರೆಗೆ ಜೈಲುವಾಸ 5 ಲಕ್ಷಗಳ ದಂಡವಿಧಿಸುವ ಅವಕಾಶಗಳಿವೆ ಸಾರ್ವಜನಿಕರಿಗೆ ಕಿರುಕಳ ನೀಡುವ ಫೈನಾನ್ಸ್ ಸಂಸ್ಥೆಗಳ ವಿರುದ್ಧ ಹೆಲ್ಪ್ ಲೈನ್ ಸಂಖ್ಯೆಗೆ ದೂರು ನೀಡಬಹುದಾಗಿದೆ. ಜಿಲ್ಲೆಯಲ್ಲಿ ಈ ಸಂಬಂಧ ಪರಿಶೀಲನಾ ಸಮಿತಿಯನ್ನು ರಚಿಸಲಾಗುತ್ತದೆ. ಈ ಸಮಿತಿಯು ಲೇವಾದೇವಿ ಹಾಗೂ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಮೇಲೆ ನಿಗಾವಹಿಸುತ್ತದೆ. ಈ ಅಧ್ಯಾದೇಶವು ಜಾರಿಯಾದ ದಿನದಿಂದ ಹಿಂದೆ ಯಾವುದೇ ಅನಧಿಕೃತ ಲೇವಾದೇವಿ ವ್ಯಾವಹಾರಗಳು ಜಾರಿಯಲ್ಲಿದ್ದಲ್ಲಿ, ಈ ಅಧ್ಯಾದೇಶವು ಜಾರಿಯಾದ ದಿನದಿಂದ ಅವೆಲ್ಲವನ್ನು ರದ್ದು ಮಾಡಲಾಗಿದೆ ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ನಿಖಿಲ್ ಅವರು ಮಾತನಾಡಿ ಈ ಕಾಯ್ದೆಯ ಅಡಿಯಲ್ಲಿ ನಮಗೆ ಯಾವುದೇ ದೂರುಗಳು ಬಂದರೆ ಪ್ರಾಥಮಿಕ ವರದಿಯನ್ನು ದಾಖಲಿಸಿಕೊಳ್ಳುವ ಅಧಿಕಾರವನ್ನು ಕೊಟ್ಟಿದೆ, ಒಂದು ವೇಳೆ ಗ್ರಾಹಕರು ಬಂದು ದೂರನ್ನು ನೀಡದೆ ಇದ್ದರೆ ಜಿಲ್ಲಾ ಸಮಿತಿಗೆ ಮಾಹಿತಿ ಬಂದರೆ. ಮಾಹಿತಿ ಆಧಾರದ ಮೇಲೆ ಕಾನೂನು ಕ್ರಮ ಕೈಗೊಳ್ಳುತ್ತೇವೆ ಎಂದರು.

ಮೈಕ್ರೋ ಫೈನಾನ್ಸ್ ಸಂಸ್ಥೆಗಳು ನೋಂದಣಿ ಮಾಡಿಕೊಳ್ಳದೆ ಅಕ್ರಮವಾಗಿ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದರೆ, ಅಂತಹ ಪ್ರಕರಣಗಳನ್ನು ತಕ್ಷಣ ಸ್ವಯಂ ಪ್ರೇರಿತ ದೂರು ದಾಖಲಿಸಿ ಹತ್ತು ವರ್ಷಗಳ ಜೈಲು ಶಿಕ್ಷೆ ಮತ್ತು ಐದು ಲಕ್ಷ ರೂಪಾಯಿಗಳನ್ನು ದಂಡ ವಿಧಿಸಲಾಗುವುದು ಎಂದರು.

ಬೇರೆ ರಾಜ್ಯಗಳಿಂದ ಬಂದು ನಮ್ಮ ಭಾಗದಲ್ಲಿ ಹಣಕಾಸಿನ ವ್ಯವಹಾರ ಮಾಡುತ್ತಿದ್ದರೆ, ಅವರಿಗೆ ಯಾವುದೇ ಆಸ್ಪದ ನೀಡದೆ ಸುಮೊಟೊ ಕಾಯ್ದೆಯಡಿ ಪ್ರಕರಣ ದಾಖಲಿಸಿ ಕ್ರಮ ಕೈಗೊಳ್ಳಲಾಗುವುದು. ನಮಗೆ ತಾಂತ್ರಿಕ ಸಾಕ್ಷಗಳು ದೊರೆಯುತ್ತವೆ. ಇಂತಹ ಪ್ರಕರಣಗಳು ಕಂಡುಬಂದಲ್ಲಿ ಸಮೀಪದ ಪೊಲೀಸ್ ಠಾಣೆಗೆ ಹೋಗಿ ದೂರನ್ನು ಸಲ್ಲಿಸಿದರೆ ನಾವು ತಕ್ಷಣ ಅಂತಹವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುತ್ತೇವೆ ಎಂದರು.

ಕೆಜಿಎಫ್ ಪೊಲೀಸ್ ವರಿ?ಾಧಿಕಾರಿ ಶಾಂತರಾಜು ಅವರು ಮಾತನಾಡಿ ಬಲವಂತಕರಣ ಬಗ್ಗೆ ಅಧ್ಯಾದೇಶ ಕಾಯ್ದೆಯಲ್ಲಿ 8ನೇ ಕಲಾಂನಲ್ಲಿ ಸವಿಸ್ತಾರವಾಗಿ ತಿಳಿಸಿದ್ದಾರೆ ಮೈಕ್ರೋ ಫೈನಾನ್ಸ್, ಲೇವಾದೇವಿ ದಾರರು ಯಾವುದೇ ವ್ಯಕ್ತಿಯು ತಿಂಗಳಿಗೆ, ವಾರಕ್ಕೆ, ಬಡ್ಡಿ ವ್ಯವಹಾರ ಮಾಡುವವರು, ವಸ್ತು ಅಥವಾ ಹಣದ ರೂಪದಲ್ಲಿ ಸಾಲವನ್ನು ನೀಡುವವರು ಕಡ್ಡಾಯವಾಗಿ ನೋಂದಣಿ ಮಾಡಿಸಿಕೊಳ್ಳಬೇಕು ಮತ್ತು ಸಾಲದ ವಸೂಲಿಗೆ ತಾವು ಸಿಬ್ಬಂದಿಯನ್ನು ಆಯ್ಕೆ ಮಾಡಿಕೊಳ್ಳುವಾಗ ಅವರಿಗೆ ಪೊಲೀಸ್ ತನಿಖೆಯನ್ನು ಮಾಡಿಸಿ ಯಾವುದೇ ಪ್ರಕರಣಗಳು ಇಲ್ಲದಿರುವುದನ್ನು ಖಚಿತ ಪಡಿಸಿಕೊಂಡು ಆಯ್ಕೆ ಮಾಡಿಕೊಳ್ಳಬೇಕು. ಯಾವುದೇ ಅನಧಿಕೃತ ವ್ಯಕ್ತಿಗಳು ಹೋಗಿ ಸಲವಸೂಲತಿಯನ್ನು ಮಾಡುವಂತಿಲ್ಲ ಮತ್ತು ಕಾಯ್ದೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಸಾರ್ವಜನಿಕರು ಸಹಾಯವಾಣಿ ಸಂ.112 ಯನ್ನು ಬಳಸಿಕೊಂಡು ತಮ್ಮ ದೂರನ್ನು ಸಲ್ಲಿಸಬಹುದು ಎಂದು ತಿಳಿಸಿದರು.

# ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯು ಪರೀಕ್ಷೆ ಸಮರ್ಪಕವಾಗಿರಲಿ

**ಚಾಮರಾಜನಗರ:** ಜಿಲ್ಲೆಯಲ್ಲಿ ಮಾರ್ಚ್ ತಿಂಗಳಲ್ಲಿ ನಡೆಯಲಿರುವ 2024-25ನೇ ಸಾಲಿನ ಎಸ್.ಎಸ್.ಎಲ್.ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷಾ ಕಾರ್ಯವನ್ನು ಸಕಲ ಸಿದ್ದತೆಗಳೊಂದಿಗೆ ಸಮರ್ಪಕವಾಗಿ ನಿರ್ವಹಿಸುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಸೂಚನೆ ನೀಡಿದರು.

ನಗರದ ಜಿಲ್ಲಾಡಳಿತ ಭವನದಲ್ಲಿರುವ ಹಳೇ ಕೆಡಿಪಿ ಸಭಾಂಗಣದಲ್ಲಿಂದು ಎಸ್. ಎಸ್.ಎಲ್.ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆ ಸಂಬಂಧ ನಡೆದ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರು, ಪಿಯು ಕಾಲೇಜುಗಳ ಪ್ರಾಂಶುಪಾಲರು, ಪರೀಕ್ಷಾ ಕಾರ್ಯಕ್ಕೆ ನಿಯೋಜಿತರಾದ ವಿವಿಧ ಇಲಾಖೆಗಳ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪರೀಕ್ಷೆಗಳಿಗೆ ಈಗಾಗಲೇ ವೇಳಾಪಟ್ಟಿ ಬಿಡುಗಡೆ ಮಾಡಲಾಗಿದೆ. ಪರೀಕ್ಷಾ ಕಾರ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಪರೀಕ್ಷಾ ಸಂಬಂಧ ನೀಡಲಾಗಿರುವ ಸೂಚನೆ, ಮಾರ್ಗದರ್ಶನದ ಪ್ರಕಾರ ಕಟ್ಟುನಿಟ್ಟಾಗಿ ಪರೀಕ್ಷೆ ಕೆಲಸ ಮಾಡಬೇಕು ಎಂದರು.

ಶಾಲಾ-ಕಾಲೇಜುಗಳಲ್ಲಿ ಉಳಿದಿರುವ ಸಮಯದಲ್ಲಿ ವಿದ್ಯಾರ್ಥಿಗಳಿಗೆ ಶ್ರಮವಹಿಸಿ ಅಧ್ಯಯನ ಮಾಡಲು ಉತ್ತೇಜಿಸಬೇಕು. ಜಿಲ್ಲೆಗೆ ಉತ್ತಮ ಫಲಿತಾಂಶ ಹಾಗೂ ಉನ್ನತ ಸ್ಥಾನ ಏರಲು ಪೂರಕವಾಗಿರುವಂತೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಬೇಕು. ವಿಶೇಷ ತರಗತಿಗಳ ಮೂಲಕ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಸಜ್ಜುಗೊಳಿಸಬೇಕು ಎಂದು ತಿಳಿಸಿದರು.

ಪರೀಕ್ಷಾ ದಿನಾಂಕಗಳು ಹತ್ತಿರವಾಗುತ್ತಿರುವ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿಯಲ್ಲಿರುವ ಗ್ರಂಥಾಲಯಗಳನ್ನು ಬೆಳಗಿನ ವೇಳೆ ಬೇಗನೆ ತೆರೆಯುವ ಅವಶ್ಯವಿದ್ದಲ್ಲಿ ಸೂಕ್ತ ನಿರ್ದೇಶನ ನೀಡಲಾಗುವುದು. ಪೋಷಕರೊಂದಿಗೆ ಸಂಪರ್ಕದಲ್ಲಿದ್ದು ವಿದ್ಯಾರ್ಥಿಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ತಿಳಿಸಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ಮಾತನಾಡಿ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಜಿಲ್ಲೆ ಗಣನೀಯವಾಗಿ ಸುಧಾರಣೆಯಾಗಬೇಕು. ಎಲ್ಲ ವಿದ್ಯಾರ್ಥಿಗಳು ಮೊದಲ ಪ್ರಯತ್ನದಲ್ಲಿಯೇ ಉತ್ತಮ ಅಂಕಗಳೊಂದಿಗೆ ತೇರ್ಗಡೆಯಾಗಲು ಶಿಕ್ಷಕರು ವಿಶೇಷ ಕಾಳಜಿ ತೆಗೆದುಕೊಂಡು ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಅಣಿಗೊಳಿಸಬೇಕು ಎಂದರು.

ಪರೀಕ್ಷಾ ಕಾರ್ಯಗಳಿಗೆ ಈಗಾಗಲೇ ಎಲ್ಲ ಅಗತ್ಯ ತಂಡಗಳನ್ನು ನಿಯೋಜಿಸಲಾಗಿದೆ. ಪಾರದರ್ಶಕವಾಗಿ ಪರೀಕ್ಷಾ ಕಾರ್ಯ ನಿರ್ವಹಣೆಯಾಗಲಿದೆ. ಪರೀಕ್ಷಾ ಕೇಂದ್ರಗಳಲ್ಲಿ ಎಲ್ಲ ಮೂಲ ಸೌಕರ್ಯಗಳು ಇರಬೇಕು. ಯಾವುದೇ ಸಮಸ್ಯೆಗಳಿದ್ದರೆ ಕೂಡಲೇ ಗಮನಕ್ಕೆ ತರಬೇಕು ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ತಿಳಿಸಿದರು.

ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಮಂಜುನಾಥ ಪ್ರಸನ್ನ, ಶಾಲಾ ಶಿಕ್ಷಣ ಇಲಾಕೆಯ ಉಪನಿರ್ದೇಶಕರಾದ ರಾಮಚಂದ್ರ ರಾಜೇ ಅರಸ್ ಅವರು ಪರೀಕ್ಷಾ ಸಿದ್ದತೆಗಳ ಸಂಬಂಧ ವಿವರ ನೀಡಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಶಿಧರ್, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಂಶುಪಾಲರಾದ ಕಾಶಿನಾಥ್ ಸಭೆಯಲ್ಲಿ ಉಪಸ್ಥಿತರಿದ್ದರು.

# ಗಣಕಿಕೃತ ಆಸ್ತಿ ವಿವರಗಳ ತಿದ್ದುಪಡಿಗೆ ಆವಕಾಶ

**ಕೋಲಾರ:** ನಗರಸಭಾ ವ್ಯಾಪ್ತಿಯೊಳಗೆ ಬರುವ ಸರ್ಕಾರಿ ಜಾಗ/ಅರೆಸರ್ಕಾರಿ/ಸ್ಥಳೀಯ ಸಂಸ್ಥೆಗಳ ಒಡೆತನದಲ್ಲಿರುವ ಸ್ವತ್ತುಗಳನ್ನು ಹೊರತುಪಡಿಸಿ ಇನ್ನುಳಿದ ಕಟ್ಟಡಗಳ/ನಿವೇಶನಗಳ ಮಾಲೀಕರು ನಿಮ್ಮ ನಿಮ್ಮ ಆಸ್ತಿಗಳಿಗೆ ಸಂಬಂಧಿಸಿದ ಪೂರಕ ನೋಂದಾಯಿತ ದಾಖಲೆ ಪತ್ರಗಳು/ಸ್ವತ್ತಿನ ಭಾವಚಿತ್ರ ಮಾಲೀಕರ ಫೋಟೋ/ನಮೂನೆ-15(ಇಸಿ)/ಕೆ.ಇ.ಬಿ ಬಿಲ್/ಕುಡಿಯುವ ನೀರಿನ ಬಿಲ್/ಕಟ್ಟಡ ಪರವಾನಗಿ ಮತ್ತು ಅನುಮೋದಿತ ನಕ್ಷೆ/ಏಕ ನಿವೇಶನ ವಿನ್ಯಾಸ ಅನುಮೋದನೆ ಅಥವಾ ಅನುಮೋದಿತ ಬಡಾವಣೆಯ ನಕ್ಷೆ/ಅಲಿನೇಷನ್ ನಕಲು ಪ್ರತಿ/ಆರ್.ಟಿ.ಸಿ/ಮ್ಯೂಟೇಷನ್ ನಕಲು ಪ್ರತಿ/ಮಾಲೀಕರ ಆಧಾರ್ ಕಾರ್ಡ್ ಪ್ರತಿ/ಮಾಲೀಕರ ಪಾನ್ ಕಾರ್ಡ್ ಪ್ರತಿ ಅಥವಾ ಚುನಾವಣಾ ಗುರುತಿನ ಚೀಟಿ ಹಾಗೂ ಇತರೆ ಅವಶ್ಯಕ ದಾಖಲಾತಿಗಳನ್ನು ನಗರಸಭಾ ಕಛೇರಿಗೆ ಸಲ್ಲಿಸಿ ಸ್ವತ್ತಿಗೆ ಸಂಬಂಧಪಟ್ಟ ಆಸ್ತಿ ತೆರಿಗೆಯನ್ನು ಪಾವತಿಸಿ. ಆಸ್ತಿಯನ್ನು ಗಣಕೀಕರಿಸಿಕೊಂಡು ನಮೂನೆ-3/ ನಮೂನೆ-3ಎಗಳನ್ನು ಪಡೆದುಕೊಂಡು ನೋಂದಾಯಿತ ಕಛೇರಿಯಲ್ಲಿ ಕ್ರಯಪತ್ರ/ದಾನಪತ್ರ/ ವಿಭಾಗಪತ್ರ/ಹಕ್ಕು ಖುಲಾಸೆ ಹಾಗೂ ಇತರೆ ದಾಖಲೆ ಪತ್ರಗಳನ್ನು ನೋಂದಣಿ ಮಾಡಿಸಿಕೊಂಡು ಸದುಪಯೋಗ ಮಾಡಿಕೊಳ್ಳುವ ಅವಕಾಶ ಪಡೆಯಬಹುದಾಗಿರುತ್ತದೆ. ಆದ್ದರಿಂದ ಗಣಕೀಕೃತ ನಮೂನೆ-3 ಮತ್ತು ನಮೂನೆ 3ಎ ರನ್ನು ಪಡೆದುಕೊಳ್ಳುವುದು. ತಪ್ಪಿದ್ದಲ್ಲಿ ಸಂಬಂಧಪಟ್ಟ ಆಸ್ತಿ ಮಾಲೀಕರುಗಳಿಗೆ ನಿಯಮ 10ಎ ರಂತೆ ನಿಯಮಾನುಸಾರ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು ಎಂದು ತಿಳಿಯುವುದು.

ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 9880031006, 9845617122, 9535474035ಯನ್ನು ಅಥವಾ ನಗರಸಭೆಯ ಪೌರಾಯುಕ್ತರು/ಕಂದಾಯಾಧಿಕಾರಿ/ಕಂದಾಯ ಶಾಖೆಯ ಸಿಬ್ಬಂದಿರವರನ್ನು ಸಂಪರ್ಕಿಸಬಹುದು ಎಂದು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರಾಟೆ ಸ್ಪರ್ಧೆಯಲ್ಲಿ ಇಕೋವಾಶಿ ಕರಾಟೆ ಶಾಲೆಯ ವಿದ್ಯಾರ್ಥಿಗಳ ಸಾಧನೆ

**ಕೋಲಾರ:** ತಮಿಳುನಾಡಿನ ತಾರುವಳ್ಳೂರುನಲ್ಲಿ ಇಕೋವಾಶಿ ಕರಾಟೆ ಸಂಸ್ಥೆಯ ವತಿಯಿಂದ ನಡೆದ ರಾಷ್ಟಮಟ್ಟದ ಕರಾಟೆ ಪಂದ್ಯಾವಳಿಯಲ್ಲಿ ಕೋಲಾರದ ಇಕೋವಾಶಿ ಕರಾಟೆ ಶಾಲೆಯ ವಿದ್ಯಾರ್ಥಿಗಳು ಪಾಲ್ಗೊಂಡು ವಿಜೇತರಾಗಿ ಜಿಲ್ಲೆಗೆ ಕೀರ್ತಿ ತಂದಿರುತ್ತಾರೆ. ವಿಜೇತ ವಿದ್ಯಾರ್ಥಿಗಳಾದ ಶಂಕರ ವಿದ್ಯಾಲಯ ಶಾಲೆಯ ಕುಮಾರಿ ಸಂಜಿತಾ ಎನ್, ಸಂಜನಾ ಎನ್, ತೇಜಸ್ ಕುಮಾರ್ ಎ, ಪವನ್ ಕುಮಾರ್ ಎಸ್, ಚಿನ್ಮಯ ಶಾಲೆಯ ಸಾಯಿ ವಿಷ್ಣುರೆಡ್ಡಿ, ನಿತಿನ್ ಗೌಡ, ಮಹಾಂತ್, ಹಿತೇಶ್, ಶ್ರೀ ಚೈತನ್ಯ ಟೆಕ್ನೋ ಶಾಲೆಯ ನಿತ್ಯಾ ಶ್ರೀ, ಚನ್ನೇಗೌಡ ಕಾಲೇಜಿನ ಸಹನಾ ಎಂ, ಹಾಗೂ ಬಂಗಾರಪೇಟೆಯ ಆದರ್ಶ ವಿದ್ಯಾಲಯದ ಶುಭಾಶ್ರೀ ಎಸ್ ಹಾಗೂ ಶಶಾಂಕ್ ವಿಜೇತರಾಗಿದ್ದಾರೆ. ವಿಜೇತ ಮಕ್ಕಳಿಗೆ ಕೋಲಾರ ಜಿಲ್ಲೆಯ ಪರವಾಗಿ ಮತ್ತು ಇದೇ ಕರಾಟೆ ಶಾಲೆಯ ಮುಖ್ಯ ತರಬೇತುದಾರರಾದ ದೀಪಕ್, ಕುರುಬರಹಳ್ಳಿ ಯಲ್ಲಪ್ಪ, ನಾಗರಾಜ್ ಹಾಗೂ ತರಭೇತಿದಾರರಾದ ಧನುಷ್‌ಗೌಡ, ಶಶಿಕುಮಾರ್, ನೆರ್ನಹಳ್ಳಿ ಶ್ರೀನಿವಾಸ್ ಅಭಿನಂದಿಸಿರುತ್ತಾರೆ.




# ಉತ್ತಮ ಆರೋಗ್ಯದಿಂದ ಕಲಿಕೆಗೆ ಸಹಕಾರಿ

**ಹುಳಿಯಾರು:** ಉತ್ತಮ ಆರೋಗ್ಯವಿದ್ದರೆ ಮಾತ್ರ ಕಲಿಕೆಗೆ ಸಹಕಾರಿಯಾಗುತ್ತದೆ. ಮಕ್ಕಳು ಕಲಿಕೆಯ ಜೊತೆಗೆ ಆರೋಗ್ಯದ ಕಡೆಗೂ ಗಮನ ಹರಿಸಬೇಕು ಎಂದು ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಸಾಹಿತಿ ಬಿಳಿಗೆರೆ ಕೃಷ್ಣಮೂರ್ತಿ ತಿಳಿಸಿದರು.



ಹುಳಿಯಾರು ಹೋಬಳಿಯ ಚಿಕ್ಕಬಿದರೆ ಶ್ರೀ ಮಾರುತಿ ಗ್ರಾಮಾಂತರ ಪ್ರೌಢಶಾಲೆಯಲ್ಲಿ ಕಲಿಕೆ ಮತ್ತು ಆರೋಗ್ಯ ವಿಷಯದ ಕುರಿತು ಅವರು ಮಾತನಾಡಿದರು.

ಉತ್ತಮ ಆರೋಗ್ಯಕ್ಕೆ ನೀರು ಅತ್ಯಗತ್ಯವಾಗಿದೆ. ಹೆಚ್ಚಾಗಿ ನೀರು ಕುಡಿಯಿರಿ, ಮಳೆಗಾಲದಲ್ಲಿ ಮಳೆ ನೀರು ಕುಡಿಯಿರಿ, ನಮ್ಮ ಭಾಗದ ಪ್ರಮುಖ ಹಣ್ಣುಗಳಾದ ಮಾವು, ಹಲಸು, ಸೀಬೆ ಹಣ್ಣನ್ನು ಹೆಚ್ಚಾಗಿ ಬಳಸಿ, ಮನೆಯ ಮುಂದೆ ಪಪ್ಪಾಯಿ, ನುಗ್ಗೆ, ಬಳ್ಳಿತರಕಾರಿಗಳನ್ನು ಬೆಳೆದು ಬಳಸುವುದನ್ನು ವೃಢಿಸಿಕೊಳ್ಳಿ. ಸಿರಿ ಧಾನ್ಯಗಳನ್ನು ಹೆಚ್ಚಾಗಿ ಬಳಸಿ ಆರೋಗ್ಯದಿಂದಿರಿ ಎಂದು ಸಲಹೆ ನೀಡಿದರು. ಶಿಕ್ಷಣ ಎಂದರೆ ಶಿಕ್ಷೆಯಲ್ಲ. ಆದರೂ ಶಿಕ್ಷೆ ಕೊಟ್ಟೆ ಕಲಿಸುವುದು ಅನಿವಾರ್ಯವಾಗಿದೆ. ವಿದ್ಯಾರ್ಥಿ ಜೀವನ ಎಂದರೆ ವಿದ್ಯೆ ಕಲಿಯುವುದಷ್ಟೆ. ಆದರೂ ದಮ್ಮಯ್ಯ ದಪ್ಪಯ್ಯ ಕಲಿರಪ್ಪ ಅನ್ನಬೇಕಿದೆ. ಕಲಿಕೆ ಎಂದರೆ ಸರ್ವಾಂಗೀಣ ಬೆಳವಣಿಗೆ ಪೂರವಾಗಿರಬೇಕು. ಆದರೂ ಆಟ, ಹಾಡು, ಡ್ಯಾನ್ಸ್, ಡ್ರಾಯಿಂಗ್, ನಾಟಕಕ್ಕೆ ಬಲವಂತ ಮಾಡಿ ಸೇರಿಸಿಕೊಳ್ಳಬೇಕಿದೆ ಎಂದು ಇಂದಿನ ಶಿಕ್ಷಣದ ಪರಿಸ್ಥಿತಿಯನ್ನು ವಿವರಿಸಿದರು.

ಜ್ಞಾನ ಸಂಪಾದನೆಯಿಂದ ಮಾತ್ರ ಧೈರ್ಯ ಬರಲು ಸಾಧ್ಯ. ಹಾಗಾಗಿ ಪಠ್ಯಕ್ಕೆ ಮಾತ್ರ ಸೀಮಿತವಾಗದೆ ಜ್ಞಾನ ವಿಕಾಸಕ್ಕೆ ಸಹಕಾರಿಯಾಗುವ ದಿನಪತ್ರಿಕೆಗಳನ್ನು ಓದಿ, ಸಾಹಿತ್ಯ ಪುಸ್ತಕಗಳನ್ನು ಓದಿ, ಒಳ್ಳೆಯ ಚಲನಚಿತ್ರಗಳನ್ನು ನೋಡಿ. ಶಾಲೆಯ ಸಭೆ ಸಮಾರಂಭಗಳಲ್ಲಿ ಗಣ್ಯರ ಮಾತುಗಳನ್ನು ಆಲಿಸಿರಿ ಮಾತೃ ಭಾಷೆ ಕನ್ನಡದೊಂದಿಗೆ, ಇಂಗ್ಲೀಷ್, ಹಿಂದಿ ಸೇರಿದಂತೆ ಕಲಿಯಲು ನಿಮಗೆಷ್ಟು ಸಾಧ್ಯವೋ ಅಷ್ಟು ಭಾಷೆಗಳನ್ನು ಕಲಿಯಿರಿ ಎಂದು ಕವಿ ಮಾತು ಹೇಳಿದರು. ಮಾರುತಿ ಗ್ರಾಮಾಂತರ ಪ್ರೌಢಶಾಲೆ ಕಾರ್ಯದರ್ಶಿ ಸಿ.ಪ್ರದೀಪ್, ಆಯುರ್ವೇದ ವೈದ್ಯರಾದ ಡಾ.ಬಸವರಾಜಪಂಡಿತ್, ಶಿಕ್ಷಕರುಗಳಾದ ಉದಯ ಕೃಷ್ಣ, ಶೋಭಾ, ಧರಣೇಶ್, ಮಂಜುನಾಥ್, ನಿಕಿತಾ, ರೇಖಾ ಮತ್ತಿತರರು ಇದ್ದರು.

# ಜನಪರ ಬಜೆಟ್ ಮಂಡಿಸಲು ಕಿರಂಗೂರು ಪಾಪು ಒತ್ತಾಯ

ಮುಂದಿನ ತಿಂಗಳು ಮಾರ್ಚ್ ಮೊದಲ ವಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸುವ ಬಜೆಟ್‌ನಲ್ಲಿ ರೈತಪರ, ಜನಸಾಮಾನ್ಯರ ಪರ, ಎಲ್ಲಾ ತರಹದ ಸಹಕಾರ ಸಂಘದಲ್ಲಿ ಕೃಷಿ ಸಾಲ ಮನ್ನಾ ಮಾಡಬೇಕು ಎಂದು ರಾಜ್ಯ ಸರ್ಕಾರವನ್ನು ಕರ್ನಾಟಕ ರಾಜ್ಯ ರೈತಸಂಘದ ಮುಖಂಡ ಮೋಹನ್‌ಕುಮಾರ್ ಉ॥ ಕಿರಂಗೂರು ಪಾಪು ಒತ್ತಾಯಿಸಿದ್ದಾರೆ.

ರೈತರು ಬೆಳೆದ ಬೆಳೆಗೆ ವೈಜ್ಞಾನಿಕ ಬೆಲೆ ನೀಡಲು ಇದುವರೆಗೂ ಆಳುವ ಸರ್ಕಾರಗಳು ಹಿಂದೇಟು ಹಾಕುತ್ತಾ ಬರುತ್ತಿವೆ. ಬತ್ತ, ರಾಗಿ, ಕಬ್ಬು, ಅಡಿಕೆ, ತೆಂಗು, ಬಾಳೆ, ತರಕಾರಿ, ಹೂವುಗಳು, ರೇಷ್ಮೆ ಇನ್ನಿತರ ರೈತ ಬೆಳೆದ ಬೆಳೆಗಳು ಸೂಕ್ತ ಮಾರುಕಟ್ಟೆಗ್ಗಳಿಲ್ಲದೆ, ಸರ್ಕಾರಗಳು ರೈತರ ಹತ್ತಿರ ನೇರ ಖರೀದಿ ಮಾಡದೆ ದಲ್ಲಾಳಿಗಳು-ಕಾರ್ಪೋರೇಟ್ ಕಂಪನಿಗಳ ಕಪಿಮುಷ್ಠಿಗೆ ಸಿಲುಕಿಕೊಂಡಿರುವ ರೈತರು, ಬೆಳೆಗಾರರು ವಂಚನೆಗೊಳಗಾಗುತ್ತಿದ್ದಾರೆ. ಆಯಾಯ ಜಿಲ್ಲಾ, ತಾಲ್ಲೂಕು ಕೇಂದ್ರಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆದು ನೇರ ಖರೀದಿಗೆ ಮುಂದಾಗಬೇಕು. ದಲ್ಲಾಳಿಗಳು, ಕಾರ್ಪೋರೇಷನ್ ಕಂಪನಿಗಳಿಗೆ ಆಸ್ಪದ ನೀಡದೆ ಬೆಳೆಗಳಿಗೆ ವೈಜ್ಞಾನಿಕ ದರ ನಿಗದಿಗೊಳಿಸಬೇಕೆಂದು ಒತ್ತಾಯಿಸಿದ್ದಾರೆ.

ಸರ್ಕಾರಗಳು ಬೆಳೆಗಳನ್ನು ಬೆಳೆದ ರೈತರಿಗೆ ರಾಷ್ಟ್ರೀಯ-ಅಂತಾರಾಷ್ಟ್ರೀಯ ಮಾರುಕಟ್ಟೆಯನ್ನು ಕಲ್ಪಿಸಿ, ಜಿಲ್ಲಾ-ತಾಲ್ಲೂಕು ಮಟ್ಟದ ಕಾಳುಗಳು, ಹಣ್ಣು, ತರಕಾರಿ, ಹೂವು ಇನ್ನಿತರ ಸುರಕ್ಷತೆಗಾಗಿ ಕೋಲ್ಡ್ ಸ್ಟೋರೇಜ್ ನಿರ್ಮಾಣ ಮಾಡುವಂತೆ ಹಾಗೂ ಡಾ.ಸ್ವಾಮಿನಾಥನ್ ವರದಿ ಜಾರಿಗೆ, ಮೇಕೆದಾಟು ಯೋಜನೆ ಹಾಗೂ ಮಹಾದಾಹಿ ಯೋಜನೆಗಳನ್ನು ಕೂಡಲೇ ಜಾರಿಗೊಳಿಸಲು ಕೇಂದ್ರಸರ್ಕಾರದ ಮೇಲೆ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯದ ಸಂಸದರು, ಶಾಸಕರು ಒತ್ತಡ ಹೇರಬೇಕು ಎಂದು ಒತ್ತಾಯಿಸಿದ್ದಾರೆ.

ರಾಸಾಯನಿಕ ಗೊಬ್ಬರಗಳು, ಕೃಷಿ ಕಾರ್ಮಿಕರ ಸಮಸ್ಯೆ, ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಲು ಕಡುಗೂಲಿ, ಒಡಗೂಲಿ ಹೆಚ್ಚಳವಾಗಿರುವುದರಿಂದ ಹಾಗೂ ಸರಿಯಾದ ರೀತಿಯಲ್ಲಿ ಇಳುವರಿ ಸಮಸ್ಯೆ, ದಿನದಿಂದ ದಿನಕ್ಕೆ ಮಣ್ಣು ಫಲವತ್ತತೆಯನ್ನು ಕಳೆದುಕೊಳ್ಳುತ್ತಿರುವುದರಿಂದ ರೈತರು ಆತಂಕಕ್ಕೊಳಗಾಗಿದ್ದಾರೆ. ರೈತರು ಕಷ್ಟಪಟ್ಟ ಅಲ್ಪಸ್ವಲ್ಪ ಬೆಳೆದ ಬೆಳೆಗಳಿಗೆ ವೈಜ್ಞಾನಿಕ ಬೆಲೆ ನೀಡದೆ ಸರ್ಕಾರಗಳು ವಂಚಿಸುತ್ತಾ ಬರಲಾಗುತ್ತಿದೆ. ವರ್ಷದ ಬೆಳೆಯನ್ನೇ ನಂಬಿಕೊಂಡ ರೈತರು ಸಾಲಕ್ಕೆ ಬಡ್ಡಿ, ಮಕ್ಕಳ ವಿದ್ಯಾಭ್ಯಾಸ, ಹಬ್ಬ-ಹರಿದಿನಗಳು, ಆರೋಗ್ಯ, ಮದುವೆಮುಂಜಿಗಳು ಸರಿದೂಗಿಸಿಕೊಂಡು ಹೋಗಬೇಕಾದ ರೈತರು ಸಾಲಸೋಲ ಮಾಡಿ, ಚಿನ್ನಾಭರಣವನ್ನು ಗಿರವಿ ಇಟ್ಟು, ಬೆಳೆದ ಬೆಳೆಗೆ ಬೆಲೆಯಿಲ್ಲದೆ ಕಂಗಾಲಾಗಿದ್ದಾರೆ. ಖಾಸಗಿ, ಲೇವಾದೇವಿದಾರರಿಗೆ ಬಡ್ಡಿಕಟ್ಟಲು ಆಗದೇ, ರಾಷ್ಟ್ರೀಕೃತ -ಸಹಕಾರಿ ಬ್ಯಾಂಕ್‌ಗಳಿಂದ ಸಾಲದ ನೋಟಿಸ್‌ಗೆ ಹೆದರಿ ಆತ್ಮಹತ್ಯೆ ದಾರಿಹಿಡಿಯುತ್ತಿದ್ದಾರೆ. ಇಂಥ ಸಂದರ್ಭದಲ್ಲಿ ಸರ್ಕಾರಗಳು ಬೆಳೆ ಬೆಳೆಯಲು ಕೈಗೆಟುಕುವ ದರದಲ್ಲಿ ಗೊಬ್ಬರ, ಪರಿಕರಗಳನ್ನು ಒದಗಿಸಿಕೊಡಬೇಕು. ರೈತರ ಬೆಳೆಗೆ ವೈಜ್ಞಾನಿಕ ಬೆಲೆ ನಿಗದಿಗೊಳಿಸಬೇಕು ಹಾಗೂ ಬಡಪಾಯಿ ರೈತನ ಅಲ್ಪಸ್ವಲ್ಪ ಇರುವ ಸಹಕಾರ ಸಂಘಗಳ ಕೃಷಿ ಸಂಪೂರ್ಣ ಸಾಲಮನ್ನಾ ಮಾಡುವುದರಿಂದ ಸರ್ಕಾರಗಳಿಗೆ ಹೊರೆಯಾಗುವುದಿಲ್ಲ. ಆದ್ದರಿಂದ ಅನ್ನದಾತರ ಸಂಪೂರ್ಣ ಕೃಷಿ ಸಾಲವನ್ನು ಮನ್ನಾ ಮಾಡಬೇಕು.

ಬಜೆಟ್‌ನಲ್ಲಿ ನೀರಾವರಿ ಯೋಜನೆ, ಪ್ರವಾಸೋದ್ಯಮ, ಪಂಪ್‌ಸೆಟ್‌ಗೆ ಗುಣಮಟ್ಟದ ವಿದ್ಯುತ್ ನೀಡಬೇಕು, ರೈತರು ಜಮೀನುಗಳಲ್ಲಿ ಆಕಸ್ಮಿಕವಾಗಿ ಮೃತಪಟ್ಟರೆ 25 ಲಕ್ಷ ರೂ. ಪರಿಹಾರ ನೀಡಬೇಕು, ಸರ್ಕಾರಿ ಶಾಲಾ-ಕಾಲೇಜು ಹಾಗೂ ಪದವಿ ಕಾಲೇಜುಗಳ ಕಟ್ಟಡಗಳಿಗೆ ಹೈಟೆಕ್ ಸ್ಪರ್ಶ ನೀಡಿ, ಗುಣಮಟ್ಟದ ಶಿಕ್ಷಣಕ್ಕೆ ಒತ್ತು ನೀಡುವ ಮೂಲಕ ದುಬಾರಿ ಶುಲ್ಕ ವಿಧಿಸುತ್ತಿರುವ ಖಾಸಗಿ ಶಾಲಾ-ಕಾಲೇಜುಗಳ ಕಡಿವಾಣ ಹಾಕಬೇಕು. ಸರ್ಕಾರಿ ಶಾಲಾ-ಕಾಲೇಜುಗಳಿಗೂ ಸಿಇಟಿ, ನೀಟ್ ಇನ್ನಿತರ ಕೋರ್ಸ್‌ಗಳನ್ನು ತೆರೆದು ಗ್ರಾಮೀಣ ವಿದ್ಯಾರ್ಥಿಗಳಿಗೆ ಉತ್ತೇಜನ ನೀಡಬೇಕು ಎಂದು ''ನುಡಿದಂತೆ ನಡೆದಿದ್ದೇವೆ'' ಎಂಬ ನಿಮ್ಮ ಸರ್ಕಾರದ ಮಾತಿನಂತೆ ನಡೆದುಕೊಳ್ಳಬೇಕು. ಆಲಮಟ್ಟಿ ಜಲಾಶಯದಿಂದ ಮುಳುಗಡೆಯಾಗ ಭೂಮಿ, ಜಮೀನು, ಮನೆ ಮಠ ಕಳೆದುಕೊಂಡ ಸಂತ್ರಸ್ತರಿಗೆ ಹಕ್ಕುಪತ್ರದ ಜೊತೆಗೆ ಮೂಲಭೂತ ಸೌಕರ್ಯ ನೀಡಬೇಕು, ಸಂತ್ರಸ್ತರಿಗೆ ಪ್ರತಿತಿಂಗಳು ಸೂಕ್ತವಾದ ಗೌರವಧನ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ರಾಜ್ಯದಲ್ಲಿ ಮುಜರಾಯಿ ಇಲಾಖೆ (ಧಾರ್ಮಿಕ ದತ್ತಿ ಇಲಾಖೆ)ಯ ಚರ-ಸ್ಥಿರ ಆಸ್ತಿ ಅನ್ಯರಿಗೆ ಪಾಲಾಗದೆ ಸರ್ಕಾರವೇ ಸಂರಕ್ಷಿಸಬೇಕು. ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸಮಿತಿ ಮಾಡಬೇಕು. ಸುಮಾರು ವರ್ಷಗಳಿಂದ ಹೈಕೋರ್ಟ್, ಇನ್ನಿತರ ನ್ಯಾಯಾಲಯಗಳಲ್ಲಿ ಧಾರ್ಮಿಕ ದತ್ತಿ ಇಲಾಖೆಗೆ ಸಂಬಂಧಿಸಿದಂತೆ ತಡೆಯಾಜ್ಞೆಗಳನ್ನು ತೆರವುಗೊಳಿಸಬೇಕು. ಸರ್ಕಾರದ ಬಜೆಟ್ ಈ ಮೇಲ್ಕಂಡ ವಿಷಯಗಳಿಗೆ ಒತ್ತು ನೀಡಬೇಕು ಎಂದು ರಾಜ್ಯ ರೈತಸಂಘದ ಮುಖಂಡರಾದ ಕಿರಂಗೂರು ಪಾಪು ಹಾಗೂ ಬಾಗಲಕೋಟೆ ಜಿಲ್ಲೆಯ ಬಾದಾಮಿಯ ರೈತಸಂಘದ ರಾಜ್ಯ ಸಂಚಾಲಕರಾದ ಡಿ.ಕೆ. ಹುಣಸಿಕಟ್ಟೆ, ರಾಯಚೂರಿನ ಶ್ಯಾಂಸುಂದರ್ ಕೀರ್ತಿ, ಯಾದಗಿರಿ ಜಿಲ್ಲೆಯ ಬಸವರಾಜ ರಾತ್‌ರೆಡ್ಡಿ, ಹಾಸನದ ರೈತಸಂಘದ ಮುಖಂಡರಾದ ಗುರುಸ್ವಾಮಿಗೌಡ ಅವರುಗಳು ಪತ್ರಿಕಾ ಪ್ರಕಟಣೆಯಲ್ಲಿ ಕಳಕಳಿಯಿಂದ ಒತ್ತಾಯಿಸಿದ್ದಾರೆ.

# ಮರಾಠಿಪಾಳ್ಯದಲ್ಲಿ ಪಶು ಆರೋಗ್ಯ ಶಿಬಿರ



**ಹುಳಿಯಾರು:** ಹುಳಿಯಾರು ಹೋಬಳಿ ಮರಾಠಿಪಾಳ್ಯದಲ್ಲಿ ಗ್ರಾಮದಲ್ಲಿ ಚಿಕ್ಕನಾಯಕನಹಳ್ಳಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಮತ್ತು ರಾಮನಗರ ಹಾಲು ಉತ್ಪಾಕರ ಸಹಕಾರ ಸಂಘದ ಸಂಯುಕ್ತ ಆಶ್ರಯದಲ್ಲಿ ಪಶು ಆರೋಗ್ಯ ಶಿಬಿರವನ್ನು ಏರ್ಪಡಿಸಲಾಗಿತ್ತು.

ಹಿರಿಯ ಪಶುವೈದ್ಯಾಧಿಕಾರಿಗಳಾದ ಡಾ.ಶಾಂತೇಶ್ ರವರು 10 ಬರಡು ರಾಸುಗಳಿಗೆ ಚಿಕಿತ್ಸೆ ನೀಡಿದರು. ಜಾನುವಾರು ರೋಗಗಳು, ಅವುಗಳ ನಿಯಂತ್ರಣ, ಜಾನುವಾರುಗಳಲ್ಲಿ ಕಂಡು ಬರುವ ಬರಡುತನ ಮತ್ತು ಅದರ ನಿವಾರಣೆಗೆ ಸೂಕ್ತ ಚಿಕಿತ್ಸೆ ಸಂಬಂಧಿಸಿದಂತೆ ಉಪಯುಕ್ತ ಮಾಹಿತಿಯನ್ನು ನೀಡಿದರು. ಹೊಯ್ಸಳಕಟ್ಟೆ ಪಶುಚಿಕಿತ್ಸಾಲಯದ ಪಶುವೈದ್ಯಾದಿಕಾರಿ ಡಾ.ಪುನಿತ್ ರವರು 10 ಹಸುಗಳ ಗರ್ಭಪರೀಕ್ಷೆಗಳನ್ನು ನಡೆಸಿದರು. 30 ಮಿಶ್ರತಳಿ ಹಸುಗಳಿಗೆ ಒಂದು ಕೆಜಿಯ ಲವಣ/ಖನಿಜ/ಜೀವಸತ್ವಯುಕ್ತ ಟಾನಿಕ್ ಮಿಶ್ರಣವನ್ನು ನೀಡಲಾಯಿತು. 10 ವಿವಿಧ ಗರ್ಭಕೋಶ ತೊಂದರೆ ಇರುವ ರಾಸುಗಳಿಗೆ ಚಿಕಿತ್ಸೆ, 10 ರಾಸುಗಳಿಗೆ ವಿವಿಧ ಸಾಮಾನ್ಯ ತೊಂದರೆಗಳಿಗೆ ಚಿಕಿತ್ಸೆಯನ್ನು ನೀಡಲಾಯಿತು. 100 ಕುರಿ/ಮೇಕೆಗಳಿಗೆ ಜಂತುನಾಶಕ ಔಷಧಿಯನ್ನು ವಿತರಿಸಲಾಯಿತು. ಶಿಬಿರಕ್ಕೆ ಬಂದಿದ್ದ ಎಲ್ಲಾ 60 ರಾಸುಗಳಿಗೆ ಜಂತುನಾಶಕ ಔಷಧಿಯನ್ನು ಕುಡಿಸಲಾಯಿತು.

ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ರೆ. ಮ.ನಾಗಭೂಷಣ, ಹುಳಿಯಾರು ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿ ಡಾ.ಹೆಚ್.ಟಿ.ಮಂಜುನಾಥ್, ಹಾಲು ಉತ್ಪಾದಕರ ಸಹಕಾರ ಸಂಘದ ಕಾರ್ಯದರ್ಶಿ ಲೋಲಾಕ್ಷಮ್ಮ, ಹಿರಿಯ ಪಶುವೈದ್ಯಾಧಿಕಾರಿಗಳಾದ ಡಾ.ಶಾಂತೇಶ್, ಡಾ.ಪುನಿತ್, ಪಶು ವೈದ್ಯಪರೀಕ್ಷಕರಾದ ಜ್ಯೋತಿ, ಕಿರಿಯ ಪಶು ವೈದ್ಯಪರೀಕ್ಷಕರಾದ ಭೂಮಿಕಾ, ಚಂದ್ರಕಲಾ, ಸಿಬ್ಬಂದಿಗಳಾದ ಭಾಸ್ಕರ, ಕಾಮಾಕ್ಷಿ, ತ್ರಿವೇಣಿ, ಗಜೇಂದ್ರ, ಅತಾವುಲ್ಲಾ, ಪಶು ಸಖಿಯರಾದ ಭುವನೇಶ್ವರಿ, ಶಾರದಮ್ಮ ರವರುಗಳು ಉಪಸ್ಥಿತರಿದ್ದರು.

### ಮಲೆ ಮಹದೇಶ್ವರ ಬೆಟ್ಟದ ರಂಗಮಂದಿರದ ಸಮೀಪ ಅನಧಿಕೃತವಾಗಿ ಮಳಿಗೆ

# ವ್ಯಾಪಾರಸ್ಥರನ್ನು ತೆರವುಗೊಳಿಸಿ ಟೆಂಡರ್ ಬಿಡುವಂತೆ ಒತ್ತಾಯ



**ಹನೂರು:** ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದ ರಂಗಮಂದಿರದ ಸಮೀಪ ಅನಧಿಕೃತವಾಗಿ ಮಳಿಗೆ ನಡೆಸುತ್ತಿರುವ ವ್ಯಾಪಾರಸ್ಥರನ್ನು ತೆರವುಗೊಳಿಸಿ ಟೆಂಡರ್ ಬಿಡುವಂತೆ ಗ್ರಾಮ ಪಂಚಾಯಿತಿ ಸದಸ್ಯ ಶರವಣ್ ಒತ್ತಾಯಿಸಿದರು.

ಹನೂರು ಪಟ್ಟಣದ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಆವರಣದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟದ ರಂಗಮಂದಿರದ ಸಮೀಪ 40 ಮಳಿಗೆಗಳಿದ್ದು 18 ಜನರು ನಿಯಮಾನುಸಾರ ಟೆಂಡರ್ ಪಡೆದು ಲಕ್ಷಾಂತರ ರೂಪಾಯಿ ಬಾಡಿಗೆ ಕಟ್ಟಿ ಅಂಗಡಿ ನಡೆಸುತ್ತಿದ್ದಾರೆ . ಆದರೆ 22 ಜನರು ಕಳೆದ ಎಂಟು ವರ್ಷಗಳಿಂದ ಅನಧಿಕೃತವಾಗಿ ಮಳಿಗೆಗಳನ್ನು ನಡೆಸುತ್ತಾ ಪ್ರಾಧಿಕಾರಕ್ಕೆ 100 ಕೋಟಿಗೂ ಹೆಚ್ಚು ಆದಾಯಕ್ಕೆ ಕುತ್ತು ತಂದಿದ್ದಾರೆ. ಕಳೆದ ಎಂಟು ವರ್ಷಗಳಿಂದ ಅಧಿಕಾರ ನಡೆಸಿದ ಕಾರ್ಯದರ್ಶಿಗಳು ಸೂಕ್ತ ಕ್ರಮ ಕೈಗೊಳ್ಳದೆ ಇರುವುದರಿಂದ ಇವರು ನಿಯಮ ಬಾಹಿರವಾಗಿ ಅಂಗಡಿ ಮಳಿಗೆಗಳನ್ನು ಇಟ್ಟು ವ್ಯಾಪಾರ ಮಾಡುತ್ತಿದ್ದಾರೆ. ಇದರಿಂದ ಲಕ್ಷಾಂತರ ರೂಪಾಯಿ ಬಾಡಿಗೆ ಕಟ್ಟಿ ವ್ಯಾಪಾರ ಮಾಡುತ್ತಿರುವ ವ್ಯಾಪಾರಸ್ಥರಿಗೆ ತೊಂದರೆಯಾಗಿದೆ. ಈ ಕೂಡಲೇ ಪ್ರಾಧಿಕಾರದ ಅಧಿಕಾರಿಗಳು ಅನಧಿಕೃತವಾಗಿ ವ್ಯಾಪಾರ ಮಾಡುತ್ತಿರುವವರನ್ನು ತೆರವುಗೊಳಿಸಿ ಟೆಂಡರ್ ಬಿಡುವ ಮೂಲಕ ಪ್ರಾಧಿಕಾರಕ್ಕೆ ಆದಾಯ ಬರುವಂತೆ ಮಾಡಬೇಕು ಎಂದು ಆಗ್ರಹಿಸಿದರು.

ಹನೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಎಂ ಆರ್ ಮಂಜುನಾಥ್ ರವರು ಕ್ಷೇತ್ರದಲ್ಲಿ ಕಳೆದ ಎರಡು ವರ್ಷಗಳಿಂದ ಉತ್ತಮ ಕೆಲಸ ಕಾರ್ಯಗಳನ್ನು ಮಾಡುತ್ತಿದ್ದಾರೆ .ಅದೇ ರೀತಿ ಕೋಟ್ಯಾಂತರ ರೂಪಾಯಿ ಆದಾಯ ಬರುವ ಅಂಗಡಿಗಳ ಬಗ್ಗೆ ತಲೆಕೆಡಿಸಿಕೊಳ್ಳದೆ ಇರುವುದು ಹಲವು ಅನುಮಾನಗಳಿಗೆ ತಡೆ ಮಾಡಿಕೊಟ್ಟಿದೆ. ಕ್ಷೇತ್ರದ ಪ್ರತಿಯೊಂದು ಸಮಸ್ಯೆಗಳು ಹಾಗೂ ಅಭಿವೃದ್ಧಿಯ ಬಗ್ಗೆ ಮಾಹಿತಿ ಪಡೆದುಕೊಂಡಿರುವ ಶಾಸಕರಿಗೆ ಕಳೆದ ಹಲವು ವರ್ಷಗಳಿಂದ ಅನಧಿಕೃತವಾಗಿ ಮಳಿಗೆ ನಡೆಸುತ್ತಿರುವುದು ಇವರ ಗಮನಕ್ಕೆ ಬಂದಿಲ್ಲವೇ, ಕಳೆದ ಒಂದು ತಿಂಗಳಿನಿಂದ ನಿರಂತರವಾಗಿ ಶ್ರೀ ಕ್ಷೇತ್ರ ಮಲೆ ಮಹದೇಶ್ವರ ಬೆಟ್ಟಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡುತ್ತಿದ್ದಾರೆ ಈ ವಿಚಾರ ಗಮನಕ್ಕೆ ಬರಲಿಲ್ಲ ಎಂದ ಮೇಲೆ ಯಾವ ರೀತಿ ಪರಿಶೀಲನೆ ಮಾಡುತ್ತಿದ್ದಾರೆ ಎಂದು ಪ್ರಶ್ನಿಸಿದರು. ಶಾಸಕ ಎಂಆರ್ ಮಂಜುನಾಥ್ ರವರ ಆಪ್ತರೆ ಅನಧಿಕೃತವಾಗಿ ಮಳಿಗೆ ನಡೆಸುತ್ತಿರುವುದು ವಿಪರ್ಯಾಸ. ಇಲ್ಲಿ ಮಳಿಗೆ ನಡೆಸುತ್ತಿರುವ ಶಾಸಕರ ಆಪ್ತರು ರಾಜಾರೋಷವಾಗಿ ನಮ್ಮ ಮುಂದೆಯೇ ಬಂದು ನಮ್ಮ ಶಾಸಕರು ಇರುವವರೆಗೂ ನಮ್ಮನ್ನು ಯಾರು ಖಾಲಿ ಮಾಡಿಸಲು ಆಗುವುದಿಲ್ಲ ಎಂದು ಸವಾಲು ಹಾಕುತ್ತಿದ್ದಾರೆ. ಇದಕ್ಕೆ ಶಾಸಕ ಎಂಆರ್ ಮಂಜುನಾಥ್ ರವರ ಸಹಕಾರವು ಇಲ್ಲದೆ ಇವರು ಈ ರೀತಿ ಹೇಳಲು ಹೇಗೆ ಸಾಧ್ಯ ಎಂಬ ಅನುಮಾನ ಕಾಡುತ್ತಿದೆ ಎಂದು ಆರೋಪಿಸಿದರು.

ಪ್ರತಿಯೊಂದು ಕಾರ್ಯಕ್ರಮಗಳಲ್ಲಿ ಕ್ಷೇತ್ರದ ಅಭಿವೃದ್ಧಿಗೆ ಸದಾ ಕಂಕಣ ಬದ್ಧನಾಗಿದ್ದೇನೆ ಎಂದು ಹೇಳುವ ಶಾಸಕರು ಭ್ರಷ್ಟಾಚಾರಕ್ಕೆ ಕುಮ್ಮಕ್ಕು ನೀಡದೇ ಅನಧಿಕೃತವಾಗಿ ನಡೆಸುತ್ತಿರುವ ಎಲ್ಲಾ ವ್ಯಾಪಾರಸ್ಥರನ್ನು ತೆರವುಗೊಳಿಸಲು ಇವರೇ ಸೂಚನೆ ನೀಡಿ ಟೆಂಡರ್ ಮಾಡಿಸುವ ಮೂಲಕ ದೇವಸ್ಥಾನದ ಆದಾಯವನ್ನು ಹೆಚ್ಚು ಮಾಡಬೇಕು ಇಲ್ಲದಿದ್ದರೆ ಮಾದಪ್ಪನ ಇವರನ್ನು ನೋಡಿಕೊಳ್ಳುತ್ತಾರೆ ಎಂದರು.

ಅಂಗಡಿ ಬಂದ್ ಎರಡು ದಿನಕ್ಕಷ್ಟೇ ಸೀಮಿತ: ಕಳೆದ ಒಂದು ವಾರದ ಹಿಂದೆ ಪ್ರಾಧಿಕಾರದ ಕಾರ್ಯದರ್ಶಿಗಳಾದ ರಘು ಹಾಗೂ ಸಿಬ್ಬಂದಿಗಳು ಅನಧಿಕೃತ ಮಳಿಗೆ ನಡೆಸುತ್ತಿರುವವರಿಗೆ ಎಂಟು ದಿನಗಳ ಕಾಲಾವಕಾಶ ನೀಡಿ ತಾವುಗಳೇ ಅಂಗಡಿ ಖಾಲಿ ಮಾಡಬೇಕು ಎಂದು ಎಚ್ಚರಿಕೆ ನೀಡಿ ಅಂಗಡಿಗಳನ್ನು ಬಂದ್ ಮಾಡಿಸಿದ್ದರು. ಆದರೆ ಎರಡು ದಿನ ಕಳೆದ ನಂತರ ವ್ಯಾಪಾರಸ್ಥರು ಮತ್ತೆ ಮಳಿಗೆ ಪ್ರಾರಂಭಿಸಿದ್ದಾರೆ. ಅಧಿಕಾರಿಗಳು ಯಾರ ರಾಜಕೀಯ ಒತ್ತಡಕ್ಕೆ ಮಣಿದಿದ್ದಾರೆ ಎಂಬುವುದೇ ತಿಳಿಯುತ್ತಿಲ್ಲ. ಈಗ ಅನಧಿಕೃತ ವ್ಯಾಪಾರಸ್ಥರು ಮತ್ತೆ ತಮ್ಮ ಮಳಿಗೆಗಳನ್ನು ಪ್ರಾರಂಭಿಸಿರುವುದರಿಂದ ಇದರಿಂದ ಬಾಡಿಗೆ ಪಾವತಿಸಿ ವ್ಯಾಪಾರ ಮಾಡುವ ವ್ಯಾಪಾರಸ್ಥರಿಗೆ ತೊಂದರೆಯಾಗಿದೆ ಎಂದು ತಮ್ಮ ಅಳಲನ್ನು ತೋಡಿಕೊಂಡರು.

## ವಿದ್ಯೆಯೇ ಜೊತೆ ಕೌಶಲ್ಯ ರೂಢಿಸಿಕೊಳ್ಳಲು ಉಮೇಶ್ ಸಲಹೆ



**ಅನನ್ಯ ಇನ್ಸ್ಟಿಟ್ಯೂಟ್ ಅಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್ ಮತ್ತು ಮ್ಯಾಜಿಕ್ ಬಸ್ ಇಂಡಿಯಾ ಫೌಂಡೇಷನ್ ರಿಲಿಯನ್ಸ್ ಸಮೂಹ ಸಂಸ್ಥೆ ಇವರುಗಳ ಸಹಯೋಗದೊಂದಿಗೆ ಅಂತಿಮ ವರ್ಷದ ಬಿ.ಕಾಂ ಪದವಿ ವಿದ್ಯಾರ್ಥಿಗಳಿಗೆ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು. ಚಿತ್ರದಲ್ಲಿ ಅನನ್ಯ ಸಂಸ್ಥೆಯ ಉಪಾಧ್ಯಕ್ಷರಾದ ಬಿ.ಆರ್.ಉಮೇಶ್, ಅನನ್ಯ ಸಂಸ್ಥೆಯ ಟ್ರಸ್ಟಿಯಾದ ಡಾ.ಹೆಚ್.ಹರೀಶ್, ಅನನ್ಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ.ವಿಶ್ವಾಸ್, ವಿಭಾಗದ ಮುಖ್ಯಸ್ಥೆ ದೇವಕಿಪ್ರಸಾದ್ ಹಾಜರಿದ್ದರು.**

**ತುಮಕೂರು:** ವಿದ್ಯಾರ್ಥಿಗಳು ವಿದ್ಯೆಯ ಜೊತೆಯಲ್ಲಿಯೇ ಜ್ಞಾನವನ್ನು ರೂಢಿಸಿಕೊಳ್ಳಬೇಕು. ವಿದ್ಯಾರ್ಥಿಗಳು ವಿದ್ಯಾರ್ಜನೆ ಜೊತೆ ಜೊತೆಯಲ್ಲಿಯೇ ಕೌಶಲ್ಯಗಳನ್ನು ರೂಢಿಸಿಕೊಳ್ಳಬೇಕು ಅನನ್ಯ ಸಂಸ್ಥೆಯ ಉಪಾಧ್ಯಕ್ಷರಾದ ಬಿ.ಆರ್.ಉಮೇಶ್ ರವರು ತಿಳಿಸಿದರು.

ನಗರದ ಅನನ್ಯ ಇನ್ಸ್ಟಿಟ್ಯೂಟ್ ಅಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್‌ನ ವತಿಯಿಂದ ಕ್ಯಾಂಪಸ್ ಟು ಕಾರ್ಪೊರೇಟ್ ತರಬೇತಿ ಶಿಬಿರವನ್ನು ಅನನ್ಯ ಇನ್ಸ್ಟಿಟ್ಯೂಟ್ ಅಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್ ಮತ್ತು ಮ್ಯಾಜಿಕ್ ಬಸ್ ಇಂಡಿಯಾ ಫೌಂಡೇಷನ್ ರಿಲಿಯನ್ಸ್ ಸಮೂಹ ಸಂಸ್ಥೆ ಇವರುಗಳ ಸಹಯೋಗದೊಂದಿಗೆ ಅಂತಿಮ ವರ್ಷದ ಬಿ.ಕಾಂ ಪದವಿ ವಿದ್ಯಾರ್ಥಿಗಳಿಗೆ ಮೃದು ಕೌಶಲ್ಯಗಳ ತರಬೇತಿ, ಉದ್ಯೋಗಶೀಲತೆ ಕೌಶಲ್ಯ, ಸ್ವವಿವರ ಕೌಶಲ್ಯಗಳ ತರಬೇತಿ, ಸಂವಹನ ಮತ್ತು ಅಲಿಸುವಿಕೆ, ನಾಯಕತ್ವ ಗುಣ, ಸಮಯ ನಿರ್ವಹಣೆ ಇನ್ನೂ ಮುಂತಾದ ತರಬೇತಿಯನ್ನು ಒಂದು ವಾರಗಳ ಕಾಲ ವಿದ್ಯಾರ್ಥಿಗಳಿಗೆ ಫೆ.17 ರಂದು ಸೋಮವಾರ ಕಾಲೇಜಿನ ಆವರಣದಲ್ಲಿ ಉದ್ಘಾಟನೆಯನ್ನು ಹಮ್ಮಿಕೊಳ್ಳಲಾಗಿದೆ. ಅನನ್ಯ ಸಂಸ್ಥೆಯ ಟ್ರಸ್ಟಿಯಾದ ಡಾ.ಹೆಚ್.ಹರೀಶ್‌ರವರು ಮಾತನಾಡುತ್ತಾ ವಿದ್ಯಾರ್ಥಿಗಳಿಗೆ ತರಬೇತಿಯ ಸದುಪಯೋಗವನ್ನು ಪಡಿಸಿಕೊಳ್ಳಬೇಕು ಎಂದು ತಿಳಿಸಿದರು. ಅನನ್ಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ.ವಿಶ್ವಾಸ್ ರವರು ಮಾತನಾಡುತ್ತಾ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಮುಂದಿನ ಯಶಸ್ಸಿನ ಜವಾಬ್ದಾರಿಯನ್ನು ಅರಿತು ತರಬೇತಿಯನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು. ವಿಭಾಗದ ಮುಖ್ಯಸ್ಥೆ ಶ್ರೀಮತಿ ದೇವಕಿಪ್ರಸಾದ್, ತರಬೇತಿ ಮತ್ತು ಉದ್ಯೋಗಾಧಿಕಾರಿ ಶ್ರೀಮತಿ ಶಮಂತಪ್ರಿಯರವರು ಹಾಜರಿದ್ದರು. ಇದೇ ಸಂದರ್ಭದಲ್ಲಿ ಮ್ಯಾಜಿಕ್ ಬಸ್ ಇಂಡಿಯಾ ಫೌಂಡೇಷನ್‌ನ ಉದ್ಯೋಗಾಧಿಕಾರಿ ಎನ್. ರವಿ, ಕೆ.ಇಮ್ರಾನ್, ತರಬೇತಿ ಅಧಿಕಾರಿಯಾದ ಅಜಯ್ ಕುಮಾರ್, ಅಮೃತಾ ಹಾಗೂ ಸಂಸ್ಥೆಯ ಬೋಧಕ ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್ ಸಲಹೆ

# ಜಲಸಂರಕ್ಷಣೆ ಜನಾಂದೋಲನವಾಗಲಿ



**ಪಿರಿಯಾಪಟ್ಟಣ:** ನೀರು ದೇವರು ಕೊಟ್ಟ ಕಾಣಿಕೆ ಹಾಗಾಗಿ ಮಣ್ಣು ಮತ್ತು ನೀರಿನ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವ ಮೂಲಕ ಮುಂದಿನ ಪೀಳಿಗೆಗೆ ಸತ್ವಯುತ ಮಣ್ಣು ಹಾಗು ಕುಡಿಯಲು ಯೋಗ್ಯವಾದ ನೀರನ್ನು ಉಳಿಸಲು ಎಲ್ಲರೂ ಕೈಜೋಡಿಸಬೇಕಿದೆ ಎಂದು ತಾಲ್ಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್ ತಿಳಿಸಿದರು.

ತಾಲ್ಲೂಕಿನ ಹುಣಸವಾಡಿ ಗ್ರಾಮದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕೃಷಿ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಪಿಎಂಕೆಎಸ್ವೈ–ಡಬ್ಲಿಯೋಡಿಸಿ 2.0 ಜಲಾನಯನ ಯಾತ್ರೆ ಕಾರ್ಯಕ್ರಮ–2025 ಗೆ ಚಾಲನೆ ನೀಡಿ ಮಾತನಾಡಿದರು.

ನೀರು ವಿಶಿಷ್ಟವಾದ ಜೀವ ಜಲ, ನಾವು ಊಟವಿಲ್ಲದೇ ಬದುಕಬಹುದು. ಆದರೆ ನೀರಿಲ್ಲದೇ ಯಾವ ಜೀವ ಸಂಕುಲವೂ ಬದುಕಲಾರವು ಜನಸಂಖ್ಯೆ ಹೆಚ್ಚಾದಂತೆಲ್ಲಾ ನೀರಿನ ಪ್ರಮಾಣ ಕಡಿಮೆಯಾಗುತ್ತಿದೆ. ಈಗಾಗಲೇ ಕುಡಿಯುವ ನೀರನ್ನು ಹಣ ಕೊಟ್ಟು ಬಳಸುತ್ತಿದ್ದೇವೆ. ಭವಿಷ್ಯದಲ್ಲಿ ನೀರಿನ ಅಭಾವ ಉಂಟಾಗದಂತೆ ನೀರಿನ ಮೂಲಗಳನ್ನು ಸಂರಕ್ಷಿಸಬೇಕು ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ನೀರಿಗಾಗಿಯೇ ಯುದ್ಧ ಮಾಡುವ ಪರಿಸ್ಥಿತಿ ಉಂಟಾಗುತ್ತದೆ. ನೀರಿನ ಮಹತ್ವದ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು ಅಗತ್ಯವಿದೆ. ನಾವೆಲ್ಲರೂ ಸಂಶೋಧನೆಗಳಿಂದ ಎಷ್ಟೇ ವೈಜ್ಞಾನಿಕವಾಗಿ, ತಾಂತ್ರಿಕವಾಗಿ ಮುಂದುವರಿದರೂ, ನಮ್ಮಿಂದ ನೀರನ್ನು ಸೃಷ್ಟಿಸಲು ಸಾಧ್ಯವಿಲ್ಲ ಎಂದರು. ಕೃಷಿ ಇಲಾಖೆ ಉಪ ನಿರ್ದೇಶಕ ಕೆ.ರಾಜು ಮಾತನಾಡಿ ಸುಸ್ಥಿರ ನೀರಿನ ನಿರ್ವಹಣೆಯತ್ತ ಮಹತ್ವದ ಹೆಜ್ಜೆಯಾಗಿ ಸರ್ಕಾರ ಕೃಷಿ ಸಿಂಚಾಯಿ ಯೋಜನೆಯ ಜಲಾನಯನ ಅಭಿವೃದ್ಧಿ ಘಟಕದಡಿ ರಾಷ್ಟ್ರವ್ಯಾಪಿ ಜಾಗೃತಿ ಅಭಿಯಾನ ಜಲಾನಯನ ಯಾತ್ರೆಯನ್ನು ಆರಂಭಿಸಿದೆ. ಈ ಅಭಿಯಾನವು ಮಾರ್ಚ್‌ವರೆಗೆ ಕೃಷಿ ಪರಿಕರ ಮತ್ತು ಡಿಜಿಟಲ್ ಪ್ರದರ್ಶನ ಹೊಂದಿರುವ ವಾಹನದೊಂದಿಗೆ ತಾಲ್ಲೂಕಿನಾದ್ಯಂತ ಸಂಚರಿಸಲಿದ್ದು, ಈ ಸಂದರ್ಭದಲ್ಲಿ ಸಂವಾದಾತ್ಮಕ ಕಾರ್ಯಾಗಾರಗಳು, ಸಮುದಾಯ ಚಟುವಟಿಕೆಗಳು ಮತ್ತು ಜಾಗೃತಿ ಕಾರ್ಯಕ್ರಮಗಳು ನಡೆಯಲಿವೆ. ಈ ಅಭಿಯಾನದಡಿ ಜಲಾನಯನ ಸಂರಕ್ಷಣೆ, ಮಣ್ಣಿನ ಆರೋಗ್ಯವರ್ಧನೆ ಮತ್ತು ಮಳೆನೀರು ಸಂಗ್ರಹ ಸಂಬಂಧ ಅತ್ಯಾದುನಿಕ ತಂತ್ರಜ್ಞಾನಗಳನ್ನು ಪ್ರದರ್ಶಿಸಲಾಗುತ್ತದೆ ಎಂದರು.

ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಡಾ.ವೈ.ಪ್ರಸಾದ್ ಮಾತನಾಡಿ ಈ ಜಲಾನಯನ ಯಾತ್ರೆ ಕೇವಲ ಜಾಗೃತಿ ಅಭಿಯಾನವಲ್ಲ; ಸಮುದಾಯಗಳು ಜಲಾನಯನ ಅಭಿವೃದ್ಧಿ ಪದ್ಧತಿಗಳನ್ನು ಅಳವಡಿಸಿಕೊಳ್ಳಲು ಜಲ ಭದ್ರತೆ ಹಾಗೂ ಕೃಷಿ ಸುಸ್ಥಿರತೆ ಪ್ರೇರೇಪಿಸುವ ಆಂದೋಲನವಾಗಿದೆ ಆದ್ದರಿಂದ ಮನೆಗೊಂದು ಗಿಡ ಊರಿಗೊಂದು ವನ ಘೋಷವಾಕ್ಯದಂತೆ ಪರಿಸರ ಸಂರಕ್ಷಣೆಯಲ್ಲಿ ಪ್ರತಿಯೊಬ್ಬರೂ ಪಾಲುದಾರರಾಗಬೇಕು ಎಂಬುದು ಜಲಾನಯನ ಯಾತ್ರೆ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ. ರೈತರು ಮಣ್ಣು ಮತ್ತು ನೀರಿನ ಸಂರಕ್ಷಣೆ ಮಾಡುವುದು ಅತ್ಯಾವಶ್ಯಕವಾಗಿದ್ದು, ಮಣ್ಣಿನ ಸವಕಳಿ ತಪ್ಪಿಸಲು ಜಮೀನಿನ ಸುತ್ತಲೂ ಬದುಗಳನ್ನು ನಿರ್ಮಿಸಿಕೊಳ್ಳಬೇಕು ಈ ಕಾರ್ಯಕ್ಕೆ ಕೃಷಿ ಇಲಾಖೆಯು ಸಹಕಾರ ನೀಡುತ್ತದೆ. ಜಲಾನಯನ ಡಬ್ಲ್ಯೂಡಿಸಿ–2 ಯೋಜನೆ ಹಾಗೂ ಕೃಷಿ ಇಲಾಖೆ ಯೋಜನೆಯಡಿ ರೈತರು ಕೃಷಿ ಹೊಂಡ ನಿರ್ಮಿಸಿಕೊಳ್ಳಬಹುದಾಗಿದ್ದು ಹೆಚ್ಚಿನ ಮಾಹಿತಿಗಾಗಿ ಕೃಷಿ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದರು.

ಕಾರ್ಯಕ್ರಮದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದ ಮಹಿಳೆಯಿಗೆ ಹಾಗೂ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಹುಣಸವಾಡಿ ಗ್ರಾಪಂ ಅಭಿವೃದ್ಧಿ ಅಧಿಕಾರಿ ಪಿ.ಆರ್.ಮಂಜುನಾಥ್, ಅಧ್ಯಕ್ಷ ಲೋಕೇಶ್, ಸದಸ್ಯರಾದ ಲಕ್ಷ್ಮಮ್ಮ, ಶಾಂತೇಗೌಡ, ಸುಬ್ರಮಣ್ಯ, ಡಿಆರ್‌ಎಫ್‌ಓ ಶಶಿಕುಮಾರ್, ಶಂಕರನಾರಾಯಣ, ಕೃಷಿ ಇಲಾಖೆ ಅಧಿಕಾರಿಗಳಾದ ಹಿತೇಶ್, ಮಹೇಶ್, ಪ್ರವೀಣ್, ನವ್ಯ ನಾಣಯ್ಯ, ಆತ್ಮ ಯೋಜನೆ ಸಿಬ್ಬಂದಿಗಳಾದ ಸತೀಶ್, ದಿವಾಕರ್, ಆನಂದ್, ಮುಖಂಡರಾದ ಹುಣಸವಾಡಿ ಹರೀಶ್, ದೇವೇಗೌಡ, ಹೆಚ್. ಎಂ.ಗೋವಿಂದೇಗೌಡ, ಕೀರ್ತಿಕುಮಾರ್, ನಿಂಗೇಗೌಡ, ರಾಜಣ್ಣ, ಕೃಷ್ಣ ಸೇರಿದಂತೆ ಗ್ರಾಮಸ್ಥರು ಹಾಗೂ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



**ನಗರದ ಹೊಸೂರು ರಸ್ತೆಯಲ್ಲಿರುವ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಛೇರಿಯಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ. ಪದ್ಮಾವತಿ ಅವರ ಅಧ್ಯಕ್ಷತೆಯಲ್ಲಿ 2024–25ನೇ ಸಾಲಿನ ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆಯನ್ನು ಹಮ್ಮಿಕೊಳ್ಳಲಾಯಿತು. ಇದೇ ಸಂದರ್ಭದಲ್ಲಿ ಲೀಡ್ ಬ್ಯಾಂಕ್ ನ ವ್ಯವಸ್ಥಾಪಕರಾದ ಪ್ರದೀಪ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಡಾ . ಎಸ್. ಸಿದ್ದರಾಮಣ್ಣ ಹಾಗೂ ಇತರರು ಉಪ್ಥಿತರಿದ್ದರು.**

# ಸ್ವಚ್ಛತೆ ಕಾಪಾಡುವ ಪೌರಕಾರ್ಮಿಕರಿಗೆ ಸನ್ಮಾನ



**ತಾಂಡವಪುರ:** ಮೈಸೂರು ಜಿಲ್ಲೆ ನಂಜನಗೂಡು ತಾಲೂಕು ಚಿಕ್ಕಯ್ಯನ ಛತ್ರ ಹೋಬಳಿ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ತಾಂಡವಪುರ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರನ್ನು ಇಂದು ಗ್ರಾಮ ದೇವತೆ ಮಾರಮ್ಮ ದೇವಸ್ಥಾನದ ಬಳಿ ಗ್ರಾಮ ಪಂಚಾಯತಿ ಸದಸ್ಯ ಎನ್ ಚಂದ್ರು ಹಾಗೂ ಮುಖಂಡರಾದ ಸಿದ್ದರಾಜುರವರು ಸನ್ಮಾನಿಸಿ ಗೌರವಿಸಿ ಅಭಿನಂದಿಸಿದರು. ಇದೇ ವೇಳೆ ಮಾತನಾಡಿದ ಎನ್ ಚಂದ್ರುರವರು ನಮ್ಮ ಗ್ರಾಮದ ಗ್ರಾಮ ದೇವತೆ ಮಾರಮ್ಮನ ಹಬ್ಬದ ಪ್ರಯುಕ್ತ ಕಳೆದ ಒಂದು ತಿಂಗಳಿಂದ ಪೌರಕಾರ್ಮಿಕರು ತಮ್ಮ ಕರ್ತವ್ಯವನ್ನು ಬಹಳ ಅಚ್ಚುಕಟ್ಟಾಗಿ ನಿರ್ವಹಿಸಿ ಸ್ವಚ್ಛತೆಯನ್ನು ಕಾಪಾಡಿಕೊಂಡು ಬಂದಿದ್ದಾರೆ ಜೊತೆಗೆ ನಮ್ಮ ಪಂಚಾಯತಿ ವ್ಯಾಪ್ತಿಗೆ ಬರುವ ಎಲ್ಲಾ ಗ್ರಾಮಗಳಲ್ಲೂ ಸಹ ಇದೇ ರೀತಿ ಸ್ವಚ್ಛತೆಯನ್ನು ಕಾಪಾಡಿಕೊಂಡು ಗ್ರಾಮಗಳಲ್ಲಿ ಯಾವುದೇ ಸಂಕ್ರಮಿಕ ರೋಗಗಳು ಹರದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಿರುವುದು ಜನರ ಆರೋಗ್ಯದ ದೃಷ್ಟಿಯಿಂದ ಉತ್ತಮ ಸೇವೆ ಸಲ್ಲಿಸಿರುವ ಪೌರಕಾರ್ಮಿಕರ ಸೇವೆಗೆ ನಾವು ಬೆಲೆ ಕಟ್ಟಲು ಸಾಧ್ಯವಿಲ್ಲ ಆದರಿಂದ ನಮ್ಮ ಕೈಲಾದ ಮಟ್ಟಿಗೆ ಅವರನ್ನು ಸನ್ಮಾನಿಸಿ ಗೌರವಿಸಿ ಪ್ರೋತ್ಸಾಹ ನೀಡುತ್ತಿದ್ದೇವೆ ಎಂದು ತಿಳಿಸಿದರು. ಸನ್ಮಾನ ಸ್ವೀಕರಿಸಿ ಮಾತಾಡಿದ ಪೌರಕಾರ್ಮಿಕ ಸಂಘದ ಅಧ್ಯಕ್ಷ ಮುರುಗೇಶ್ ರವರು ಪಂಚಾಯತಿಯಲ್ಲಿ ಕೆಲಸ ಮಾಡುತ್ತಿರುವ ನಮ್ಮನ್ನು ಪಂಚಾಯ್ತಿಯ ಸದಸ್ಯರು ಹಾಗೂ ಗ್ರಾಮಸ್ಥರು ಗೌರವಿಂದ ಕಾಣುವ ಮೂಲಕ ನಮ್ಮನ್ನು ಸನ್ಮಾನಿಸಿ ಗೌರವಿಸುತ್ತಿರುವುದು ನಮ್ಮ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚು ಮಾಡಿದೆ ಅದೇ ರೀತಿ ಗ್ರಾಮದ ಸ್ವಚ್ಛತೆಗೆ ಹೆಚ್ಚು ಶ್ರಮವಹಿಸುತ್ತೇವೆ ಎಂದು ತಿಳಿಸಿದರು

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತ್ ಸದಸ್ಯ ಎನ್ ಚಂದ್ರು ಮುಖಂಡರಾದ ಸಿದ್ದರಾಜು ಶಾಂತ ಮುಂತಾದವರು ಹಾಜರಿದ್ದರು.

## ಸರ್ಕಾರಿ ವಿಜ್ಞಾನ ಕಾಲೇಜಿಗೆ 6ನೇ ರ್ಯಾಂಕ್ ಗಳಿಸಿಕೊಟ್ಟ ರಚನ

**ಚಿತ್ರದುರ್ಗ:** ಸರ್ಕಾರಿ ವಿಜ್ಞಾನ ಕಾಲೇಜಿನ ಎಲೆಕ್ಟ್ರಾನಿಕ್ಸ್ ಮತ್ತು ಕಂಪ್ಯೂಟರ್ ಸೈನ್ಸ್‌ನ ಅಂತಿಮ ವರ್ಷದ ವಿದ್ಯಾರ್ಥಿನಿ ರಚನ. ಎಚ್. ಎಸ್, ದಾವಣಗೆರೆ ವಿಶ್ವವಿದ್ಯಾನಿಲಯದ 2023–24ನೇ ಶೈಕ್ಷಣಿಕ ವರ್ಷದ ಬಿಎಸ್ಸಿ ಪದವಿ ವಿಭಾಗದಲ್ಲಿ ಆರನೇ ರ್ಯಾಂಕ್ ಗಳಿಸಿ ಕಾಲೇಜಿಗೆ ಹೆಸರು ತಂದುಕೊಟ್ಟಿದ್ದಾರೆ. ಅವರು 91.01 % (9.17 ಸಿ.ಜಿ. ಪಿ. ಎ. ) ಅಂಕಗಳಿಸಿ ಆರನೇ



ರ್ಯಾಂಕ್ ಗಳಿಸಿಕೊಂಡಿದ್ದು, ಕಾಲೇಜಿನ ಪ್ರಾಂಶುಪಾಲರಾದ ಪ್ರೊಫೆಸರ್ ಸಿದ್ದರಾಮ್ ಚನಗೊಂಡ, ಎಲೆಕ್ಟ್ರಾನಿಕ್ಸ್ ವಿಭಾಗದ ಮುಖ್ಯಸ್ಥರಾದ ಪ್ರೊ. ಕೆ. ಮಂಜಣ್ಣ, ಪ್ರಾಧ್ಯಾಪಕರಾದ ಖಾನ್, ಅರುಣ್, ವೀರಭದ್ರಪ್ಪ, ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥರಾದ ಡಾ. ಹೇಮಾ ಸುರೇಶ್ ಎರಗುಂಟೆ, ಪ್ರಾಧ್ಯಾಪಕರಾದ ಮೈನ್ ಹುದ್ದಿನ್, ನಟರಾಜ್, ಸೌಮ್ಯ ರಾಣಿ, ಬಸವರಾಜ್, ಭಾಗ್ಯಶ್ರೀ, ಚನ್ನಕೇಶವು, ಹಾಗೂ ಬೋಧಕ ಬೋಧಕೇತರ ಸಿಬ್ಬಂದಿಯವರು ಉತ್ತಮ ಸಾಧನೆಗೈದಿದ್ದಕ್ಕಾಗಿ ಅಭಿನಂದಿಸಿದ್ದಾರೆ. ರಚನಾ. ಎಚ್. ಎಸ್ ರವರು ಸಂಗೀತ ಅಭ್ಯಾಸ ಮಾಡಿದ್ದು, ಕರೋನ ಸಂದರ್ಭದಲ್ಲಿ ಹಾಡುಗಳ ಮೂಲಕ ಜನಜಾಗೃತಿ ಮೂಡಿಸುತ್ತಿದ್ದರು, ಹಾಗೆ ಆರೋಗ್ಯ ಇಲಾಖೆ, ಜೊತೆ, ಸಂಚಾರಿ ಪೊಲೀಸ್ ಇಲಾಖೆ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ, ರೋಟರಿ ಮತ್ತು ರೋಟರಾಕ್ಟ್ ಜೊತೆ, ಡೆಂಗ್ಯೂ, ಮಲೇರಿಯಾ, ಹೆಲ್ಮೆಟ್, ರಸ್ತೆ ಸುರಕ್ಷತೆ ಮತ್ತು ಪರಿಸರ ಸಂರಕ್ಷಣೆ ಬಗ್ಗೆ ಹಾಡುಗಳನ್ನು ಹಾಡಿ ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಿದ್ದರು. ಖಾದಿ ಪ್ರಚಾರ ಮತ್ತು ಗ್ರಾಮೀಣ ಅಭಿವೃದ್ಧಿಯ ಜನಜಾಗೃತಿ ಕಾರ್ಯಕ್ರಮಗಳಲ್ಲೂ ಸಹ ಭಾಗವಹಿಸುತ್ತಿದ್ದರು.

## ಶಾಲಾ ಮಕ್ಕಳಿಂದ ಮೂಡಲಪಾಯ ಯಕ್ಷಗಾನ ಕಲರವ

**ತಿಪಟೂರು :** ತಾಲ್ಲೂಕಿನ ಕಸಬಾ ಹೋಬಳಿಯ ಕರಿಕೆರೆ ಮಜುರೆ ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಅಂಚೆಕೊಪ್ಪಲುನಲ್ಲಿ ಫೆ 21 ರಂದು ಸಂಜೆ 6 ಗಂಟೆಗೆ ಶಾಲಾ ವಾರ್ಷಿಕೋತ್ಸವ ಸಮಾರಂಭದ ಪ್ರಯುಕ್ತ ಶಾಲಾ ಮಕ್ಕಳಿಂದ ಮೂಡಲಪಾಯ ಯಕ್ಷಗಾನ ಗಯಚರಿತ್ರೆ, ಅಥವಾ ಕೃ?ಣ್ಣಾರ್ಜುನರ ಕಾಳಗ ಎಂಬ ಮೂಡಲಪಾಯ ಪ್ರಸಂಗವನ್ನು ಭಾಗವತರು ಮತ್ತು ಮುಖ್ಯ ಶಿಕ್ಷಕ ಮಂಜು ಭಾಗವತ್ ಮತ್ತಿಹಳ್ಳಿ, ನಾಗರಾಜು ಮೃದಂಗ, ಹಿನ್ನೆಲೆ ಗಾಯನದಲ್ಲಿ ಲೋಕೇಶ್ ಗ್ರಂಥಪಾಲಕ ಮತ್ತಿಹಳ್ಳಿ, ರಾಮಕೃಷ್ಣಪ್ಪ ಬಿದರೆಗುಡಿ, ಮುನಿಯೂರಿನ ಶ್ರೀ ರಾಘವೇಂದ್ರ ಸೀನರಿಗಳಿಂದ ಅಲಂಕೃತವಾದ ರಂಗಸಜ್ಜಿಕೆಯಲ್ಲಿ ಗ್ರಾಮದ ಹಿರಿಯ ಯಕ್ಷಗಾನ ಕಲಾವಿದರ ನೆರವು ಮತ್ತು ಅಂಚೆಕೊಪ್ಪಲು ಮತ್ತು ಶಂಕರಿ ಕೊಪ್ಪಲು ಗ್ರಾಮಸ್ಥರ ಸಹಕಾರದೊಂದಿಗೆ ಎಸ್‌ಡಿಎಂಸಿ ಶಾಲಾ ಶಿಕ್ಷಕರ ಕಾರ್ಯಕ್ರಮ ಸಂಯೋಜನೆಯೊಂದಿಗೆ ಪ್ರದರ್ಶನವನ್ನು ಏರ್ಪಡಿಸಲಾಗಿದೆ.

## ಮಾಹಿತಿ ಆಯುಕರಾದ ಪತ್ರಕರ್ತರಿಗೆ ಕೆಯುಡಬ್ಲೂಜೆ ಅಭಿನಂದನೆ ಇಂದು

**ಬೆಂಗಳೂರು:** ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ(ಕೆಯುಡಬ್ಲೂಜೆ) ವತಿಯಿಂದ 19.02.2025 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ಕೆಯುಡಬ್ಲೂಜೆ ಸಭಾಂಗಣ, 3ನೇ ಮಹಡಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು. ಇಲ್ಲಿ ಅಭಿನಂದನಾ ಕಾರ್ಯಕ್ರಮ ಏರ್ಪಡಿಸಲಾಗಿದೆ. ಮಾಹಿತಿ ಆಯೋಗದ ಆಯುಕ್ತರುಗಳಾಗಿ ನೇಮಕಗೊಂಡಿರುವ ಹಿರಿಯ ಪತ್ರಕರ್ತರುಗಳಾದ ರುದ್ರಣ್ಣ ಹರ್ತಿಕೋಟೆ, ರಾಜಶೇಖರ್ ಎಸ್., ಬದ್ರುದ್ದೀನ್ ಕೆ., ಮತ್ತು ಡಾ.ಬಿ.ಆರ್ ಮಮತಾ ಅವರನ್ನು ಸಂಘದಿಂದ ಅಭಿನಂದಿಸಲಾಗುವುದು. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು ಅಭಿನಂದಿಸಿ ಮಾತನಾಡಲಿದ್ದಾರೆ. ವಾರ್ತಾ ಇಲಾಖೆ ನಿವೃತ್ತ ಹಿರಿಯ ಜಂಟಿ ನಿರ್ದೇಶಕ ಎಚ್.ಬಿ.ದಿನೇಶ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು, ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಚಲನಚಿತ್ರ ಅಕಾಡೆಮಿಗೆ ನೇಮಕಗೊಂಡಿರುವ ಪತ್ರಕರ್ತರುಗಳಾದ ಚಿದಾನಂದ ಪಟೇಲ್, ಎಚ್.ದೇಶಾದ್ರಿ, ಸಾವಿತ್ರಿ ಮುಜುಮದಾರ್ ಅವರನ್ನು ಸನ್ಮಾನಿಸಲಾಗುವುದು ಎಂದು ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್ ತಿಳಿಸಿದ್ದಾರೆ.

## ವಿಚಾರ ಸಂಕಿರಣ, ಕಾರ್ಯಾಗಾರ

**ಚಾಮರಾಜನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಜನ ಹಿತಾಶಕ್ತಿ ಹೋರಾಟ ವೇದಿಕೆ ಹಾಗೂ ಚಾಮರಾಜನಗರ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ನಾಗರಿಕ ಹಕ್ಕು ಸಂರಕ್ಷಣಾ ಅಧಿನಿಯಮ 1955 ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ (ದೌರ್ಜನ್ಯ ಪ್ರತಿಬಂಧ) ಅಧಿನಿಯಮ 1989 ಹಾಗೂ 1955ರ ಕುರಿತ ವಿಚಾರ ಸಂಕಿರಣ ಮತ್ತು ಕಾರ್ಯಾಗಾರವನ್ನು ಫೆಬ್ರವರಿ 19 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದೆ. ಮೈಸೂರಿನ ಉರಿಲಿಂಗಿ ಪೆದ್ದಿಮಠದ ಪೀಠಾಧ್ಯಕ್ಷರಾದ ಜ್ಞಾನಪ್ರಕಾಶ್ ಸ್ವಾಮೀಜಿ ಅವರು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸುವರು. ತಹಶೀಲ್ದಾರ್ ಬಿ. ಗಿರಿಜಾ ಕಾರ್ಯಕ್ರಮ ಉದ್ಘಾಟಿಸುವರು. ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಎನ್. ಮುನಿರಾಜು ಅವರು ಡಾ. ಬಿ.ಆರ್. ಅಂಬೇಡ್ಕರ್‌ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವರು. ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಂಶುಪಾಲರಾದ ಹೆಚ್.ಜಿ. ಲೋಕೇಶ್ ಅಧ್ಯಕ್ಷತೆ ವಹಿಸುವರು. ವಿಚಾರವಾದಿಗಳು ಹಾಗೂ ಹಿರಿಯ ಸಾಹಿತಿಗಳಾದ ಸೋಮಶೇಖರ ಬಿಸಲ್ವಾಡಿ, ಕರ್ನಾಟಕ ಸಂವಿಧಾನಾತ್ಮಕ ಹಕ್ಕುಗಳ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷರಾದ ಅರಕಲವಾಡಿ ನಾಗೇಂದ್ರ ಅವರು ವಿಚಾರ ಮಂಡನೆ ಮಾಡುವರು.

## ಉತ್ತಮ ಬೆಳವಣಿಗೆಗಾಗಿ ಶಿಕ್ಷಣದ ಅಡಿಪಾಯ ಮುಖ್ಯ



**ಹಾಸನ :**ಉತ್ತಮ ಬೆಳವಣಿಗೆಗಾಗಿ ಶಿಕ್ಷಣದ ಅಡಿಪಾಯ ಮುಖ್ಯವಾಗಿದೆ , ಶಿಕ್ಷಣವು ವ್ಯಕ್ತಿಯ ಭವಿಷ್ಯ ರೂಪಿಸುವತ್ತ ಮಾರ್ಗದರ್ಶನ ನೀಡುತ್ತದೆ ಎಂದು ಸೈಯದ್ ನಿಜಾಂ ಖಾದ್ರಿ (ಮಿನಾಜ್ ಎಜುಕೇಶನ್ ಅಂಡ್ ಟ್ರೈನಿಂಗ್ ಸೆಂಟರ್, ಕೊಲ್ಕತ್ತಾ) ಹೇಳಿದರು.

ಅವರು ನಗರದ 80 ಅಡಿ ರಸ್ತೆಯಲ್ಲಿ ಹೊಸದಾಗಿ ಕೌಶಲ್ಯ ಅಭಿವೃದ್ಧಿ ತರಬೇತಿ ಕೇಂದ್ರವನ್ನ ಮಿನಾಜ್ ( ಎಜುಕೇಶನ್ ಅಂಡ್ ಟ್ರೈನಿಂಗ್ ಸೆಂಟರ್,) ಉದ್ಘಾಟಿಸಿ ಮಾತನಾಡಿ ಉತ್ತಮ ಶಿಕ್ಷಣವು ಉತ್ತಮ ವ್ಯಕ್ತಿತ್ವ , ಸಮಾಜ , ಮತ್ತು ರಾಷ್ಟ್ರವನ್ನು ನಿರ್ಮಿಸುತ್ತದೆ. ಆದ್ದರಿಂದ ಶಿಕ್ಷಣ ನಿರಂತರವಾಗಿ ಸಮಾಜದಲ್ಲಿ ಬೆಳಗಿನ ನೋಪಾದಿಯಲ್ಲಿರಬೇಕು ಎಂದು ವಿದ್ಯಾರ್ಥಿಗಳಿಗೆ ಹಾಗೂ ಪೋಷಕರಿಗೆ ತಿಳಿಸಿದರು. ನಂತರ ಮಾತನಾಡಿದ ಮಿನ್ ಹಾಜಲ್ ಕುರಾನ್ ಇಂಟರ್ನ್ಯಾಷನಲ್ ಬೆಂಗಳೂರಿನ ಸಂಯೋಜಿಕರಾದ ಅಯುಬ್ ಅನ್ಸಾರಿ ಇವರು ಉತ್ತಮ ವ್ಯಕ್ತಿತ್ವಕ್ಕಾಗಿ ವ್ಯಕ್ತಿಗೆ ಕೌಶಲ್ಯಗಳು ತುಂಬಾ ಮುಖ್ಯ ಇದೇ ಉದ್ದೇಶಕ್ಕಾಗಿ ಕೇಂದ್ರವನ್ನು ಸ್ಥಾಪಿಸಲಾಗಿದ್ದು ಇದರ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕಾಗಿ ಎಂದರು. ತೌಫಿಕ್ ಖಾನ್ ಹಾಗೂ ಉಪನ್ಯಾಸಕರದ ಮುಜಮಿಲ್ ಹಾಸನ ಮಿನುಹಾಜಲ್ಖುರನ್ ಇಂಟರ್ನ್ಯಾಷನಲ್ ಸಂಸ್ಥೆಯ ಸದಸ್ಯರುಗಳಾದ ರಾಜಿಖ್. ಆರಿಫ್. ಮೋಯಿನ್ ಖಾನ್ ಹಾಗೂ ಮಹಿಳಾ ಸದಸ್ಯರುಗಳು ಹಾಜರಿದ್ದರು.

# ಚಾಮರಾಜನಗರದ ಮಣ್ಣಿನಲ್ಲಿ ಗಮಕ ಕಲೆ ಕರಗತ



**ಚಾಮರಾಜನಗರ:** ಗಮಕ ಕಲೆಗೆ ಚಾಮರಾಜನಗರ ಒಂದು ಕಾಲದಲ್ಲಿ ತವರೂರಾಗಿತ್ತು ಚಾಮರಾಜನಗರದ ಮಣ್ಣಿನಲ್ಲಿ ಗಮಕ ಕಲೆ ವಂಶಪಾರಂಪರ್ಯದಿಂದಲೂ ಅಡಗಿದೆ. ಈ ಕಲೆಯ ಬೆಳವಣಿಗೆಗೆ ಕರ್ನಾಟಕ ಗಮಕಲಾ ಪರಿಷತ್ತು ಜಿಲ್ಲಾ ಘಟಕ ರಚನೆಯಾಗಿದ್ದು ಪ್ರೋತ್ಸಾಹ ಮತ್ತು ಶ್ರಮದಿಂದ ಗಮಕ ಆಸಕ್ತರನ್ನು ಒಂದುಗೂಡಿಸಿ ಈ ಕಲೆಯನ್ನು ಯುವ ಪೀಳಿಗೆಗೆ, ವಿದ್ಯಾರ್ಥಿಗಳಿಗೆ, ವಿಶೇಷವಾಗಿ ಆಸಕ್ತರಿಗೆ ಕಲಿಸುವ ವಾತಾವರಣವನ್ನು ನಿರ್ಮಿಸೋಣ ಎಂದು ಕರ್ನಾಟಕ ರಾಜ್ಯದ ಕುಮಾರವ್ಯಾಸ ಪ್ರಶಸ್ತಿ ಪುರಸ್ಕೃತರು ಹಿರಿಯ ಗಮಕಿಗಳಾದ ಮೈಸೂರಿನ ಕೃಷ್ಣಗಿರಿ ರಾಮಚಂದ್ರ ರವರು ಅಭಿಪ್ರಾಯ ಪಟ್ಟರು.

ಕರ್ನಾಟಕ ಗಮಕ ಕಲಾ ಪರಿಷತ್ತು ಬೆಂಗಳೂರು, ಚಾಮರಾಜನಗರ ಜಿಲ್ಲಾ ಘಟಕವನ್ನು ಉದ್ಘಾಟಿಸಿ ಮಾತನಾಡುತ್ತಾ ಗಮಕ ಒಂದು ವಿಶಿಷ್ಟವಾದ ಕಲೆಯಾಗಿದೆ. ಮೈಸೂರು ಪ್ರಾಂತ್ಯದಲ್ಲಿ ಮಹಾರಾಜರ ಆಶ್ರಯದಿಂದ ವಿಶ್ವ ಪ್ರಸಿದ್ಧಿ ಆಯಿತು. ನೂರಾರು ಗಮಕಿಗಳು ಕನ್ನಡ ಸಾಹಿತ್ಯದ ಮಹಾ ಕಾವ್ಯಗಳನ್ನು ವಿಶೇಷವಾಗಿ ಸಂಗೀತ, ಸಾಹಿತ್ಯ, ನಾಟಕದ ಸಮನ್ವಯತೆ ಕಲೆಯ ಮೂಲಕ ವಿಶೇಷವಾದ ರಾಗ ಹಾಗೂ ಶ್ರುತಿಬದ್ಧವಾಗಿ ಕಾವ್ಯವನ್ನು ಓದುವ ಮೂಲಕ ಜನ ಮಾನಸದಲ್ಲಿ ಸಂತೋಷ ,ಆನಂದ ಮತ್ತು ದೈವೀಕತೆಯನ್ನು ಸೃಷ್ಟಿ ಮಾಡಬಹುದು. ಚಾಮರಾಜನಗರ ಜಿಲ್ಲೆಯ ಹಿರಿಯ ಗಮಕಿಗಳಾದ ಅಶ್ವಥ್ ನಾರಾಯಣ, ಸಂಪತ್ ಕುಮಾರ್ ಆಚಾರ್, ರಾಮದಾಸ್ ಸುಬ್ರಹ್ಮಣ್ಯಂ ,ನಾಗೇಶ್ ರಾವ್ ವಿಜಯಲಕ್ಷ್ಮಿ, ಸುಂದರ ರಾಘವನ್ ಮುಂತಾದ ನೂರಾರು ಹೆಸರುಗಳು ಈ ಸಾಲಿನಲ್ಲಿ ಬರುತ್ತವೆ. ಆದರೆ ಕಳೆದ ದಶಕಗಳಿಂದ ಗಮಕ ಕಲೆ ಪ್ರೋತ್ಸಾಹವಿಲ್ಲದೆ ಸ್ವಲ್ಪ ಮಟ್ಟಿಗೆ ಕುಂಠಿತವಾಗಿತ್ತು .ಕರ್ನಾಟಕ ಗಮಕಲಾ ಪರಿಷತ್ತು ಉದಯವಾಗಿ ಎಲ್ಲ ಜಿಲ್ಲೆಗಳಲ್ಲಿ ಗಮಕಲೆಯನ್ನು ಬೆಳೆಸುವ ದೃಷ್ಟಿಯಲ್ಲಿ ಉತ್ಸಾಹಿ ತಂಡವನ್ನು ರಚಿಸಿದೆ. ಚಾಮರಾಜನಗರ ಜಿಲ್ಲೆಯ ಅಧ್ಯಕ್ಷರಾಗಿ ವಾಗ್ಮಿಗಳು, ಚಿಂತಕರು, ಸಂಘಟಕರು ಉತ್ತಮ ವ್ಯಕ್ತಿಯಾದ ಸುರೇಶ್ ಋಗ್ವೇದಿಯವರನ್ನು ನೇಮಿಸಿರುವುದು ಬಹಳ ಸಂತೋಷವನ್ನು ತಂದಿದೆ .ಗಮಕ ಕಲೆ ಅರಳಲಿ ಬೆಳೆಯಲಿ ಎಂದರು.

ಕರ್ನಾಟಕ ಗಮಕಲಾ ಪರಿಷತ್ತಿನ ಸಂಘ ಸಂಸ್ಥೆಗಳ ಪ್ರತಿನಿಧಿಗಳಾದ ಹಿರಿಯಗಮಕಿ ಡಾ. ಎ ನಿರಂಜನ್ ಮಾತನಾಡಿ ಚಾಮರಾಜನಗರ ಜಿಲ್ಲೆ, ಮೈಸೂರು ಪ್ರಾಂತ್ಯದ ಒಂದು ಭಾಗವಾಗಿತ್ತು. ಚಾಮರಾಜನಗರ ರಾಮಸಮುದ್ರ, ಕಾಗಲವಾಡಿ, ಹರದನಹಳ್ಳಿ ಕೊಳ್ಳೇಗಾಲ , ಮುಂತಾದ ಕಡೆ ವಿಶೇಷವಾಗಿ ಗಮಕದ ವೈಭವ ಇತ್ತು. ಮತ್ತೆ ಇದನ್ನು ಪುನರುಸ್ತಾನಗೊಳಿಸಲು ಜಿಲ್ಲಾ ಗಮಕಲಾ ಪರಿಷತ್ತು ಶ್ರದ್ಧೆಯಿಂದ ಕಾರ್ಯನಿರ್ವಹಿಸಲಿ ಎಂದರು.

ಡಾ. ಎ ನಿರಂಜನ್ ಹಾಗೂ ಶ್ರೀಮತಿ ಧರಿತ್ರಿ ಆನಂದ್ ರಾವ್ ರವರು ತಮ್ಮ ಕಾವ್ಯವಾಚನದ ಮೂಲಕ ನೆರೆದ ಸಭಿಕರಿಗೆ ಪರಮಾನಂದವನ್ನು ಉಂಟುಮಾಡಿದರು.

ಶ್ರೀ ಭಗವದ್ಗೀತಾ ಅಭಿಯಾನ ಸಮಿತಿಯ ಗೌರವ ಅಧ್ಯಕ್ಷ ಜಿಎಂ ಹೆಗಡೆ ರವರು ಮಾತನಾಡಿ ಮೈಸೂರು ಪ್ರಾಂತ್ಯದಲ್ಲಿ ವಿಶೇಷವಾಗಿ ಗಮಕಲೆ ವ್ಯಾಪಕವಾಗಿದೆ. ಆಧುನಿಕ ಕಾಲಘಟ್ಟದಲ್ಲಿ ಗಮಕ ಕಲೆಯು ಯುವಕರ ಆಸಕ್ತಿಯನ್ನು ತೆರಳಿಸುವಲ್ಲಿ ಮತ್ತು ಉಳಿಸು ಬೆಳೆಸುವುದರಲ್ಲಿ ಸ್ವಲ್ಪ ಹಿನ್ನಡೆ ಉಂಟಾಗಿದೆ ಎಂದರು.

ಸಭೆಯ ಅಧ್ಯಕ್ಷತೆಯನ್ನು ಕರ್ನಾಟಕ ಗಮಕಲಾ ಪರಿಷತ್ತಿನ ಅಧ್ಯಯ ಜಿಲ್ಲಾಧ್ಯಕ್ಷರಾದ ಸುರೇಶ್ ಎನ್ ಋಗ್ವೇದಿ ಕನ್ನಡ ಸಾಹಿತ್ಯದಲ್ಲಿ ಗಮಕ ಕಲೆ ಮೇರು ಶಿಖರವಾಗಿದೆ. ಗಮಕ ಕಲೆಯ ಮೂಲಕ ಹಳೆಗನ್ನಡ ಸಾಹಿತ್ಯವನ್ನು ಮನಮುಟ್ಟುವಂತೆ ವಿವರಿಸಿ ತಿಳಿಸಿದಾಗ ಸಾಹಿತ್ಯದ ಗಟ್ಟಿತನ ಮತ್ತು ಕವಿಯ ದಿವ್ಯ ಚಿಂತನೆಗಳ ಸಂದೇಶಗಳು ಹೊರಬರುತ್ತವೆ. ಸುಶ್ರಾವ್ಯವಾಗಿ ಹಾಡಿದಾಗ ಮನಸ್ಸಿಗೆ ಅಪಾರ ನೆಮ್ಮದಿ ಸಿಗುತ್ತದೆ . ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳಲ್ಲಿ, ಯುವಕರಲ್ಲಿ, ಶಿಕ್ಷಕ ವೃಂದ, ಮಹಿಳಾ ಮತ್ತು ಪುರುಷ ವರ್ಗಗಳಲ್ಲಿ ವಿಶೇಷವಾಗಿ ತರಬೇತಿಗಳನ್ನು ನಡೆಸಿ ಈ ಕಲೆಯನ್ನು ಬೆಳೆಸುವ ಉಳಿಸುವ ಜವಾಬ್ದಾರಿ ಮಾಡೋಣ ಎಂದು ತಿಳಿಸಿದರು. ಸಭೆಯ ದಿವ್ಯ ಸಾನಿಧ್ಯವನ್ನು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿಯ ವಿಶ್ವವಿದ್ಯಾಲಯದ ರಾಜಯೋಗಿನಿ ಬಿಕೆ ದಾನೇಶ್ವರಿ ಅಕ್ಕರವರು ವಹಿಸಿ ಆಶೀರ್ವದಿಸಿ ಜಿಲ್ಲೆಯಲ್ಲಿ ಗಮಕ ಕಲೆಯನ್ನು ಸಮೃದ್ಧವಾಗಿ ಬೆಳೆಸುವುದಕ್ಕಾಗಿ ನಮ್ಮೆಲ್ಲರ ಸಹಕಾರ ಸದಾ ಇರುತ್ತದೆ. ಸುಂದರ ಸಮಾಜ ,ಶಾಂತ ಸಮಾಜ, ಕಲೆ ಸಾಹಿತ್ಯ ಗಮಕದಿಂದ ಮಾತ್ರ ಸಾಧ್ಯವಾಗಿದೆ . ಸುರೇಶ್ ಎನ್ ಋಗ್ವೇದಿಯವರನ್ನು ಜಿಲ್ಲಾಧ್ಯಕ್ಷರಾಗಿ ನೇಮಿಸಿರುವುದಕ್ಕಾಗಿ ಗೌರವಿಸಿ ಸನ್ಮಾನಿಸಿದರು. ಕಾರ್ಯಕ್ರಮದಲ್ಲಿ ಬಿಕೆ ಆರಾಧ್ಯ ,ವಿಜಯಲಕ್ಷ್ಮಿ, ಡಾ.ಉಮಾರಾಣಿ, ವಾಸಂತಿ, ವೀರಶೆಟ್ಟಿ ,ಲಕ್ಷ್ಮೀನರಸಿಂಹ, ಕೆ ವೆಂಕಟರಾಜು, ಆರ್ ಡಿ ನಾಗರಾಜು ರವಿಚಂದ್ರಪ್ರಸಾದ್, ಪ್ರಫುಲ್ಲ, ವೇಣುಗೋಪಾಲ ಚಕ್ರವರ್ತಿ, ನಾಗಶ್ರೀ, ವಾಣಿಶ್ರೀ ,ಶಿವಲಿಂಗ ಮೂರ್ತಿ, ಡಾ. ಪರಮೇಶ್ವರಪ್ಪ ಪದ್ಮಾಕ್ಷಿ ,ಶ್ರೀನಿವಾಸ ಮುಂತಾದವರು ಉಪಸ್ಥಿತರಿದ್ದರು.

ಸಂಜೆ ಮುಗಿಲು
ಬುಧವಾರ 19.2.2025

# ಸಂಜೆ ಟಿಪ್ಸ್

## ರೆನಾಲ್ಟ್ ''ಕೈಗರ್'', ''ಟ್ರೈಬರ್'' ಬಿಡುಗಡೆ



ರೆನಾಲ್ಟ್ ಇಂಡಿಯಾ, ''ಕೈಗರ್'' ಮತ್ತು ''ಟ್ರೈಬರ್''ನ ತಾಜಾ ಆವೃತ್ತಿಗಳನ್ನು ಬಿಡುಗಡೆ ಮಾಡಿ ಅನೇಕ ಬುದ್ಧಿವಂತ ಹಾಗೂ ಆಲೋಚನಾಪೂರ್ವಕವಾದ ನವೀಕರಣಗಳ ಶ್ರೇಣಿಯೊಂದಿಗೆ ಅವುಗಳ ಅಪೀಲ್, ಚಾಲನಾ ಅನುಭವ ಹಾಗೂ ಕಾರ್ಯಕ್ಷಮತೆಯನ್ನು ವರ್ಧಿಸಿದೆ. ಈ ಬಿಡುಗಡೆಯ ಬಗ್ಗೆ ಮಾತನಾಡುತ್ತಾ, ರೆನಾಲ್ಟ್ ಇಂಡಿಯಾದ ಕಂಟ್ರಿ ಸಿಇಒ ಮತ್ತು ವ್ಯವಸ್ಥಾಪಕ ನಿರ್ದೇಶಕ ಶ್ರೀ ವೆಂಕಟ್ರಾಮ್ ಎಮ್, ರೆನಾಲ್ಟ್‌ನ ಜಾಗತಿಕ ಯೋಜನೆಯಲ್ಲಿ ಭಾರತವು ಮಹತ್ತರವಾದ ಸ್ಥಾನ ಪಡೆದುಕೊಂಡಿದ್ದು ಭಾರತೀಯ ಗ್ರಾಹಕರ ಸದಾ ಹೆಚ್ಚಾಗುತ್ತಿರುವ ಅಗತ್ಯಗಳನ್ನು ಪೂರೈಸುವುದಕ್ಕಾಗಿ ಮೊಬಿಲಿಟಿಯನ್ನು ಇನ್ನಷ್ಟು ಸ್ಮಾರ್ಟ್, ಹೆಚ್ಚು ಸುಲಭ ಹಾಗೂ ಅಗತ್ಯಕ್ಕೆ ತಕ್ಕಂತೆ ಮಾಡಲು ನಾವು ಬದ್ಧರಾಗಿದ್ದೇವೆ. ನವೀಕೃತಗೊಂಡಿರುವ ರೆನಾಲ್ಟ್ ಲೈನ್-ಅಪ್ ಅವುಗಳ ಅಪೀಲ್‌ಅನ್ನು ಬಲಪಡಿಸುವಂತಹ ಬುದ್ಧಿವಂತ ವರ್ಧನೆಗಳೊಂದಿಗೆ ಸ್ಟೈಲ್, ಆರಾಮ ಮತ್ತು ಆಧುನಿಕ ಗುಣವಿಶೇಷತೆಗಳ ಅತ್ಯಂತ ಸಮತುಲಿತ ಸಂಯೋಜನೆಯನ್ನು ಒದಗಿಸುತ್ತದೆ.'' ಎಂದು ಹೇಳಿದರು. ಗ್ರಾಹಕ ಹಾಗೂ ಮಾರುಕಟ್ಟೆ ಫೀಡ್‌ಬ್ಯಾಕ್ ಮೇಲೆ ಆಧಾರಿತಗೊಂಡು ಹೊಸ ನವೀಕೃತ ಕೈಗರ್ ಮತ್ತು ಟ್ರೈಬರ್, ಎಲ್ಲಾ ನಾಲ್ಕು ಪವರ್ ವಿಂಡೋಸ್, ರಿಮೋಟ್ ಕಂಟ್ರೋಲ್ ಲಾಕಿಂಗ್‌ಅನ್ನು, ಸಾಮಾನ್ಯ ಮಾನದಂಡವನ್ನಾಗಿ ಹೊಂದಿರುತ್ತದೆ. ಗ್ರಾಹಕ ಅನುಕೂಲತೆ ಹಾಗೂ ಅನುಭವವನ್ನು ವರ್ಧಿಸುವುದಕ್ಕಾಗಿ, ಆಪಲ್ ಕಾರ್ ಪ್ಲೇ ಮತ್ತು ಆಂಡ್ರಾಯ್ಡ್ ಆಟೋ ಇರುವ 8-ಅಂಗುಲ ಇನ್ಫೋಟೇನ್ಮೆಂಟ್ ಹಾಗೂ ರೇರ್ ವ್ಯೂ ಕ್ಯಾಮರಾ ಮುಂತಾದ ಇತ್ತೀಚಿನ ಕಾರಿನೊಳಗಿನ ತಂತ್ರಜ್ಞಾನವನ್ನು RXL ಗಿಂತ ಮೇಲಿನ ವೈವಿಧ್ಯದಲ್ಲಿ ಸೇರಿಸಲಾಗಿದ್ದು, ಇದು ಕಾರನ್ನು ಇನ್ನಷ್ಟು ಆಕರ್ಷಕ ಹಾಗೂ ಸುಲಭಗೊಳಿಸಿವೆ. ರೂ. 999995ದಲ್ಲಿ ಟರ್ಬೋ ಪೆಟ್ರೋಲ್ ಅಗಿಖಿ ಗೇರ್ಬಾಕ್ಸ್‌ನೊಂದಿಗೆ ಕೈಗರ್ RXT(O) ವೈವಿಧ್ಯವನ್ನು ವರ್ಧಿಸಿರುವ ರೆನಾಲ್ಟ್, ಆಧುನಿಕ ವಿನ್ಯಾಸ, ತಂತ್ರಜ್ಞಾನ, ಮತ್ತು ಚಾಲನೆ ಮಾಡಲು ಮೋಜಿನಿಂದ ಕೂಡಿದ ಅಂಶ ಬಯಸುತ್ತಿರುವ ಗ್ರಾಹಕರಿಗೆ ಪ್ರೀಮಿಯಮ್ ಮೌಲ್ಯ ಒದಗಿಸುತ್ತದೆ.

**ನಿಮಗಿದು ಗೊತ್ತೇ?**
ಎಂ. ವೆಂಕಟೇಶ್ ಶೇಷಾದ್ರಿ

44. ದಾಟು ಈ ಸಾಮಾಜಿಕ ಕಾದಂಬರಿಯ ರಚನೆಕಾರರು ಯಾರು ?

ಕ್ಷಶರು ಕಾಡ ಐಬ

# ಮಸಾಲ ಬಟಾಣಿ

## ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಬಟಾಣಿ ಉಪ್ಪು ಖಾರದ ಪುಡಿ ಎಣ್ಣೆ ಸೋಡಾ ಧನಿಯಾ ಪುಡಿ ಜೀರಿಗೆ ಪುಡಿ

### ಮಾಡುವ ವಿಧಾನ

ಮೊದಲು ಒಂದು ಬೌಲ್ಗೆ ಬಟಾಣಿಗಳನ್ನು ಹಾಕಿಕೊಳ್ಳಿ, ನಂತರ ಬಟಾಣಿಯನ್ನು ಚೆನ್ನಾಗಿ ನೀರಿನಲ್ಲಿ ತೊಳೆದು ಅದಕ್ಕೆ ಅರ್ಧ ಸ್ಪೂನ್ ಸೋಡಾ, ಉಪ್ಪು ನೀರು ಹಾಕಿಕೊಂಡು ನೆನೆಯಲು ಬಿಡಬೇಕು. ಒಂದು ರಾತ್ರಿ ಈ ಬಟಾಣಿಯನ್ನು ನೆನೆಯಲು ಬಿಡಬೇಕು. ಹೀಗೆ ನೆನೆಸಿದರೆ ಬಟಾಣಿ ಮೃದುವಾಗಿ ಬರುತ್ತದೆ. ಈಗ ಮಾರನೆ ದಿನ ಬಟಾಣಿಯನ್ನು ತೆಗೆದು ಮತ್ತೆ ಎರಡು ಬಾರು ತೊಳೆದು ಒಂದು ಬಟ್ಟೆಯಲ್ಲಿ ಹಾಕಿ ಒಣಗಿಸಿಕೊಳ್ಳಿ. ನೀರು ಇಲ್ಲದಂತೆ ಚೆನ್ನಾಗಿ ಒಣಗಬೇಕು. ನೀವು ಫ್ಯಾನ್ ಕೆಳಗೆ ಇಟ್ಟು ಒಣಗಿಸಬಹುದು. 15 ನಿಮಿಷ ಒಣಗಿಸಿದ ಬಳಿಕ ಈ ಬಟಾಣಿಯನ್ನು ತೆಗೆದು ಮತ್ತೆ ಪ್ಲೇಟ್ಗೆ ಹಾಕಿಕೊಳ್ಳಿ. ಈಗ ಒಲೆ ಮೇಲೆ ಒಂದು ಬಾಣಲೆ ಇಟ್ಟು ಅದಕ್ಕೆ ಎಣ್ಣೆ ಹಾಕಿ ಕಾಯಲು ಬಿಡಿ. ಎಣ್ಣೆ ಕಾದ ಬಳಿಕ ಸ್ವಲ್ಪ ಬಟಾಣಿಯನ್ನು ಹಾಕಿಕೊಂಡು ಫ್ರೈ ಮಾಡಿಕೊಳ್ಳಿ. ನೀವು ಜ್ಯೂಸ್ ಜರಡಿ ಹಿಡಿಯುವ ದೊಡ್ಡ ಜರಡಿ ಇದ್ದರೆ ಅದರ ಒಳಗೆ ಹಾಕಿ ಎಣ್ಣೆಯಲ್ಲಿ ಹಿಡಿಯಬಹುದು. ಸಣ್ಣ ಉರಿಯಲ್ಲಿ ಫ್ರೈ ಮಾಡಿ. ಹೀಗೆ ಎಣ್ಣೆಯಲ್ಲಿ ಫ್ರೈ ಮಾಡುವಾಗ ಸಿಡಿಯುವ ಸಾಧ್ಯತೆ ಇರುತ್ತೆ. ಹೀಗಾಗಿ ಎಚ್ಚರದಿಂದ ಇರಬೇಕು. ಆಗಾಗ ತಿರುಗಿಸುತ್ತಾ ಮೇಲೆ ಎತ್ತಿ ಮತ್ತೆ ಎಣ್ಣೆಯಲ್ಲಿ ಹಾಕುವುದು ಮಾಡುಯತ್ತಿರಬೇಕು. ಸುಮಾರು 10ರಿಂದ 15 ನಿಮಿಷ ಫ್ರೈ ಮಾಡಿಕೊಳ್ಳಬೇಕು. ಅನಂತರ ಈ ಬಟಾಣಿಯನ್ನು ಒಂದು ಬಟ್ಟೆಯ ಮೇಲೆ ಹಾಕಿಕೊಳ್ಳಿ. ಇದು ಎಣ್ಣೆಯನ್ನು ಹೀರಿಕೊಳ್ಳುತ್ತೆ. ಬಟ್ಟೆಯಿಂದ ಒರೆಸಿದರೆ ಎಣ್ಣೆ ಹೀರಿಕೊಳ್ಳುತ್ತೆ. ಈಗ ಬೌಲ್ನಲ್ಲಿರುವ ಬಟಾಣಿಗೆ ಉಪ್ಪು, ಖಾರದ ಪುಡಿ, ಚಿಟಿಕೆ ಧನಿಯಾ ಪುಡಿ, ಜೀರಿಗೆ ಪುಡಿ, ಚಾಟ್ ಮಸಾಲೆ ಹಾಕಿ ಮಿಕ್ಸ್ ಮಾಡಿಕೊಳ್ಳಿ. ಚೆನ್ನಾಗಿ ಮಿಕ್ಸ್ ಮಾಡಿದರೆ ನಿಮ್ಮ ಮುಂದೆ ರುಚಿ ರುಚಿಯ ಮಸಾಲೆ ಕಡ್ಲೆ ರೆಡಿಯಾಗುತ್ತೆ.

# ಬಾಳೆಹಣ್ಣಿನ ಜ್ಯೂಸ್ ಆರೋಗ್ಯ ಲಾಭ

## ಹೆಲ್ತ್ ಟಿಪ್ಸ್



ಬಾಳೆಹಣ್ಣಿನಲ್ಲಿ ಇರುವ ಪೊಟಾಶಿಯಂ ಅಂಶವು ರಕ್ತದೊತ್ತಡವನ್ನು ನಿಯಂತ್ರಣದಲ್ಲಿ ಇಡುವುದು. ಇದರಲ್ಲಿ ಇರುವಂತಹ ಅಧಿಕ ಮಟ್ಟದ ಪೊಟಾಶಿಯಂ ಅಂಶವು ಅಧಿಕ ರಕ್ತದೊತ್ತಡದಿಂದ ಕಾಪಾಡುವುದು. ಅದೇ ರೀತಿಯಾಗಿ ಹೃದಯದ ಕಾಯಿಲೆಗಳು, ಪಾರ್ಶ್ವವಾಯು ಮತ್ತು ಅಪಧಮನಿಕಾಠಿಣ್ಯದಿಂದ ರಕ್ಷಣೆ ನೀಡುವುದು.

ಅಧಿಕ ಮಟ್ಟದಲ್ಲಿ ಇರುವ ಪೊಟಾಶಿಯಂ ಅಂಶವು ಅದೇ ರೀತಿಯಾಗಿ ಟ್ರಿಪ್ಟೊಫಾನ್ ಅಂಶ ಬಾಳೆಹಣ್ಣಿನ ಜ್ಯೂಸ್ ನಲ್ಲಿದ್ದು, ಇದು ಮನಸ್ಥಿತಿ ಸುಧಾರಣೆ ಮಾಡುವುದು, ಅದೇ ರೀತಿಯಲ್ಲಿ ಇದು ಒತ್ತಡ ಹಾಗೂ ಆತಂಕ ತಗ್ಗಿಸುವುದು.

ಬಾಳೆಹಣ್ಣಿನಲ್ಲಿ ವಿವಿಧ ರೀತಿಯ ಸಕ್ಕರೆ ಅಂಶಗಳಿದ್ದು, ಇದರಿಂದ ದೇಹಕ್ಕೆ ತಕ್ಷಣವೇ ಶಕ್ತಿ ಸಿಗುವುದು. ಒಂದು ಬಾಳೆಹಣ್ಣು ಸೇವನೆ ಮಾಡಿದರೆ ಅದರಿಂದ ಮಾನಸಿಕ ಮತ್ತು ದೈಹಿಕ ಶಕ್ತಿಯು ಸಿಗುವುದು. ಬಾಳೆಹಣ್ಣಿನ ಜ್ಯೂಸ್ ತಯಾರಿಸಲು 2-3 ಬಾಳೆಹಣ್ಣು ಅಗತ್ಯವಾಗಿ ಬೇಕು.ವಿಟಮಿನ್ ಸಿ ಮತ್ತು ವಿವಿಧ ಬಗೆಯ ವಿಟಮಿನ್ ಬಿ ಹೊಂದಿರುವ ಬಾಳೆಹಣ್ಣಿನ ಜ್ಯೂಸ್ ಪ್ರತಿರೋಧಕ ಶಕ್ತಿ ವೃದ್ಧಿ ಮಾಡುವಲ್ಲಿ ತುಂಬಾ ಸಹಕಾರಿ. ಆಸ್ಕೋರ್ಬಿಕ್ ಆಮ್ಲವು ಬಿಳಿಯ ರಕ್ತ ಕಣಗಳನ್ನು ಉತ್ಪಾದಿಸಲು ಸಹಕಾರಿ ಮತ್ತು ಇದು ಆಕ್ಸಿಡೇಟಿವ್ ಒತ್ತಡವನ್ನು ತಗ್ಗಿಸುವುದು ಮತ್ತು ಫ್ರೀ ರ್ಯಾಡಿಕಲ್ ನ್ನು ತಟಸ್ಥಗೊಳಿಸುವುದು.

ಇದು ದೇಹಕ್ಕೆ ಆಹಾರದ ನಾರಿನಾಂಶವನ್ನು ಒದಗಿಸುವುದು ಮತ್ತು ವಿಟಮಿನ್ ಬಿ6 ಅಂಶವು ಬಾಳೆಹಣ್ಣಿನ ಜ್ಯೂಸ್ ನಲ್ಲಿದ್ದು, ದೇಹವನ್ನು ನಿರ್ವಿಷಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸುವುದು. ಯಕೃತ್ ಮತ್ತು ಕಿಡ್ನಿಯ ಕಾರ್ಯವನ್ನು ಇದು ಉತ್ತೇಜಿಸುವುದು. ದೇಹದಲ್ಲಿನ ಉಪ್ಪು, ವಿಷಕಾರಿ ಅಂಶವ ಮತ್ತು ಕೊಬ್ಬನ್ನು ಇದು ಕಡಿಮೆ ಮಾಡುವುದು.

# ಹೊಳಪಿನ ಚರ್ಮ ಪಡೆಯಲು ಈ ಹಣ್ಣುಗಳನ್ನು ಸೇವಿಸಿ

## ಬ್ಯೂಟಿ ಟಿಪ್ಸ್



ದೈನಂದಿನ ಆಹಾರದಲ್ಲಿ ಕೆಲವು ಆಹಾರಗಳನ್ನು ಸೇರಿಸುವುದರಿಂದ ಚರ್ಮದ ಹೊಳಪನ್ನು ಪಡೆಯಬಹುದು ಎಂದು ಮದ್ರಾಸ್ ಮಂಡಿಯ ಸಿಇಒ ಪ್ರಶಾಂತ್ ವಾಸನ್ ಹೇಳುತ್ತಾರೆ.

ಹಣ್ಣುಗಳು ಸಾಕಷ್ಟು ವಿಟಮಿನ್, ಖನಿಜಗಳು ಮತ್ತು ಉತ್ಕರ್ಷಣ ನಿರೋಧಕಗಳಿಂದ ಸಮೃದ್ಧವಾಗಿವೆ. ಇದು ಚರ್ಮದ ಆರೋಗ್ಯವನ್ನು ಉತ್ತೇಜಿಸುತ್ತದೆ ಎಂದು ಹೇಳುತ್ತಾರೆ.

ಬೆರ್ರಿಗಳು ಉತ್ಕರ್ಷಣ ನಿರೋಧಕಗಳಿಂದ ತುಂಬಿರುತ್ತವೆ. ಸಿಟ್ರಸ್ ಹಣ್ಣುಗಳು ಕಾಲಜನ್ ಉತ್ಪಾದನೆಯನ್ನು ಹೆಚ್ಚಿಸಲು ವಿಟಮಿನ್ ಸಿ ಅನ್ನು ಒದಗಿಸುತ್ತವೆ.

ಕ್ಯಾರೆಟ್ ಮತ್ತು ಸಿಹಿ ಆಲೂಗಡ್ಡೆಗಳು ಕ್ರಮವಾಗಿ ಬೀಟಾ-ಕ್ಯಾರೋಟಿನ್ ಮತ್ತು ಚರ್ಮವನ್ನು ಪ್ರೀತಿಸುವ ಜೀವಸತ್ವಗಳಲ್ಲಿ ಹೇರಳವಾಗಿವೆ.

ಆವಕಾಡೊ ಚರ್ಮವನ್ನು ಹೈಡ್ರೇಟ್ ಮಾಡುವ ಮತ್ತು ಪೋಷಿಸುವ ಆರೋಗ್ಯಕರ ಕೊಬ್ಬನ್ನು ನೀಡುತ್ತದೆ.

ಟೊಮೆಟೊ ಸೂರ್ಯನ ಹಾನಿಯಿಂದ ರಕ್ಷಿಸಲು ಲೈಕೋಪಿನ್ ಅನ್ನು ಹೊಂದಿರುತ್ತವೆ.

ಚರ್ಮದ ನವೀಕರಣಕ್ಕಾಗಿ ಸಹಕಾರಿಯಾದ ಪಪ್ಪಾಯಿಗಳು ಉತ್ತಮವಾದ ಕಿಣ್ವಗಳನ್ನು ಒಳಗೊಂಡಿರುತ್ತವೆ.

★ಚರ್ಮಕ್ಕೆ ಸ್ನೇಹಿ ಉತ್ಕರ್ಷಣ ನಿರೋಧಕಗಳನ್ನು ಒದಗಿಸುವಾಗ ಚರ್ಮವನ್ನು ಹೈಡ್ರೇಟ್ ಮಾಡಲು ಕರಬೂಜ ಹಣ್ಣು ಸಹಾಯ ಮಾಡುತ್ತವೆ ಎಂದು ಪ್ರಶಾಂತ್ ವಾಸನ್ ಹೇಳುತ್ತಾರೆ.

# ಸಂಚಲನ ಸೃಷ್ಟಿಸಿದ ಪ್ರಿಯಾಂಕಾ ಚೋಪ್ರಾ ಹೇಳಿಕೆ



ಪುರುಷರು ವರ್ಜಿನ್ ಹೆಂಡತಿಯರನ್ನು ಬಯಸಬಾರದು ಎಂಬ ಖ್ಯಾತ ನಟಿಯ ಕಾಮೆಂಟ್ಸ್ ಇದೀಗ ವೈರಲ್ ಆಗುತ್ತಿದೆ. ನೀವು ಬಯಸುವುದಕ್ಕಿಂತ ವಿಭಿನ್ನವಾಗಿ ಯೋಚಿಸಿದರೆ ಜೀವನವು ಉತ್ತಮವಾಗಿರುತ್ತದೆ ಎಂದು ನಟಿ ಮಾಡಿರುವ ಕಾಮೆಂಟ್ಸ್ ಇದೀಗ ಸಂಚಲನ ಸೃಷ್ಟಿಸಿದೆ.

ಸದ್ಯ ಮಹೇಶ್ ಬಾಬು ಜೊತೆ ರಾಜಮೌಳಿ ನಿರ್ದೇಶನದ ಪ್ಯಾನ್ ವರ್ಲ್ಡ್ ಚಿತ್ರಕ್ಕಾಗಿ ಹಾಲಿವುಡ್ ಮತ್ತು ಟಾಲಿವುಡ್ ನಡುವೆ ಓಡುತ್ತಿರುವ ಪ್ರಿಯಾಂಕಾ ಚೋಪ್ರಾ, ತಮ್ಮ ಕನ್ಯತ್ವದ ಬಗ್ಗೆ ಮಾತನಾಡಿದ ನಂತರ ಸಿಕ್ಕಾಪಟ್ಟೆ ಸಂಚಲನ ಸೃಷ್ಟಿಸಿದ್ದಾರೆ. ಗಂಡಂದಿರು ತಮ್ಮ ಹೆಂಡತಿಯರು ಕನ್ಯೆಯರಾಗುವುದನ್ನು ಬಯಸಬಾರದು ಎಂಬ ಪ್ರಿಯಾಂಕಾ ಹೇಳಿಕೆಯ ಬಗ್ಗೆ ವಿಭಿನ್ನ ಅಭಿಪ್ರಾಯಗಳು ಕೇಳಿ ಬರುತ್ತಿದೆ. ಆದರೆ ಪ್ರಿಯಾಂಕಾ ಹೀಗೆ ಹೇಳಲು ಒಂದು ಕಾರಣವಿದೆ.

ಪ್ರಿಯಾಂಕಾ ಚೋಪ್ರಾ, ಯಾವಾಗಲೂ ಜೋರಾಗಿ ಮಾತನಾಡುತ್ತಾರೆ. ಟೆಡ್ ಟಾಕ್‌ನಂತಹ ವೇದಿಕೆಗಳಿಂದ ಹಿಡಿದು ಹಲವಾರು ಪಾಡ್‌ಕ್ಯಾಸ್ಟ್‌ಗಳವರೆಗೆ, ಪ್ರಿಯಾಂಕಾ ತಮ್ಮ ಅಭಿಪ್ರಾಯಗಳನ್ನು ಧೈರ್ಯದಿಂದ ವ್ಯಕ್ತಪಡಿಸುತ್ತಲೇ ಇದ್ದಾರೆ. ಅವರು ಅನೇಕ ವೇದಿಕೆಗಳಲ್ಲಿ ಪ್ರೇರಕ ಭಾಷಣಗಳನ್ನು ನೀಡಿದ್ದಾರೆ. ಹತ್ತು ದಿನಗಳ ಹಿಂದೆ ನಡೆದ ತನ್ನ ಕಿರಿಯ ಸಹೋದರ ಸಿದ್ಧಾರ್ಥ್ ಚೋಪ್ರಾ ಅವರ ಮದುವೆಯಲ್ಲಿ ನಟಿ ಬೆರಗುಗೊಳಿಸಿದ್ದು, ಅವರು ಧರಿಸಿದ್ದ, ಮನೀಶ್ ಮಲ್ಹೋತ್ರಾ ವಿನ್ಯಾಸಗೊಳಿಸಿದ ಮತ್ತು 70 ಕೋಟಿ ರೂ. ಮೌಲ್ಯದ ಹಾರ ಎಲ್ಲರ ಗಮನ ಸೆಳೆಯಿತು.

200 ಕ್ಯಾರೆಟ್ ಪಚ್ಚೆ ಮತ್ತು ವಜ್ರಗಳಿಂದ ಮಾಡಿದ ಬಲ್ಗರಿ ಹಾರ. 71.24 ಕ್ಯಾರೆಟ್ ವಜ್ರಗಳು ಮತ್ತು 130.77 ಕ್ಯಾರೆಟ್ ಪಚ್ಚೆಗಳಿಂದ ಮಾಡಲ್ಪಟ್ಟ ಈ ಹಾರವನ್ನು 'ದಿ ಎಮರಾಲ್ಡ್ ವೀನಸ್' ಎಂದು ಹೆಸರಿಸಲಾಗಿದ್ದು, ಇದನ್ನು ತಯಾರಿಸಲು 1600 ಗಂಟೆಗಳು ಬೇಕಾಯಿತು ಎಂದು ವರದಿಯಾಗಿದೆ. ಪ್ರಿಯಾಂಕಾ ಚೋಪ್ರಾ ಅವರ ಹೇಳಿಕೆಗಳು ಸಂಚಲನ ಸೃಷ್ಟಿಸುತ್ತಿವೆ. ಈ ಹಿಂದೆ ಸಂಬಂಧಗಳ ಬಗ್ಗೆ ಮಾತನಾಡಿದ್ದ ಪ್ರಿಯಾಂಕಾ, 'ನನ್ನ ಹಿಂದಿನ ಅನುಭವಗಳಿಂದಾಗಿ ನಾನು ಡೇಟಿಂಗ್ ಮಾಡಲು ಹಿಂಜರಿಯುತ್ತಿದ್ದೆ. ಕೌಟುಂಬಿಕ ವಾತಾವರಣವನ್ನು ಪ್ರೀತಿಸುವ ವ್ಯಕ್ತಿಯೊಂದಿಗೆ ಜೀವನವನ್ನು ಹಂಚಿಕೊಳ್ಳುವುದು ನನ್ನ ಆಸೆ. ನಾನು ಹಿಂದಿನ ಸಂಬಂಧಗಳಲ್ಲಿ ಇದ್ದವರಿಂದ ಬಹಳಷ್ಟು ನೋವನ್ನು ಅನುಭವಿಸಿದ್ದೇನೆ. ಅದಕ್ಕಾಗಿಯೇ ನಾನು ಮೊದಲಿಗೆ ನಿಕ್ ಜೊತೆ ಡೇಟಿಂಗ್ ಮಾಡಲು ಹಿಂಜರಿಯುತ್ತಿದ್ದೆ ಎಂದು ಅವರು ಹೇಳಿದರು. ಈಗ ಎಲ್ಲಾ ಗಂಡಂದಿರು ತಮ್ಮ ಹೆಂಡತಿ ಕನ್ಯೆಯಾಗಿರಬಾರದು, ಬದಲಾಗಿ ಒಳ್ಳೆಯ ಗುಣಗಳನ್ನು ಹೊಂದಿರುವ ಹುಡುಗಿಯಾಗಿರಬೇಕೆಂದು ಬಯಸುತ್ತಾರೆ ಎಂದು ಹೇಳುತ್ತಾರೆ. ಏಕೆಂದರೆ ಒಂದೇ ರಾತ್ರಿಯಲ್ಲಿ ಕನ್ಯತ್ವ ಕಳೆದುಕೊಳ್ಳಬಹುದು. ಒಳ್ಳೆಯ ಗುಣಗಳು ಜೀವಿತಾವಧಿಯವರೆಗೆ ಇರುತ್ತವೆ ಎಂದು ಅವರು ಹೇಳಿದರು. ಆದಾಗ್ಯೂ, ಕೆಲವರು ಇದನ್ನು ಹುಡುಗರಿಗೂ ಅನ್ವಯಿಸಬೇಕು ಎಂದು ಹೇಳುತ್ತಾರೆ. ಪ್ರಿಯಾಂಕಾ ಅವರ ಈ ಹೇಳಿಕೆ ಈಗ ಸಂಚಲನ ಮೂಡಿಸುತ್ತಿದೆ. ಈ ಬಗ್ಗೆ ನೆಟ್ಟಿಗರು ವಿವಿಧ ರೀತಿಯ ಕಾಮೆಂಟ್‌ಗಳನ್ನು ಕೂಡ ಮಾಡುತ್ತಿದ್ದಾರೆ.

# ರಾಷ್ಟ್ರೀಯ ಕ್ರೀಡಾಕೂಟದಲ್ಲಿ ರಿಲಯನ್ಸ್ ಫೌಂಡೇಶನ್ ಕ್ರೀಡಾಪಟುಗಳಿಂದ ಇತಿಹಾಸ ಸೃಷ್ಟಿ




ರಿಲಯನ್ಸ್ ಫೌಂಡೇಶನ್ ಕ್ರೀಡಾಪಟುಗಳು 38ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಅದ್ಭುತ ಪ್ರದರ್ಶನ ನೀಡಿ 43 ಪದಕಗಳನ್ನು ಗೆದ್ದಿದ್ದಾರೆ. ಇವುಗಳಲ್ಲಿ 20 ಚಿನ್ನ, 16 ಬೆಳ್ಳಿ ಮತ್ತು 7 ಕಂಚಿನ ಪದಕಗಳು ಸೇರಿವೆ. ಅಥ್ಲೆಟಿಕ್ಸ್‌ನಲ್ಲಿ ರಿಲಯನ್ಸ್ ಫೌಂಡೇಶನ್ ಅಥ್ಲೀಟ್ಗಳು ಪ್ರಾಬಲ್ಯವನ್ನು ಸಾಧಿಸಿ ಒಟ್ಟು 21 ಪದಕಗಳನ್ನು ಗೆದ್ದುಕೊಂಡಿದ್ದಾರೆ. ಅನಿಮೇಶ್ ಕುಜೂರ್ 100 ಮೀ, 200 ಮೀ ಮತ್ತು 4★100 ಮೀ ರಿಲೇಯಲ್ಲಿ ಮೂರು ಚಿನ್ನದ ಪದಕಗಳನ್ನು ಗೆಲ್ಲುವ ಮೂಲಕ ಸ್ಟಾರ್ ಅಥ್ಲೀಟ್ ಆಗಿ ಹೊರಹೊಮ್ಮಿದರು.

ಒಲಿಂಪಿಯನ್ ಅಥ್ಲೀಟ್ ಜ್ಯೋತಿ ಯರ್ರಾಜಿ 100 ಮೀಟರ್ ಹರ್ಡಲ್ಸ್ ಮತ್ತು 200 ಮೀಟರ್ ಓಟದ ಸ್ಪರ್ಧೆಗಳಲ್ಲಿ ಎರಡು ಚಿನ್ನದ ಪದಕಗಳನ್ನು ಗೆಲ್ಲುವ ಮೂಲಕ ಸ್ವರ್ಣ ಗೆಲುವಿನ ಓಟವನ್ನು ಮುಂದುವರಿಸಿದರು. ರಾಷ್ಟ್ರೀಯ ದಾಖಲೆ ಹೊಂದಿರುವ ತೇಜಸ್ ಶಿರ್ಸೆ ಪುರುಷರ 110 ಮೀಟರ್ ಹರ್ಡಲ್ಸ್‌ನಲ್ಲಿ ಚಿನ್ನ ಗೆಲ್ಲುವ ಮೂಲಕ ಪದಕ ಸಾಧಕರ ಪಟ್ಟಿಗೆ ಸೇರ್ಪಡೆಯಾದರು.

ಜ್ಯೋತಿ ಮತ್ತು ತೇಜಸ್ ಇಬ್ಬರೂ ಕಳೆದ ಮೂರು ರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಸತತವಾಗಿ ಚಿನ್ನದ ಪದಕಗಳನ್ನು ಗೆದ್ದಿದ್ದಾರೆ. ಸಾವನ್ 5000 ಮೀ ಮತ್ತು 10,000 ಮೀ ಓಟದಲ್ಲಿ ಚಿನ್ನದ ಪದಕ, ಕಿರಣ್ ಮ್ಹಾತ್ರೆ 10,000 ಮೀ ಬೆಳ್ಳಿ ಪದಕ ಗೆದ್ದರು. ಇದರೊಂದಿಗೆ ಕಿರಣ್ 2025ರಲ್ಲಿ ನಡೆಯಲಿರುವ ಏಷ್ಯನ್ ಚಾಂಪಿಯನ್ಶಿಪ್ಗೂ ಅರ್ಹತೆ ಪಡೆದಿದ್ದಾರೆ.

''ರಿಲಯನ್ಸ್ ಫೌಂಡೇಶನ್ ಕ್ರೀಡಾಪಟುಗಳಿಗೆ ಇದು ಅತ್ಯಂತ ಯಶಸ್ವಿ ರಾಷ್ಟ್ರೀಯ ಕ್ರೀಡಾಕೂಟವಾಗಿದ್ದು, ಅಥ್ಲೆಟಿಕ್ಸ್‌ನಲ್ಲಿ ನಾವು ಏಳು ವೈಯಕ್ತಿಕ ಅತ್ಯುತ್ತಮ ಸಾಧನೆಗಳನ್ನು ಸಾಧಿಸಿದ್ದೇವೆ ಮತ್ತು ಹಲವಾರು ಹೊಸ ದಾಖಲೆಗಳನ್ನು ರಚಿಸಿದ್ದೇವೆ.

ನಮ್ಮ ಅಥ್ಲೆಟಿಕ್ಸ್ ತಂಡವು 12 ಚಿನ್ನದ ಪದಕಗಳನ್ನು ಗೆದ್ದಿದೆ. ಇದು ಮುಂಬರುವ ಋತುವಿನಲ್ಲಿ ಅವರಿಗೆ ಆತ್ಮವಿಶ್ವಾಸವನ್ನು ತುಂಬುತ್ತದೆ ಎಂದು ನಾವು ಭಾವಿಸುತ್ತೇವೆ ಎಂದು ಒಡಿಶಾದ ರಿಲಯನ್ಸ್ ಫೌಂಡೇಶನ್ ಹೈ ಪರ್ಫಾರ್ಮೆನ್ಸ್ ಸೆಂಟರ್ನ ಮುಖ್ಯ ತರಬೇತುದಾರ ಮಾರ್ಟಿನ್ ಓವೆನ್ಸ್ ಹೇಳಿದರು.

ಮೌಮಿತಾ ಮಂಡಲ್ ಲಾಂಗ್ ಜಂಪ್‌ನಲ್ಲಿ ಚಿನ್ನದ ಪದಕ ಮತ್ತು 100 ಮೀಟರ್ ಹರ್ಡಲ್ಸ್‌ನಲ್ಲಿ ಬೆಳ್ಳಿ ಪದಕ ಗೆದ್ದಿದ್ದಾರೆ. ಸತ್ಯನ್ ಜ್ಞಾನಶೇಖರನ್ ಟೇಬಲ್ ಟೆನಿಸ್ ಪುರುಷರ ಡಬಲ್ಸ್‌ನಲ್ಲಿ ಚಿನ್ನದ ಪದಕ, ಪುರುಷರ ಸಿಂಗಲ್ಸ್‌ನಲ್ಲಿ ಬೆಳ್ಳಿ ಮತ್ತು ಪುರುಷರ ಟೀಮ್ ವಿಭಾಗದಲ್ಲಿ ಕಂಚಿನ ಪದಕ ಗೆದ್ದರು. ಶೂಟರ್ ಗನಿಮತ್ ಸೆಖೋನ್ ಸ್ಕೀಟ್‌ನಲ್ಲಿ ಚಿನ್ನದ ಪದಕ ಗೆದ್ದರು, ಅರ್ಹತಾ ಸುತ್ತಿನಲ್ಲಿ 124 ಅಂಕಗಳೊಂದಿಗೆ ರಾಷ್ಟ್ರೀಯ ದಾಖಲೆ ನಿರ್ಮಿಸಿದರು.

ಅನುಭವಿ ಶೂಟರ್ ಗುರುಪ್ರೀತ್ ಸಿಂಗ್ 25 ಮೀಟರ್ ರ್ಯಾಪಿಡ್ ಫೈರ್ ಪಿಸ್ತೂಲ್‌ನಲ್ಲಿ ಬೆಳ್ಳಿ ಪದಕ ಮತ್ತು 10 ಮೀಟರ್ ಏರ್ ಪಿಸ್ತೂಲ್‌ನಲ್ಲಿ ಕಂಚಿನ ಪದಕ ಗೆದ್ದಿದ್ದಾರೆ. ನೀರಜ್ ಕುಮಾರ್ 50 ಮೀಟರ್ ರೈಫಲ್ 3 ಪೊಸಿಷನ್ ಸ್ಪರ್ಧೆಯಲ್ಲಿ ಚಿನ್ನದ ಪದಕ ಗೆದ್ದರೆ, ಮಹಿಳೆಯರ 10 ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಪಾಲಕ್ ಗುಲಿಯಾ ಬೆಳ್ಳಿ ಪದಕ ಗೆದ್ದರು.

ಮಹಿಳೆಯರ 50 ಮೀಟರ್ ರೈಫಲ್ 3 ಪೊಸಿಷನ್ ವಿಭಾಗದ ಅರ್ಹತಾ ಸುತ್ತಿನಲ್ಲಿ ಆಶಿ ಚೌಕ್ಸೆ ವಿಶ್ವದಾಖಲೆಯನ್ನು ಮುರಿದರು. ಬ್ಯಾಡ್ಮಿಂಟನ್ ಯುವತಾರೆ ಉನ್ನತಿ ಹೂಡಾ ಹರಿಯಾಣದ ಮಹಿಳಾ ತಂಡ ಚಾಂಪಿಯನ್ಶಿಪ್ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದರು. ಕಳೆದ ಆವೃತ್ತಿಯಲ್ಲಿ ಚಿನ್ನದ ಪದಕದ ನಂತರ ಅನುಪಮಾ ಉಪಾಧ್ಯಾಯ ಮಹಿಳೆಯರ ಸಿಂಗಲ್ಸ್‌ನಲ್ಲಿ ಈ ಬಾರಿ ಬೆಳ್ಳಿ ಪದಕ ಗೆದ್ದರು.

ಆರ್ಚರಿಯಲ್ಲಿ ಗೋಲ್ಡಿ ಮಿಶ್ರಾ ಪುರುಷರ ರಿಕರ್ವ್ ಟೀಮ್ ಈವೆಂಟ್‌ನಲ್ಲಿ ಚಿನ್ನ ಮತ್ತು ಮಿಶ್ರ ತಂಡ ಸ್ಪರ್ಧೆಯಲ್ಲಿ ಕಂಚು ಗೆದ್ದರೆ, ಪುರುಷರ ರಿಕರ್ವ್ ವೈಯಕ್ತಿಕ ಸ್ಪರ್ಧೆಯಲ್ಲಿ ಜುಯೆಲ್ ಸರ್ಕಾರ್ ಚಿನ್ನ ಗೆಲ್ಲುವ ಮೂಲಕ ತನ್ನ ಅಭಿಯಾನವನ್ನು ಉನ್ನತ ಮಟ್ಟದಲ್ಲಿ ಕೊನೆಗೊಳಿಸಿದರು. ಪ್ಯಾರಿಸ್ ಒಲಿಂಪಿಕ್ಸ್‌ನ ನಂತರ ವಾಪಸಾದ ಬಾಕ್ಸರ್ ಲವ್ಲಿನಾ ಬೊರ್ಗೊಹೈನ್ ಮಹಿಳೆಯರ 75 ಕೆಜಿ ವಿಭಾಗದಲ್ಲಿ ಉನ್ನತ ದರ್ಜೆಯ ಪ್ರದರ್ಶನದೊಂದಿಗೆ ಬಾಕ್ಸಿಂಗ್‌ನಲ್ಲಿ ಚಿನ್ನದ ಪದಕವನ್ನು ಗೆದ್ದರು.

# ರಾಶಿ ಭವಿಷ್ಯ



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ವೆಚ್ಚಗಳಿಗೆ ಕಡಿವಾಣ ಹಾಕಿ, ಶತ್ರು ಭಾದೆ ನಿವಾರಣೆ, ಮನಶಾಂತಿ, ಉನ್ನತ ಶಿಕ್ಷಣದಲ್ಲಿ ಪ್ರಗತಿ, ವಿದೇಶ ವ್ಯವಹಾರಗಳಿಗಾಗಿ ಪ್ರಯಾಣ.

**ವೃಷಭ:** ಜನರ ಬೆಂಬಲ ನಿಮಗೆ ಹೆಚ್ಚುವುದು, ನಿರೀಕ್ಷೆಗೆ ತಕ್ಕಂತೆ ಆದಾಯ,

**ಮಿಥುನ:** ಮಾನಸಿಕ ಚಿಂತೆ, ವೃತ್ತಿಯಲ್ಲಿ ಸಣ್ಣ ಪುಟ್ಟ ಅಸಮಾಧಾನ, ಎಚ್ಚರ.

**ಕಟಕ:** ಈ ದಿನ ವಾಹನ ಯೋಗ, ಪರಿಚಿತರಿಂದ ಮೋಸಕ್ಕೆ ಒಳಗಾಗುವಿರಿ, ಆರೋಗ್ಯದಲ್ಲಿ ಏರುಪೇರು, ಅಕಾಲ ಭೋಜನ.

**ಸಿಂಹ:** ಯತ್ನ ಕಾರ್ಯಗಳಲ್ಲಿ ಜಯ, ಕ್ರಯ ವಿಕ್ರಯದಲ್ಲಿ ಲಾಭ, ಹಿತ ಶತ್ರುಭಾದೆ, ವ್ಯವಹಾರದಲ್ಲಿ ಜಾಣ್ಮೆಯಿಂದ ವರ್ತಿಸಿ..

**ಕನ್ಯಾ:** ಸ್ವಯಂ ಸಾಮರ್ಥ್ಯದಿಂದ ಅವಕಾಶ, ಅಲ್ಪ ಲಾಭ ಅಧಿಕ ಖರ್ಚು, ಜಮೀನಿನ ವಿಷಯಗಳು ಇತ್ಯರ್ಥ.

**ತುಲಾ:** ಮಾಡಿದ ಕೆಲಸಗಳಿಂದ ಪಶ್ಚಾತಾಪ, ರಾಜಕೀಯ ವ್ಯಕ್ತಿಗಳ ಭೇಟಿ, ಸೇವಕ ವರ್ಗದವರಿಂದ ತೊಂದರೆ.

**ವೃಶ್ಚಿಕ:** ಬಂಧು ಮಿತ್ರರಲ್ಲಿ ವಿರೋಧ, ಮನೋವ್ಯಥೆ, ಅನಾರೋಗ್ಯ, ಆಲಸ್ಯ, ಸ್ಥಳ ಬದಲಾವಣೆ, ಚಂಚಲ ಮನಸ್ಸು.

**ಧನಸ್ಸು:** ಅಧಿಕ ತಿರುಗಾಟ, ದುಷ್ಟರಿಂದ ದೂರವಿರಿ, ಸಗಟು ವ್ಯಾಪಾರದಲ್ಲಿ ಧನ ಲಾಭ, ಆಲೋಚಿಸಿ ನಿರ್ಣಯ ತೆಗೆದುಕೊಳ್ಳುವುದು ಸೂಕ್ತ.

**ಮಕರ:** ತಾತ್ಕಾಲಿಕ ಸಮಸ್ಯೆಗಳು ಬಗೆಹರಿಯಲಿವೆ, ಮನೆ ನಿರ್ಮಾಣದ ಕೆಲಸಕ್ಕಾಗಿ ಖರ್ಚು, ದಾಂಪತ್ಯದಲ್ಲಿ ಪ್ರೀತಿ.

**ಕುಂಭ:** ಉದ್ಯೋಗ ಕ್ಷೇತ್ರದಲ್ಲಿ ತೊಂದರೆ, ಮನೆಯಲ್ಲಿ ಶಾಂತಿ, ಆರ್ಥಿಕ ಪರಿಸ್ಥಿತಿ ಚೇತರಿಕೆ.

**ಮೀನ:** ಕಮಿಷನ್ ಏಜೆಂಟ್ ಗಳಿಗೆ ನಷ್ಟ, ಆರೋಗ್ಯದಲ್ಲಿ ಏರುಪೇರು, ಶತ್ರುಭಾದೆ, ಸ್ತ್ರೀಯರಿಗೆ ಶುಭ, ಉದ್ಯೋಗದಲ್ಲಿ ಕಿರಿಕಿರಿ.

# ಶಿವಾಜಿ ಜಯಂತಿ




ಫೆಬ್ರವರಿ 19 ರಂದು ಭಾರತದಲ್ಲಿ ಮರಾಠರ ಮಹಾನ್ ಚಕ್ರವರ್ತಿಯ ಜಯಂತಿಯನ್ನು ಆಚರಿಸುವ ಹಬ್ಬ ಶಿವಾಜಿ ಜಯಂತಿ. ಮಹಾರಾಷ್ಟ್ರ ರಾಜ್ಯದಲ್ಲಿ ಚಕ್ರವರ್ತಿಯ ಜನನ ಮತ್ತು ಜೀವನವನ್ನು ಗೌರವಿಸಲು ಈ ರಜಾದಿನವನ್ನು ಆಚರಿಸಲಾಗುತ್ತದೆ. ಈ ಆಚರಣೆ ಸುಮಾರು 400 ವರ್ಷಗಳಷ್ಟು ಹಳೆಯದು!

ಈ ಹೆಸರನ್ನು ಮೂರು ಬಾರಿ ಹೇಳಲು ಪ್ರಯತ್ನಿಸಿ: ಛತ್ರಪತಿ ಶಿವಾಜಿ ಮಹಾರಾಜ್ ಜಯಂತಿ. ಇದು 17 ನೇ ಶತಮಾನದಲ್ಲಿ ಮರಾಠಾ ಸಾಮ್ರಾಜ್ಯದ ಮಹಾನ್ ಚಕ್ರವರ್ತಿಯ ಹೆಸರು. ಅವರು ಫೆಬ್ರವರಿ 19, 1630 ರಂದು ಶಿವನೇರಿ ಕೋಟೆಯಲ್ಲಿ ಜನಿಸಿದರು. ಮಗನಿಗಾಗಿ ತನ್ನ ತಾಯಿಯ ಪ್ರಾರ್ಥನೆಗಳನ್ನು ಆಶೀರ್ವದಿಸಿದ ದೇವತೆ ಶಿವಾಯಿಯ ಹೆಸರನ್ನು ಅವರಿಗೆ ಇಡಲಾಯಿತು.

ಶಿವಾಜಿ 17 ನೇ ವಯಸ್ಸಿನಲ್ಲಿ ತೋರ್ನಾ, ರಾಯಗಡ್ ಮತ್ತು ಕೊಂಡನ ಕೋಟೆಗಳನ್ನು ವಶಪಡಿಸಿಕೊಂಡ ನಂತರ ಮರಾಠಾ ಸಾಮ್ರಾಜ್ಯವನ್ನು ಸ್ಥಾಪಿಸಿದರು. ಮರಾಠಾ ಚಕ್ರವರ್ತಿಯಾಗಿ ಅವರ ಪಟ್ಟಾಭಿಷೇಕವು 1674 ರಲ್ಲಿ ರಾಯಗಡ್ನಲ್ಲಿ 44 ವರ್ಷ ವಯಸ್ಸಿನಲ್ಲಿ ನಡೆಯಿತು. ಇದಕ್ಕೆ 50,000 ಜನರು ಹಾಜರಿದ್ದರು. ಅವರು ತಮ್ಮ ಆಳ್ವಿಕೆಯಲ್ಲಿ ನ್ಯಾಯಾಲಯದಲ್ಲಿ ಸಂಸ್ಕೃತ ಮತ್ತು ಮರಾಠಿ ಭಾಷೆಗಳ ಬಳಕೆಯನ್ನು ಉತ್ತೇಜಿಸಿದರು. ಅವರು ಒಬ್ಬ ಮಹಾನ್ ಯೋಧ ಮತ್ತು ಬುದ್ಧಿವಂತ ನಾಯಕರಾಗಿದ್ದರು, ಅವರು ತಮ್ಮ ಆಳ್ವಿಕೆಯಲ್ಲಿ ರಾಜಕೀಯವನ್ನು ಚೆನ್ನಾಗಿ ನಿರ್ವಹಿಸಿದರು. ಅವರಿಗೆ ನಾಲ್ಕು ಹೆಂಡತಿಯರು ಮತ್ತು ಎಂಟು ಮಕ್ಕಳಿದ್ದರು. ನಂತರ ಅವರು 1680 ರಲ್ಲಿ 50 ನೇ ವಯಸ್ಸಿನಲ್ಲಿ ಜ್ವರ ಮತ್ತು ಭೇದಿಯಿಂದ ನಿಧನರಾದರು.

ಶಿವಾಜಿ ಧೈರ್ಯ, ಸ್ವಾತಂತ್ರ್ಯ ಮತ್ತು ಸ್ವಾತಂತ್ರ್ಯಕ್ಕಾಗಿ ಹೋರಾಟವನ್ನು ಪ್ರತಿನಿಧಿಸುವ ವ್ಯಕ್ತಿ. ಈ ರಜಾದಿನವನ್ನು ಮೊದಲು ಲೋಕಮಾನ್ಯ ತಿಲಕ್ 1895 ರಲ್ಲಿ ಪುಣೆಯಲ್ಲಿ ಆಚರಿಸಿದರು. ಸ್ವಾತಂತ್ರ್ಯ ಹೋರಾಟಗಾರ ಬಾಲಗಂಗಾಧರ್ ಅವರು ಶಿವಾಜಿಯ ಸಾಧನೆಗಳನ್ನು ಘೋಷಿಸುವ ಮೂಲಕ, ಭಾರತದಲ್ಲಿ ರಜಾದಿನವನ್ನು ವ್ಯಾಪಕವಾಗಿ ಆಚರಿಸುವ ಮೂಲಕ ರಜಾದಿನವನ್ನು ಜನಪ್ರಿಯಗೊಳಿಸಿದರು. ಶಿವಾಜಿ ವಶಪಡಿಸಿಕೊಂಡ ಮೊದಲ ಸ್ಥಳದಲ್ಲಿ ಒಟ್ಟುಗೂಡಿ ಅವರ ಕೃತ್ಯಗಳು ಮತ್ತು ಸಾಧನೆಗಳನ್ನು ಸ್ಮರಿಸುವ ಮೂಲಕ ರಜಾದಿನವನ್ನು ಆಚರಿಸಲಾಗುತ್ತದೆ. ಅವರ ಚಿಕ್ಕ ವಯಸ್ಸಿನಲ್ಲಿ ಅವರ ಮಹಾನ್ ಸಾಹಸಗಳನ್ನು ಮತ್ತು ಅವರನ್ನು ಮರಾಠರ ನಾಯಕನನ್ನಾಗಿ ಸ್ಥಾಪಿಸಿದ ಮಹಾನ್ ಯುದ್ಧ ತಂತ್ರಗಳನ್ನು ನಾವು ಗೌರವಿಸುತ್ತೇವೆ.

## ಡೊನಾಲ್ಡ್ ಟ್ರಂಪ್, ಎಲೋನ್ ಮಸ್ಕ್ ವಿರುದ್ಧ ಕೆಲವೆಡೆ ಪ್ರತಿಭಟನೆ!



ಬೋಸ್ಟನ್: ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಅವರ ನೀತಿಗಳ ವಿರುದ್ಧ ಅಮೆರಿಕದ ಕೆಲವೆಡೆ ಪ್ರತಿಭಟನೆ ವ್ಯಕ್ತವಾಗಿದೆ. 'ಪ್ರೆಸಿಡೆಂಟ್ಸ್ 'ದಿನವಾದ ನಿನ್ನೆ ಬೋಸ್ಟನ್ ಸೇರಿದಂತೆ ಕೆಲವಡೆ ಪ್ರತಿಭಟನೆ ನಡೆಸಿದ ಪ್ರತಿಭಟನಾಕಾರರು, ಡೊನಾಲ್ಡ್ ಟ್ರಂಪ್ ಹಾಗೂ ಎಲೋನ್ ಮಸ್ಕ್ ಅವರ ಜನ ವಿರೋಧಿ ನೀತಿಗಳನ್ನು ಖಂಡಿಸಿದರು.

ಅಧ್ಯಕ್ಷರ ದಿನದಂದು ರಾಜರಿಲ್ಲ ಎಂದು ಘೋಷಣೆ ಕೂಗಿದ ಪ್ರತಿಭಟನಾಕಾರರು, ಫೆಡರಲ್ ವಲಸೆ ಜಾರಿ ಮಸೂದೆ ವಿರೋಧಿಸಿ ಅರಿಜೋನಾ ಸ್ಟೇಟ್ ಹೌಸ್ ಗೆ ನುಗ್ಗಲು ಪ್ರಯತ್ನಿಸಿದರು.

ಫ್ಲೋರಿಡಾ ಮತ್ತು ಕ್ಯಾಲಿಫೋರ್ನಿಯಾದಲ್ಲಿ ನೂರಾರು ಪ್ರತಿಭಟನಾಕಾರರು ನನ್ನ ಅಧ್ಯಕ್ಷರ ದಿನವಲ್ಲ ಎಂದು ಘೋಷಣೆ ಕೂಗಿ ಪ್ರತಿಭಟನೆ ನಡೆಸಿದ್ದಾಗಿ ಮಾಧ್ಯಮಗಳು ವರದಿ ಮಾಡಿವೆ.

ಸಹಸ್ರಾರು ಜನರು ಸೇರಿ 'ಓಂ ಏಟಿರ' ಥೀಮ್ ಅಡಿ ಪ್ರತಿಭಟನೆ ಆಯೋಜಿಸಿದ್ದರು. ಎರಡು ವಾರಗಳಲ್ಲಿ ಅಮೆರಿಕದಾದ್ಯಂತ ನಡೆದ ಅತ್ಯಂತ ಎರಡನೇ ದೊಡ್ಡ ಪ್ರತಿಭಟನೆ ಇದಾಗಿದೆ.

ಈ ಹಿಂದೆ ಫೆಬ್ರವರಿ 5 ರಂದು ಇದೇ ರೀತಿಯ ಬೃಹತ್ ಪ್ರತಿಭಟನೆ ನಡೆದಿತ್ತು. ಎರಡೂ ಪ್ರತಿಭಟನೆಗಳಲ್ಲಿ ಡೊನಾಲ್ಡ್ ಟ್ರಂಪ್ ಹಾಗೂ ಎಲೋನ್ ಮಸ್ಕನ್ ಅವರ ನೀತಿಗಳನ್ನು ಜನರು ಖಂಡಿಸಿದ್ದಾರೆ.

ಬೋಸ್ಟನ್ ನಿಂದ ಸ್ಟೇಟ್ ಹೌಸ್ ನಿಂದ ಸಿಟಿ ಹಾಲ್ ವರೆಗೂ ಸುಮಾರು 1,000 ಜನರು ಪ್ರತಿಭಟನಾ ಮೆರಣಿಗೆ ನಡೆಸಿದ್ದು, ಎಲೋನ್ ಮಾಸ್ಕ್ ತೊಲಗಬೇಕು ಮತ್ತಿತರ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ. ವಾಷಿಂಗ್ಟನ್ ಡಿಸಿ, ಫ್ಲೋರಿಡಾ ಸೇರಿದಂತೆ ಅಮೆರಿಕದ ಕೆಲವು ಪ್ರಮುಖ ನಗರಗಳಲ್ಲಿ ಪ್ರತಿಭಟನೆ ನಡೆಯಿತು.

**ಅತಿ ಹೆಚ್ಚು ತೆರಿಗೆ ವಿಧಿಸುವ ದೇಶಗಳಲ್ಲಿ ಭಾರತ ಕೂಡ ಒಂದು**

## ಇಂಡಿಯಾ ಬಳಿ ಸಾಕಷ್ಟು ಹಣವಿದೆ ನಾವೇಕೆ ಅವರಿಗೆ ಹಣ ನೀಡಬೇಕು

**ವಾಷಿಂಗ್ಟನ್** : ಭಾರತ ಬಳಿ ಸಾಕಷ್ಟು ಹಣ ಇರುವಾಗ , ನಾವೇಕೆ ಭಾರತಕ್ಕೆ 21 ಮಿಲಿಯನ್ ಡಾಲರ್ ಗಳನ್ನು ನೀಡಬೇಕು ಎಂದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರಶ್ನಿಸಿದ್ದಾರೆ.

ಫ್ಲೋರಿಡಾದಲ್ಲಿರುವ ತನ್ನ ನಿವಾಸ ಮಾರ್ -ಎ-ಲಾಗೊದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನಾವು ಭಾರತಕ್ಕೆ 21 ಮಿಲಿಯನ್ ಡಾಲರ್‌ಗಳನ್ನು ಏಕೆ ನೀಡುತ್ತಿದ್ದೇವೆ? ಅವರ ಬಳಿ ಹೆಚ್ಚು ಹಣವಿದೆ. ವಿಶ್ವದಲ್ಲಿ ಅತಿ ಹೆಚ್ಚು ತೆರಿಗೆ ವಿಧಿಸುವ ದೇಶಗಳಲ್ಲಿ ಭಾರತ ಒಂದು. ಅವರ ಸುಂಕಗಳು ತುಂಬಾ ಹೆಚ್ಚಿರುವುದರಿಂದ ನಮ್ಮ ವಸ್ತುಗಳು ಅಲ್ಲಿಗೆ ಹೋಗುವುದು ಕಷ್ಟ ಎಂದು ಹೇಳಿದ್ದಾರೆ. ಭಾರತ ಮತ್ತು ಅವರ ಪ್ರಧಾನಿಯ ಬಗ್ಗೆ ನನಗೆ ತುಂಬಾ ಗೌರವವಿದೆ. ಆದರೆ ಮತದಾನಕ್ಕೆ 21 ಮಿಲಿಯನ್ ಡಾಲರ್‌ಗಳನ್ನು ನೀಡಬೇಕೇ?,ಎಂದು ಡೊನಾಲ್ಡ್



ಟ್ರಂಪ್ ಪ್ರಶ್ನಿಸಿದ್ದಾರೆ.

ಭಾರತದಲ್ಲಿ ಮತದಾನಕ್ಕಾಗಿ ಗೊತ್ತುಪಡಿಸಿದ 21 ಮಿಲಿಯನ್ ಡಾಲರ್ ನಿಧಿಯನ್ನು ರದ್ದುಗೊಳಿಸುವ ಸರ್ಕಾರಿ ದಕ್ಷತೆ ಇಲಾಖೆ ನಿರ್ಧಾರವನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಮರ್ಥಿಸಿಕೊಂಡಿದ್ದಾರೆ. ಬೆಳೆಯುತ್ತಿರುವ ಆರ್ಥಿಕತೆ ಮತ್ತು ಹೆಚ್ಚಿನ ತೆರಿಗೆ ವಿಧಿಸುತ್ತಿರುವ ಭಾರತಕ್ಕೆ ಅಂತಹ ಆರ್ಥಿಕ ಬೆಂಬಲದ ಅಗತ್ಯವಿಲ್ಲ ಎಂದು ಅವರು ಹೇಳಿದ್ದಾರೆ.

ಭಾರತದಲ್ಲಿಮತದಾನವನ್ನು ಪ್ರೋತ್ಸಾಹಿಸುವ ಸಲುವಾಗಿ ಅಮೆರಿಕ ನೀಡುತ್ತಿದ್ದ 182 ಕೋಟಿ (21 ಮಿಲಿಯನ್ ಡಾಲರ್) ಅನುದಾನವನ್ನು ಟ್ರಂಪ್ ಸರ್ಕಾರ ಕಳೆದ ವಾರ ಕಡಿತಗೊಳಿಸಿತ್ತು, ಅಮೆರಿಕ ಸರ್ಕಾರದ ಕಾರ್ಯದಕ್ಷತಾ ಇಲಾಖೆಯ (ಡಿಒಜಿಇ) ಉಸ್ತುವಾರಿ ಎಲಾನ್ ಮಸ್ಕ್ ಅವರು ವೆಚ್ಚ ನಿಯಂತ್ರಣದ ಭಾಗವಾಗಿ ಈ ಕ್ರಮ ಕೈಗೊಂಡಿರುವುದಾಗಿ ತಿಳಿಸಿದ್ದರು. ಕಾರ್ಯದಕ್ಷತಾ ಇಲಾಖೆಯ ನಿರ್ಧಾರವನ್ನು ಟ್ರಂಪ್ ಅವರು ಈಗ ಸಮರ್ಥಿಸಿಕೊಂಡಿದ್ದಾರೆ.

## ರಾಷ್ಟ್ರಪತಿ ಭವನದಲ್ಲಿ ಕತಾರ್ ದೊರೆಗೆ ಗಾರ್ಡ್ ಆಫ್ ಆನರ್

**ನವದೆಹಲಿ:** ಎರಡು ದಿನಗಳ ಭೇಟಿಗಾಗಿ ಭಾರತಕ್ಕೆ ಆಗಮಿಸಿರುವ ಕತಾರ್ ದೊರೆ ತಮೀಮ್ ಬಿನ್ ಹಮದ್ ಅಲ್ ಥನಿ ಅವರಿಗೆ ರಾಷ್ಟ್ರಪತಿ ಭವನದಲ್ಲಿ ಇಂದು ಗಾರ್ಡ್ ಆಫ್ ಆನರ್ ಮೂಲಕ ಸರ್ಕಾರಿ ಗೌರವಗಳೊಂದಿಗೆ ಆತ್ಮೀಯವಾಗಿ ಸ್ವಾಗತಿಸಲಾಯಿತು. ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಜೊತೆಯಲ್ಲಿ ಹಿರಿಯ ಸಚಿವರು ಕತಾರ್ ದೊರೆಯನ್ನು ಆತ್ಮೀಯವಾಗಿ ಬರಮಾಡಿಕೊಂಡರು. ಇದೇ ವೇಳೆ ಕತಾರ್ ನಿಯೋಗವನ್ನು ರಾಷ್ಟ್ರಪತಿ ಮುರ್ಮು ಸ್ವಾಗತಿಸಿದರು.

ಭಾರತ ಭೇಟಿಗಾಗಿ ಸೋಮವಾರ ತಮೀಮ್ ಬಿನ್ ಹಮದ್ ಅಲ್ ಥಾನಿ ಭಾರತಕ್ಕೆ ಆಗಮಿಸಿದರು. ಪ್ರಧಾನಿ ನರೇಂದ್ರ ಮೋದಿ ಖುದ್ದು ವಿಮಾನ ನಿಲ್ದಾಣಕ್ಕೆ ತೆರಳಿ ಬರಮಾಡಿಕೊಂಡು ವಿಶೇಷ ಗೌರವ ನೀಡಿದ್ದರು. ಈ ಸಂದರ್ಭದಲ್ಲಿ ವಿದೇಶಾಂಗ ಸಚಿವ ಜೈಶಂಕರ್ ಕೂಡ ಉಪಸ್ಥಿತರಿದ್ದರು. ಕತಾರ್ ದೊರೆ ತನ್ನ ಸಹೋದರನಿದ್ದಂತೆ ಎಂದು ಹೇಳಿದ್ದ ಪ್ರಧಾನಿ ಮೋದಿ, ಅವರ ಭೇಟಿ ಫಲಪ್ರದವಾಗಲಿ ಎಂದು ಹಾರೈಸಿದ್ದರು.



## ಹಿಮಾಚಲ ಪ್ರದೇಶದ ಶೇ.40ರಷ್ಟು ಭಾಗ ಭೂ ಕುಸಿತ, ಪ್ರವಾಹ, ಹಿಮಪಾತಗಳಿಗೆ ಗುರಿಯಾಗುವ ಸಾಧ್ಯತೆ!

**ಚಂಡೀಗಢ:** ಭಾರತೀಯ ತಂತ್ರಜ್ಞಾನ ಸಂಸ್ಥೆ-ರೋಪರ್ ನಡೆಸಿದ ಇತ್ತೀಚಿನ ಅಧ್ಯಯನದ ಪ್ರಕಾರ, ಹಿಮಾಚಲ ಪ್ರದೇಶದ ಶೇಕಡಾ 49 ಭಾಗವು ಮಧ್ಯಮ ಪ್ರಮಾಣದ ಅಪಾಯವನ್ನು ಹೊಂದಿದ್ದರೆ, ಶೇ. 40 ರಷ್ಟು ಪ್ರದೇಶವು ಹೆಚ್ಚಿನ ಪ್ರಾಕೃತಿಕ ವಿಕೋಪಗಳಾದ ಭೂಕುಸಿತ, ಪ್ರವಾಹ ಮತ್ತು ಹಿಮಕುಸಿತಕ್ಕೆ ಗುರಿಯಾಗುವ ಸಾಧ್ಯತೆ ಹೆಚ್ಚಾಗಿದೆ.



ಕಳೆದ ವಾರ ಐಐಟಿ-ಬಾಂಬೆಯಲ್ಲಿ ನಡೆದ ಇಂಡಿಯನ್ ಕ್ರಯೋಸ್ಫಿಯರ್ ಮೀಟ್ (ಖಅಒ) ನಲ್ಲಿ ಈ ಬಗ್ಗೆ ಚರ್ಚೆಗಳು ನಡೆದವು. ಇದರಲ್ಲಿ ಪ್ರಪಂಚದಾದ್ಯಂತದ 80 ಹಿಮನದಿಶಾಸ್ತ್ರಜ್ಞರು, ಸಂಶೋಧಕರು, ವಿಜ್ಞಾನಿಗಳು ಮತ್ತು ಇತರ ತಜ್ಞರು ಭಾಗವಹಿಸಿದ್ದರು.

ಐಐಟಿ ಈಗ ಈಶಾನ್ಯ, ಜಮ್ಮು-ಕಾಶ್ಮೀರ ಮತ್ತು ಉತ್ತರಾಖಂಡದಲ್ಲಿ ಇದೇ ರೀತಿಯ ಅಧ್ಯಯನಗಳನ್ನು ನಡೆಸುತ್ತಿದೆ, ಗಾಲ್ಫ್ (ಗ್ಲೇಸಿಯರ್ ಲೇಕ್ ಔಟ್ ಬರ್ಸ್ಟ್ ಫ್ಲಡ್) ನ್ನು ಪರೀಕ್ಷಿಸಲು ಮತ್ತೊಂದು ಮಾನದಂಡವನ್ನು ಹೊಂದಿದೆ. ಎಂಟೆಕ್ ವಿದ್ವಾಂಸ ಡೈಶಿಶಾ ಲಾಫ್ನಿಯಾವ್ ಐಐಟಿ-ರೋಪರ್ ನ ರೀತ್ ಕಮಲ್ ತಿವಾರಿ ಅವರ ಮಾರ್ಗದರ್ಶನದಲ್ಲಿ ಜಿಐಎಸ್ ಆಧಾರಿತ ಮ್ಯಾಪಿಂಗ್ ಬಳಸಿ ಅಧ್ಯಯನವನ್ನು ನಡೆಸಿದರು, ಅಧ್ಯಯನವು ಅಪಾಯ-ಪೀಡಿತ ಪ್ರದೇಶಗಳನ್ನು ವರ್ಗೀಕರಿಸಿದೆ.

ರಾಜ್ಯದ ಮೇಲ್ಭಾಗವು ಹಿಮಕುಸಿತಕ್ಕೆ ಹೆಚ್ಚು ಒಳಗಾಗುತ್ತದೆ, ಮಧ್ಯ ಮತ್ತು ಕೆಳಗಿನ ಭಾಗಗಳು ಪ್ರವಾಹ ಮತ್ತು ಭೂಕುಸಿತಕ್ಕೆ ಹೆಚ್ಚು ಒಳಗಾಗುತ್ತವೆ. ಕಿನ್ನೌರ್ ಮತ್ತು ಲಹೌಲ್ ಸ್ಪಿತಿ ಜಿಲ್ಲೆಗಳಲ್ಲಿನ ಎತ್ತರದ ಪ್ರದೇಶಗಳು ಹಿಮಪಾತಕ್ಕೆ ಹೆಚ್ಚು ಒಳಗಾಗುತ್ತವೆ ಎಂದು ಅಧ್ಯಯನವು ಹೇಳಿದೆ, ಕಾಂಗ್ರಾ, ಕುಲ್ಲು, ಮಂಡಿ, ಉನಾ, ಹಮೀರ್‌ಪುರ, ಬಿಲಾಸ್ ಪುರ ಮತ್ತು ಚಂಬಾ ಜಿಲ್ಲೆಗಳು ಪ್ರವಾಹ ಮತ್ತು ಭೂಕುಸಿತಕ್ಕೆ ಗುರಿಯಾಗುತ್ತವೆ. ಕಡಿದಾದ ಪರ್ವತ ಇಳಿಜಾರುಗಳು ಮತ್ತು 3,000 ಮೀಟರ್‌ಗಿಂತ ಹೆಚ್ಚಿನ ಎತ್ತರಗಳು ಹೆಚ್ಚಿನ ಅಪಾಯದಲ್ಲಿವೆ ಎಂದು ಅಧ್ಯಯನವು ಎತ್ತಿ ತೋರಿಸುತ್ತದೆ. 16.8 ಡಿಗ್ರಿ ಮತ್ತು 41.5 ಡಿಗ್ರಿಗಳ ನಡುವಿನ ಇಳಿಜಾರುಗಳನ್ನು ಹೊಂದಿರುವ ಹೆಚ್ಚಿನ ಎತ್ತರದ ಪ್ರದೇಶಗಳು ಹಿಮಪಾತ ಮತ್ತು ಭೂಕುಸಿತಗಳಿಗೆ ಒಳಗಾಗುವ ಸಾಧ್ಯತೆ ಹೆಚ್ಚಾಗಿರುತ್ತದೆ.

5.9 ಡಿಗ್ರಿಯಿಂದ 16.44 ಡಿಗ್ರಿಗಳವರೆಗಿನ ಸರಾಸರಿ ಇಳಿಜಾರುಗಳು ಮತ್ತು 1,600 ಮೀಟರ್‌ಗಳವರೆಗಿನ ಸರಾಸರಿ ಎತ್ತರದ ಪ್ರದೇಶಗಳು ಪ್ರಧಾನವಾಗಿ ಭೂಕುಸಿತ ಮತ್ತು ಪ್ರವಾಹ ಎರಡಕ್ಕೂ ಗುರಿಯಾಗುತ್ತವೆ, ಆದರೆ ಹಿಮಪಾತ ಮತ್ತು ಭೂಕುಸಿತಗಳ ಸಂಯೋಜಿತ ಸಂಭವವು ಹೆಚ್ಚು ಎತ್ತರದಲ್ಲಿ 16.86 ಡಿಗ್ರಿಯಿಂದ 41.54 ಡಿಗ್ರಿಗಳವರೆಗಿನ ಇಳಿಜಾರುಗಳನ್ನು ಹೊಂದಿರುವ ಪ್ರದೇಶಗಳಲ್ಲಿ ಹೆಚ್ಚಾಗಿ ಕಂಡುಬರುತ್ತದೆ ಎಂದು ಅಧ್ಯಯನವು ಹೇಳುತ್ತದೆ.

## ಹಾರ್ವರ್ಡ್ ನಲ್ಲಿ ಭಾರತದ ಹೆಮ್ಮೆ ಬಗ್ಗೆ ನೀತಾ ಅಂಬಾನಿ ಮುಖ್ಯ ಭಾಷಣ

ರಿಲಯನ್ಸ್ ಫೌಂಡೇಷನ್ ಸಂಸ್ಥಾಪಕಿ ಹಾಗೂ ಅಧ್ಯಕ್ಷೆ ನೀತಾ ಅಂಬಾನಿ ಅವರು ಹಾರ್ವರ್ಡ್ 2025ರಲ್ಲಿ ಆಯೋಜನೆಯಾದ ಭಾರತ ಸಮ್ಮೇಳನದಲ್ಲಿ ಭಾರತದಿಂದ ಜಗತ್ತಿಗೆ ಎಂಬ ವಿಷಯದ ಮುಖ್ಯ ಭಾಷಣಕಾರರಾಗಿದ್ದರು. ಹಾರ್ವರ್ಡ್ ಬಿಜಿನೆಸ್ ಸ್ಕೂಲ್ನ ಮಾಜಿ ಡೀನ್ ನಿತಿನ್ ನೊಹ್ರಿಯಾ ಅವರೊಂದಿಗೆ ವೇದಿಕೆಯಲ್ಲಿ ಪ್ರೀತಿ ಮತ್ತು ಚಿಂತನಶೀಲವಾಗಿ ನೀತಾ ಅಂಬಾನಿ ತಮ್ಮ ಗಮನಾರ್ಹ ಪ್ರಯಾಣವನ್ನು ಹಂಚಿಕೊಂಡರು ಮತ್ತು ಶಿಕ್ಷಣ ಹಾಗೂ ಕ್ರೀಡೆಯಿಂದ ಸಂಸ್ಕೃತಿ, ದಾನ-ದತ್ತಿ ಮತ್ತು ತಂತ್ರಜ್ಞಾನದವರೆಗೆ ಭಾರತದ ಬೆಳೆಯುತ್ತಿರುವ ಜಾಗತಿಕ ಪ್ರಭಾವವನ್ನು ಒತ್ತಿ ಹೇಳಿದರು. ಯುವ ನಾಯಕರು ಮತ್ತು ಬದಲಾವಣೆ ತರುವವರಿಂದ ತುಂಬಿದ್ದ ಸಭಾಂಗಣದಲ್ಲಿ ಮಾತನಾಡಿದ ಅವರು, ಮುಂದಿನ ಪೀಳಿಗೆಗೆ ಮಿತಿಗಳಿಲ್ಲದೆ ಕನಸು ಕಾಣಲು, ಉದ್ದೇಶದೊಂದಿಗೆ ಮುನ್ನಡೆಸಲು ಮತ್ತು ವಿಶ್ವ ವೇದಿಕೆಯಲ್ಲಿ ಭಾರತದ ಭವಿಷ್ಯವನ್ನು ರೂಪಿಸಲು ಸ್ಫೂರ್ತಿಯುತ ಮಾತುಗಳನ್ನಾಡಿದರು.



## ಅಖಿಲ ಭಾರತ ಕಿನ್ನರ್ ಮಹಾ ಸಮ್ಮೇಳನದಲ್ಲಿ ತೃತೀಯ ಲಿಂಗಿಗಳು ಭಾಗಿ



**ಅಜ್ಮೇರ್:** ಧಾರ್ಮಿಕ ಕ್ಷೇತ್ರಗಳಲ್ಲಿ ಒಂದಾಗಿರುವ ಅಜ್ಮೇರ್ದಲ್ಲಿ ನಡೆಯುತ್ತಿರುವ ಅಖಿಲ ಭಾರತ ಕಿನ್ನರ್ ಮಹಾ ಸಮ್ಮೇಳನದಲ್ಲಿ ದೇಶದ ವಿವಿಧ ರಾಜ್ಯಗಳ ತೃತೀಯ ಲಿಂಗಿ ಸಮುದಾಯದ ಜನರು ಒಟ್ಟಾಗಿದ್ದಾರೆ. ಅಜ್ಮೇರದ ಕಿನ್ನರ್ ಸಮುದಾಯವೂ ಈ ಮಹಾ ಸಮ್ಮೇಳನವನ್ನು ಆಯೋಜಿಸಿದ್ದು, ಹೊರಗಿನ ಅನೇಕ ಅತಿಥಿಗಳನ್ನು ಆತ್ಮೀಯವಾಗಿ ಸ್ವಾಗತಿಸಿದೆ.

ಮಹಾ ಸಮ್ಮೇಳನಕ್ಕಾಗಿ ಅತ್ಯುತ್ತಮ ಸಿದ್ಧತೆ ನಡೆಸಲಾಗಿದ್ದು, ಇದೇ ವೇಳೆ ಭದ್ರತೆಗೆ ಬೌನ್ಸರ್ಗಳನ್ನು ನಿಯೋಜಿಸಲಾಗಿದೆ. ಸೋಮವಾರದಿಂದ ಕಿನ್ನರ್ ಸಮುದಾಯದ ಖಿಚಡಿ ತುಳ್ಳೆ ಆಚರಣೆಯೊಂದಿಗೆ ಮಹಾ ಸಮ್ಮೇಳನ ಅಧಿಕೃತವಾಗಿ ಆರಂಭವಾಗಿದೆ.

ಇದೇ ಮೊದಲ ಬಾರಿಗೆ ದೊಡ್ಡ ಮಟ್ಟದಲ್ಲಿ ಅಖಿಲ ಭಾರತ ಕಿನ್ನರ್ ಮಹಾ ಸಮ್ಮೇಳನ ನಡೆಯುತ್ತಿದ್ದು, 10 ದಿನಗಳ ಕಾಲ ನಡೆಯಲಿರುವ ಈ ಸಮ್ಮೇಳನದಲ್ಲಿ ಸಾಮಾಜಿಕ ಏಕತೆ ಮತ್ತು ಸಾಮರಸ್ಯ ಸೇರಿದಂತೆ ಅನೇಕ ವಿಚಾರಗಳ ಕುರಿತು ಚರ್ಚೆ ನಡೆಯಲಿದೆ. ಇದೇ ವೇಳೆ ಕಿನ್ನರ್ ಸಂಪ್ರದಾಯವನ್ನು ಮುಂದೆ ಸಾಗಿಸುವ ಮತ್ತು ಅದನ್ನು ಸಮಾಜದಲ್ಲಿ ಮೇಲೆತ್ತುವ ವಿಚಾರ ಕುರಿತು ಗಮನ ಹರಿಸಲಾಗುತ್ತಿದೆ.

ಅಜ್ಮೇರ್ ಕಿನ್ನರ್ ಸಮಾಜದ ಗದ್ದಿಪತಿ ಸಲೋನಿ ನಾಯಕ್ ಮಾತನಾಡಿ, ಮಹಾ ಸಮ್ಮೇಳನಕ್ಕೆ ಆಗಮಿಸಿದ ಜನರ ಆತಿಥ್ಯ ಮತ್ತು ವ್ಯವಸ್ಥೆಯಲ್ಲಿ ನಿರತರಾಗಿದ್ದಾರೆ. ಗಡ್ಡಿಪಾಟಿ ಸಾಲೋಣಿ ನಾಯಕ್ ಅವರ ಗುರುಗಳಾದ ಅನಿತಾ ಬಾಯಿ ಅವರ ಸ್ಮರಣಾರ್ಥ ಈ ಸಮ್ಮೇಳನವನ್ನು ಆಯೋಜಿಸಲಾಗಿದೆ. ಕಿನ್ನರ್ ಸಮುದಾಯದಲ್ಲಿ ಗುರು-ಶಿಷ್ಯ ಸಂಪ್ರದಾಯ ಅನಾದಿ ಕಾಲದಿಂದಲೂ ನಡೆದುಕೊಂಡು ಬಂದಿದೆ. ಕಿನ್ನರ್ ಸಮಾಜದಲ್ಲಿ ಗಡ್ಡಿಪಾಟಿ ಸಾಲೋಣಿ ನಾಯಕ್ ಅವರ ಅನುಮತಿ ಇಲ್ಲದೇ ಯಾರಿಗೂ ಸಮ್ಮೇಳನಕ್ಕೆ ಪ್ರವೇಶ ನೀಡುತ್ತಿಲ್ಲ. ಕಿನ್ನರ್ ಸಮುದಾಯ ಮತ್ತು ವ್ಯವಸ್ಥೆಗಳಿಗೆ ಸಂಬಂಧಿಸಿದ ಜನರು ಮಾತ್ರ ಬರಬಹುದು.

## ಹಿಮಾಲಯ ಕಣಿವೆಯಲ್ಲಿ ಪ್ರವಾಸೋದ್ಯಮಕ್ಕೆ ಉತ್ತೇಜನ

**ಉತ್ತರಕಾಶಿ:** ಪ್ರಧಾನಿ ನರೇಂದ್ರ ಮೋದಿ ಅವರು ಫೆ.27ರಂದು ಉತ್ತರಕಾಶಿಯ ಗಂಗೋತ್ರಿ ಧಾಮದ ಮುಖ್ಬಾಗೆ ಭೇಟಿ ನೀಡಲಿದ್ದಾರೆ. ಈ ವೇಳೆ ಜದುಂಗ್ -ಜಂಕತ್ತಲ್ ಮತ್ತು ನೀಲಪಾನಿ-ಮುಲಿಂಗ್ನಾ ಪಾಸ್ ಟ್ರ್ಯಾಕ್ಗಳನ್ನು ಉದ್ಘಾಟಿಸಲಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪ್ರಧಾನಿ ಎರಡು ಪಾಸ್ ಟ್ರ್ಯಾಕ್ಗಳನ್ನು ಉದ್ಘಾಟಿಸಲಿದ್ದು, ಇದು ನೆಲಂಗ್ ಮತ್ತು ಜದುಂಗ್ ಕಣಿವೆಗಳಲ್ಲಿ ಪ್ರವಾಸೋದ್ಯಮಕ್ಕೆ ಹೊಸ ಆಯಾಮ ನೀಡಲಿದೆ ಎಂದು ಉತ್ತರಕಾಶಿ ಜಿಲ್ಲಾ ಮ್ಯಾಜಿಸ್ಟ್ರೇಟ್ ಮೆಹರ್ಬನ್ ಸಿಂಗ್ ಬಿಶ್ತ್ ಹೇಳಿದರು.

1962ರ ಭಾರತ-ಚೀನಾ ಯುದ್ಧದ ಬಳಿಕ ನೆಲಂಗ್ ಮತ್ತು ಜದುಂಗ್ ಕಣಿವೆ ಪ್ರದೇಶಗಳನ್ನು ಕಂಟೋನ್ಮೆಂಟ್ ಆಗಿ ಪರಿವರ್ತಿಸಿ, ಸ್ಥಳೀಯರು ಮತ್ತು ಪ್ರವಾಸಿಗರನ್ನು ನಿರ್ಬಂಧಿಸಲಾಯಿತು. ಇದೀಗ ಲಡಾಖ್ ಸಾಲಿನ ಭೌಗೋಳಿಕ ಪರಿಸ್ಥಿತಿಗಳ ಆಧಾರದ ಮೇಲೆ ಪ್ರದೇಶವನ್ನು ಅಭಿವೃದ್ಧಿಪಡಿಸಲು ಯೋಜನೆ ಪ್ರಾರಂಭಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು. ವೈಬ್ರೆಂಟ್ ವಿಲೇಜ್ ಯೋಜನೆಯ ಅಡಿಯಲ್ಲಿ ನೆಲಂಗ್ ಮತ್ತು ಜದುಂಗ್ ಗ್ರಾಮಗಳಲ್ಲಿ ಹೋಂ ಸ್ಟೇಗಳ ನಿರ್ಮಾಣ ಪ್ರಾರಂಭವಾಗಿದೆ ಎಂದರು. ಪ್ರಧಾನಿ ಆಗಮನದ ಹಿನ್ನೆಲೆಯಲ್ಲಿ ಪ್ರವಾಸೋದ್ಯಮ ಕಾರ್ಯದರ್ಶಿ ಸಚಿನ್ ಕುರ್ವೆ ಅವರು ಸೋಮವಾರ ಸಿದ್ಧತಾ ಕಾರ್ಯಗಳ ಪರಿಶೀಲಿಸಿದರು.

ಗಂಗೋತ್ರಿ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಿದ ಕುರ್ವೆ, ಗ್ರಾಮದಲ್ಲಿ ನಿರ್ಮಾಣವಾಗಿರುವ ವ್ಯೂಪಾಯಿಂಟ್, ಪೇಂಟಿಂಗ್, ಫುಟ್ಪಾತ್ ಇತ್ಯಾದಿ ಕಾಮಗಾರಿಗಳನ್ನು ಪರಿಶೀಲಿಸಿ, ಸಮಯಕ್ಕೆ ಸರಿಯಾಗಿ ಎಲ್ಲ ಕಾಮಗಾರಿಗಳನ್ನೂ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಗರ್ವಾಲ್ ಹಿಮಾಲಯದ ಚಾರ್ಧಾಮ್ ಎಂದು ಕರೆಯಲ್ಪಡುವ ಬದರಿನಾಥ್, ಕೇದಾರನಾಥ, ಗಂಗೋತ್ರಿ ಮತ್ತು ಯಮುನೋತ್ರಿಯ ತೀರ್ಥಯಾತ್ರೆಗೆ ಕಳೆದ ವರ್ಷದಿಂದ ರಾಜ್ಯ ಸರ್ಕಾರ ಚಾಲನೆ ನೀಡಿದೆ. ಪ್ರಧಾನಿ ಮೋದಿ ಅವರ ಭೇಟಿ ಚಳಿಗಾಲದ ಚಾರ್ಧಾಮ್ ಯಾತ್ರೆಯನ್ನು ಮತ್ತಷ್ಟು ಉತ್ತೇಜಿಸುತ್ತದೆ ಎಂದು ಅಧಿಕಾರಿ ಹೇಳಿದರು.



## ಭಾರತ ಶೀಘ್ರದಲ್ಲೇ ಮಂಗಳ ಗ್ರಹಕ್ಕೆ ಕಾಲಿಡಲಿದೆ- ಇಸ್ರೋ ಮಾಜಿ ಮುಖ್ಯಸ್ಥ ಎ.ಎಸ್. ಕಿರಣ್ ಕುಮಾರ್

**ಫತೇಪುರ:** ಭಾರತವು ಶೀಘ್ರದಲ್ಲಿಯೇ ಮಂಗಳ ಗ್ರಹಕ್ಕೆ ಕಾಲಿಡಲಿದೆ ಎಂದು ಇಸ್ರೋದ ಮಾಜಿ ಮುಖ್ಯಸ್ಥ ಎ.ಎಸ್. ಕಿರಣ್ ಕುಮಾರ್ ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಅವರು ಸೋಮವಾರದಂದು ಫತೇಪುರದ ಗೋಯೆಂಕಾ ದೇವಸ್ಥಾನಕ್ಕೆ ಭೇಟಿ ನೀಡಿ ಮಾ ಬೀರಾ ಬಾರ್ಜಿಗೆ ಪೂಜೆ ಸಲ್ಲಿಸಿದರು.ತದನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಎ.ಎಸ್.ಕಿರಣ್ ಕುಮಾರ್ ಅವರು 'ಇಸ್ರೋ ಸಂಸ್ಥೆ ಭಾರತವನ್ನು ಬಾಹ್ಯಾಕಾಶ ತಂತ್ರಜ್ಞಾನ ಕ್ಷೇತ್ರದಲ್ಲಿ ವಿಶ್ವದ ಐದು ಅಗ್ರ ದೇಶಗಳಲ್ಲಿ ಇರಿಸಿದೆ' ಎಂದು ಅವರು ಹೇಳಿದರು. ಇನ್ನು ಚಂದ್ರಯಾನ 2 ರ ವೈಫಲ್ಯದ ಅನುಭವದ ಬಗ್ಗೆ ಮಾತನಾಡುತ್ತಾ 'ಈ ವೈಫಲ್ಯವು ಕಲಿಕೆಯ ಅನುಭವವಾಗಿದೆ. ಇಂತಹ ವೈಫಲ್ಯಗಳಿಗೆ ಹೆದರುವ ಬದಲು ಅವುಗಳ ಅನುಭವದಿಂದ ಮತ್ತೆ ಮುಂದುವರೆಯಬೇಕು. ಈಗ ಭಾರತ ದೇಶವು ಶೀಘ್ರದಲ್ಲೇ ತನ್ನ ಮಂಗಳ ಗ್ರಹದ ಕಾರ್ಯಾಚರಣೆಯನ್ನು ಯಶಸ್ವಿಯಾಗಿ ಸಾಧಿಸಲಿದೆ' ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು. ಕಿರಣ್ ಕುಮಾರ್ 2015 ರಿಂದ 2018 ರವರೆಗೆ ಇಸ್ರೋ ಮುಖ್ಯಸ್ಥರಾಗಿದ್ದರು. ಅವರ ನಾಯಕತ್ವದಲ್ಲಿ, ಭಾರತವು ಒಂದೇ ಕಾರ್ಯಾಚರಣೆಯಲ್ಲಿ 144 ಉಪಗ್ರಹಗಳನ್ನು ಯಶಸ್ವಿಯಾಗಿ ಉಡಾವಣೆ ಮಾಡಿತು. ಚಂದ್ರಯಾನ-1 ರ ಯಶಸ್ಸಿಗೆ ಮತ್ತು ಮಂಗಳಯಾನಕ್ಕಾಗಿ ನಿರ್ಮಿಸಿದ ಮಾರ್ಸ್ ಆರ್ಬಿಟರ್ ಬಾಹ್ಯಾಕಾಶ ನೌಕೆಯ ಅಭಿವೃದ್ಧಿಯಲ್ಲಿ ಅವರು ಮಹತ್ವದ ಪಾತ್ರವನ್ನು ವಹಿಸಿದ್ದರು.



## ಯೂಟ್ಯೂಬರ್ ರಣ್ವೀರ್ ಅಲ್ಲಾಬಾದಿಯಾಗೆ ಸುಪ್ರೀಂ ಕೋರ್ಟ್ ತರಾಟೆ

**ನವದೆಹಲಿ:** ಇಂಡಿಯಾಸ್ ಗಾಟ್ ಟ್ಯಾಲೆಂಟ್ನಲ್ಲಿ ಅಶ್ಲೀಲ ಹೇಳಿಕೆ ನೀಡಿ ಕಾನೂನು ಸಂಕಷ್ಟ ಎದುರಿಸುತ್ತಿರುವ ಯೂಟ್ಯೂಬರ್ ರಣ್ವೀರ್ ಅಲ್ಲಾಬಾದಿಯಾಗೆ ಸುಪ್ರೀಂ ಕೋರ್ಟ್ಗಾಮುಗ್ಗಾ ಜಾಡಿಸಿದೆ. ಅಲ್ಲಾಬಾದಿಯಾ ವಿರುದ್ಧ ದಾಖಲಾಗಿರುವ ಹಲವು ಪ್ರಕರಣಗಳಲ್ಲಿ ಬಂಧನ ತಡೆ ಕೋರಿ ಸಲ್ಲಿಸಿರುವ ಅರ್ಜಿ ವಿಚಾರಣೆ ಕೈಗೆತ್ತಿಕೊಂಡ ಸುಪ್ರೀಂಕೋರ್ಟ್ನ ದ್ವಿ ಸದಸ್ಯ ಪೀಠ, ಇದು ನಾಚಿಕೆಗೇಡಿನ ಸಂಗತಿ ಎಂದಿದೆ. ರಣ್ವೀರ್ ಅಲ್ಲಾಬಾದಿಯಾ ಹೇಳಿಕೆ ನಿಜಕ್ಕೂ ಖಂಡನೀಯ. ಅವರ ಹೇಳಿಕೆ ಪೋಷಕರಿಗೆ ಮಾಡಿ ಅಪಮಾನ ಎಂದು ಕೋರ್ಟ್ ಅಸಮಾಧಾನ ವ್ಯಕ್ತಪಡಿಸಿದೆ.

ಸಮಾಜದ ಮೌಲ್ಯಗಳ ಬಗ್ಗೆ ನಿಮಗೆ ತಿಳಿದಿದೆಯೇ? ಮನಸ್ಸಿನ ಕೊಳಕನ್ನು ಶೋದಲ್ಲಿ ಪ್ರಸ್ತುತ ಪಡಿಸಲಾಗಿದೆ. ಸಮಾಜಕ್ಕೆ ಕೆಲವು ಸ್ವಯಂ-ವಿಕಸಿತ ಮೌಲ್ಯಗಳಿವೆ. ನೀವು ಅವುಗಳನ್ನು ಗೌರವಿಸಬೇಕು. ವಾಕ್ ಸ್ವಾತಂತ್ರ್ಯದ ಹೆಸರಿನಲ್ಲಿ, ಸಮಾಜದ ನಿಯಮಗಳಿಗೆ ವಿರುದ್ಧವಾಗಿ ಯಾರಿಗೂ ಏನು ಬೇಕಾದರೂ ಮಾತನಾಡಲು ಪರವಾನಗಿ ಇಲ್ಲ. ನೀವು ಬಳಸಿದ ಪದಗಳು ಹೆಣ್ಣುಮಕ್ಕಳು, ಸಹೋದರಿಯರು, ಪೋಷಕರು ಮತ್ತು ಸಮಾಜವನ್ನು ತಲೆ ತಗ್ಗಿಸುವಂತೆ ಮಾಡಿದೆ. ಇದು ಅಶ್ಲೀಲವಲ್ಲದಿದ್ದರೆ ಮತ್ತೇನು? ನಾವು ನಿಮ್ಮ ವಿರುದ್ಧ ಎಫ್ಐಆರ್ಗಳನ್ನು ಏಕೆ ರದ್ದುಗೊಳಿಸಬೇಕು? ಎಂದು ಕೋರ್ಟ್ ಖಾರವಾಗಿಯೇ ಪ್ರಶ್ನಿಸಿದೆ.

ಇನ್ನು ಇದೇ ಪ್ರಕರಣದಲ್ಲಿ ಬಂಧನದ ಭೀತಿಯಿಂದ ರಕ್ಷಣೆ ಕೋರಿ ರಣ್ವೀರ್ ಅಲ್ಲಾಬಾದಿಯಾ ಸಲ್ಲಿಸಿದ್ದ



ಅರ್ಜಿಯನ್ನು ಸುಪ್ರೀಂ ಕೋರ್ಟ್ ಪುರಸ್ಕರಿಸಿದೆ. ಬಂಧನದಿಂದ ತಾತ್ಕಾಲಿಕ ರಿಲೀಫ್ ಕೊಟ್ಟಿರುವ ಸುಪ್ರೀಂ ಕೋರ್ಟ್ ಹತ್ತು ಹಲವು ಷರತ್ತುಗಳನ್ನು ವಿಧಿಸಿದೆ. ರಣವೀರ್ ಅಲ್ಲಾಬಾದಿಯಾ ಅವರು ಇನ್ನು ಮುಂದೆ ಯಾವುದೇ ಯೂಟ್ಯೂಬ್ ಕಾರ್ಯಕ್ರಮಗಳನ್ನು ಪ್ರಸಾರ ಮಾಡುವಂತಿಲ್ಲ.'ಇಂಡಿಯಾಸ್ ಗಾಟ್ ಲ್ಯಾಟೆಂಟ್' ಕಾರ್ಯಕ್ರಮದಲ್ಲಿ ಪ್ರಸಾರವಾದ ಸಂಚಿಕೆಯ ಆಧಾರದ ಮೇಲೆ ಅವರ ವಿರುದ್ಧ ಯಾವುದೇ ಬೇರೆ ಎಫ್ ಐಆರ್ ದಾಖಲಿಸಬಾರದು.ಸುಪ್ರೀಂ ಕೋರ್ಟ್ ಅವರ ಪಾಸ್ಪೋರ್ಟ್ ಅನ್ನು ಪೊಲೀಸರಿಗೆ ಒಪ್ಪಿಸುವಂತೆ ಸೂಚಿಸಿತು ಮತ್ತು ನ್ಯಾಯಾಲಯದ ಅನುಮತಿಯಿಲ್ಲದೆ ಅವರು ದೇಶವನ್ನು ತೊರೆಯುವಂತಿಲ್ಲ.

## ಆಪ್ ನಾಯಕನ ಪತ್ನಿ ಕೊಲೆಗೆ ಬಿಗ್ ಟ್ವಿಸ್ಟ್

**ಚಂಡೀಗಢ:** ಆಮ್ ಆದ್ಮಿ ಪಕ್ಷದ ನಾಯಕ ಅನೋಖ್ ಮಿತ್ತಲ್ ಪತ್ನಿಯನ್ನು ಇತ್ತೀಚೆಗೆ ದುಷ್ಕರ್ಮಿಗಳು ಬರ್ಬರವಾಗಿ ಹತ್ಯೆಗೈದಿದ್ದರು. ಜತೆಗೆ ದರೋಡೆ ಮಾಡಲಾಗಿದೆ ಎಂದು ದೂರು ದಾಖಲಿಸಲಾಗಿತ್ತು. ಆದರೆ ಇದೀಗ ಪ್ರಕರಣ ಬೇರೊಂದು ತಿರುವು ಪಡೆದುಕೊಂಡಿದ್ದು, ಅನೋಖ್ ಮಿತ್ತಲ್ ತನ್ನ ಪತ್ನಿಯ ಹತ್ಯೆಗೆ ಸುಪಾರಿ ನೀಡಿದ್ದ ಎನ್ನುವ ನಿಜಾಂಶ ಬೆಳಕಿಗೆ ಬಂದಿದೆ. ಸೋಮವಾರ ಲುಧಿಯಾನ ಪೊಲೀಸರು ಮಿತ್ತಲ್ ಮತ್ತು ಆತನ ಗೆಳತಿಯನ್ನು ಬಂಧಿಸಿದ್ದಾರೆ. ಕೊಲೆ ಮಾಡಲು ಕೆಲವರನ್ನು ನೇಮಿಸಿಕೊಂಡಿದ್ದ. ಮಿತ್ತಲ್, ಸ್ನೇಹಿತೆ ಸೇರಿ 6 ಜನರನ್ನು ಬಂಧಿಸಿರುವುದಾಗಿ ಪೊಲೀಸರು ಹೇಳಿದ್ದಾರೆ. ಒಬ್ಬ ವ್ಯಕ್ತಿ ತಲೆ ಮರೆಸಿಕೊಂಡಿದ್ದಾನೆ.

ಲುಧಿಯಾನ ಪೊಲೀಸ್ ಆಯುಕ್ತ ಕುಲದೀಪ್ ಸಿಂಗ್ ಚಾಹಲ್ ಮಾತನಾಡಿ, ಮಿತ್ತಲ್ ತನ್ನ ತನ್ನ ಪ್ರೇಯಸಿ ಸಹಾಯದಿಂದ ಪತ್ನಿ ಲಿಪ್ಸಿಯನ್ನು ಕೊಲೆ ಮಾಡಲು ಸುಪಾರಿ ನೀಡಿ ಕೊಲೆಗಾರರನ್ನು ನೇಮಿಸಿಕೊಂಡಿದ್ದ ಎಂದು ಅವರು ಹೇಳಿದ್ದಾರೆ. ಚಾಹಲ್ ಅವರ ಪ್ರಕಾರ, ಮಿತ್ತಲ್, ಪತ್ನಿಯನ್ನು ಕೊಲ್ಲಲು ಹಂತಕರಿಗೆ 2.5 ಲಕ್ಷ ರೂ.ಗಳನ್ನು ನೀಡಲು ಒಪ್ಪಿಕೊಂಡಿದ್ದ, ಈಗಾಗಲೇ 50 ಸಾವಿರ ರೂ. ಮುಂಗಡವಾಗಿ ನೀಡಿದ್ದ, ಉಳಿದ 2 ಲಕ್ಷ ರೂ. ಕೊಲೆಯ ಬಳಿಕ ನೀಡುತ್ತೇನೆ ಎಂದು ಹೇಳಿದ್ದ.

ಮಿತ್ತಲ್ ಈ ಹಿಂದೆ ಎರಡು ಬಾರಿ ಆಕೆಯ ಕೊಲೆಗೆ ಪ್ರಯತ್ನಿಸಿದ್ದ ಎಂದು ತಿಳಿದು ಬಂದಿದೆ. ಆತ ವಿವಾಹೇತರ ಸಂಬಂಧ ಹೊಂದಿದ್ದು, ಪತ್ನಿಗೆ ತಿಳಿದಿತ್ತು. ಆಕೆ ಎಲ್ಲರ ಬಳಿ ಹೇಳಬಹುದು ಎಂಬ ಭಯದಿಂದಾಗಿ ಈ ಕೃತ್ಯ ನಡೆಸಿದ್ದಾನೆ. ಅಪರಾಧಕ್ಕೆ ಬಳಸಲಾದ ವಾಹನವನ್ನು ಪೊಲೀಸರು ವಶಪಡಿಸಿಕೊಂಡಿದ್ದು, ಸಾಕ್ಷ್ಯಗಳನ್ನು ಸಂಗ್ರಹಿಸುತ್ತಿದ್ದಾರೆ. ಅಪರಾಧ ನಡೆದ ಸ್ಥಳದಲ್ಲಿ ಮಿತ್ತಲ್ ಪ್ರೇಯಸಿ ಅಲ್ಲಿಲ್ಲದಿದ್ದರೂ, ಯೋಜನೆ ಮತ್ತು ಪಿತೂರಿಯಲ್ಲಿ ಸಕ್ರಿಯವಾಗಿ ಭಾಗಿಯಾಗಿದ್ದಾಳೆ ಎಂದು ಆಯುಕ್ತರು ಹೇಳಿದರು.

## ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಸ್ಥಾಪನೆಯಲ್ಲಿ ಪ್ರಮುಖ ಪಾತ್ರವಹಿಸಿದ್ದ ಜ್ಞಾನೇಶ್ ಕುಮಾರ್

ಕೇಂದ್ರ ಚುನಾವಣಾ ಆಯೋಗದ ನೂತನ ಮುಖ್ಯ ಆಯುಕ್ತರಾಗಿ ನೇಮಕಗೊಂಡ ಜ್ಞಾನೇಶ್ ಕುಮಾರ್ ಜಮ್ಮು ಮತ್ತು ಕಾಶ್ಮೀರಕ್ಕೆ ವಿಶೇಷ ಸ್ಥಾನಮಾನ ರದ್ಧತಿ ತೀರ್ಮಾನದ ಅನುಷ್ಠಾನ, ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ಸ್ಥಾಪನೆಯಲ್ಲಿ ಪ್ರಮುಖ ಪಾತ್ರವಹಿಸಿದ್ದರು ಎಂದು ವರದಿಯೊಂದರಲ್ಲಿ ಉಲ್ಲೇಖಿಸಿದೆ.

ಕೇಂದ್ರ ಚುನಾವಣಾ ಆಯೋಗದ ಮುಖ್ಯ ಚುನಾವಣಾ ಆಯುಕ್ತರಾಗಿ ಮಾಜಿ ಐಎಎಸ್ ಅಧಿಕಾರಿ ಜ್ಞಾನೇಶ್ ಕುಮಾರ್ ಅವರನ್ನು ಕೇಂದ್ರ ಸರಕಾರ ನೇಮಿಸಿದೆ. ಜ್ಞಾನೇಶ್ ಕುಮಾರ್ ನೇಮಕಾತಿಗೆ ಕಾಂಗ್ರೆಸ್ ಟೀಕಿಸಿದ್ದು, ತರಾತುರಿಯ ನಿರ್ಧಾರ ಎಂದು ಹೇಳಿದೆ.

1988ನೆಯ ಬ್ಯಾಚ್ ನ ಕೇರಳ ಕೇಡರ್ ನ ಐಎಎಸ್ ಅಧಿಕಾರಿಯಾದ ಜ್ಞಾನೇಶ್ ಕುಮಾರ್ ಕೇರಳ ಸರಕಾರದಲ್ಲಿ ವಿವಿಧ ಜವಾಬ್ದಾರಿಗಳನ್ನು ನಿರ್ವಹಿಸಿದ್ದಾರೆ. 2019ರಲ್ಲಿ ಜಮ್ಮು, ಕಾಶ್ಮೀರದಲ್ಲಿ 370ನೇ ವಿಧಿಯನ್ನು ರದ್ದುಪಡಿಸಿದ ನಂತರ ಗೃಹ ವ್ಯವಹಾರಗಳ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿಯಾಗಿ 2018 ಮತ್ತು 2021ರ ನಡುವೆ ಜಮ್ಮು, ಕಾಶ್ಮೀರದಲ್ಲಿ ವಿಶೇಷ ಸ್ಥಾನಮಾನ ರದ್ದತಿ ತೀರ್ಮಾನ ಅನುಷ್ಠಾನಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ನರೇಂದ್ರ ಮೋದಿ ಸರ್ಕಾರವು ಜಮ್ಮು ಮತ್ತು ಕಾಶ್ಮೀರ ಮರುಸಂಘಟನೆ ಮಸೂದೆಯನ್ನು ರೂಪಿಸುವ ಜವಾಬ್ದಾರಿಯನ್ನು ಜ್ಞಾನೇಶ್ ಕುಮಾರ್ ಅವರಿಗೆ ನೀಡಿತ್ತು.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಸಹಾಯಕ ನಿರ್ದೇಶಕಿಯಾಗಿ ಕೆಲಸ ಮಾಡಿದ್ದ ಅನುಪಮಾ ಕೈ ಹಿಡಿದ ನಟನೆ

ಅನುಪಮಾ ಪರಮೇಶ್ವರನ್ ಅವರಿಗೆ ಫೆಬ್ರವರಿ 18 ಬರ್ತ್ಡೇ. ಅವರಿಗೆ ಎಲ್ಲ ಕಡೆಗಳಿಂದ ಶುಭಾಶಯ ಬರುತ್ತಿದೆ. 2015ರಲ್ಲಿ ಮಲಯಾಳಂ ಚಿತ್ರರಂಗದ ಮೂಲಕ ಬಣ್ಣದ ಬದುಕು ಆರಂಭಿಸಿದ ಅವರು ಸ್ಟಾರ್ ನಟಿಯಾಗಿದ್ದಾರೆ. ಅವರ ಬೇಡಿಕೆ ದಿನ ಕಳೆದಂತೆ ಹೆಚ್ಚುತ್ತಿದೆ. ಗ್ಲಾಮರ್ ಆಗಿ ಗಮನ ಸೆಳೆಯುವುದರ ಜೊತೆಗೆ ಅವರು ನಟನೆಯಿಂದಲೂ ಭೇಷ್ ಎನಿಸಿಕೊಂಡಿದ್ದಾರೆ.



2015ರಲ್ಲಿ 'ಪ್ರೇಮಂ' ಸಿನಿಮಾ ಮೂಲಕ ಬಣ್ಣದ ಬದುಕು ಆರಂಭಿಸಿದರು. ಈ ಸಿನಿಮಾ ಸೂಪರ್ ಹಿಟ್ ಆಯಿತು. ಆ ಬಳಿಕ ತಮಿಳು, ತೆಲುಗು ಕನ್ನಡ ಸಿನಿಮಾಗಳಲ್ಲೂ ನಟಿಸಿದರು. ಅವರು ದಕ್ಷಿಣದ ಬ್ಯುಸಿ ನಟಿಯರಲ್ಲಿ ಒಬ್ಬರು. ಅವರ ಜರ್ನಿ ಬಗ್ಗೆ ಇಲ್ಲಿದೆ ಮಾಹಿತಿ.

ಅನುಪಮಾ ಪರಮೇಶ್ವರನ್ ಅವರು ಹೀರೋಯಿನ್ ಆಗಿದ್ದು ಕೇವಲ 19ನೇ ವಯಸ್ಸಿಗೆ. ಮಲಯಾಳಂನ 'ಪ್ರೇಮಂ' ಅವರ ಬದುಕು ಬದಲಿಸಿತು. ಕಡಿಮೆ ಹೊತ್ತು ತೆರೆಮೇಲೆ ಕಾಣಿಸಿಕೊಂಡರೂ ಗಮನ ಸೆಳೆದರು. ಈ ಚಿತ್ರದಲ್ಲಿ ಅವರು ಮೇರಿ ಹೆಸರಿನ ಪಾತ್ರ ಮಾಡಿದ್ದರು. ಕಥಾ ನಾಯಕನ ಶಾಲಾ ಲವ್ ಸ್ಟೋರಿಯಲ್ಲಿ ಇವರು ಬರುತ್ತಾರೆ.

ಅನುಪಮಾ ಅವರು ನಟನೆಗೆ ಬರುವಾಗ ಇನ್ನೂ ಕಾಲೇಕ್ನಲ್ಲಿ ಓದುತ್ತಿದ್ದರು. ಇಂಗ್ಲಿಷನ್ಲ್ಲಿ ಬ್ಯಾಚುಲರ್ ಡಿಗ್ರೀ ಪಡೆಯುತ್ತಿದ್ದರು. ಅವರು ಕೊಟ್ಟಾಯಂನ ಸಿಎಂಎಸ್ ಕಾಲೇಜ್ನಲ್ಲಿ ಓದುತ್ತಿದ್ದರು. ಈ ಸಿನಿಮಾ ಸಿಕ್ಕ ಬಳಿಕ ಅವರಿಗೆ ಸಾಕಷ್ಟು ಆಫರ್ ಬಂದಿದ್ದರಿಂದ ಕಾಲೇಜ್ನ ಅರ್ಧಕ್ಕೆ ಬಿಡಬೇಕಾಯಿತು.

ಅನುಪಮಾಗೆ ಸಿನಿಮಾ ಬಗ್ಗೆ ಸಾಕಷ್ಟು ಆಸಕ್ತಿ ಇತ್ತು. ಅವರು 'ಮನಿಯರಳಿಯೆ ಅಶೋಕನ್' ಸಿನಿಮಾಗೆ ಸಹಾಯಕ ನಿರ್ದೇಶಕಿ ಆಗಿ ಕೆಲಸ ಮಾಡಿದ್ದರು. ಈ ಚಿತ್ರದಲ್ಲಿ ಅವರು ಪ್ರಮುಖ ಪಾತ್ರವನ್ನೂ ಮಾಡಿದ್ದರು. ಈ ಚಿತ್ರದ ಮೂಲಕ ಅವರು ಹೊಸ ಅನುಭವ ಪಡೆದರು. ಅನುಪಮಾ ಅವರಿಗೆ ದುಲ್ಕರ್ ಸಲ್ಮಾನ್ ಜೊತೆ ಒಳ್ಳೆಯ ಗೆಳೆತನ ಇದೆ.

ಅನುಪಮಾ ಅವರಿಗೆ ಪ್ರಾಣಿಗಳ ಬಗ್ಗೆ ವಿಶೇಷ ಪ್ರೀತಿ ಇದೆ. ಅವರ ಮನೆಯಲ್ಲಿ ಹಲವು ರೀತಿಯ ಪ್ರಾಣಿಗಳು ಇವೆ. ಇದನ್ನು ಅವರು ಪ್ರೀತಿಯಿಂದ ಸಾಕುತ್ತಾರೆ. ಅನುಪಮಾ ಅವರ ಪರಿಚಯ ಕನ್ನಡಿಗರಿಗೂ ಇದೆ. ಅವರು ಕನ್ನಡದ 'ನಟಸಾರ್ವಭೌಮ' ಚಿತ್ರದಲ್ಲಿ ಪುನೀತ್ ಜೊತೆ ಕಾಣಿಸಿಕೊಂಡಿದ್ದರು. ಈ ಸಿನಿಮಾ ಮೂಲಕ ಅವರು ಗಮನ ಸೆಳೆದರು.

# ಪುಷ್ಪನ ಗೆಳೆಯ ಕೇಶವನಿಗೆ ಇನ್ನೂ ಕರಗಿಲ್ಲ ಸಮಸ್ಯೆಗಳು

ಅಲ್ಲು ಅರ್ಜುನ್ ನಟನೆಯ 'ಪುಷ್ಪ 2' ಸಿನಿಮಾ ಬಾಕ್ಸ್ ಆಫೀಸ್ ನಲ್ಲಿ ಹಲವು ದಾಖಲೆಗಳನ್ನೇ ಬರೆದಿದೆ. ಈ ಹಿಂದೆ ಬಾಕ್ಸ್ ಆಫೀಸ್ ನಲ್ಲಿ ಭಾರಿ ಕಲೆಕ್ಷನ್ ಮಾಡಿದ್ದ ಸಿನಿಮಾಗಳನ್ನು ಹಿಂದಿಕ್ಕಿ ಮುನ್ನುಗ್ಗಿದೆ. ಸಿನಿಮಾ ಬಿಡುಗಡೆ ಆಗಿ ಎರಡು ತಿಂಗಳಾಗಿದ್ದು, ಇನ್ನೂ ಕೂಡ ಹಲವು ಚಿತ್ರಮಂದಿರಗಳಲ್ಲಿ 'ಪುಷ್ಪ 2' ಸಿನಿಮಾ ಪ್ರದರ್ಶನ ಕಾಣುತ್ತಿದೆ. 'ಪುಷ್ಪ' ಸಿನಿಮಾದಲ್ಲಿ ನಟಿಸಿದ ನಟರು, ಕೆಲಸ ಮಾಡಿದ ತಂತ್ರಜ್ಞರಿಗೆ ಚಿತ್ರರಂಗದಲ್ಲಿ ಭಾರಿ ದೊಡ್ಡ ಹೆಸರು ಬಂದಿದೆ. ಎಲ್ಲರಿಗೂ ದುಪ್ಪಟ್ಟು ಸಂಭಾವನೆಗಳು ದೊರೆತಿವೆ. 'ಪುಷ್ಪ' ಮತ್ತು 'ಪುಷ್ಪ 2' ಸಿನಿಮಾ ಭಾರಿ ದೊಡ್ಡ ಹಿಟ್ ಆದರೂ ಸಹ ಪುಷ್ಪನ ಗೆಳೆಯ ಕೇಶವನ ಸಮಸ್ಯೆಗಳು ಕರಗಿಲ್ಲವಂತೆ.

'ಪುಷ್ಪ' ಮತ್ತು 'ಪುಷ್ಪ 2' ಸಿನಿಮಾದ ಕತೆ ಹೇಳುವುದು ಅವನ ಗೆಳೆಯ ಕೇಶವ. ಇಡೀ ಸಿನಿಮಾವನ್ನು ಪ್ರೇಕ್ಷಕರು ನೋಡುವುದೇ ಕೇಶವನ ಕೋನದಿಂದ. ಸಿನಿಮಾದಲ್ಲಿ ಪುಷ್ಪನ ಅತ್ಯಾಪ್ತ ಗೆಳೆಯ ಕೇಶವ. ಈ ಪಾತ್ರವನ್ನು ನಟ ಜಗದೀಶ್ ಪ್ರತಾಪ್ ಬಂಡಾರಿ ನಿರ್ವಹಿಸಿದ್ದಾರೆ. ಮೊದಲ ಹಾಗೂ ಎರಡನೇ ಭಾಗದಲ್ಲಿ ಈ ಕೇಶವನ ಪಾತ್ರ ಅತ್ಯಂತ ಮಹತ್ವದ್ದು, ಅಲ್ಲು ಅರ್ಜುನ್ ಜೊತೆಗೆ ಇರುವ ಈ ಪಾತ್ರ ವನ್ನು ಜಗದೀಶ್ ಪ್ರತಾಪ್ ಬಹಳ ಚೆನ್ನಾಗಿ ನಿರ್ವಹಿಸಿದ್ದಾರೆ.






ಆದರೆ 'ಪುಷ್ಪ' ಸಿನಿಮಾ ಬಿಡುಗಡೆ ಆದಮೇಲೆ ಜಗದೀಶ್ ಅವರನ್ನು ಪೊಲೀಸರು ಬಂಧಿಸಿದ್ದರು. ಯುವತಿಯೊಬ್ಬಾಕೆಗೆ ಲೈಂಗಿಕ ಕಿರುಕುಳ ಕೊಟ್ಟ ಆರೋಪವನ್ನು ಜಗದೀಶ್ ಎದುರಿಸಿದ್ದರು. ಜಾಮೀನಿನ ಮೇಲೆ ಹೊರಬಂದು 'ಪುಷ್ಪ 2' ಸಿನಿಮಾದಲ್ಲಿ ಜಗದೀಶ್ ನಟಿಸಿದರು. ಕೆಲ ವಾರಗಳ ಹಿಂದೆ ನೀಡಿರುವ ಸಂದರ್ಶನದಲ್ಲಿ ಮಾತನಾಡಿರುವ ಜಗದೀಶ್, ತಮ್ಮ ಜೀವನದ ಬಗ್ಗೆ, ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಮಾತನಾಡಿದ್ದಾರೆ.

'ಪುಷ್ಪ' ಸಿನಿಮಾದಲ್ಲಿ ನಟಿಸುವುದಕ್ಕೆ ಮುಂಚೆ ನನ್ನ ಜೀವನದಲ್ಲಿ ಸಾಕಷ್ಟು ಸಮಸ್ಯೆಗಳು ಇದ್ದವು. ಒಂದರ ಹಿಂದೊಂದು ಸಮಸ್ಯೆಗಳು ನನ್ನನ್ನು ಸುತ್ತುವರೆದುಕೊಂಡಿದ್ದವು. ಜೀವನವೇ ಸಾಕು ಎಂದುಕೊಂಡಿದ್ದೆ. 'ಪುಷ್ಪ' ಸಿನಿಮಾದಲ್ಲಿ ನಟಿಸುವಾಗ ಈ ಒಂದು ಸಿನಿಮಾದಲ್ಲಿ ನಟಿಸಿ ಸತ್ತು ಹೋಗಿಬಿಡುವ ಎಂದು ನಿರ್ಧಾರ ಮಾಡಿದ್ದೆ. ಆ ನಂತರವೂ ನನ್ನ ಜೀವನದಲ್ಲಿ ಸಾಕಷ್ಟು ಸಮಸ್ಯೆಗಳು ಎದುರಾದವು. ಆಗಲೂ ಸಹ ಆತ್ಮಹತ್ಯೆಯ ಆಲೋಚನೆ ಮಾಡಿದ್ದೆ. 'ಪುಷ್ಪ 2' ಸಿನಿಮಾದಲ್ಲಿ ನಟಿಸಿ ಸತ್ತು ಹೋದರೂ ಪರವಾಗಿಲ್ಲ ಅನಿಸಿತ್ತು' ಎಂದು ಜಗದೀಶ್ ಹೇಳಿಕೊಂಡಿದ್ದಾರೆ.

ಜಗದೀಶ್ ಹೇಳಿರುವಂತೆ 'ಪುಷ್ಪ 2' ಸಿನಿಮಾದ ಬಳಿಕ ಕೆಲ ಸಿನಿಮಾ ಅವಕಾಶಗಳು ಬರುತ್ತಿವೆ. ಆದರೆ ಖಾಸಗಿ ಜೀವನದ ಸಮಸ್ಯೆಗಳು ಇನ್ನೂ ಪೂರ್ತಿಯಾಗಿ ಕರಗಿಲ್ಲವಂತೆ. ತಮ್ಮ ಕಷ್ಟಗಳನ್ನೆಲ್ಲ ನಿರ್ದೇಶಕ ಸುಕುಮಾರ್ ಅವರ ಬಳಿ ಹೇಳಿಕೊಂಡಿದ್ದರಂತೆ ಜಗದೀಶ್, ಸುಕುಮಾರ್ ನನಗೆ ಸಾಕಷ್ಟು ಸಹಾಯ ಮಾಡಿದರು. ಬೆಂಬಲ ನೀಡಿದರು, ಅವರ ಋಣವನ್ನು ಎಂದಿಗೂ ತೀರಿಸಲಾರೆ' ಎಂದಿದ್ದಾರೆ ಜಗದೀಶ್.

# ಅಭಿಮಾನಿಗಳು ಮಾಡಿದ ಸಮಾಜ ಸೇವೆಯ ಚಿತ್ರಗಳ ಹಂಚಿಕೊಂಡ ದರ್ಶನ್

ಜೈಲಿಂದ ಹೊರಬಂದ ಬಳಿಕ ನಿಧಾನಕ್ಕೆ ಸಾಮಾನ್ಯ ಜೀವನ ಶೈಲಿಗೆ ಮರಳುತ್ತಿರುವ ದರ್ಶನ್, ಕಳೆದ ಕೆಲ ದಿನಗಳಿಂದ ಸಾಮಾಜಿಕ ಜಾಲತಾಣದಲ್ಲಿ ಸಕ್ರಿಯರಾಗುತ್ತಿದ್ದಾರೆ. ಹುಟ್ಟುಹಬ್ಬದ ಕೆಲ ದಿನಗಳ ಹಿಂದೆ ವಿಡಿಯೋ ಹಂಚಿಕೊಂಡಿದ್ದ ನಟ ದರ್ಶನ್, ನಿನ್ನೆಯಷ್ಟೆ ಅಭಿಮಾನಿಗಳಿಗೆ ಧನ್ಯವಾದ ಹೇಳಿ ಪೋಸ್ಟ್ ಒಂದನ್ನು ಹಂಚಿಕೊಂಡಿದ್ದರು. ಇದೀಗ ತಮ್ಮ ಅಭಿಮಾನಿಗಳು ಮಾಡಿರುವ ಸಾಮಾಜಿಕ ಕಾರ್ಯದ ಚಿತ್ರಗಳನ್ನು ಹಂಚಿಕೊಂಡು ಎಲ್ಲರಿಗೂ ಧನ್ಯವಾದ ಹೇಳಿದ್ದಾರೆ.

ತಮ್ಮ ಅಭಿಮಾನಿಗಳು ಮಾಡಿರುವ ಸಮಾಜ ಸೇವೆಯ ಹಲವು ಚಿತ್ರಗಳನ್ನು ನಟ ದರ್ಶನ್ ಇನ್ ಸ್ಟಾಗ್ರಾಂನಲ್ಲಿ ಹಂಚಿಕೊಂಡಿದ್ದಾರೆ. ಎಲ್ಲ ಚಿತ್ರಕ್ಕೂ 'ಈ ಪುಣ್ಯ ಕಾರ್ಯದಲ್ಲಿ ಪಾಲ್ಗೊಂಡ ಎಲ್ಲಾ ನನ್ನ ಸೆಲೆಬ್ರಿಟಿಸ್ ಗಳಿಗೆ ಹೃದಯಪೂರ್ವಕ ಧನ್ಯವಾದಗಳು' ಎಂದು ಕ್ಯಾಪ್ಷನ್ ನೀಡಿದ್ದಾರೆ. ಅಭಿಮಾನಿಗಳು ಮಾಡಿರುವ ಶಾಲಾ ಮಕ್ಕಳಿಗೆ ಬ್ಯಾಗ್ ವಿತರಣೆ, ಆಸ್ಪತ್ರೆಯಲ್ಲಿ ಆರೋಗ್ಯ ಕಿಟ್ ವಿತರಣೆ, ಅನಾಥಾಶ್ರಮ, ವೃದ್ಧಾಶ್ರಮಗಳಲ್ಲಿ ಭೋಜನ ವ್ಯವಸ್ಥೆ, ಉಚಿತ ಅನ್ನದಾನ, ಆರೋಗ್ಯ ತಪಾಸಣೆ ಶಿಬಿರ, ರಕ್ತದಾನ ಶಿಬಿರಗಳ ಫೋಟೊಗಳನ್ನು ನಟ ದರ್ಶನ್ ಹಂಚಿಕೊಂಡಿದ್ದಾರೆ. ಸುಮಾರು 18 ವಿವಿಧ ಕಾರ್ಯಕ್ರಮಗಳನ್ನು ದರ್ಶನ್ ಹಂಚಿಕೊಂಡಿದ್ದಾರೆ.

ದರ್ಶನ್ ಈ ಬಾರಿ ಸರಳವಾಗಿ ಹುಟ್ಟುಹಬ್ಬ ಆಚರಣೆ ಮಾಡಿಕೊಂಡಿದ್ದು, ತಮ್ಮ ಹುಟ್ಟುಹಬ್ಬದಂದು ಸಮಾಜ ಸೇವೆ ಮಾಡುವಂತೆ ಅಭಿಮಾನಿಗಳಿಗೆ ಕರೆ ನೀಡಿದ್ದರು. ದರ್ಶನ್ ಕರೆಗೆ ಓಗೊಟ್ಟು ಅಭಿಮಾನಿಗಳು ಸಮಾಜ ಸೇವೆ ಮಾಡಿದ್ದು, ಅದರ ಚಿತ್ರಗಳನ್ನು ನಟ ದರ್ಶನ್ ಇದೀಗ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

ಅಸಲಿಗೆ ನಟ ದರ್ಶನ್, ರೇಣುಕಾ ಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿದ ಬಳಿಕ ದರ್ಶನ್ ರ ಅಭಿಮಾನಿಗಳ ದುರ್ವರ್ತನೆ ಬಗ್ಗೆ ತೀವ್ರ ಟೀಕೆ ಎದುರಾಗಿತ್ತು. ಪೊಲೀಸರು, ಮಾಧ್ಯಮದವರು, ಇತರೆ ನಟ-ನಟಿಯರ ಬಗ್ಗೆ ದರ್ಶನ್ ಅಭಿಮಾನಿಗಳು ಬಳಸುತ್ತಿದ್ದ ಅವಾಚ್ಯ ಭಾಷೆ, ಅತಿರೇಕದ ವರ್ತನೆಗಳಿಂದಾಗಿ ದರ್ಶನ್ ಅಭಿಮಾನಿಗಳು ಸಮಾಜಕ್ಕೆ ಘಾತುಕರು ಎಂಬ ಅಭಿಪ್ರಾಯ ನಿರ್ಮಾಣವಾಗಿತ್ತು. ಆ ಅಭಿಪ್ರಾಯವನ್ನು ಹೋಗಲಾಡಿಸಲೆಂದೇ ಈಗ ದರ್ಶನ್, ತಮ್ಮ ಅಭಿಮಾನಿಗಳು ಮಾಡಿರುವ ಸಮಾಜ ಸೇವೆಯ ಚಿತ್ರಗಳನ್ನು ಒಂದೊಂದಾಗಿ ಹಂಚಿಕೊಳ್ಳುತ್ತಿದ್ದಾರೆ.




## ಅಭಿಮಾನಿಗಳಿಗೆ ದರ್ಶನ್ ಪತ್ರ

ನಿಮ್ಮ ಹಾರೈಕೆಗಳು ನನ್ನ ಮುಂದಿನ ಹೆಜ್ಜೆಗೆ ದಾರಿ ತೋರು ಬೆಳಕು, ಶೀಘ್ರದಲ್ಲಿ ನಿಮ್ಮನ್ನು ಭೇಟಿಯಾಗುತ್ತೇನೆ ಎಂದು ಚಾಲೆಂಜಿಂಗ್ ಸ್ಟಾರ್ ದರ್ಶನ್ ಅವರು ಅಭಿಮಾನಿಗಳಿಗೆ ಪತ್ರ ಬರೆದಿದ್ದಾರೆ. ಇಂದು ದರ್ಶನ್ ಅವರು 48ನೇ ಹುಟ್ಟುಹಬ್ಬವನ್ನು ಆಚರಿಸಿಕೊಳ್ಳುತ್ತಿದ್ದಾರೆ. ಈ ಬಾರಿ ನಾನು ಹುಟ್ಟುಹಬ್ಬ ಆಚರಿಸುತ್ತಿಲ್ಲ ಎಂದು ವಿಡಿಯೋ ಮಾಡಿ ತಿಳಿಸಿದ್ದರೂ ಅಭಿಮಾನಿಗಳ ಸಂಭ್ರಮ ಕಡಿಮೆಯಾಗಿಲ್ಲ. ಈ ಕಾರಣಕ್ಕೆ ತನ್ನ ಪ್ರೀತಿಯ ಅಭಿಮಾನಿಗಳನ್ನು ಸೆಲೆಬ್ರಿಟಿಸ್ ಎಂದು ಕರೆದು ಪತ್ರ ಬರೆದಿದ್ದಾರೆ.



**ಪ್ರತದಲ್ಲಿ ಏನಿದೆ?:** ನಿಮ್ಮ ಬಗ್ಗೆ ಎಷ್ಟು ಹೇಳಿದರೂ ಕಡಿಮೆ ಎಂದು ಭಾಸವಾಗುತ್ತದೆ. ಕಷ್ಟದಲ್ಲಿದ್ದಾಗ ಸದಾ ಬೆಂಬಲದಲ್ಲಿ ನಿಲ್ಲುವಂತ ಈ ನಿಷ್ಕಲ್ಮಶ ಹೃದಯಗಳಿಗೆ ನಾನು ಸದಾ ಚಿರಋಣಿ. ನಿಮ್ಮ ಪ್ರೀತಿ-ಪ್ರೋತ್ಸಾಹ ಮತ್ತು ಬೆಂಬಲವೇ ನನ್ನ ಜೀವನದ ನಿಜವಾದ ಆಸ್ತಿ.

ನನ್ನ ಹುಟ್ಟುಹಬ್ಬವನ್ನು ವಿಶೇಷವಾಗಿಸುವ ನಿಮ್ಮ ಪ್ರೀತಿಯ ಆಶೀರ್ವಾದಕ್ಕೆ ನಾನು ಮನದಾಳದಿಂದ ಕೃತಜ್ಞನಾಗಿದ್ದೇನೆ. ನೀವು ಹಲವೆಡೆ ಮಾಡುತ್ತಿರುವ ದಾನ-ಧರ್ಮ ಕಾರ್ಯಗಳು ಸಹಸ್ರಾರು ಹೃದಯಗಳನ್ನು ಸ್ಪರ್ಶಿಸುವಂತಹದ್ದು. ನಿಮ್ಮ ಈ ಕೆಲಸಗಳು ಅನೇಕರಿಗೆ ದಾರಿದೀಪವಾಗಲಿ.

ನಿಮ್ಮ ಮನದಾಳದ ಪ್ರೀತಿಯ ಹಾರೈಕೆಗಳು ನನ್ನ ಮುಂದಿನ ಹೆಜ್ಜೆಗೆ ದಾರಿ ತೋರುವ ಬೆಳಕು ಎಂದರೆ ಅತಿಶಯೋಕ್ತಿಯಲ್ಲ. ಆದಷ್ಟು ಬೇಗ ನಿಮ್ಮನ್ನು ಕಾಣುವ ಹಂಬಲ, ಕಾತುರ ನನ್ನಲಿಯೂ ಇದೆ. ನಿಮ್ಮನ್ನು ಪಡೆದಿರುವ ನಾನೇ ಧನ್ಯ.

# ಇಂದಿನಿಂದ ಚಾಂಪಿಯನ್ಸ್ ಟ್ರೋಫಿ ಟೂರ್ನಿ

ಬಹುನಿರೀಕ್ಷಿತ ಚಾಂಪಿಯನ್ಸ್ ಟ್ರೋಫಿ ಟೂರ್ನಿಗೆ ಇಂದು (ಫೆ.19) ಚಾಲನೆ ಸಿಗಲಿದೆ. 8 ತಂಡಗಳ ನಡುವಣ ಈ ಕದನವು ಏಕದಿನ ಸ್ವರೂಪದಲ್ಲಿ ನಡೆಯುತ್ತಿರುವುದು ವಿಶೇಷ. ಹೀಗಾಗಿಯೇ ಈ ಟೂರ್ನಿಯನ್ನು ಮಿನಿ ವಿಶ್ವಕಪ್ ಎಂದು ಕರೆಯಲಾಗುತ್ತದೆ. ಇಲ್ಲಿ 8 ತಂಡಗಳು ಕಾಣಿಸಿಕೊಂಡರೂ ಇಡೀ ಟೂರ್ನಿಯಲ್ಲಿ ನಡೆಯುವುದು ಕೇವಲ 15 ಪಂದ್ಯಗಳು ಮಾತ್ರ.




**8 ತಂಡ 2 ಗ್ರೂಪ್:** ಚಾಂಪಿಯನ್ಸ್ ಟ್ರೋಫಿಯಲ್ಲಿ ಕಣಕ್ಕಿಳಿಯಲಿರುವ 8 ತಂಡಗಳನ್ನು 2 ಗ್ರೂಪ್ ಗಳಾಗಿ ವಿಂಗಡಿಸಲಾಗಿದೆ. ಇಲ್ಲಿ ಮೊದಲ ಸುತ್ತಿನಲ್ಲಿ ಗ್ರೂಪ್ ಗಳಲ್ಲಿ ಪಂದ್ಯ ನಡೆಯಲಿದೆ. ಅಂದರೆ ಆಯಾ ಗ್ರೂಪ್ ನಲ್ಲಿನ ತಂಡಗಳು ಪರಸ್ಪರ ಸೆಣಸಲಿದೆ.

ಗ್ರೂಪ್-ಎ: ಭಾರತ, ಪಾಕಿಸ್ತಾನ್, ನ್ಯೂಝಿಲೆಂಡ್ ಮತ್ತು ಬಾಂಗ್ಲಾದೇಶ್

ಗ್ರೂಪ್- ಬಿ: ಸೌತ್ ಆಫ್ರಿಕಾ, ಆಸ್ಟ್ರೇಲಿಯಾ, ಅಫ್ಘಾನಿಸ್ತಾನ್ ಮತ್ತು ಇಂಗ್ಲೆಂಡ್

**ಟೂರ್ನಿ ಸ್ವರೂಪ:** ಮೊದಲ ಹೇಳಿದಂತೆ ಚಾಂಪಿಯನ್ಸ್ ಟ್ರೋಫಿಯ ಮೊದಲ ಸುತ್ತಿನಲ್ಲಿ ಆಯಾ ಗ್ರೂಪ್ ನಲ್ಲಿರುವ ತಂಡಗಳು ಮುಖಾಮುಖಿಯಾಗಲಿದೆ. ಇಲ್ಲಿ ಗ್ರೂಪ್-ಎ ನಲ್ಲಿರುವ ಭಾರತ ತಂಡವು ಪಾಕಿಸ್ತಾನ್, ನ್ಯೂಝಿಲೆಂಡ್ ಹಾಗೂ ಬಾಂಗ್ಲಾದೇಶ್ ವಿರುದ್ಧ ತಲಾ ಒಂದು ಪಂದ್ಯವಾಡಲಿದೆ. ಅದರಂತೆ ಪ್ರತಿ ತಂಡಗಳು ಲೀಗ್ ಹಂತದಲ್ಲಿ ಒಟ್ಟು 3 ಪಂದ್ಯಗಳನ್ನಾಡಲಿದ್ದಾರೆ.

**ಸೆಮಿಫೈನಲ್ ಹಾದಿ:** ಇಲ್ಲಿ ಎರಡು ಗ್ರೂಪ್ ಗಳಿಗೆ ಬೇರೆ ಬೇರೆ ಅಂಕಪಟ್ಟಿಯಲ್ಲಿ ಇರಲಿದೆ. ಗ್ರೂಪ್-ಎ ಮತ್ತು ಗ್ರೂಪ್-ಬಿ ಪಾಯಿಂಟ್ಸ್ ಟೇಬಲ್ ಗಳಲ್ಲಿ ಮೊದಲೆರಡು ಸ್ಥಾನಗಳನ್ನು ಪಡೆಯುವ ತಂಡಗಳು ಸೆಮಿಫೈನಲ್ ಗೆ ಪ್ರವೇಶಿಸುತ್ತದೆ. ಅಂದರೆ ಲೀಗ್ ಹಂತದಿಂದ ನಾಲ್ಕು ತಂಡಗಳು ಹೊರಬೀಳಲಿದ್ದು, 4 ಟೀಮ್ ಗಳು ಮುಂದಿನ ಹಂತಕ್ಕೇರಲಿದೆ.

ಇನ್ನು ಸೆಮಿಫೈನಲ್ ನಲ್ಲಿ ಆಯಾ ಗ್ರೂಪ್ ನಿಂದ ಅರ್ಹತೆ ಪಡೆದ ತಂಡಗಳು ಪರಸ್ಪರ ವಿರುದ್ಧವಾಗಿ ಸೆಣಸಲಿದೆ. ಅಂದರೆ ಲೀಗ್ ಹಂತದಲ್ಲಿ ಮುಖಾಮುಖಿಯಾದ ತಂಡಗಳು ಸೆಮಿಫೈನಲ್ ನಲ್ಲಿ ಮತ್ತೆ ಎದುರು ಬದುರಾಗುವುದಿಲ್ಲ.

**ಫೈನಲ್ ಪಂದ್ಯ:** ಈ ಟೂರ್ನಿಯ ಫೈನಲ್ ಪಂದ್ಯವು ಮಾರ್ಚ್ 9 ರಂದು ನಡೆಯಲಿದೆ. ಮೊದಲ ಮತ್ತು ಎರಡನೇ ಸೆಮಿಫೈನಲ್ ಗಳಲ್ಲಿ ಗೆದ್ದ ತಂಡಗಳು ಫೈನಲ್‌ಗೆ ಪ್ರವೇಶಿಸಲಿದೆ. ಅದರಂತೆ ಈ ಬಾರಿಯ ಚಾಂಪಿಯನ್ಸ್ ಟ್ರೋಫಿಯಲ್ಲಿ ಲೀಗ್ ಹಂತದಲ್ಲಿ 12 ಪಂದ್ಯಗಳು ಮತ್ತು ನಾಕೌಟ್ ಹಂತದಲ್ಲಿ ಮೂರು ಪಂದ್ಯಗಳು ನಡೆಯಲಿದೆ.

# ನ್ಯಾಟ್ ಸ್ಕೀವರ್ ಸ್ಫೋಟಕ ಫಿಫ್ಟಿ

## ಗುಜರಾತ್ ವಿರುದ್ಧ ಮುಂಬೈಗೆ 5 ವಿಕೆಟ್‌ಗಳ ಭರ್ಜರಿ ಜಯ

**ವಡೋದರಾ:** ನ್ಯಾಟ್ ಸ್ಕೀವರ್ ಸ್ಫೋಟಕ ಅರ್ಧಶತಕ ಹಾಗೂ ಸಂಘಟಿತ ಬೌಲಿಂಗ್ ನೆರವಿನಿಂದ ಮಹಿಳಾ ಪ್ರೀಮಿಯರ್ ಲೀಗ್‌ನ 5ನೇ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡ ಗುಜರಾತ್ ಜೈಂಟ್ಸ್ ತಂಡದ ವಿರುದ್ಧ 5 ವಿಕೆಟ್‌ಗಳ ಭರ್ಜರಿ ಜಯಗಳಿಸಿತು.

ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ತಂಡದ ನಾಯಕಿ ಹರ್ಮನ್ ಪ್ರೀತ್ ಕೌರ್ ಮೊದಲು ಫೀಲ್ಡಿಂಗ್ ಆಯ್ದುಕೊಂಡರು. ಮೊದಲು ಬ್ಯಾಟ್ ಬೀಸಿದ ಗುಜರಾತ್ ತಂಡ 20 ಓವರ್‌ಗಳಿಗೆ 120 ರನ್ ಗಳಿಸಿ ಆಲೌಟ್ ಆಯಿತು. ಈ ಮೂಲಕ ಮುಂಬೈ ತಂಡಕ್ಕೆ 121 ರನ್‌ಗಳ ಗುರಿ ನೀಡಿತು.



ಗುಜರಾತ್ ನೀಡಿದ ಗುರಿಯನ್ನು ಬೆನ್ನಟ್ಟಿದ ಮುಂಬೈ ತಂಡ 16.01 ಓವರ್‌ಗೆ ಗುರಿ ತಲುಪಿ ಸುಲಭ ಜಯಸಾಧಿಸಿತು. ನ್ಯಾಟ್ ಸ್ಕೀವರ್ ಬ್ರಂಟ್ 11 ಫೋರ್ ಹೊಡೆಯುವ ಮೂಲಕ 39 ಎಸೆತಗಳಿಗೆ 57 ರನ್ ಗಳಿಸಿ ತಂಡವನ್ನು ಗೆಲುವಿನ ದಡ ಸೇರಿಸುವಲ್ಲಿ ಪ್ರಮುಖ ಪಾತ್ರವಹಿಸಿದರು. ಸ್ಕೀವರ್ ಹಾಗೂ ಅಮೆಲಿಯಾ ಕೆರ್ ಜೊತೆಯಾಟವಾಡಿ 38 ಎಸೆತಗಳಿಗೆ 45 ರನ್ ಕಲೆಹಾಕಿದರು. ಹೆಯಲಿ ಮ್ಯಾಥ್ಯೂಸ್ (17 ರನ್), ಅಮೆಲಿಯಾ ಕೆರ್ (19 ರನ್) ಗಳಿಸಿ ಔಟಾದರು. ಸಜೀವನ್ ಸಜನ 10 ರನ್ ಹಾಗೂ ಜಿ ಕಮಲಿನಿ 4 ರನ್ ಗಳಿಸಿ ಅಜೇಯರಾಗಿ ಉಳಿದರು.

ಇದಕ್ಕೂ ಮುನ್ನ ಬ್ಯಾಟ್ ಬೀಸಿದ ಗುಜರಾತ್ ತಂಡಕ್ಕೆ ಆರಂಭದಲ್ಲೇ ಹಿನ್ನಡೆ ಉಂಟಾಯಿತು. 1.2 ಓವರ್‌ನಲ್ಲೇ ಬೆತ್ ಮೂನಿ 3 ಎಸೆತಗಳಿಗೆ 1 ರನ್‌ಗಳಿಸಿ ಔಟಾದರು. ಕಾಶ್ವೀ ಗೌತಮ್ 2 ಫೋರ್ ಹಾಗೂ 1 ಸಿಕ್ಸ್ ಸಿಡಿಸಿ 15 ಎಸೆತಗಳಿಗೆ 20 ರನ್ ಗಳಿಸಿ ವಿಕೆಟ್ ಒಪ್ಪಿಸಿದರು.

ಆಶ್ಲೇ ಗಾರ್ಡನರ್ 10 ಎಸೆತಗಳಿಗೆ 10 ರನ್ ಗಳಿಸಿ ಪೆವಿಲಿಯನ್‌ಗೆ ಮರಳಿದರು. ಕಾಶ್ವೀ ಗೌತಮ್ ಹಾಗೂ ಹರ್ಲಿನ್ ಡಿಯೋಲ್ ಜೊತೆಯಾಟವಾಡಿ 19 ಎಸೆತಗಳಿಗೆ 24 ರನ್‌ಗಳ ಕಲೆಹಾಕಿದರು. ಹರ್ಲಿನ್ ಡಿಯೋಲ್ 4 ಫೋರ್ ಸಿಡಿಸಿ 31 ಬಾಲ್‌ಗಳಿಗೆ 32 ರನ್ ಗಳಿಸಿ ಔಟಾದರು.

# ಮಾವು ಇಳುವರಿ ಕುಸಿತ

## ಬಂಪರ್ ನಿರೀಕ್ಷೆಯಲ್ಲಿದ್ದ ಬೆಳೆಗಾರರು ಕಂಗಾಲು

**ಬೀದರ್:** ಹಣ್ಣುಗಳ ರಾಜ ಮಾವು ಬೆಳೆದ ರೈತರು ಕಂಗಾಲಾಗಿದ್ದಾರೆ. ಇಳುವರಿ ಕುಸಿತದಿಂದ ಮಾವಿನ ಗಿಡ ಪೋಷಣೆ ಮಾಡಿದ ಹಣ ಕೂಡ ರೈತರಿಗೆ ಬಂದಿಲ್ಲ. ಗಿಡದಲ್ಲಿ ಬಿಟ್ಟಿದ್ದ ಹೂವು ಮಿಡಿಗಾಯಿ ಉದರುತ್ತಿದ್ದು ಇಳುವರಿ ಕುಸಿತ ಮಾವು ಬೆಳೆಗಾರರನ್ನ ಸಂಕಷ್ಟಕ್ಕೆ ತಳ್ಳಿದೆ.



ಜಿಲ್ಲೆಯ ಮಾವು ಬೆಳೆಯಲು ಭೂಮಿ ಹಾಗೂ ಹವಾಮಾನ ಉತ್ತಮ ಎಂದು ಗುರುತಿಸಲಾಗಿದೆ. ಹತ್ತಾರು ವರ್ಷಗಳಿಂದ ಜಿಲ್ಲೆಯ ನಾನಾ ಗ್ರಾಮಗಳಲ್ಲಿ ರೈತರು ಕಬ್ಬು ತರಕಾರಿ, ಇತರೆ ಬೆಳೆಯನ್ನ ಬೆಳೆಯುತ್ತಿದ್ದರು ಆದರೆ ನೀರಿನ ಕೊರತೆ ಹಿನ್ನೆಲೆಯಲ್ಲಿ ಆರೇಳು ವರ್ಷದಿಂದ ಕೆಲವು ಬೆಳೆಗಳನ್ನು ಬದಿಗೊತ್ತಿ 2027 ಹೆಕ್ಟೇರ್ ಪ್ರದೇಶದಲ್ಲಿ ದೀರ್ಘಾವಧಿ ಮಾವು ಬೆಳೆಯುತ್ತಿದ್ದಾರೆ. ಇನ್ನೂ ಕೆಳೆದ ಕೆಲವು ವರ್ಷದಿಂದ ಜಿಲ್ಲೆಯಲ್ಲಿ ಹೇಳಿಕೊಳ್ಳುವಂತ ಮಳೆಯಾಗಿಲ್ಲ. ಹೀಗಾಗಿ ಅಂತರ್ಜಲ ಮಟ್ಟ ಕುಸಿತದಿಂದ ಕಂಗಾಲಾಗಿದ್ದ ಬಹುತೇಕ ರೈತರು, ಇತರ ತೋಟಗಾರಿಕೆ ಬೆಳೆಗಳಿಗೆ ತಿಲಾಂಜಲಿಯನ್ನಿಟ್ಟು ಕಡಿಮೆ ನೀರು ಬಯಸುವ ನಾನಾ ಜಾತಿಯ ಮಾವಿನ ಕೃಷಿ ಕೈಗೊಳ್ಳುವ ಮೂಲಕ ಮಾವು ಕೃಷಿಗೆ ಹೆಚ್ಚಿನ ಒತ್ತು ಕೊಡುತ್ತಿದ್ದಾರೆ. ಆದರೆ ಈ ವರ್ಷ ಮಳೆ ಚೆನ್ನಾಗಿದ್ದರು ಹವಾಮಾನದ ವೈಪರಿತ್ಯದಿಂದಾಗಿ ಜಿಲ್ಲೆಯ ಶೇಕಡಾ 65 ರಷ್ಟು ಮಾವಿನ ಮರದಲ್ಲಿ ಹೂವು ಕಾಯಿಗಳೆ ಬಿಟ್ಟಿಲ್ಲ. ಹೆಸರಿಗೆ ಗಿಡಕ್ಕೆ ಐದು ಹತ್ತು ಕಾಯಿಗಳು ಬಿಟ್ಟಿದ್ದು ಆ ಕಾಯಿಗಳು ಕೂಡ ರೋಗದ ಬಾದೆಗೆ ತುತ್ತಾಗಿ ಗಿಡದಿಂದ ಕಳಚಿ ಬಿಳುತ್ತಿವೆ. ಹಿಗಾಗಿ ನಾವು ಸಂಕಷ್ಟಕ್ಕೆ ಸಿಲುಕಿದ್ದೇವೆಂದು ಮಾವು ಬೆಳೆಗಾರ ಶಿವರಾಜ್ ತಮ್ಮ ಅಳಲು ತೋಡಿಕೊಂಡಿದ್ದಾರೆ.

ಇನ್ನೂ ಜಿಲ್ಲೆಯಲ್ಲಿ ಉತ್ತಮ ಗುಣಮಟ್ಟದ ಅತ್ಯಧಿಕ ರುಚಿಕರ ಮಾವುಗಳಾದ ಬೇನಿಶಾ, ಮಲ್ಲಿಕಾ, ಮಲಗೋಬಾ, ರಸಪುರಿ, ನೀಲಂ, ತೋತಾಪುರಿ ಹಾಗೂ ಇತರ ಜಾತಿಯ ಮಾವುಗಳನ್ನು ಹೆಚ್ಚಾಗಿ ಬೆಳೆದಿದ್ದಾರೆ. ಆದರೆ ಈ ಬಾರಿ ಇಲ್ಲಿ ಕಡಿಮೆ ಇಳುವರಿ ಬಂದಿದ್ದು, ಕೆಲ ತೋಟಗಳಿಗೆ ರೋಗಗಳು ಕಂಡು ಬಂದಿದ್ದರಿಂದ ಕಾಯಿ ಕಟಾವಿಗೆ ಬರುವುದಕ್ಕಿಂತ ಮುಂಚೆಯೇ ಉದುರಿ ಹೋಗಿದೆ. ಜೊತೆಗೆ ಕೆಲವರ ತೋಟದಲ್ಲಿ ಒಂದೇ ಒಂದು ಕಾಯಿ ಕೂಡ ಬಿಟ್ಟಿಲ್ಲ. ಹೀಗಾಗಿ ಮಾವು ಬೆಳೆಗಾರರು ಸಂಕಷ್ಟಕ್ಕೆ ತಳ್ಳಿದಂತಾಗಿದೆ.

ಇನ್ನೂ ಹೋದ ವರ್ಷ ಅದರ ಆಚೆಗಿನ ವರ್ಷ ಮಾವು ಉತ್ತಮವಾದ ಇಳುವರಿ ಬಂದಿತ್ತು. ಇನ್ನೇನು ಮಾವುಗಳನ್ನ ಕಟಾವು ಮಾಡಿ ಮಾರುಕಟ್ಟೆಗೆ ತೆಗೆದುಕೊಂಡು ಹೋಗಬೇಕು ಅನ್ನುವಷ್ಟರಲ್ಲಿ ಅಕಾಲಿಕವಾಗಿ ಬಂದು ಸಿಡಿಲು ಮಳೆಯಿಂದಾಗಿ ಮಾವಿನ ಹಣ್ಣಿಗೆ ಆಲಿಕಲ್ಲು ಬಡೆದು ಮಾವಿನ ಹಣ್ಣು ಕೊಳೆತು ಹೋಯಿತು. ಆದರೆ ಈ ವರ್ಷ ಉತ್ತಮ ಮಳೆಯಾಗಿದ್ದು, ಒಳ್ಳೆಯ ಹವಾಮಾನವಿದೆ, ಆದರೆ ಯಾಕೋ ಮಾವಿನ ಮರದಲ್ಲಿ ಮಾತ್ರ ಕಾಯಿಗಳು ಬಿಟ್ಟಿಲ್ಲ. ಇದರಿಂದಾಗಿ ಇಳುವರಿ ಅತ್ಯಧಿಕ ಪ್ರಮಾಣದಲ್ಲಿ ಕಡಿಮೆಯಾಗಿದೆ.

ಅತಿವೃಷ್ಟಿ ಅನಾವೃಷ್ಟಿಯಿಂದಾಗಿ ಮಾವು ಬೆಳೆಗಾರ ರೈತರು ಸಂಕಷ್ಟ ಅನುಭವಿಸಿದರೆ ಈ ವರ್ಷ ಇಳುವರಿ ಕುಷಿತದಿಂದಾಗಿ ರೈತರು ಸಂಕಷ್ಟ ಎದುರಿಸಬೇಕಾಗಿದೆ. ಸರಕಾರ ರೈತರ ಸಮಸ್ಯೆಗೆ ಸ್ಪಂದನೆ ಕೊಡಿ ಎಂದು ಇಲ್ಲಿನ ನಿವಾಸಿಗಳು ಸರಕಾರಕ್ಕೆ ಮನವಿ ಮಾಡುತ್ತಿದ್ದಾರೆ.

ಪ್ರಸಕ್ತ ವರ್ಷ ಮಾವಿನ ಮರದಲ್ಲಿ ಕಾಯಿಗಳೆ ಬಿಟ್ಟಿಲ್ಲ. ಇದರಿಂದಾಗಿ ರೈತರು ಕಂಗಾಲಾಗಿದ್ದು ಮುಂದೆ ಹೇಗೆ ಅನ್ನೋ ಚಿಂತೆ ಮಾವು ಬೆಳೆಗಾರ ರೈತರನ್ನ ಕಾಡುತ್ತಿದೆ. ಸರ್ಕಾರ ಪ್ರತಿ ವರ್ಷ ತೋಟಗಾರಿಕೆ ಬೆಳೆಗಾರನ್ನು ಪ್ರೋತ್ಸಾಹಿಸುವ ನಿಟ್ಟನಲ್ಲಿ ಹಲವಾರು ಕಾರ್ಯಕ್ರಮ ಜಾರಿಗೆ ತಂದಿದೆ. ಇಂತಹ ನಷ್ಟದ ಸಮಯದಲ್ಲಿ ರೈತರಿಗೆ ಏನಾದರೂ ಸಹಾಯವಾಗುವ ಕಾರ್ಯಕ್ರಮಗಳನ್ನ ತಂದು ರೈತರ ಕಣ್ಣು ಒರೆಸುವ ಕೆಲಸವನ್ನ ಸರಕಾರ ಮಾಡಬೇಕಿದೆ.



**ಮಹಾದೇವಪುರ ಕ್ಷೇತ್ರದ ಮಾರತಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ನಲ್ಲೂರಲ್ಲಿ ವಿನೋದ ಅವರನ್ನು ಡಿಸಿಎಂ ಡಿಕೆ ಶಿವಕುಮಾರ್ ಅವರ ಆದೇಶದಂತೆ ಆಯ್ಕೆ ಮಾಡಲಾಗಿದೆ. ರಾಜ್ಯಸಭಾ ಸದಸ್ಯ ಜಿಸಿ ಚಂದ್ರಶೇಖರ್ ಎಐಸಿಸಿ ಸದಸ್ಯ ಮಾನ್ಸೂರ್ ಅಲಿಖಾನ್ ಮಾಜಿ ಸಚಿವ ಎಚ್ ನಾಗೇಶ್ ಅವರು ಆದೇಶ ಪತ್ರ ನೀಡಿ ಶುಭ ಹಾರೈಸಿದರು.**

# 10ಕ್ಕೂ ಹೆಚ್ಚು ಶಾಲಾ ಮಕ್ಕಳ ಮೇಲೆ ಹೆಜ್ಜೇನು ದಾಳಿ

**ಮಂಗಳೂರು:** ಶಾಲೆಯಲ್ಲಿ ವಿದ್ಯಾರ್ಥಿಗಳ ಮೇಲೆ ಹೆಜ್ಜೇನು ದಾಳಿ ನಡೆಸಿದ ಘಟನೆ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ಕಕ್ಕಿಂಜೆ ಗ್ರಾಮದಲ್ಲಿ ನಡೆದಿದೆ.

» **ಮೂವರು ವಿದ್ಯಾರ್ಥಿಗಳಿಗೆ ಗಂಭೀರ ಗಾಯ**

ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳು ಪ್ರಾರ್ಥನೆ ಮುಗಿಸಿ ಶಾಲೆ ಒಳಗೆ ಹೋಗುವಾಗ ಹೆಜ್ಜೇನು ದಾಳಿ ನಡೆಸಿದೆ. 15 ವಿದ್ಯಾರ್ಥಿಗಳ ಮೇಲೆ ಹೆಜ್ಜೇನು ದಾಳಿ ಮಾಡಿದೆ. ಮೂವರು ವಿದ್ಯಾರ್ಥಿಗಳಿಗೆ ಗಂಭೀರ ಗಾಯಗಳಾಗಿವೆ. ಹೆಜ್ಜೇನು ದಾಳಿಗೊಳಗಾದ ಮಕ್ಕಳಿಗೆ ಕಕ್ಕಿಂಜೆ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಸುರಕ್ಷತಾ ದೃಷ್ಟಿಯಿಂದ ಶಿಕ್ಷಕರು ಶಾಲೆಗೆ ರಜೆ ನೀಡಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com